ಸಂಪುಟ: 21, ಸಂಚಿಕೆ: 171, ಪುಟಗಳು: 8, ಶನಿವಾರ, 30 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ; ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶನಿವಾರ 30, ಮಾರ್ಚ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಪಾಲ್ಗುಣ ಮಾಸ, ಕೃಷ್ಣ ಪಕ್ಷ,
- ಪಂಚಮಿ, ಶನಿವಾರ,
- ಅನುರಾಧ ನಕ್ಷತ್ರ.
- ರಾಹುಕಾಲ: 09:24 ರಿಂದ 10:56
- ಗುಳಿಕಕಾಲ: 06:21 ರಿಂದ 07:52
- ಯಮಗಂಡಕಾಲ: 02:00 ರಿಂದ 03:32

## ಕಾಲೇಜು ವಿದ್ಯಾರ್ಥಿಗೆ ಬಂತು ಬರೋಬ್ಬರಿ 46 ಕೋಟಿ ಮೊತ್ತದ

# ಟ್ಯಾಕ್ಸ್ ನೋಟಿಸ್

**ಭೋಪಾಲ್:** ತನ್ನ ಬ್ಯಾಂಕ್ ಖಾತೆಯಿಂದ 46 ಕೋಟಿ ರೂ. ವಹಿವಾಟು ನಡೆದಿದೆ ಎಂದು ಕಾಲೇಜು ವಿದ್ಯಾರ್ಥಿಯೊಬ್ಬ ಪೊಲೀಸ್ ಠಾಣೆಗೆ ದೂರು ನೀಡಿರುವ ಘಟನೆ ಮಧ್ಯಪ್ರದೇಶದ ಗ್ವಾಲಿಯರ್ ಜಿಲ್ಲೆಯಲ್ಲಿ ನಡೆದಿದೆ.

ಗ್ವಾಲಿಯರ್ ನಿವಾಸಿ ಪ್ರಮೋದ್ ಕುಮಾರ್ ದಂಡೋಟಿಯಾ (25) ದೂರು ನೀಡಿರುವ ವಿದ್ಯಾರ್ಥಿ. ಆದಾಯ ತೆರಿಗೆ ಮತ್ತು ಜಿಎಸ್‌ಟಿಯಿಂದ ಬಂದ ನೋಟಿಸ್ ನೋಡಿ ವಿದ್ಯಾರ್ಥಿ ಶಾಕ್ ಆಗಿದ್ದಾನೆ. ತನ್ನ ಪಾನ್ ಕಾರ್ಡ್ ಮೂಲಕ ಕಂಪನಿಗೆ ನೋಂದಾಯಿಸಲಾಗಿದೆ ಎಂಬುದು ವಿದ್ಯಾರ್ಥಿ ಅರಿವಿಗೆ ಬಂದಿದೆ.




ನಾನು ಗ್ವಾಲಿಯರ್‌ನಲ್ಲಿ ಕಾಲೇಜು ವಿದ್ಯಾರ್ಥಿಯಾಗಿದ್ದೇನೆ. ಆದಾಯ ತೆರಿಗೆ ಮತ್ತು ಜಿಎಸ್‌ಟಿಯ ಸೂಚನೆಯ ನಂತರ, ಮುಂಬೈ ಮತ್ತು ದೆಹಲಿಯಲ್ಲಿ 2021 ರಲ್ಲಿ ಕಾರ್ಯನಿರ್ವಹಿಸುತ್ತಿರುವ ನನ್ನ ಪ್ಯಾನ್ ಕಾರ್ಡ್ ಮೂಲಕ ಕಂಪನಿಯೊಂದು ನೋಂದಾಯಿಸಿದೆ ಎಂದು ನನಗೆ ತಿಳಿಯಿತು.

ಪುಟ 2

# ಕಡಲ್ಗಳ್ಳರ ದಾಳಿಯಿಂದ 23 ಪಾಕ್ ಪ್ರಜೆಗಳ ರಕ್ಷಿಸಿದ ಭಾರತೀಯ ನೌಕಾಪಡೆ



**ನವದೆಹಲಿ:** ಅರಬ್ಬೀ ಸಮುದ್ರದಲ್ಲಿ ಕಡಲ್ಗಳ್ಳರ ದಾಳಿಗೆ ಭಾರತೀಯ ನೌಕಾಪಡೆ ತಕ್ಕ ಪ್ರತ್ಯುತ್ತರ ನೀಡಿದೆ. ಅಲ್ಲದೇ ಇರಾನ್ ಮೀನುಗಾರಿಕಾ ಹಡಗು ಮತ್ತು 23 ಪಾಕಿಸ್ತಾನಿ ಪ್ರಜೆಗಳನ್ನು ರಕ್ಷಿಸಿದೆ.

ಸುಮಾರು 12 ಗಂಟೆಗಳ ಕಾಲ ನಡೆದ ಕಡಲ್ಗಳ್ಳರ ವಿರೋಧಿ ಕಾರ್ಯಾಚರಣೆಯಲ್ಲಿ ಇರಾನ್ ಮೀನುಗಾರಿಕಾ ಹಡಗು ಮತ್ತು 23 ಪಾಕಿಸ್ತಾನಿ ಪ್ರಜೆಗಳನ್ನು ಭಾರತೀಯ ನೌಕಾಪಡೆ ರಕ್ಷಣೆ ಮಾಡಿದೆ.

ಮಾರ್ಚ್ 28 ರಂದು ತಡರಾತ್ರಿ ಇರಾನಿನ ಮೀನುಗಾರಿಕಾ ನೌಕೆ 'ಅಲ್-ಕಂಬಾರ್ 786'ನಲ್ಲಿ ಸಂಭಾವ್ಯ ಕಡಲ್ಗಳ್ಳತನದ ಬಗ್ಗೆ ನೌಕಾಪಡೆಗೆ ಮಾಹಿತಿ ಸಿಕ್ಕಿತ್ತು.

ಪುಟ 2

## ಸಂಕ್ಷಿಪ್ತ ಸುದ್ದಿ

### ತೆರಿಗೆ ಭಯೋತ್ಪಾದನೆಯಿಂದ ಕಾಂಗ್ರೆಸ್ ಮಣಿಸಬಹುದೆಂದು ಬಿಜೆಪಿ ತಿಳಿದುಕೊಂಡಿದ್ದರೆ ಅದು ಭ್ರಮೆ

# ಸಿಎಂ



**ಬೆಂಗಳೂರು:** 1,823 ಕೋಟಿ ತೆರಿಗೆ ಕಟ್ಟುವಂತೆ ಕಾಂಗ್ರೆಸ್ ಗೆ ಐಟಿ ನೋಟಿಸ್ ವಿಚಾರ ಸಂಬಂಧ ಸಿಎಂ ಸಿದ್ದರಾಮಯ್ಯ ಮಾಧ್ಯಮ ಪ್ರಕಟಣೆ ಹೊರಡಿಸಿದ್ದಾರೆ. ತೆರಿಗೆ ಭಯೋತ್ಪಾದನೆ ಯಿಂದ ಕಾಂಗ್ರೆಸ್ ಪಕ್ಷವನ್ನು ಮಣಿಸಬಹುದೆಂದು ಬಿಜೆಪಿ ತಿಳಿದುಕೊಂಡಿದ್ದರೆ ಅದು ಭ್ರಮೆ ಎಂದು ಮಾಧ್ಯಮ ಪ್ರಕಟಣೆ ಮೂಲಕ ಬಿಜೆಪಿ ವಿರುದ್ಧ ಸಿಎಂ ಸಿದ್ದರಾಮಯ್ಯ ಕಿಡಿಕಾರಿದ್ದಾರೆ. ''ತೆರಿಗೆ ಭಯೋತ್ಪಾದನೆ'' ಯಿಂದ ಕಾಂಗ್ರೆಸ್ ಪಕ್ಷವನ್ನು ಮಣಿಸಬಹುದೆಂದು ಬಿಜೆಪಿ ತಿಳಿದುಕೊಂಡಿದ್ದರೆ ಅದು ಭ್ರಮೆ. ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭೀತಿಯಲ್ಲಿರುವ ಭಾರತೀಯ ಜನತಾ ಪಕ್ಷ ಸ್ವಾಯತ್ತ ಸಂಸ್ಥೆಗಳಾದ ಐಟಿ, ಇಡಿ, ಸಿಬಿಐ ಮೊದಲಾದ ಸ್ವಾಯತ್ತ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಕಾಂಗ್ರೆಸ್ ಪಕ್ಷವನ್ನು ಹಣಿಯಲು ಹೊರಟಿದೆ. ಈ ಹುನ್ನಾರದ ಭಾಗವಾಗಿಯೇ ನಮ್ಮ ಪಕ್ಷದ ವಿರುದ್ಧ ''ತೆರಿಗೆ ಭಯೋತ್ಪಾದನೆ''ಯಲ್ಲಿ ತೊಡಗಿದೆ. ಈ ರೀತಿ ನಮ್ಮ ಪಕ್ಷವನ್ನು ದುರ್ಬಲಗೊಳಿಸಿ ಚುನಾವಣೆಯಲ್ಲಿ ಗೆಲುವು ಸಾಧಿಸಬಹುದೆಂದು ಬಿಜೆಪಿ ತಿಳಿದುಕೊಂಡಿದ್ದರೆ ಅದು ಆ ಪಕ್ಷದ ಭ್ರಮೆ ಎಂದು ಸಿಎಂ ವಾಗ್ದಾಳಿ ನಡೆಸಿದ್ದಾರೆ.

ಪುಟ 2

### ಶಾಸಕ ಎಂದರೆ ನಿಮ್ಮ ಮನೆಯ ಆಳು

# ಇದ್ದಂತೆ

**ಬೆಂಗಳೂರು:** ಕ್ಷೇತ್ರದ ಶಾಸಕ ಅಂದ್ರೆ ನಿಮ್ಮ ಮನೆಯ ಆಳು ಇದ್ದಂತೆ. ಶಾಸಕನಾಗಿ ನನ್ನನ್ನು ಆಯ್ಕೆ ಮಾಡಿ. ನಾನು ನಿಮ್ಮ ಮನೆಯ ಆಳಿನಂತೆ ಕೆಲಸ ಮಾಡುತ್ತೇನೆ ಎಂದು ಯಾದಗಿರಿ ಜಿಲ್ಲೆ ಹುಣಸಗಿಯಲ್ಲಿ ರಾಜುಗೌಡ ಹೇಳಿದ್ದಾರೆ.



ಅಂದಹಾಗೆ ಕಳೆದ ಬಾರಿ ಪರಾಜಿತಗೊಂಡಿದ್ದ ರಾಜುಗೌಡ ಈ ಬಾರಿ ಸುರಪುರ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಮತ್ತೆ ಕಣಕ್ಕೆ ಇಳಿದಿದ್ದಾರೆ. ಈ ಮಧ್ಯೆ, ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಿರುವವರಿಗೆ ಅವರು ಟಾಂಗ್ ನೀಡಿದರು.

ಪುಟ 2

## ಬೆಳಗಾವಿ ಲೋಕಸಭಾ ಚುನಾವಣೆ ಅಖಾಡಕ್ಕೆ ಎಂಇಎಸ್ ಎಂಟ್ರಿ

# ಮತ ವಿಭಜನೆ ಆತಂಕ

**ಬೆಳಗಾವಿ:** ಬೆಳಗಾವಿ ಲೋಕಸಭಾ ಚುನಾವಣೆ ಅಖಾಡಕ್ಕೆ ಎಂಇಎಸ್ ಎಂಟ್ರಿ ಕೊಡಲು ನಿರ್ಧರಿಸಿದ್ದು ಕಾಂಗ್ರೆಸ್ , ಬಿಜೆಪಿಗೆ ಮತ ವಿಭಜನೆ ಆತಂಕ ತಲೆನೋವಾಗಿದೆ. ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಮೃಣಾಲ್ ಹೆಬ್ಬಾಳ್ಕರ್ ಸ್ಪರ್ಧೆ ಮಾಡುತ್ತಿದ್ದು ಬಿಜೆಪಿಯಿಂದ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಕಣಕ್ಕೆ ಇಳಿದಿದ್ದಾರೆ. ಆದರೆ ಮತ್ತೊಂದೆಡೆ ಚುನಾವಣೆಯಲ್ಲಿ ಸ್ಪರ್ಧೆ ಮಾಡಲು ಎಂಇಎಸ್ ತೀರ್ಮಾನ ಮಾಡಿದ್ದು ಅಭ್ಯರ್ಥಿ ಆಯ್ಕೆಯ ಬಗ್ಗೆ ಫೈನಲ್ ನಿರ್ಧಾರ ಮಾತ್ರ ಬಾಕಿ ಇದೆ.

ಚಂದ್ರಕಾಂತ ಕೊಂಡೋಸ್ಕರ್ ಹಾಗೂ ಇನ್ನೂ ಇಬ್ಬರ ಹೆಸರು ಪ್ರಸ್ತಾಪವಾಗಿದ್ದು ಇನ್ನೆರಡು ದಿನಗಳಲ್ಲಿ ಎಂಇಎಸ್ ಅಭ್ಯರ್ಥಿ ಹೆಸರು ಫೈನಲ್ ಮಾಡಲಿದೆ. ಬೆಳಗಾವಿ ಗ್ರಾಮೀಣದಲ್ಲಿ ಕಾಂಗ್ರೆಸ್ ಗೆ ಬೆಂಬಲವಾಗಿ ಮರಾಠ ಮತದಾರರು ನಿಂತಿದ್ದಾರೆ. ಎಂಇಎಸ್ ಅಭ್ಯರ್ಥಿ ಕಣಕ್ಕೆ ಇಳಿಸಿದ್ರೆ ಕಾಂಗ್ರೆಸ್ ಮತ ವಿಭಜನೆ ಆಗುವ ಆತಂಕ ಹೆಚ್ಚಿದೆ. ಮತ್ತೊಂದೆಡೆ ಬಿಜೆಪಿಗೂ ಮರಾಠ ಮತದಾರರು ಗಟ್ಟಿ ಮತ ಬ್ಯಾಂಕ್ ಆಗಿದ್ದು ಎಂಇಎಸ್ ಅಭ್ಯರ್ಥಿ ಸ್ಪರ್ಧೆ ಮಾಡಿದ್ರೆ ಬಿಜೆಪಿಗೂ ಹೊಡೆತ ಬೀಳುವ ಸಾಧ್ಯತೆ ಇದೆ. ಎಂಇಎಸ್ ಚುನಾವಣೆಯಲ್ಲಿ ಯಾರಿಗೆ ದಾಳವಾಗುತ್ತದೆ ಎಂಬುದು ಕುತೂಹಲ.



ಗಡಿ ವಿವಾದದಲ್ಲಿ ಕೇಂದ್ರದ ಗಮನ ಸೆಳೆಯಲು ಎಂಇಎಸ್ ಮತ್ತೊಮ್ಮೆ ಪ್ಲ್ಯಾನ್ ಮಾಡಿಕೊಂಡಿದೆ. ಗಲ್ಲಿಗೊಬ್ಬರಂತೆ ಎಂಇಎಸ್ ಚುನಾವಣೆ ಕಣಕ್ಕೆ ಇಳಿಸಲು ಚಿಂತನೆ ನಡೆಸಿದೆ. ಎಂಇಎಸ್ ಮುಖಂಡರ ಸಭೆಯಲ್ಲಿ ಹಲವರು ಈ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಗಡಿ ವಿಚಾರದಲ್ಲಿ ಇತ್ಯರ್ಥ ಪಡಿಸುವಲ್ಲಿ ಕೇಂದ್ರ ಸರ್ಕಾರ ನಿರ್ಲಕ್ಷ್ಯ ವಹಿಸಿದೆ. ಹೀಗಾಗಿ 1996ರ ಪ್ಲ್ಯಾನ್ ಮತ್ತೊಮ್ಮೆ ಮುನ್ನಲೆಗೆ ತರಲು ಚಿಂತನೆ ನಡೆದಿದೆ.

1996ರಲ್ಲಿ 452 ಅಭ್ಯರ್ಥಿಗಳನ್ನು ಎಂಇಎಸ್ ಕಣಕ್ಕೆ ಇಳಿಸಿತ್ತು. ಚುನಾವಣೆ ಮತ ಪತ್ರ ಮುದ್ರಣ ಸೇರಿ ಆಯೋಗಕ್ಕೆ ಸವಾಲ್ ಹಾಕಿತ್ತು. ಆಗ ಆಯೋಗ ಎರಡು ತಿಂಗಳ ಕಾಲ ಚುನಾವಣೆ ಮುಂದೂಡಿತ್ತು. ಈಗ ಕೇಂದ್ರದ ಗಮನ ಸೆಳೆಯಲು ಇದೇ ಪ್ಲ್ಯಾನ್‌ಗೆ ಎಂಇಎಸ್ ಚಿಂತನೆ ನಡೆಸಿದೆ. ಬೆಳಗಾವಿ ಉತ್ತರ, ಬೆಳಗಾವಿ ದಕ್ಷಿಣ ಮತ್ತು ಬೆಳಗಾವಿ ಗ್ರಾಮೀಣ ಮತಕ್ಷೇತ್ರದಿಂದ ಒಟ್ಟು 452 ಅಭ್ಯರ್ಥಿ ಕಣಕ್ಕಿಸಲು ಮುಂದಾಗಿದೆ. ಬೆಳಗಾವಿ ಪಾಲಿಕೆ, ತಾಲೂಕು ಪಂಚಾಯತಿ, ಜಿಲ್ಲಾ ಪಂಚಾಯಿತಿ ಎಂಇಎಸ್ ಹಾಲಿ ಮಾಜಿ ಸದಸ್ಯರನ್ನ ಕಣಕ್ಕಿಳಿಸಲು ಚಿಂತನೆ ನಡೆದಿದೆ.

## ಚುನಾವಣೆ ಬಂದ್ರೆ ಸಾಕು ಕುಮಾರಸ್ವಾಮಿ ಹಾರ್ಟ್ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗುತ್ತಾರೆ

# ವ್ಯಂಗ್ಯವಾಡಿದ ಶಾಸಕ

**ಮಂಡ್ಯ:** ಚುನಾವಣೆ ಬಂದರೆ ಸಾಕು ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರು ಹೃದಯ ಸಮಸ್ಯೆ ಇದೆ ಅಂತ ಆಸ್ಪತ್ರೆಗೆ ದಾಖಲಾಗುತ್ತಾರೆ ಎಂದು ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ರಮೇಶ್ ಬಂಡಿಸಿದ್ದೇಗೌಡ ವ್ಯಂಗ್ಯವಾಡಿದ್ದಾರೆ. ಮಳವಳ್ಳಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಮೂರೇ ದಿನದಲ್ಲಿ ಹೃದಯ ಶಸ್ತ್ರಚಿಕಿತ್ಸೆ ಆಗುತ್ತದೆ. ನಾಲ್ಕನೇ ದಿನಕ್ಕೆ ರಾಜ್ಯ ಸುತ್ತುತ್ತಾರೆ, ಅದು ಹೇಗೆ ಸಾಧ್ಯ ಎಂದು ವ್ಯಂಗ್ಯವಾಡಿದರು.



ಸಚಿವ ಚಲುವರಾಯಸ್ವಾಮಿ ಅವರಿಗೆ ಇರುವ ಕಾಯಿಲೆ ಹೆಚ್.ಡಿ ಕುಮಾರಸ್ವಾಮಿಯವರಿಗೂ ಇದೆ. ಚಲುವರಾಯಸ್ವಾಮಿ ಆಸ್ಪತ್ರೆಗೆ ದಾಖಲಾದರೆ ಒಂದು ತಿಂಗಳು ಆಚೆ ಬರಲ್ಲ. ಆದರೆ, ಹೆಚ್ ಡಿ ಕುಮಾರಸ್ವಾಮಿ ಹೇಗೆ ಶಸ್ತ್ರಚಿಕಿತ್ಸೆಯಾದ ಎರಡೇ ದಿನಕ್ಕೆ ಆಚೆ ಬರುತ್ತಾರೆ . ಇದು ಅಭಿವೃದ್ಧಿ ವರ್ಸಸ್ ಕಣ್ಣೀರಿಡುವ ಜನರ ಚುನಾವಣೆ. ನನಗೆ ಆ ತೊಂದರೆ ಇದೆ, ಈ ತೊಂದರೆ ಇದೆ ಎಂದರೇ ಕೇಳಬೇಡಿ. ಅಧಿಕಾರದಲ್ಲಿ ಇದ್ದಾಗ ಏನ್ ಮಾಡಿದ್ದೀರಿ ಎಂದು ಪ್ರಶ್ನೆ ಮಾಡಿ. ಕಾಂಗ್ರೆಸ್ ಅಭ್ಯರ್ಥಿಗೆ ಅತಿಹೆಚ್ಚು ಮತ ನೀಡಿ ಗೆಲ್ಲಿಸಿ ಎಂದರು.

# ಅಭ್ಯರ್ಥಿ ಪರ ಕೆಲಸ ಮಾಡಲು ನಿರಾಸಕ್ತಿ

**ಬೆಂಗಳೂರು:** ಬೆಂಗಳೂರು ಕೇಂದ್ರ ಲೋಕಸಭೆ ಕ್ಷೇತ್ರದಲ್ಲಿ ಅಪಸ್ವರ ಕೇಳಿ ಬಂದಿದೆ. ಬೆಂಗಳೂರು ಕೇಂದ್ರ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿಖಾನ್ ಪರ ಕೆಲಸ ಮಾಡಲು ಶಾಸಕರು ಕೈಗೆ ಸಿಗ್ತಿಲ್ಲ. ಮನ್ಸೂರ್ ಅಲಿ ಖಾನ್ ಪರ ಕೆಲಸ ಮಾಡಲು ಶಾಸಕರು ಹಿಂದೇಟು ಹಾಕುತ್ತಿದ್ದಾರೆ. ಮತ್ತೊಂದೆಡೆ ಸ್ವತಃ ಸಚಿವ ಕೆಜೆ ಜಾರ್ಜ್ ಕೈಗೆ ಸಿಗದೇ ಮನ್ಸೂರ್ ಅಲಿ ಖಾನ್ ಒದ್ದಾಡುತ್ತಿದ್ದಾರೆ. ಇತ್ತೀಚೆಗೆ ನಡೆದ ಸಿದ್ಧತಾ ಸಭೆಗೂ ಅಲ್ಪಸಂಖ್ಯಾತ ಸಮುದಾಯದ ಶಾಸಕರು ಗೈರಾಗಿದ್ದಾರೆ.



ಬೆಂಗಳೂರು ಕೇಂದ್ರ ಲೋಕಸಭೆ ಕ್ಷೇತ್ರದ ಸಿದ್ಧತಾ ಸಭೆಯಲ್ಲಿ ಕೇವಲ ಸಚಿವ ಜಮೀರ್ ಅಹ್ಮದ್ ಖಾನ್, ಶಾಸಕ ರಿಜ್ವಾನ್ ಅರ್ಷದ್ ಮಾತ್ರ ಹಾಜರಿದ್ದರು. ನಾಲ್ಕು ಕ್ಷೇತ್ರಗಳಲ್ಲಿ ಮಾತ್ರ ಕಾಂಗ್ರೆಸ್‌ಗೆ ಸಭೆಗಳಾಗಿದ್ದು ಇನ್ನೂ

ಪುಟ 2

## ಬೆಂಗಳೂರಿನಲ್ಲಿ ಬಿಲ್ಡರ್‌ಗಳಿಗೆ ಐಟಿ ಶಾಕ್

# 20 ಕಡೆ ಅಧಿಕಾರಿಗಳ ದಾಳಿ

**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಬೆಳಗ್ಗ ಬೆಳಗ್ಗೆಯೇ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಬಿಲ್ಡರ್‌ಗಳಿಗೆ ಶಾಕ್ ನೀಡಿದ್ದಾರೆ. ಸುಮಾರು 20ಕ್ಕೂ ಅಧಿಕ ಕಡೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದು, ತೀವ್ರ ಶೋಧ ನಡೆಸುತ್ತಿದ್ದಾರೆ. ಬಿಲ್ಡರ್‌ಗಳ ಮನೆಗಳು ಹಾಗೂ ಕಚೇರಿಗಳಲ್ಲಿ ಐಟಿ ಅಧಿಕಾರಿಗಳು ಶೋಧ ನಡೆಸುತ್ತಿದ್ದಾರೆ.

ಕೆ.ಆರ್. ಪುರಂ ಸಮೀಪದ ಕೊಡಿಗೇಹಳ್ಳಿಯ ನಂಜುಂಡೇಶ್ವರ ಇನ್ ಫ್ರಾಸ್ಟಕ್ಚರ್ ಪ್ರೈವೇಟ್ ಲಿಮಿಟೆಡ್ ಸೇರಿ ಹಲವು ಪ್ರಮುಖ ಬಿಲ್ಡರ್‌ಗಳು ಹಾಗೂ



ಕಚೇರಿಗಳ ಮೇಲೆ ದಾಳಿ ನಡೆಸಿರುವ ಅಧಿಕಾರಿಗಳು, ಕಡತಗಳ ತೀವ್ರ ಪರಿಶೀಲನೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಆದಾಗ್ಯೂ, ಇದುವರೆಗೂ ಯಾರನ್ನೂ ಬಂಧಿಸಿರುವ, ಹಣ ವಶಪಡಿಸಿಕೊಂಡಿರುವ ಕುರಿತು ಮಾಹಿತಿ ಲಭ್ಯವಾಗಿಲ್ಲ.

ತೆರಿಗೆ ವಂಚನೆ, ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳಿಗೆ ಹಾಗೂ ರಾಜಕೀಯ ನಾಯಕರಿಗೆ ಫಂಡಿಂಗ್ ಮಾಡುತ್ತಿರುವ ಕುರಿತು ಐಟಿ ಅಧಿಕಾರಿಗಳಿಗೆ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ದಾಳಿ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

# ಅಪ್ಪನ ಗೆಲುವಿಗೆ ಮಗನ ಪಣ

**ಮಂಡ್ಯ:** ಸಕ್ಕರೆ ನಾಡು ಮಂಡ್ಯದ ಪಾಲಿಟಿಕ್ಸ್ ಅಂದ್ರೆ ಇಂಡಿಯಾದಲ್ಲೇ ಸದ್ದು ಮಾಡುತ್ತೆ. ಈ ಬಾರಿಯೂ ಸಹ ಮಂಡ್ಯ ಸಾಕಷ್ಟು ಸದ್ದು ಮಾಡುತ್ತಿದೆ. 2019 ರ ಚುನಾವಣೆಯಲ್ಲಿ ತನ್ನ ಸೋಲಿನ ಸೇಡು ತೀರಿಸಿಕೊಳ್ಳಲು ನಿಖಿಲ್ ಕುಮಾರಸ್ವಾಮಿ ಪಣ ತೊಟ್ಟಿದ್ದಾರೆ. ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ವಿರುದ್ಧ ಸಂಸದೆ ಸುಮಲತಾ ಅಂಬರೀಶ್ ಅಭೂತಪೂರ್ವ ಗೆಲುವು ಸಾಧಿಸಿದ್ದರು. ಸುಮಲತಾ ಅವರ ಗೆಲುವಿನ ಹಿಂದೆ ತೆರೆ ಮರೆಯಲ್ಲಿ ಇಂದಿನ ಕೃಷಿ ಸಚಿವ



ಚಲುವರಾಯಸ್ವಾಮಿ ಮೈತ್ರಿ ಧರ್ಮವನ್ನು ಧಿಕ್ಕರಿಸಿ ಕೆಲಸ ಮಾಡಿದ್ರು. ಇದನ್ನು ಹೆಚ್‌ಡಿ ಕುಮಾರಸ್ವಾಮಿ ಹಾಗೂ ನಿಖಿಲ್ ಕುಮಾರಸ್ವಾಮಿ ಇಂದಿಗೂ ಮರೆತಿಲ್ಲ. ಚಲುವರಾಯಸ್ವಾಮಿ ಅವರಿಗೆ ಕಡಿವಾಣ ಹಾಕುವ ಸಲುವಾಗಿಯೇ ಕುಮಾರಸ್ವಾಮಿ ಮಂಡ್ಯದ ಮೈತ್ರಿ ಅಭ್ಯರ್ಥಿ ಆಗಿದ್ದಾರೆ ಎಂದು ಸಹ ಹೇಳಲಾಗುತ್ತಿದೆ.

ತನಗೆ 2019 ರಲ್ಲಿ ಆದ ಸೋಲಿನ ಸೇಡನ್ನು ತೀರಿಸಿಕೊಳ್ಳಲು ನಿಖಿಲ್ ತನ್ನ ತಂದೆ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಹೆಚ್‌ಡಿ ಕುಮಾರಸ್ವಾಮಿ ಅವರ ಗೆಲುವಿನ ರಣತಂತ್ರ ರೂಪಿಸುತ್ತಿದ್ದಾರೆ.

ಪುಟ 2

## ರಾಮೇಶ್ವರಂ ಕೆಫೆ ಸ್ಫೋಟಕ್ಕೆ ಖರ್ಚು

# 6 ಸಾವಿರ ರೂ.!

**ಬೆಂಗಳೂರು:** ರಾಜ್ಯ ರಾಜಧಾನಿಯ ವೈಟ್‌ಫೀಲ್ಡ್‌ನಲ್ಲಿರುವ ರಾಮೇಶ್ವರಂ ಕೆಫೆಯಲ್ಲಿ ನಡೆಸಿದ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಫೋಟಕ ಮಾಹಿತಿ ಲಭ್ಯವಾಗಿದೆ. ದುಷ್ಕರ್ಮಿಗಳು ಕೇವಲ 5-6 ಸಾವಿರ ರೂಪಾಯಿ ಖರ್ಚು ಮಾಡಿ ಬಾಂಬ್ ತಯಾರಿಸಿದ್ದರು ಎಂದು ಪ್ರರಕಣದ ಪ್ರಮುಖ ಆರೋಪಿ ಮುಜಾಮಿಲ್ ಷರೀಫ್‌ನನ್ನು ಎನ್‌ಐಎ ಅಧಿಕಾರಿಗಳು ವಿಚಾರಣೆ ಮಾಡುವ ವೇಳೆ ಭೀಕರ ಮಾಹಿತಿ ಬಹಿರಂಗವಾಗಿದೆ.

ದುಷ್ಕರ್ಮಿಗಳು ಆನ್‌ಲೈನ್‌ನಲ್ಲಿ ಹಲವು ವಸ್ತುಗಳನ್ನು ಖರೀದಿಸಿ ಎರಡು ತಿಂಗಳಲ್ಲಿ ಬಾಂಬ್ ತಯಾರಿಸಿದ್ದರು. ಕಚ್ಚಾ ವಸ್ತುಗಳನ್ನು ಅವರು ಆನ್ ಲೈನ್ ಮೂಲಕವೇ ಖರೀದಿಸಿದ್ದರು. ಬಾಂಬ್ ತಯಾರಿಸಲು ಬೇಕಾಗುವ ಡೆಟೋನೇಟರ್, ಟೈಮರ್,




ಬ್ಯಾಟರಿ, ರಂಜಕ (ಬೆಂಕಿ ಕಡ್ಡಿಯಿಂದ ತೆಗೆದಿರುವುದು) ಸೇರಿ ಹಲವು ವಸ್ತುಗಳನ್ನು ಅವರು ಆನ್‌ಲೈನ್ ಮೂಲಕ ಖರೀದಿಸಿದ್ದಾರೆ. ನೆಟ್, ಬೋಲ್ಟ್ ಮತ್ತು ವೈರ್‌ಗಳನ್ನು ಅಂಗಡಿಗಳಿಂದಲೇ ನೇರವಾಗಿ ಖರೀದಿಸಿದ್ದರು ಎಂದು ಮುಜಾಮಿಲ್ ಷರೀಫ್ ಬಾಯಿಬಿಟ್ಟಿದ್ದಾನೆ.

ಪುಟ 2

## ಕೊಳಗೇರಿ ಮಂಡಳಿ ಜೂನಿಯರ್ ಇಂಜಿನಿಯರ್ ನೇಮಕಾತಿ ಆಯ್ಕೆ

# ಪಟ್ಟಿಯೇ ನಾಪತ್ತೆ

**ಬೆಂಗಳೂರು:** ಕೆಪಿಎಸ್‌ಸಿಯಲ್ಲಿ ನೇಮಕಾತಿ ಆಯ್ಕೆ ಪಟ್ಟಿಯೇ ನಾಪತ್ತೆಯಾಗಿದ್ದು ಕೆಪಿಎಸ್‌ಸಿ ಅಧಿಕಾರಿ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಎಫ್ ಐಆರ್ ದಾಖಲಿಸಿ ತನಿಖೆ ಕೈಗೆತ್ತಿಕೊಂಡಿದ್ದಾರೆ. ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್ ಸಿ)ದಲ್ಲಿ ಕೊಳೆಗೇರಿ ಅಭಿವೃದ್ಧಿ ಮಂಡಳಿಯ ಕಿರಿಯ ಎಂಜಿನಿಯರ್ ನೇಮಕಾತಿ ಆಯ್ಕೆ ಪಟ್ಟಿಯ ಕಡತವೇ ನಾಪತ್ತೆಯಾಗಿದೆ.

2016 ರಲ್ಲಿ ಕೊಳಗೇರಿ ಮಂಡಳಿ ಜೂನಿಯರ್ ಇಂಜಿನಿಯರ್ ನೇಮಕಾತಿ ಪರೀಕ್ಷೆ ನಡೆದಿತ್ತು. 2018ರಲ್ಲಿ ಹೆಚ್ಚುವರಿ ಆಯ್ಕೆ ಪಟ್ಟಿ ಪ್ರಕಟ ಮಾಡಲಾಗಿತ್ತು. ಇದನ್ನ ಪ್ರಶ್ನಿಸಿ ಎಚ್ .ಡಿ. ವಿವೇಕಾನಂದ ಎಂಬುವವರು



ಹೈಕೋರ್ಟ್ ಮೊರೆ ಹೋಗಿದ್ದರು. ಬಳಿಕ ಹೈಕೋರ್ಟ್ ಆದೇಶದಂತೆ ಆಯ್ಕೆ ಪಟ್ಟಿ ತಯಾರಿಸಲಾಗಿತ್ತು. ಕೆಪಿಎಸ್ ಸಿ ಗೌಪ್ಯ ಶಾಖೆ-3 ರಲ್ಲಿ ಆಯ್ಕೆ ಪಟ್ಟಿ ತಯಾರಿಸಲಾಗಿತ್ತು. ಜನವರಿ 22 ರಂದು ಕಾರ್ಯದರ್ಶಿಯವರ ಆಪ್ತ ಶಾಖೆಯಲ್ಲಿ ಕಡತ ಸ್ವೀಕಾರ ಮಾಡಲಾಯಿತು. ಆ ಬಳಿಕ ಕಡತ ನಾಪತ್ತೆ ಎಂದು ದೂರು ದಾಖಲಿಸಲಾಗಿದೆ.

ಪುಟ 2

# ಬೆಂಗಳೂರಿನಲ್ಲಿ 7 ವರ್ಷಗಳ ಬಳಿಕ ಗರಿಷ್ಠ ತಾಪಮಾನ



**ಬೆಂಗಳೂರು:** ಮಳೆ ಕೊರತೆ, ಅಂತರ್ಜಲ ಕುಸಿತದಿಂದಾಗಿ ಬೆಂಗಳೂರು ಮತ್ತೆ ರಾಜ್ಯದ ಜಿಲ್ಲೆಗಳಲ್ಲಿ ಬಿಸಿಲು ದಾಖಲೆ ಬರೆದಿದೆ. ಏಳು ವರ್ಷಗಳ ಬಳಿಕ ಬೆಂಗಳೂರಿನಲ್ಲಿ ಬಿಸಿಲು 36% ದಾಟಿದೆ. ಉತ್ತರ ಒಳನಾಡು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಹೀಟ್ ಸ್ಟ್ರೋಕ್ ಜೋರಿದೆ.

ರಾಜ್ಯದಲ್ಲಿ ದಿನದಿಂದ ದಿನಕ್ಕೆ ತಾಪಮಾನ ಏರಿಕೆಯಾಗುತ್ತಿದ್ದು, ಬಿಸಿಲಿನ ಝಳಕ್ಕೆ ಜನರು ತತ್ತರಿಸಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿ ದಾಖಲೆಯ ತಾಪಮಾನ ದಾಖಲಾಗಿದೆ. ಏಳು ವರ್ಷಗಳ ಬಳಿಕ ನಿನ್ನೆ 37.9% ಸೆಲ್ಸಿಯಸ್ ದಾಖಲಾಗಿದೆ. ಇಂದು 36.56% ಸೆಲ್ಸಿಯಸ್ ದಾಖಲಾಗಿದೆ. ಸಾಮಾನ್ಯವಾಗಿ ಏಪ್ರಿಲ್‌ನಲ್ಲಿ ಈ ತಾಪಮಾನ ದಾಖಲಾಗುತ್ತಿತ್ತು. ಆದರೆ ಈಗ ಮಾರ್ಚ್‌ನಲ್ಲಿ ರೆಕಾರ್ಡ್ ಆಗಿದ್ದು, ಬಿಸಿಲಿನಿಂದ ತತ್ತರಿಸುವಂತೆ ಆಗಿದೆ. ಮಳೆ ಕೊರತೆ ಮತ್ತು ಅಂತರ್ಜಲ ಕುಸಿತದಿಂದ ಈ ರೀತಿ ಆಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಬೆಂಗಳೂರು ಹೊರತುಪಡಿಸಿದರೆ ರಾಜ್ಯದ ಉತ್ತರ ಒಳನಾಡು, ದಕ್ಷಿಣ ಒಳನಾಡು ಮತ್ತು ಕರಾವಳಿ ಜಿಲ್ಲೆಗಳಲ್ಲಿ 35 ರಿಂದ 40% ಸೆಲ್ಸಿಯಸ್ ತಾಪಮಾನ ಹೆಚ್ಚಾಗುತ್ತಿದೆ. ಮೇ ಅಂತ್ಯದ ವರೆಗೂ ಇರಲಿದೆ. ಮೇ ವರೆಗೂ ಇದೇ ರೀತಿಯ ಬಿಸಿಲು ಇರಲಿದ್ದು, ಏಪ್ರಿಲ್ ಎರಡನೇ ವಾರದಲ್ಲಿ ಮಳೆಯ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

# ಪತ್ನಿಯ ಅನೈತಿಕ ಸಂಬಂಧಕ್ಕೆ ಬೇಸತ್ತು ಕುಡಿಯೋ ನೀರಿನ ಟ್ಯಾಂಕ್‌ಗೆ ಬಿದ್ದು ಆತ್ಮಹತ್ಯೆ



**ಬೀದರ್:** ವ್ಯಕ್ತಿಯೊಬ್ಬ ಕುಡಿಯುವ ನೀರಿನ ಟ್ಯಾಂಕ್‌ಗೆ ಹಾರಿ ಆತ್ಮಹತ್ಯೆಗೆ ಶರಣಾ ಘಟನೆ ಬೀದರ್ ತಾಲೂಕಿನ ಅಣದೂರ್ ಗ್ರಾಮದಲ್ಲಿ ನಡೆದಿದೆ. ಮೃತನ ಪತ್ನಿ ಬೇರೊಬ್ಬನ ಜೊತೆ ಅನೈತಿಕ ಸಂಬಂಧ ಹೊದಿದ್ದು, ಆತನೊಂದಿಗೆ ಪರಾರಿಯಾಗಿದ್ದಕ್ಕೆ ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂದು ಪೊಲೀಸರು ಶಂಕಿಸಿದ್ದಾರೆ.

ಮೃತಪಟ್ಟ ವ್ಯಕ್ತಿಯನ್ನು ದಾಸರ್ (27) ಎಂದು ಗುರುತಿಸಲಾಗಿದೆ. ಎರಡು ದಿನಗಳ ಹಿಂದೆಯೇ ಟ್ಯಾಂಕ್‌ಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿದ್ದು ತಡವಾಗಿ ಬೆಳಕಿಗೆ ಬಂದಿದೆ. ನಲ್ಲಿಯಲ್ಲಿ ಬರುತ್ತಿದ್ದ ನೀರು ವಾಸನೆ ಬರುತ್ತಿದ್ದ ಕಾರಣ, ಟ್ಯಾಂಕನ್ನು ಜನ ಪರಿಶೀಲಿಸಿದಾಗ ದಾಸರ್‌ನ ಮೃತದೇಹ ಪತ್ತೆಯಾಗಿದೆ. ಬಳಿಕ ಅಗ್ನಿಶಾಮಕ ದಳದ ಸಿಬ್ಬಂದಿ ಮೃತದೇಹ ಹೊರಗೆ ತೆಗೆದಿದ್ದಾರೆ. ಕುಡಿಯುವ ನೀರಿನಲ್ಲಿ ಶವ ಪತ್ತೆಯಾದ ಹಿನ್ನೆಲೆ, ಆರೋಗ್ಯ ಇಲಾಖೆಯ ಸಿಬ್ಬಂದಿ ಗ್ರಾಮದಲ್ಲಿ ವಾಸ್ತವ್ಯ ಹೂಡಿದ್ದಾರೆ. ಟ್ಯಾಂಕ್ ನೀರು ಕುಡಿದು ಯಾರಿಗಾದರೂ ಆರೋಗ್ಯದ ಸಮಸ್ಯೆಯಾದರೆ ಅಗತ್ಯ ಚಿಕಿತ್ಸೆ ಪಡೆಯುವಂತೆ ಅಧಿಕಾರಿಗಳು ತಿಳಿಸಿದ್ದಾರೆ. ಈ ಸಂಬಂಧ ಜನವಾಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಾನು ಹೇಳಿದ ಅಭ್ಯರ್ಥಿಗೆ ಟಿಕೆಟ್ ಕೊಟ್ಟರೆ ಗೆಲ್ಲಿಸುತ್ತೇನೆ



**ಬೆಂಗಳೂರು:** ನಾನು ಹೇಳಿದ ಅಭ್ಯರ್ಥಿಗೆ ಟಿಕೆಟ್ ಕೊಟ್ಟರೆ ಗೆಲ್ಲಿಸುತ್ತೇನೆ ಎಂಬ ಭರವಸೆ ನೀಡಿದ್ದೇನೆ. ಕೋಲಾರದಲ್ಲಿ ನನಗೆ ಅನುಭವ ಇದೆ ಎಂದು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದರು.

ಎರಡು ಬಣದವರು ಒಟ್ಟಾಗಿ ಕೆಲಸ ಮಾಡುತ್ತೇವೆ. ಯಾರಿಗಾದರು ಟಿಕೆಟ್ ಕೊಡಿ ಅಂತ ರಮೇಶ್ ಕುಮಾರ್ ಹೇಳಿದ್ದರು. ವೇಣುಗೋಪಾಲ್, ಸುರ್ಜೆವಾಲ, ಖರ್ಗೆ ಅವರು ಸಮಚಿತ್ತದಿಂದ ತೋರಿದ್ದಾರೆ. ನಾವು ಚಿಕ್ಕಬಳ್ಳಾಪುರ ಹಾಗೂ ಕೋಲಾರ ಗೆಲ್ಲಬೇಕು. ಸಿಎಂ, ಡಿಸಿಎಂಗೂ ನಾನು ಮನವಿ ಮಾಡಿದ್ದೇನೆ. ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು. ಇಬ್ಬರನ್ನೂ ಒಪ್ಪಲ್ಲ. ಸೋಲಲಿ ಅಥವಾ ಗೆಲ್ಲಲಿ ಬೇರೆ ಕ್ಯಾಂಡಿಡೇಟ್ ಕೊಡ್ತೀವಿ ಎಂದು ಕೈ ತೊಳೆದುಕೊಳ್ಳುವುದು ಸರಿಯಲ್ಲ. ಅವರದು ಬೇಡ, ನಿಮ್ಮದು ಬೇಡ ಅಂದರೆ ಬಂದವರಿಗೆ ಕಷ್ಟ ಆಗುತ್ತೆ. ಪಾಪ ಅವರನ್ನ ಕಷ್ಟಕ್ಕೆ ಸಿಲುಕಿಸುವುದು ಬೇಡ ಎಂದು ಎಚ್ಚರಿಕೆ ಮಾತನಾಡಿದರು.

ಒಮ್ಮತದ ಅಭ್ಯರ್ಥಿ ಆದರೆ ಎಲ್ಲರೂ ಸೇರಿ ಕೆಲಸ ಮಾಡಬಹುದು. ನಾನು ಅಘಾದವಾದ ನೋವಲ್ಲಿ ಇದ್ದೇನೆ. ಆದರೆ ಪಕ್ಷ ಮುಖ್ಯ. ಎಡಗೈ ಬಲಗೈ ಎಲ್ಲ ಇಲ್ಲ. ಎಲ್ಲಾ ವರ್ಗದ ಜನ ವೋಟ್ ಹಾಕಿದ್ದಕ್ಕೆ 30 ವರ್ಷ ಪಾರ್ಲಿಮೆಂಟ್‌ಗೆ ಹೋಗಿದ್ದೇನೆ ನಾನು. ಅವರು ಯಾರಿಗೆ ಕೊಟ್ಟರೂ ಒಪ್ಪಿಕೊಳ್ಳುತ್ತೇನೆ. ನನ್ನ ಸಮುದಾಯ ಕಟ್ಟಿಕೊಂಡು ಹಣೆಬರಹ ಬರೆದುಕೊಳ್ಳೋಕೆ ಆಗಲ್ಲ. ಯಾವುದೇ ಸಮುದಾಯಕ್ಕೆ ಟಿಕೆಟ್ ಕೊಟ್ರೂ, ಒಪ್ಪಿಕೊಳ್ಳುವೆ. ಆದರೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಕಾಂಗ್ರೆಸ್‌ಗೆ ವೋಟ್ ಕೇಳಬೇಕು ಎಂದು ಹೇಳಿದರು.

ಪಂಚಾಯಿತಿಯಿಂದ ಜಿಲ್ಲಾ ಪಂಚಾಯಿತಿ, ಎಂಎಲ್‌ಸಿ ಎಲ್ಲಾ ಹಂತದಲ್ಲಿ ಕೆಲಸ ಮಾಡಿ ಕೋಲಾರವನ್ನ ಕಾಂಗ್ರೆಸ್ ಭದ್ರಕೋಟೆ ಮಾಡಿದ್ದೇನೆ. ಸಾಕಷ್ಟು ಶಾಸಕರು ಪರಿಷತ್ ಸದಸ್ಯರನ್ನ ಬೆಳೆಸಿದ್ದೇನೆ. ರಮೇಶ್ ಕುಮಾರ್ ಹಾಗೂ ನಾವೆಲ್ಲಾ ಒಟ್ಟಿಗೆ ಕುಳಿತು ಮಾತನಾಡಿದ್ದೆವು. ಹೈಕಮಾಂಡ್ ಯಾರಿಗೆ ಟಿಕೆಟ್ ಕೊಟ್ಟರೂ ಒಟ್ಟಿಗೆ ಕೆಲಸ ಮಾಡೋಣ ಅಂತ ಮಾತನಾಡಿದ್ದೆವು. ನಾನು ಮತ್ತೊಮ್ಮೆ ಮನವಿ ಮಾಡಿದ್ದೇನೆ. ನನಗೆ ಅವಕಾಶ ಮಾಡ್ಕೊಡಿ ಅಂತ. ನಾನು ಹೇಳಿದ ಅಭ್ಯರ್ಥಿಗೆ ಅವಕಾಶ ಕೊಟ್ಟರೆ ಗೆಲ್ಲಿಸಿಕೊಂಡು ಬರ್ತೇನೆ ಅಂತ. ಎಲ್ಲರೂ ಒಟ್ಟಿಗೆ ಇರಬೇಕು ಎಂಬುದು ನನ್ನ ಭಾವನೆ. ರಮೇಶ್ ಕುಮಾರ್ ಹಿರಿಯರು, ಅವರೂ ಕೂಡ ನಿನ್ನೆ ಹಾಜರಿರಲಿಲ್ಲ. ನಾವು ಎಲ್ಲರೂ ಒಟ್ಟಿಗೆ ಸೇರಿದಾಗ ರಮೇಶ್ ಕುಮಾರ್ ಎಲ್ಲ ಭಿನ್ನಾಭಿಪ್ರಾಯ ಬಿಟ್ಟು ಕೆಲಸ ಮಾಡ್ತೇವೆ ಅಂದಿದ್ದರು. ಅವರೇ ಈ ಮಾತನ್ನು ಹೇಳಿದ್ದರು. ನಾನು ಸೋತಲ್ಲಿ, ನಾನೇ ಗೆಲ್ಲಿಸಿಕೊಂಡು ಬರುತ್ತೇನೆ ಎಂದಿದ್ದೇನೆ ಎಂದು ತಿಳಿಸಿದರು.

ನನ್ನ ಮನಸ್ಸಲ್ಲಿ ಆಘಾತ ಇದೆ ನೋವಿದೆ. ನಾವೆಲ್ಲರೂ ಸ್ವಪ್ರತಿಷ್ಠೆ ಬಿಟ್ಟು ಕೆಲಸ ಮಾಡೋಣ. ನಾನು ಬಹಳ ನೋವಲ್ಲಿದ್ದೇನೆ. ನನ್ನ ನೋವು ದೊಡ್ಡದಲ್ಲ, ಕಾಂಗ್ರೆಸ್ ದೊಡ್ಡದು. ಮೂರನೇ ಅಭ್ಯರ್ಥಿ ಬಗ್ಗೆ ಯೋಚನೆ ನಾನು ಮಾಡಿಯೇ ಇಲ್ಲ. ನಾನು ಯಾರಿಗೂ ಪ್ರಪೋಸಲ್ ಮಾಡಿಲ್ಲ. ನಾನು ಎಡಗೈ ಬಲಗೈ ವಿಷಯ ಮಾತ್ರ ಹೇಳ್ತಿಲ್ಲ. ನಾನು ಅದಕ್ಕಿಂತ ಮೇಲಿದ್ದೇನೆ. ನಾನು ರಮೇಶ್ ಕುಮಾರ್ ಮನೆ ಹತ್ರ ಹೋಗಿದ್ದೆ ಅವರೇ ಸಿಗಲಿಲ್ಲ. ನಾನೇ ಕಾಂಗ್ರೆಸ್ ಉಳಿಬೇಕು ಅಂತ ಅವರ ಮನೆಗೆ ಹೋದೆ. ಕಾಂಗ್ರೆಸ್ ಆಫೀಸಲ್ಲೇ ಮಾತಾಡಿದೆ, ಅವರೇ ಎಲ್ಲವನ್ನೂ ಬಿಟ್ಟುಬಿಡೋಣ ಅಂತ ಮಾತನಾಡಿದರು. ನಾನು ಕಾಂಗ್ರೆಸ್‌ಗಾಗಿ ಸ್ವಪ್ರತಿಷ್ಠೆ ಮಾಡೋದು ಒಳ್ಳೆಯದಲ್ಲ, ಪ್ರತಿಷ್ಠೆ ಮಾಡುತ್ತಿಲ್ಲ. ರಮೇಶ್ ಕುಮಾರ್ ಕೂರಿಸಿಕೊಂಡು ಸಿಎಂ ಮಾತನಾಡಲಿ. ನಾನು ಚಿಕ್ಕಪೆದ್ದಣ್ಣಗೆ ಟಿಕೆಟ್ ಕೊಡಿ ಅಂತಲೇ ಕೇಳಿದ್ದೇನೆ ಎಂದರು.

ಬೇರೆ ಕಡೆಯ ಎಲ್ಲ ಸಮಸ್ಯೆ ಬಗೆಹರಿಯುತ್ತದೆ. ಕೋಲಾರದ್ದು ಮಾತ್ರ ಯಾಕೆ ಬಗೆಹರಿಯುತ್ತಿಲ್ಲ? ಸಿಎಂ, ಡಿಸಿಎಂಗೆ ಕೋಲಾರದ ಸಮಸ್ಯೆ ಬಗೆಹರಿಸಬೇಕಾದ ದೊಡ್ಡ ಜವಾಬ್ದಾರಿ ಇದೆ. ಯಾರು ಸಮಸ್ಯೆ ಬಗೆಹರಿಸಬೇಕಿತ್ತೋ ಅವರ ಮನಸ್ಸು ಸ್ವಲ್ಪ ದೊಡ್ಡದಾದರೆ ಸಮಸ್ಯೆ ಬಗೆಹರಿಯುತ್ತದೆ. ಎಲ್ಲ ಕಡೆಯದ್ದೂ ಸಂಧಾನ ಆಗುತ್ತದೆ. ಕೋಲಾರದ್ದು ಮಾತ್ರ ಯಾಕೆ ಸಂಧಾನ ಆಗ್ತಿಲ್ಲ ಎಂದು ಪರೋಕ್ಷವಾಗಿ ಸಿಎಂ, ಡಿಸಿಎಂಗೆ ಪ್ರಶ್ನೆ ಮಾಡಿದರು.

# ದೇವೇಗೌಡರ ಆಶೀರ್ವಾದ ಆನೆ ಬಲ ತಂದಿದೆ



**ಬೆಂಗಳೂರು:** ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ಆಶೀರ್ವಾದ ನಮಗೆ ಆನೆ ಬಲ ತಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದರು. ಬಿಜೆಪಿ ಜೆಡಿಎಸ್ ಸಮನ್ವಯ ಸಭೆ ಬಳಿಕ ಮಾತನಾಡಿದ ಅವರು, ಈ ಸಭೆ ಬಹಳ ಹಿಂದೆಯೇ ಆಗಬೇಕಾಗಿತ್ತು. ಈ ಸಮ್ಮಿಲನ ಸುವರ್ಣಾಕ್ಷರದಲ್ಲಿ ಬರೆದಿಡುವ ಫಲಿತಾಂಶ ಆಗಲಿದೆ. ಹಿಂದೆಯೂ ಬಿಜೆಪಿ ಹಾಗೂ ಜೆಡಿಎಸ್ ಮಧ್ಯೆ ಹೊಂದಾಣಿಕೆ ಆಗಿತ್ತು. ಆದರೆ ಸೈದ್ಧಾಂತಿಕ ನೆಲೆಗಟ್ಟಿನಲ್ಲಿ ಅಂದಿನ ಕಾಲಘಟ್ಟದಲ್ಲಿ ದೇವೇಗೌಡರ ಸಮ್ಮತಿ ಇರಲಿಲ್ಲ ಎಂಬುದೂ ಗೊತ್ತಿರುವ ವಿಚಾರ. ಇದೀಗ ಮೋದಿ ಮತ್ತೊಮ್ಮೆ ಪ್ರಧಾನಿ ಆಗಬೇಕೆಂದು ದೇವೇಗೌಡರು ಆಶೀರ್ವಾದ ಮಾಡಿರುವುದು ಆನೆ ಬಲ ತಂದಿದೆ ಎಂದು ಹೇಳಿದರು.

ರಾಜದಲ್ಲಿ ಹಲವು ಹೊಂದಾಣಿಕೆ ರಾಜಕಾರಣ ನಡೆದಿದೆ. ಮೈತ್ರಿಯನ್ನು ರಾಜ್ಯದ ಜನ ಗಂಭೀರವಾಗಿ ತೆಗೆದುಕೊಂಡಿದ್ದಾರೆ. ಇನ್ನೂ ಕೂಡಾ ಸಮನ್ವಯತೆ ಮೂಡಿಸುವ ಕೆಲಸ ಮಾಡಬೇಕಾಗಿದೆ. ಆರೋಗ್ಯದ ಸಮಸ್ಯೆಯನ್ನು ಕಡೆಗಣಿಸಿ ಕುಮಾರಸ್ವಾಮಿ ಪ್ರವಾಸ ಕೈಗೊಂಡು ಬದ್ಧತೆ ತೋರಿಸಿದ್ದಾರೆ. ಸಿಎಂ ಕನಿಷ್ಠ 15-20 ಮಂತ್ರಿಗಳನ್ನು ಸ್ಪರ್ಧೆ ಮಾಡಿಸಬೇಕು ಎಂದುಕೊಂಡಿದ್ದರು. ಬಿಜೆಪಿ-ಜೆಡಿಎಸ್ ಮೈತ್ರಿ ಎಷ್ಟು ಗಟ್ಟಿಯಾಗಿದೆ ಅಂದರೆ, ಕಾಂಗ್ರೆಸ್ ಪಕ್ಷದ ಯಾವುದೇ ಮಂತ್ರಿ ಸ್ಪರ್ಧಿಸುವ ಎದೆಗಾರಿಕೆ ತೋರಿಸಲು ಸಾಧ್ಯವಾಗಿಲ್ಲ ಎಂದು ವಿಜಯೇಂದ್ರ ಹೇಳಿದರು.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಬಿಜೆಪಿ-ಜೆಡಿಎಸ್ ಸಮನ್ವಯ ಸಮಿತಿ ಸಭೆ ನಡೆಯಿತು. ಸಭೆಯಲ್ಲಿ ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ದೇವೇಗೌಡ, ಕರ್ನಾಟಕ ಬಿಜೆಪಿ ಚುನಾವಣಾ ಉಸ್ತುವಾರಿ ರಾಧಾ ಮೋಹನ್ ದಾಸ್, ಮಾಜಿ ಸಿಎಂಗಳಾದ ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ, ವಿಪಕ್ಷ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ರಾಜ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಜೆಡಿಎಸ್ ಶಾಸಕ ಬಂಡೆಪ್ಪ ಕಾಶೆಂಪೂರ್, ಎಂಎಲ್‌ಸಿ ಶರವಣ, ಸಂಸದ ಸದಾನಂದಗೌಡ, ಮಾಜಿ ಸಚಿವ ಗೋವಿಂದ ಕಾರಜೋಳ, ಸಿ.ಟಿ.ರವಿ ಸೇರಿದಂತೆ ಬಿಜೆಪಿ, ಜೆಡಿಎಸ್ ನಾಯಕರು ಸಭೆಯಲ್ಲಿ ಭಾಗಿಯಾದರು.

ಹೆಚ್.ಡಿ. ದೇವೇಗೌಡ, ಯಡಿಯೂರಪ್ಪ, ಕುಮಾರಸ್ವಾಮಿ, ವಿಜಯೇಂದ್ರ, ಅಶೋಕ್, ರಾಧಾ ಮೋಹನ್ ದಾಸ್, ಕಾರಜೋಳ ಮತ್ತು ಜಿ.ಟಿ. ದೇವೇಗೌಡ ಬಿಜೆಪಿ ಮತ್ತು ಜೆಡಿಎಸ್ ಶಾಲುಗಳನ್ನು ಧರಿಸಿ ಸಭೆಯಲ್ಲಿ ಭಾಗಿಯಾದರು.

## ಸಿದ್ದರಾಮಯ್ಯಗೆ ಅಧಿಕಾರದ ಮದ ಏರಿದೆ..

# ಅವರ ಗರ್ವಭಂಗ ಆಗಬೇಕು




**ಬೆಂಗಳೂರು:** ಸಿದ್ದರಾಮಯ್ಯ ಅವರ ಗರ್ವಭಂಗ ಆಗಬೇಕು. ಮೈಸೂರು, ಚಾಮರಾಜನಗರ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸೋಲಿಸಿ ಎಂದು ಮೈತ್ರಿ ನಾಯಕರಿಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಸೂಚನೆ ನೀಡಿದರು.

ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಬಿಜೆಪಿ-ಜೆಡಿಎಸ್ ಸಮನ್ವಯ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರು-ಚಾಮರಾಜನಗರ ಕ್ಷೇತ್ರ ಗೆಲ್ಲುವ ಶಕ್ತಿ ನಿಮಗೆ ಇದೆ ಜಿ.ಟಿ.ದೇವೇಗೌಡರೇ. ಸಿದ್ದರಾಮಯ್ಯನವರ ಗರ್ವಭಂಗ ಆಗಬೇಕು. ಗರ್ವಭಂಗ ಆಗಬೇಕಾದರೆ ನಾವೆಲ್ಲರೂ ಛಲದಿಂದ ಒಟ್ಟಾಗಿ ಹೋಗಬೇಕು ಎಂದು ವೇದಿಕೆಯಲ್ಲೇ ಜಿ.ಟಿ.ದೇವೇಗೌಡರಿಗೆ ಕರೆ ಕೊಟ್ಟರು. ಅದಕ್ಕೆ ಜಿಟಿಡಿ, ಆಯ್ತು ಅಲ್ಲಿಂದಲೇ ಗೆಲುವು ಶುರು ಮಾಡೋಣ ಎಂದು ಪ್ರತಿಕ್ರಿಯಿಸಿದರು.

ಕೋರ್ಟ್ಗೆ ಕೇಂದ್ರದ ವಿರುದ್ಧ ಅರ್ಜಿ ಹಾಕಿದ್ದಾರೆ ಸ್ಟಾಂಗೆಸ್ಟ್ ಸಿಎಂ. ಇಂಥ ಮಹಾನುಭಾವ ಸಿಎಂ ನಮ್ಮ ರಾಜ್ಯದಲ್ಲಿ ಇದ್ದಾರೆ, ನಮೋ ನಮಃ. ಜೆಡಿಎಸ್ ಎಲ್ಲಿದೆ ಅಂತ ಸಿದ್ದರಾಮಯ್ಯ ಕೇಳ್ತಾರೆ. ಅವರಿಗೆ ಅಧಿಕಾರದ ಮದ ಏರಿದೆ. ಜೆಡಿಎಸ್ ಇದೆ. ಎಲ್ಲಿದೆ ಅಂತ ತೋರಿಸುವ ಸಾಮರ್ಥ್ಯ 91 ವರ್ಷದ ಈ ದೇವೇಗೌಡಗೆ ಇದೆ. ನಾನು ಯಾರಿಗೂ ಅಂಜಲ್ಲ, ಯಾರ ಭಯವೂ ಇಲ್ಲ ಎಂದು ಸಿದ್ದರಾಮಯ್ಯ ವಿರುದ್ಧ ಕಿಡಿಕಾರಿದರು.

ಪರಸ್ಪರ ಸಹಕಾರ, ಒಗ್ಗಟ್ಟಿಗೆ ಯಡಿಯೂರಪ್ಪ ಪಾತ್ರ ಮುಖ್ಯವಾಗಿದೆ. ಹಿಂದೆ ಆಗಿದ್ದೆಲ್ಲ ಮರೆತುಬಿಡಿ, ಕಾಲ ಕ್ಷಣಿಕ. ನಮ್ಮ ವಿರೋಧಿಗಳು ಪ್ರಬಲರಾಗಿದ್ದಾರೆ. ಕಾಂಗ್ರೆಸ್‌ನ ಸೋಲಿಸೋದು ಅಷ್ಟು ಸುಲಭ ಅಲ್ಲ. ಹಿಂದೆ ಆಗಿರುವ ಲೋಪಗಳನ್ನು ಸರಿಪಡಿಸಿಕೊಂಡು ಮುಂದುವರೆಯೋಣ. ಮೋದಿಯವರ ಜತೆ ಕೈಜೋಡಿಸಲು ಹಲವು ಕಾರಣಗಳಿವೆ. ಅರವತ್ತು ವರ್ಷ ಸಾರ್ವಜನಿಕ ಜೀವನದಲ್ಲಿ ಹೋರಾಟ ಮಾಡಿದ್ದೇನೆ. ನನಗೆ ಎಲ್ಲದರ ಅರಿವು ಇದೆ. ಮೋದಿ ಹೆಸರು ಮಾತ್ರವೇ ಈ ಚುನಾವಣೆಯಲ್ಲಿ ಟ್ರಂಪ್ ಕಾರ್ಡ್ ಆಗಿದೆ. ಚುನಾವಣೆಯಲ್ಲಿ ಮೋದಿಯವರ ಹೆಸರಿನ ಬಲ ಮುಖ್ಯವಾಗಲಿದೆ. ನಮ್ಮ ಕಾರ್ಯಕರ್ತರು ಹಳೆಯ ಘಟನೆಗಳನ್ನು ಮರೆತು ಒಟ್ಟಾಗಿ ಕೆಲಸ ಮಾಡಿ. ದೇಶದಲ್ಲಿ ಮೋದಿಯವರಂಥ ನಾಯಕ ಮತ್ತೊಬ್ಬರು ಇಲ್ಲ ಎಂದು ಬಣ್ಣಿಸಿದರು.

ಹಲವು ಕ್ಷೇತ್ರಗಳಲ್ಲಿ ನಮ್ಮ ಪರ ವಾತಾವರಣ ಇದೆ. ಸಮಯ ಕಡಿಮೆ ಇದೆ, ಕೆಲಸ ಮಾಡಿ ಎಲ್ಲ ಕ್ಷೇತ್ರ ಗೆಲ್ಲಿಸಿ. ಕಳೆದ ಅರವತ್ತು ವರ್ಷದ ಹಿಂದೆ ಬೆಂಗಳೂರಿನಲ್ಲಿ ಭೂಮಿ ಬೆಲೆ ಎಷ್ಟಿತ್ತು? ಈಗ ಎಷ್ಟಿದೆ? ಕಾಂಗ್ರೆಸ್ ಬಳಿ ಸಂಪನ್ಮೂಲ ಹೆಚ್ಚಾಗಿದೆ. ಅವರು ಎಷ್ಟು ಹಣ ಚುನಾವಣೆಯಲ್ಲಿ ಸುರೀತಿದ್ದಾರೆ? ಅವರು ಸಂಪನ್ಮೂಲ ಸಂಗ್ರಹ ಮಾಡಿದ್ದೇ ಅಕ್ರಮ ಮಾರ್ಗದಲ್ಲಿ. ಅವರು ಬೇರೆ ರಾಜ್ಯಗಳಿಗೂ ಹಣ ಸಾಗಿಸಿದರು. ಆದರೂ ಸೋಕಾಲ್ಡ್ ಕಾಂಗ್ರೆಸ್ ನಾಲ್ಕು ರಾಜ್ಯಗಳಲ್ಲಿ ಚುನಾವಣೆ ಸೋಲ್ತು. ಅವರು ಈ ಚುನಾವಣೆಯಲ್ಲಿ ಹಣದ ಹೊಳೆಯೇ ಹರಿಸಬಹುದು. ಹಣ ಸುರಿಯುವ ಕಾಂಗ್ರೆಸ್ ಸೋಲಿಸೋದು ಸುಲಭವಲ್ಲ. ಆದರೆ ಜನ ನಮ್ಮ ಪರ ಇದ್ದಾರೆ. ಈ ಹೊಸ ಮೈತ್ರಿಗೆ ತನ್ನದೇ ಆದ ಸಾಮರ್ಥ್ಯ ಇದೆ. ಪ್ರತೀ ಕ್ಷೇತ್ರಗಳಲ್ಲೂ ಮೈತ್ರಿಗೆ ಸ್ವಂತ ಬಲ ಇದೆ ಎಂದು ಆಶಯ ವ್ಯಕ್ತಪಡಿಸಿದರು.

ನನ್ನನ್ನ ತುಮಕೂರಿನಲ್ಲಿ ಸೋಲಿಸಿದ್ದು ಕಾಂಗ್ರೆಸ್. ಯಾವ ಸಂದರ್ಭದಲ್ಲಿ ಏನಾಗಿದೆ ಅಂತಾ ಹೇಳ್ತೇನೆ ಯಡಿಯೂರಪ್ಪನವರೇ. ನನ್ನನ್ನೇ ತುಮಕೂರಿನಲ್ಲಿ ಸೋಲಿಸ್ತಾರೆ. ಯಾವ ಸಮಾಜಕ್ಕೆ ನಾನು ಏನು ಮಾಡಿದ್ದೇನೆ ಅಂತಾ ಇಲ್ಲಲ್ಲ ಬೇರೆ ಮಾತಾಡ್ತೀನಿ ಯಡಿಯೂರಪ್ಪನವರೇ. ನಾನು ಯಾವ ಕ್ಷೇತ್ರಕ್ಕಾದ್ರೂ ಹೋಗ್ತೀನಿ. ನನಗೆ ನನ್ನ ಮಂಡಿ ನೋವು ಇದ್ದರೂ ಪರವಾಗಿಲ್ಲ. ನನ್ನ ತಲೆ ಎನ್‌ಸೈಕ್ಲೋಪೀಡಿಯಾ, ಎಲ್ಲವೂ ನೆನಪಿದೆ. ಆದರೆ ಮಂಡಿಗಳೆರಡೂ ಸಹಕರಿಸಲ್ಲ ಎಂದು ತಮ್ಮ ಅನಾರೋಗ್ಯದ ಕುರಿತು ಮಾತನಾಡಿದರು.

# ಸಿದ್ದೇಶ್ವರ್ ಪತ್ನಿ ವಿರುದ್ಧ ಶಾಮನೂರು ಹೇಳಿಕೆ



**ದಾವಣಗೆರೆ:** ಮಾತನಾಡಲು ಬಾರದ ಇವರು ಅಡುಗೆ ಮಾಡೋದಕ್ಕೆ ಲಾಯಕ್ಕು. ಅವರಿಗೆ ಮಾತನಾಡುವ ಶಕ್ತಿ ಇಲ್ಲ ಎಂದು ಸಂಸದ ಸಿದ್ದೇಶ್ವರ್ ಪತ್ನಿ ವಿರುದ್ಧ ಶಾಸಕ ಶಾಮನೂರು ಶಿವಶಂಕರಪ್ಪ ನಾಲಿಗೆ ಹರಿಬಿಟ್ಟಿದ್ದಾರೆ.

ದಾವಣಗೆರೆ ಬಂಟರ ಭವನದಲ್ಲಿ ನಡೆದ ಕಾಂಗ್ರೆಸ್ ಜನಪ್ರತಿನಿಧಿಗಳು, ಮುಖಂಡರ ಸಭೆಯಲ್ಲಿ ಶಾಮನೂರು ಶಿವಶಂಕರಪ್ಪ ಮಾತನಾಡಿ ಈ ಹೇಳಿಕೆ ನೀಡಿದ್ದಾರೆ.

ದಾವಣಗೆರೆ ಬಿಜೆಪಿ ಮಹಿಳಾ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ್ ಅವರನ್ನು ಟೀಕಿಸುವ ಭರದಲ್ಲಿ ಶಾಮನೂರು ಈ ಹೇಳಿಕೆ ನೀಡಿದ್ದಾರೆ. ದಾವಣಗೆರೆ ಬಿಜೆಪಿ ಅಭ್ಯರ್ಥಿ ದಾವಣಗೆರೆಯಿಂದ ಗೆದ್ದು ಮೋದಿಗೆ ಕಮಲದ ಹೂ ಅರ್ಪಿಸುತ್ತೇನೆ ಅಂತಾರೆ. ಮೊದಲು ದಾವಣಗೆರೆ ಜಿಲ್ಲೆಯ ಸಮಸ್ಯೆ ತಿಳಿಯಲಿ ಎಂದು ಶಾಮನೂರು ಟಾಂಗ್ ಕೊಟ್ಟಿದ್ದಾರೆ.

ಮಾತನಾಡಲು ಬಾರದ ಇವರು ಅಡುಗೆ ಮಾಡೋದಕ್ಕೆ ಲಾಯಕ್ಕು. ಸಾರ್ವಜನಿಕ ಸಭೆಗಳಲ್ಲಿ ಮಾತನಾಡುವ ಶಕ್ತಿ ಅವರಿಗಿಲ್ಲ. ಹೀಗಾಗಿ ನಮ್ಮ 'ಕೈ' ಮೇಲಿದೆ ಎಂಬುದನ್ನು ನಾವು ತೋರಿಸಬೇಕು ಎಂದು ಬಿಜೆಪಿ ಅಭ್ಯರ್ಥಿಯನ್ನು ಟೀಕಿಸುವ ಭರದಲ್ಲಿ ಶಾಮನೂರು ಈ ಹೇಳಿಕೆ ನೀಡಿದ್ದಾರೆ.

ವಿರೋಧ ಪಕ್ಷದವರು ಮೋದಿ.. ಮೋದಿ ಅಂತಾರೆ. ಆದರೆ ಮೋದಿ ಕರ್ನಾಟಕಕ್ಕೆ ಏನು ಕೊಟ್ಟಿದ್ದಾರೆ? ನಮ್ಮ ರಾಜ್ಯಕ್ಕೆ ಬರಬೇಕಾದ ಹಣ ನೀಡದೇ ಅನ್ಯಾಯ ಮಾಡಿದ್ದಾರೆ ಎಂದು ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

## ಟ್ಯಾಕ್ಸ್ ನೋಟಿಸ್

ಹೇಗೆ ಹೀಗಾಯಿತು ನನಗೆ ತಿಳಿದಿಲ್ಲ. ನನ್ನ ಪ್ಯಾನ್ ಕಾರ್ಡ್ ಅನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ. ವಹಿವಾಟು ಮಾಡಲಾಗಿದೆ ಎಂದು ದೂರಿನಲ್ಲಿ ವಿದ್ಯಾರ್ಥಿ ತಿಳಿಸಿದ್ದಾನೆ.

ಆದಾಯ ತೆರಿಗೆ ಇಲಾಖೆಯಿಂದ ಮಾಹಿತಿ ಪಡೆದ ಕೂಡಲೇ ಸಂಬಂಧಪಟ್ಟ ಇಲಾಖೆಯೊಂದಿಗೆ ವಿದ್ಯಾರ್ಥಿ ಮಾತನಾಡಿದ್ದಾನೆ. ಬಳಿಕ ಹಲವು ಬಾರಿ ಪೊಲೀಸರಿಗೆ ದೂರು ನೀಡಲು ಯತ್ನಿಸಿದರೂ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಶುಕ್ರವಾರ ಮತ್ತೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಗೆ ಆಗಮಿಸಿ ಮತ್ತೆ ದೂರು ದಾಖಲಿಸಿದ್ದಾನೆ.

ಪ್ರಕರಣ ಸಂಬಂಧ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಪಾನ್ ಕಾರ್ಡ್ ದುರುಪಯೋಗವಾಗಿದೆ. ಅದರ ಮೂಲಕ ಕಂಪನಿಯನ್ನು ನೋಂದಾಯಿಸಲಾಗಿದೆ. ಇಷ್ಟು ದೊಡ್ಡ ಮೊತ್ತದ ವ್ಯವಹಾರಗಳನ್ನು ಮಾಡಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್‌ಪಿ) ಶಿಯಾಜ್ ಕೆಎಂ ತಿಳಿಸಿದ್ದಾರೆ. ಇಡೀ ಪ್ರಕರಣದ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

## ಭಾರತೀಯ ನೌಕಾಪಡೆ

ಹೀಗಾಗಿ ಎರಡು ಭಾರತೀಯ ನೌಕಾಪಡೆಯ ಹಡಗುಗಳನ್ನು ಕಡಲ ಭದ್ರತಾ ಕಾರ್ಯಾಚರಣೆಗಳಿಗಾಗಿ ಅರೇಬಿಯನ್ ಸಮುದ್ರದಲ್ಲಿ ನಿಯೋಜಿಸಲಾಗಿತ್ತು. ಅಪಹರಣಕ್ಕೊಳಗಾದ ಮೀನುಗಾರಿಕಾ ಹಡಗನ್ನು ರಕ್ಷಿಸಲಾಯಿತು ಎಂದು ನೌಕಾಪಡೆ ಹೇಳಿಕೆಯಲ್ಲಿ ತಿಳಿಸಿದೆ.

ನಂತರ ಭಾರತೀಯ ನೌಕಾಪಡೆಯ ತಂಡಗಳು ಹಡಗನ್ನು ಸಂಪೂರ್ಣವಾಗಿ ಶುಚಿಗೊಳಿಸಿದವು. ಹಡಗನ್ನು ಸುರಕ್ಷಿತವಾಗಿ ಸಾಗಿಸಲು ಸೂಕ್ತ ಕ್ರಮಕೈಗೊಂಡಿವೆ. ಇದರಿಂದಾಗಿ ಸಾಮಾನ್ಯ ಮೀನುಗಾರಿಕೆ ಚಟುವಟಿಕೆಗಳು ಪುನರಾರಂಭಗೊಳ್ಳಬಹುದು ಎಂದು ನೌಕಾಪಡೆ ಹೇಳಿದೆ.

ಈ ತಿಂಗಳ ಆರಂಭದಲ್ಲಿ ಭಾರತೀಯ ನೌಕಾಪಡೆಯು ಮತ್ತೊಂದು ಧೈರ್ಯಶಾಲಿ ಕಾರ್ಯಾಚರಣೆ ನಡೆಸಿತ್ತು. ಕಡಲ್ಗಳ್ಳರ ದಾಳಿಯಿಂದ ಭಾರತೀಯ ಕರಾವಳಿ ತೀರದಿಂದ ಸುಮಾರು 2,600 ಕಿ.ಮೀ ದೂರದಲ್ಲಿ ಸಾಗುತ್ತಿದ್ದ ರುಯೆನ್ ಎಂಬ ಹಡಗನ್ನು ರಕ್ಷಿಸಿದ್ದರು.

## ವ್ಯಂಗ್ಯವಾಡಿದ ಶಾಸಕ

ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿಯವರು ಹೃದಯ ಶಸ್ತ್ರಚಿಕಿತ್ಸೆ ಸಂಬಂಧ ಕಳೆದ ವಾರ ಚೆನ್ನೈನ ಅಪೋಲೊ ಆಸ್ಪತ್ರೆಗೆ ದಾಖಲಾಗಿದ್ದರು. ಮಾರ್ಚ್ 21 ರಂದು ಅವರಿಗೆ ಮೂರನೇ ಬಾರಿ ಹೃದಯ ಶಸ್ತ್ರಚಿಕಿತ್ಸೆ ನೆರವೇರಿತು. ಇನ್ನು ಶಸ್ತ್ರ ಚಿಕಿತ್ಸೆ ಯಶಸ್ವಿಯಾದ ಹಿನ್ನೆಲೆ ಶಾಸಕರಾದ ಸಮೃದ್ಧಿ ಮಂಜು, ಹರೀಶ್ ಗೌಡ, ಸ್ವರೂಪ್ ಸೇರಿದಂತೆ ಜೆಡಿಎಸ್ ನಾಯಕರು ಚೆನ್ನೈಗೆ ತೆರಳಿದ್ದರು. ಮತ್ತೊಂದೆಡೆ ರಾಮನಗರ, ಮಂಡ್ಯ, ಹಾಸನ, ಮೈಸೂರು ಸೇರಿದಂತೆ ರಾಜ್ಯಾದ್ಯಂತ ಹೆಚ್ ಡಿ ಕುಮಾರಸ್ವಾಮಿ ಅಭಿಮಾನಿಗಳು, ಬೆಂಬಲಿಗರು ಪ್ರಾರ್ಥನೆ ಸಲ್ಲಿಸಿದ್ದರು.

## ಕೆಲಸ ಮಾಡಲು ನಿರಾಸಕ್ತಿ

ನಾಲ್ಕು ಕ್ಷೇತ್ರಗಳಲ್ಲಿ ಸಭೆಯೇ ನಡೆದಿಲ್ಲ, ಶಾಸಕ ಎನ್ ಎ ಹ್ಯಾರಿಸ್ ಕೂಡ ಮನ್ಸೂರ್ ಪರ ಇದುವರೆಗೆ ಚುನಾವಣಾ ಕಾರ್ಯ ಪ್ರಾರಂಭಿಸಿಲ್ಲ. ಶಾಸಕರು, ಸಚಿವರು ಸರಿಯಾಗಿ ಸಭೆಗಳಿಗೆ ಬಾರದ ಬಗ್ಗೆ ಜಮೀರ್ ಅಹಮದ್ ಖಾನ್ ಕೂಡ ಬೇಸರ ವ್ಯಕ್ತಪಡಿಸಿದ್ದಾರೆ. ಅಲ್ಪಸಂಖ್ಯಾತ ಸಮುದಾಯಕ್ಕೆ ಟಿಕೆಟ್ ಸಿಕ್ಕಿರುವುದೇ ಒಂದು ಕಡೆ. ಇಂಥ ಕಡೆಯೂ ಶಾಸಕರೇ ಕೆಲಸ ಮಾಡದೇ ಇದ್ದರೆ ಹೇಗೆ ಎಂದು ಸಚಿವರು ಬೇಸರ ಹೊರಹಾಕಿದ್ದಾರೆ.

ಬೆಂಗಳೂರು ಕೇಂದ್ರ, ಲೋಕಸಭೆ ಕ್ಷೇತ್ರದಿಂದ ಬಿಜೆಪಿ ಹಾಲಿ ಸಂಸದ ಪಿ ಸಿ ಮೋಹನ್ ಮತ್ತೊಮ್ಮೆ ಜಯ ದಾಖಲಿಸಲು ಕಸರತ್ತು ನಡೆಸುತ್ತಿದ್ದಾರೆ. ಕಾಂಗ್ರೆಸ್ ನಿಂದ ಮನ್ಸೂರ್ ಅಲಿಖಾನ್ ಅವರಿಗೆ ಟಿಕೆಟ್ ಸಿಕ್ಕಿದ್ದು ಮುಸ್ಲಿಂ ಶಾಸಕರೇ ಬೆಂಬಲಕ್ಕೆ ಹಿಂದೇಟು ಹಾಕುತ್ತಿದ್ದಾರೆ.

2008 ರ ಕ್ಷೇತ್ರ ಪುನರ್ವಿಂಗಡಣೆಯಲ್ಲಿ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ ಅಸ್ತಿತ್ವಕ್ಕೆ ಬಂದಿತು. ಬೆಂಗಳೂರು ಉತ್ತರ ಹಾಗೂ ಬೆಂಗಳೂರು ದಕ್ಷಿಣ ಕ್ಷೇತ್ರದಿಂದ ಕೆಲವು ಕ್ಷೇತ್ರಗಳನ್ನು ವಿಭಜಿಸಿ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ ಸೃಷ್ಟಿ ಆಯಿತು. 2009ರ ಮೊದಲ ಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಎಚ್. ಟಿ ಸಾಂಗ್ಲಿಯಾನ ವಿರುದ್ದ ಬಿಜೆಪಿ ಪಿಸಿ ಮೋಹನ್ 35 ಸಾವಿರ ಮತಗಳ ಅಂತರದಿಂದ ಜಯ ದಾಖಲಿಸಿದ್ದರು. 2014 ಮತ್ತು 2019 ರ ಎರಡು ಚುನಾವಣೆಯಲ್ಲಿ ಕಾಂಗ್ರೆಸ್ ನ ರಿಜ್ವಾನ್ ಅರ್ಷದ್ ವಿರುದ್ದ ಪಿ ಸಿ ಮೋಹನ್ ಜಯಗಳಿಸಿದ್ದರು. ಸದ್ಯ ಮತ್ತೊಮ್ಮೆ ಜಯ ದಾಖಲಿಸುವ ನಿರೀಕ್ಷೆಯಲ್ಲಿ ಪಿ.ಸಿ. ಮೋಹನ್ ಇದ್ದಾರೆ.

## ಅಧಿಕಾರಿಗಳ ದಾಳಿ

ನೀತಿ ಸಂಹಿತೆ ಜಾರಿಯಲ್ಲಿದ್ದರೂ ಅಕ್ರಮವಾಗಿ ಹಣದ ಸಾಗಣೆ ಕುರಿತು ಆರೋಪಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ದಾಳಿ ನಡೆದಿದೆ ಎನ್ನಲಾಗಿದೆ.

ಕೆಲ ತಿಂಗಳ ಹಿಂದಷ್ಟೇ ಬೆಂಗಳೂರಿನ ಹಲವೆಡೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದರು. ವಿಜಯನಗರ, ಬಿಟಿಎಂ ಲೇಔಟ್, ಹುಳಿಮಾವು, ಸದಾಶಿವನಗರ, ಸ್ಯಾಂಕಿ ಟ್ಯಾಂಕ್ ಸೇರಿದಂತೆ ಹಲವೆಡೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದರು. ಐಟಿ ಅಧಿಕಾರಿಗಳ 15ಕ್ಕೂ ಹೆಚ್ಚು ತಂಡಗಳು ಮೆಗಾ ರೇಡ್‌ಗಾಗಿ ಚೆನ್ನೈ, ದೆಹಲಿಯಿಂದ ರಾತ್ರೋರಾತ್ರಿ, ಬೆಂಗಳೂರಿಗೆ ಬಂದಿದ್ದವು.

ತೆರಿಗೆ ವಂಚನೆ ಮಾಡಿರುವ ಖಾಸಗಿ ಕಂಪನಿಗಳು, ಅದರ ಮಾಲೀಕರು ಹಾಗೂ ಚಿನ್ನದ ವ್ಯಾಪಾರಿಗಳ ಮನೆ ಮೇಲೆ ದಾಳಿ ನಡೆಸಿರುವ ಬಗ್ಗೆ ಮಾಹಿತಿ ದೊರೆತಿತ್ತು. ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ಮಾಡಿ ದಾಖಲೆಗಳ ಪರಿಶೀಲನೆ ನಡೆಸಿದ್ದರು.

ದಂತವೈದ್ಯರಾದ ಡಾ. ಸಂಧ್ಯಾ ಪಾಟೀಲ್ ಎಂಬವರ ಮನೆ ಮೇಲೆ ಐಟಿ ಅಧಿಕಾರಿಗಳು ರೈಡ್ ಮಾಡಿದ್ದರು. ಪ್ರಶಾಂತ ನಗರದಲ್ಲಿರುವ ಸಂಧ್ಯಾ ಪಾಟೀಲ್ ಮನೆ ಮೇಲೆ ದಾಳಿ ಮಾಡಿ, ಸಂಧ್ಯಾ ಪಾಟೀಲ್ ಅವರನ್ನು ಹೆಚ್ಚಿನ ತನಿಖೆಗಾಗಿ ಐಟಿ ಟೀಮ್ ಕರೆದುಕೊಂಡು ಹೋಗಿದ್ದರು. ವಿಜಯ ನಗರದಲ್ಲಿ ಕ್ಲಿನಿಕ್ ಹೊಂದಿರುವ ಸಂಧ್ಯಾ ಪಾಟೀಲ್ ಮನೆ ಗೋವಿಂದರಾಜ ನಗರದ ಪ್ರಶಾಂತ ನಗರದಲ್ಲಿದೆ.

## ಪಟ್ಟಿಯೇ ನಾಪತ್ತೆ

ಬಳಿಕ ಕೆಪಿಎಸ್‌ಸಿಯ ಎಲ್ಲಾ ಶಾಖೆಗಳಲ್ಲೂ ಕಡತಕ್ಕಾಗಿ ಶೋಧ ನಡೆಸಲಾಗಿದೆ. ಕಡತ ಪತ್ತೆಯಾದಲ್ಲಿ ಕೂಡಲೇ ಶಾಖೆ-2ಕ್ಕೆ ಹಿಂದಿರುಗಿಸುವಂತೆ ಕೆಪಿಎಸ್ ಸಿ ಜ್ಞಾಪನ ಹೊರಡಿಸಿತ್ತು. ಬಳಿಕ ಕೆಪಿಎಸ್ ಸಿ ಸಿಬ್ಬಂದಿಯಿಂದ ಕಡತಕ್ಕಾಗಿ ಎಲ್ಲೆಡೆ ಶೋಧ ನಡೆದಿದೆ.

## ಮೊದಲನೇ ಪುಟದಿಂದ...

ಅಧಿಕಾರಿ, ಸಿಬ್ಬಂದಿ ಸುಮಾರು ಒಂದು ತಿಂಗಳು ಶೋಧ ನಡೆಸಿದ್ರು. ಆದರೆ ಕಡೆತ ಎಲ್ಲೂ ಸಿಕ್ಕಿಲ್ಲ. ಹೀಗಾಗಿ ಕಡತ ನಾಪತ್ತೆ ಬಗ್ಗೆ ದೂರು ದಾಖಲಿಸಲು ಆಯೋಗ ಸಭೆ ನಡೆಸಿ ನಿರ್ಧಾರ ಕೈಗೊಂಡಿದ್ದು ಕಡತ ನಾಪತ್ತೆ ಬಗ್ಗೆ ಕೆಪಿಎಸ್ ಸಿ ಸಹಾಯಕ ಕಾರ್ಯದರ್ಶಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸದ್ಯ ಘಟನೆ ಸಂಬಂಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದ್ದು ಪೊಲೀಸರು ತನಿಖೆ ಕೈಗೆತ್ತಿಕೊಂಡಿದ್ದಾರೆ.

## 6 ಸಾವಿರ ರೂ.!

**ತಯಾರಿಸಿದ್ದು ಯಾರು?:** ರಾಮೇಶ್ವರಂ ಕೆಫೆಯಲ್ಲಿ ಸ್ಫೋಟಿಸಿದ ಬಾಂಬ್ ತಯಾರಿಸಿದ್ದು ಯಾರು ಎಂಬುದರ ಕುರಿತು ಮುಜಾಮಿಲ್ ಷರೀಫ್ ಬಾಯಿಬಿಟ್ಟಿಲ್ಲ. ಮುಸ್ಸಾವಿರ್ ಶಾಜಿಬ್ ಹುಸೇನ್ ತಯಾರಿಸಿದನಾ? ಅಬ್ದುಲ್ ಮತೀನ್ ತಾಹಾ ಏನಾದರೂ ರೆಡಿ ಮಾಡಿದ್ದಾನಾ ಅಥವಾ ಬೇರೆ ಯಾರಾದರೂ ತಯಾರಿಸಿ ಕೊಟ್ಟಿದ್ದಾರಾ ಎಂಬುದು ಎನ್‌ಐಎಗೆ ನಿಖರವಾಗಿ ಮಾಹಿತಿ ದೊರೆತಿಲ್ಲ. ಹಾಗಾಗಿ, ಅಧಿಕಾರಿಗಳು ಮುಜಾಮಿಲ್ ಷರೀಫ್‌ನನ್ನು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ.

**ಸುಳಿವು ನೀಡಿದವರಿಗೆ ಬಹುಮಾನ:** ಪ್ರಕರಣದ ಆರೋಪಿಯೊಬ್ಬನನ್ನು ಬಂಧಿಸಿದ ಬಳಿಕ, ತಲೆಮರೆಸಿಕೊಂಡಿರುವ ಇತರ ಇಬ್ಬರು ಆರೋಪಿಗಳ ಬಗ್ಗೆ ಯಾವುದೇ ರೀತಿಯ ಮಾಹಿತಿ ನೀಡುವವರಿಗೆ 10 ಲಕ್ಷ ರೂ.ಗಳ ನಗದು ಬಹುಮಾನವನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ಘೋಷಿಸಿದೆ. ಪತ್ತೆ ಮಾಡುವ ಉದ್ದೇಶಕ್ಕಾಗಿ ಎನ್‌ಐಎ ಇಬ್ಬರೂ ಶಂಕಿತರ ಮೂಲ ವಿವರಗಳನ್ನು ನೀಡಿದೆ ಮತ್ತು ಆರೋಪಿಗಳನ್ನು ಬಂಧಿಸಲು ಸಾರ್ವಜನಿಕರ ನೆರವು ಕೋರಿದೆ.

ಸ್ಫೋಟ ನಡೆಸಿದ ಪ್ರಮುಖ ಆರೋಪಿಯನ್ನು ಮುಸ್ಸಾವಿರ್ ಶಾಜಿಬ್ ಹುಸೇನ್ ಎಂದು ತನಿಖಾ ಸಂಸ್ಥೆ ಗುರುತಿಸಿದ್ದು, ಆತನ ಚಲನವಲನಗಳು ರಾಮೇಶ್ವರಂ ಕೆಫೆಯ ಸಿಸಿಟಿವಿ ದೃಶ್ಯಾವಳಿಗಳಲ್ಲಿ ಸೆರೆಯಾಗಿದೆ. ಎನ್‌ಐಎ ಪ್ರಕಾರ, ಆತ ಸುಮಾರು 6 ಅಡಿ 2 ಇಂಚು ಎತ್ತರವಿರುವ 30 ವರ್ಷದ ವ್ಯಕ್ತಿ. ಬಾಲಕರ ಹಾಸ್ಟೆಲ್, ಪಿಜಿ ಅಥವಾ ಯಾವುದೇ ಕಡಿಮೆ ಬಜೆಟ್ ಹೋಟೆಲ್‌ಗಳಲ್ಲಿ ವಾಸಿಸುತ್ತಿದ್ದಾನೆ. ಮೊಹಮ್ಮದ್ ಜುನೇದ್ ಸಯೀದ್ ಹೆಸರಿನಲ್ಲಿ ನಕಲಿ ಚಾಲನಾ ಪರವಾನಗಿ ಬಳಸುತ್ತಿದ್ದಾನೆ ಎಂದೂ ತನಿಖಾಧಿಕಾರಿಗಳು ಹೇಳಿದ್ದಾರೆ. ಆರೋಪಿ ತನ್ನ ಮೂಲ ಗುರುತನ್ನು ಮರೆಮಾಚಲು ಮುಖಗವಸು, ನಕಲಿ ಗಡ್ಡ ಅಥವಾ ವಿಗ್ ಧರಿಸುತ್ತಾನೆ ಎಂದು ಹೇಳಿದೆ.

ಸ್ಫೋಟದ ಇನ್ನೊರ್ವ ಆರೋಪಿ ಅಬ್ದುಲ್ ಮತೀನ್ ಅಹ್ಮದ್ ತಾಹಾ, ಸ್ಫೋಟ ನಡೆಸಲು ಮುಸ್ಸಾವಿರ್‌ಗೆ ಸಹಾಯ ಮಾಡಿದ್ದನೆಂದು ಹೇಳಲಾಗಿದ್ದು, ಆತನಿಗೂ ಹುಡುಕಾಟ ನಡೆಯುತ್ತಿದೆ. ಈತ ತನ್ನ ಮೂಲ ಗುರುತನ್ನು ಮರೆಮಾಚಲು ವಿಘ್ನೇಶ್ ಡಿ ಮತ್ತು ಸುಮಿತ್ ಎಂಬ ಹಿಂದೂ ಹೆಸರನ್ನೂ ಬಳಸುತ್ತಿದ್ದಾನೆ ಎಂದು ಎನ್‌ಐಎ ಹೇಳಿದೆ. ಆತ ಬಹುಶಃ ಹುಡುಗರ ಹಾಸ್ಟೆಲ್ ಗಳು, ಪಿಜಿಗಳು ಅಥವಾ ಯಾವುದೇ ಕಡಿಮೆ ಬಜೆಟ್ ಹೋಟೆಲ್ ಗಳಲ್ಲಿ ವಾಸಿಸುತ್ತಿದ್ದಾನೆ ಎಂದು ಹೇಳಿದ್ದಾರೆ. ಇಬ್ಬರೂ ಆರೋಪಿಗಳು ತೀರ್ಥಹಳ್ಳಿ ಮೂಲದವರು.

## ಮಗನ ಪಣ

2019ರ ಚುನಾವಣೆಯಲ್ಲಿ ಸುಮಲತಾ ಪರ ತೆರೆ ಹಿಂದೆ ಮಾಸ್ಟರ್ ಮೈಂಡ್ ಆಗಿ ಕೆಲಸ ಮಾಡಿದ್ದ ಚಲುವರಾಯಸ್ವಾಮಿ ಕ್ಷೇತ್ರವಾದ ನಾಗಮಂಗಲದಿಂಲೇ ನಿಖಿಲ್ ಇಂದಿನಿಂದ ತಂದೆಯ ಪರ ಚುನಾವಣೆಯ ಪ್ರಚಾರ ಆರಂಭ ಮಾಡಲಿದ್ದಾರೆ.

ಈ ಮೂಲಕ ಚಲುವರಾಯಸ್ವಾಮಿ ಅವರಿಗೆ ನಿಖಿಲ್ ಠಕ್ಕರ್ ನೀಡಲು ಹೊರಟಿದ್ದಾರೆ. ಇಂದು ನಿಖಿಲ್ ನಾಗಮಂಗಲದಲ್ಲಿ 11 ಗಂಟೆಗೆ ಹಾಗೂ ಕೆಆರ್ ಪೇಟೆಯಲ್ಲಿ 2 ಗಂಟೆಗೆ ಬಿಜೆಪಿ-ಜೆಡಿಎಸ್ ನಾಯಕರು, ಮುಖಂಡರು, ಕಾರ್ಯಕರ್ತರ ಜೊತೆ ಚುನಾವಣಾ ಪ್ರಚಾರ ಸಭೆ ಮಾಡಲಿದ್ದಾರೆ. ಒಟ್ಟಾರೆ ಕಳೆದ ಬಾರಿಯಾದ ಸೋಲಿನ ಸೇಡು ತೀರಿಸಿಕೊಳ್ಳಲು ತಂದೆ ಕುಮಾರಸ್ವಾಮಿ ಅವರ ಗೆಲುವಿಗಾಗಿ ನಿಖಿಲ್ ಮಂಡ್ಯದಲ್ಲಿ ಸ್ವತಃ ಅಖಾಡಕ್ಕೆ ಇಳಿಸಿದಿದ್ದಾರೆ. ಇದಕ್ಕೆ ಕೈ ನಾಯಕರ ಪಟ್ಟು ಏನು ಅನ್ನೋದು ಕಾದು ನೋಡಬೇಕಿದೆ.

## ಸಿಎಂ

ಕಾಂಗ್ರೆಸ್ ಪಕ್ಷದ ಮೇಲೆ ವರಮಾನ ತೆರಿಗೆ ಪಾವತಿ ಮಾಡದೆ ಇರುವ ಆರೋಪ ಹೊರಿಸಿ ರೂ.1823 ಕೋಟಿ ಪಾವತಿಸುವಂತೆ ಐಟಿ ಇಲಾಖೆ ನೋಟೀಸ್ ನೀಡಿದೆ. 2017-18ರಲ್ಲಿ ಬಿಜೆಪಿ ಹೆಸರೇ ಇಲ್ಲದ 92 ದಾನಿಗಳಿಂದ ರೂ.4.5 ಲಕ್ಷ ಮತ್ತು ವಿಳಾಸವೇ ಇಲ್ಲದ 1297 ದಾನಿಗಳಿಂದ ರೂ.42 ಕೋಟಿ ದೇಣಿಗೆ ಪಡೆದಿರುವುದನ್ನು ನಮ್ಮ ಪಕ್ಷದ ನಾಯಕರು ಬಯಲಿಗೆಳೆದಿದ್ದಾರೆ. ನಮ್ಮ ಪಕ್ಷಕ್ಕೆ ಅನ್ವಯಿಸಿದ ಮಾನದಂಡವನ್ನೇ ಅನ್ವಯಿಸಿದರೆ ಬಿಜೆಪಿ ಕಳೆದ ಏಳು ವರ್ಷಗಳಲ್ಲಿ ನಡೆಸಿರುವ ತೆರಿಗೆ ಉಲ್ಲಂಘನೆಗಾಗಿ ರೂ.4,263 ಕೋಟಿ ಪಾವತಿಸಬೇಕಾಗಿದೆ. ಚುನಾವಣೆ ಘೋಷಣೆಯಾಗುತ್ತಿದ್ದಂತೆ ಅತಿಕ್ರಿಯಾಶಾಲಿಯಾಗಿರುವ ಐಟಿ ಇಲಾಖೆ ಟಿಎಂಸಿ, ಸಿಪಿಐ ಸೇರಿದಂತೆ ಬೇರೆ ವಿರೋಧಪಕ್ಷಗಳ ಮೇಲೆಯೂ ತೆರಿಗೆ ಭಯೋತ್ಪಾದನೆಯ ಅಸ್ತ್ರ ಪ್ರಯೋಗ ಮಾಡಿದೆ. ವಿರೋಧ ಪಕ್ಷಗಳ ಮೇಲೆ ಮುಗಿ ಬಿದ್ದಿರುವ ಐಟಿ ಇಲಾಖೆ ಬಿಜೆಪಿಯ ತೆರಿಗೆ ಉಲ್ಲಂಘನೆ ಬಗ್ಗೆ ಮಾತ್ರ ಕುರುಡಾಗಿದೆ. ಐಟಿ ಇಲಾಖೆಯ ಕಣ್ಣಿಗೆ ಬಟ್ಟೆ ಕಟ್ಟಿರುವವರು ಯಾರು ಎನ್ನುವುದನ್ನು ತಿಳಿಯದಷ್ಟು ದೇಶದ ಜನತೆ ದಡ್ಡರಲ್ಲ.

ಕಾಂಗ್ರೆಸ್ ಪಕ್ಷದ ಕೆಲವು ನಾಯಕರ ಡೈರಿಗಳೆಂದು ಹೇಳಲಾದ ದಾಖಲೆಪತ್ರಗಳನ್ನು ಮುಂದಿಟ್ಟುಕೊಂಡು ತೆರಿಗೆ ಉಲ್ಲಂಘನೆಯ ಆರೋಪ ಮಾಡುತ್ತಿರುವ ಐಟಿ ಇಲಾಖೆಗೆ, ಕರ್ನಾಟಕದಲ್ಲಿಯೇ ಬಯಲಾಗಿದ್ದ ಯಡಿಯೂರಪ್ಪ ಡೈರಿಗಳಾಗಲಿ, ನರೇಂದ್ರಮೋದಿಯವರೂ ಫಲಾನುಭವಿ ಎಂದು ಆರೋಪಿಸಲಾಗಿರುವ ''ಬಿರ್ಲಾ-ಸಹಾರಾ'' ಡೈರಿಯಾಗಲಿ ಯಾಕೆ ಕಣ್ಣಿಗೆ ಬಿದ್ದಿಲ್ಲ. ಐಟಿ, ಇಡಿ ಮತ್ತು ಸಿಬಿಐ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಚುನಾವಣಾ ಬಾಂಡ್ ಗಳ ಮೂಲಕ ಸಾವಿರಾರು ಕೋಟಿ ರೂಪಾಯಿಗಳನ್ನು ಆಡಳಿತಾರೂಡ ಬಿಜೆಪಿ ಸುಲಿಗೆ ಮಾಡಿರುವುದು ಜಗಜ್ಜಾಹೀರಾಗಿದೆ. ಬಯಲಾಗಿರುವ ಈ ಹಗರಣದಿಂದ ಜನರ ಗಮನ ಬೇರೆ ಕಡೆ ಸೆಳೆಯುವ ಜೊತೆಯಲ್ಲಿ ವಿರೋಧ ಪಕ್ಷಗಳನ್ನೂ ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ದುರುದ್ದೇಶದಿಂದಲೇ ಬಿಜೆಪಿ ಸರ್ಕಾರ ವರಮಾನ ತೆರಿಗೆ ವಂಚನೆಯ ಸುಳ್ಳು ಆರೋಪಗಳನ್ನು ಮಾಡುತ್ತಿದೆ.

ಕಳೆದ ಐದು ವರ್ಷಗಳ ಅವಧಿಯಲ್ಲಿ ವಿಜಯ್ ಮಲ್ಯ, ನೀರವ್ ಮೋದಿ ಮೊದಲಾದ ಬ್ಯಾಂಕ್ ವಂಚಕರ 10.09 ಲಕ್ಷ ಕೋಟಿ ರೂಪಾಯಿಯಷ್ಟು ಬ್ಯಾಂಕ್ ಸಾಲವನ್ನು ಮನ್ನಾ ಮಾಡಿರುವ ಬಿಜೆಪಿ ಸರ್ಕಾರ ಅವರಿಂದ ಪಡೆದಿರುವ ಕಮಿಷನ್ ಹಣ ಎಷ್ಟು ಎನ್ನುವುದನ್ನು ದೇಶದ ಜನತೆಗೆ ತಿಳಿಸಬೇಕಾಗುತ್ತದೆ. ಕಾಂಗ್ರೆಸ್ ಪಕ್ಷದ ನಿಜವಾದ ಶಕ್ತಿ ಹಣದ ಬಲ ಅಲ್ಲ, ಜನ ಬಲ. ಬಿಜೆಪಿಯಲ್ಲಿ ಹಣ ಬಲ ಇದ್ದರೆ ನಮ್ಮಲ್ಲಿ ಜನಬಲ ಇದೆ. ತೆರಿಗೆ ವಂಚಕರು, ಬ್ಯಾಂಕ್ ಗಳನ್ನು ಮುಳುಗಿಸಿದವರು, ಗಣಿ ಲೂಟಿಕೋರರು, ಕಾಳಸಂತೆಕೋರರು, ಕಳ್ಳ-ಖದೀಮರೇ ಬಿಜೆಪಿಯ ಬಲ.

ಬಿಜೆಪಿ ಅಂದ್ರೆ ಭ್ರಷ್ಟರ ಹಣವನ್ನು ನುಂಗಿ ಅವರಿಗೆ ಪ್ರಾಮಾಣಿಕತೆಯ ಸರ್ಟಿಫಿಕೇಟ್ ನೀಡುವ ವಾಷಿಂಗ್ ಮೆಷಿನ್ ಆಗಿದೆ. ಭ್ರಷ್ಟರು ತಾವು ಮಾಡಿದ ಮಹಾಪಾಪಗಳ ಮೇಲಿನ ತನಿಖೆಯಿಂದ ತಪ್ಪಿಸಿಕೊಳ್ಳಬೇಕಾದರೆ, ಶಿಕ್ಷೆಯಿಂದ ಪಾರಾಗಬೇಕಾದರೆ ಬಿಜೆಪಿ ಸೇರಿಕೊಂಡರೆ ಸಾಕು, ಪಾಪಗಳೆಲ್ಲವೂ ತನ್ನಿಂತಾನೆ ಶುದ್ಧವಾಗುತ್ತದೆ. ಅಲ್ಲಿದ್ದುಕೊಂಡು ಎಷ್ಟು ಬೇಕಾದರೂ ಭ್ರಷ್ಟಾಚಾರ ಮಾಡಬಹುದು, ಜನರ ಹಣ ಲೂಟಿ ಮಾಡಬಹುದು. ಅವರ ಮೇಲೆ ಯಾವ ಕೇಸೂ ದಾಖಲಾಗುವುದಿಲ್ಲ. ಯಾವ ತನಿಖಾ ಸಂಸ್ಥೆಯೂ ಹುಡುಕೊಂಡು ಬರುವುದಿಲ್ಲ. ಬಿಜೆಪಿ ಅಧಿಕಾರಕ್ಕೆ ಬಂದಿರುವುದು ಮತ್ತು ಅಧಿಕಾರವನ್ನು ಉಳಿಸಿಕೊಂಡಿದ್ದೇ ಇಂತಹ ಕಳ್ಳ-ಖದೀಮರ ಲೂಟಿಯ ಹಣದಿಂದ. ಇದಕ್ಕೆ ಉತ್ತಮ ಉದಾಹರಣೆ ಕರ್ನಾಟಕದಲ್ಲಿ ನಡೆಸುತ್ತಾ ಬಂದ ಆಪರೇಷನ್ ಕಮಲ.

400 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಎದೆ ತಟ್ಟಿಕೊಳ್ಳುತ್ತಿರುವ ಪ್ರಧಾನಿ ನರೇಂದ್ರಮೋದಿಯವರು ವಿರೋಧಪಕ್ಷಗಳನ್ನು ಹಣಿಯಲು ಈ ರೀತಿಯ ಅಕ್ರಮ ಕೃತ್ಯಗಳಿಗೆ ಇಳಿದಿರುವುದನ್ನು ನೋಡಿದರೆ ಅವರಿಗೆ ಗೋಡೆ ಮೇಲಿನ ಬರಹ ಸ್ಪಷ್ಟವಾಗಿ ಕಾಣತೊಡಗಿದೆ ಎಂದರ್ಥ. ಅರಸನ ಮೈಮೇಲಿನ ಬಟ್ಟೆ ಒಂದೊಂದಾಗಿ ಕಳಚಿ ಬೀಳುತ್ತಿದೆ. ದೇಶದ ಜಾಗೃತ ಮತದಾರರ ಮುಂದೆ ಬಿಜೆಪಿ ಮತ್ತು ಅದರ ತಥಾಕಥಿತ ನಾಯಕರೆಲ್ಲರೂ ಬತ್ತಲೆಯಾಗುತ್ತಿದ್ದಾರೆ.

## ಇದ್ದಂತೆ

ಬಹಳಷ್ಟು ಜನ ದುಡ್ಡಿಗಾಗಿ ಬ್ಲ್ಯಾಕ್ ಮೇಲ್ ಮಾಡ್ತಿದ್ದರು. ಇಷ್ಟು ದುಡ್ಡು ಕೊಟ್ರೆ ನಿಮ್ಮ ಪಕ್ಷದಲ್ಲೇ ಇರ್ತೇನೆ ಅಂದಿದ್ರು. ಬೇಡಾ ನೀವು ಹೋಗಿ ಎಂದು ನಾನೇ ಅವರಿಗೆಲ್ಲಾ ಹೇಳಿದೆ. ಹಾರ ಶಾಲು ಹಾಕಿ ಕೈಮುಗಿದು ಹೇಳಿದ್ದೇನೆ ಬಿಜೆಪಿ ಬಿಟ್ಟು ಹೋಗಿ ಎಂದು. ಇಷ್ಟು ದಿನ ಬಹಳ ಜೀವ ಹಿಂಡಿದ್ದೀರಾ ಈಗ ಸಾಕು ಎಂದೂ ಹೇಳಿದ್ದೇನೆ ಎಂದು ರಾಜುಗೌಡ ಮಾರ್ಮಿಕವಾಗಿ ಹೇಳಿದ್ದಾರೆ.

ಯಾದಗಿರಿ ಜಿಲ್ಲೆಯ ಹುಣಸಗಿ ಪಟ್ಟಣದಲ್ಲಿ ಬಿಜೆಪಿ ಮಂಡಳ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಕೆಲವರು ಒಬಿಂ ಗೆ ಕಾಲು ಮುಗಿದೇ ಜೀವನ ಮಾಡ್ಬೇಕು ಅಂತಾರೆ. ಒಬಿಂ ಅಂದ್ರೆ ದೊಡ್ಡ ರಾಕ್ಷಸ ಅಲ್ಲ; ದೇವರಲ್ಲ. ಅವನೊಬ್ಬ ನಿಮ್ಮ ಮನೆಯ ಆಳು ಇದ್ದಂಗ್ ಅಂತ ನಾನು ಹೇಳ್ತೀನಿ. ಎಲೆಕ್ಷನ್ ಬಂದಾಗ ಕಾಲು ಮುಗಿದು, ಬಳಿಕ ನೀ ಯಾರೋ ಎನ್ನುವ ಜಾಯಮಾನ ನನ್ನದಲ್ಲ ಎಂದು ಮತದಾರರ ಗಮನ ಸೆಳೆದಿದ್ದಾರೆ.

2004 ರ ಚುನಾವಣೆ ಪ್ರಚಾರದ ವೇಳೆ ವಾಹನಗಳಿಗೆ ಡಿಸೇಲ್ ಹಾಕಿಸಲು ನನ್ನ ಬಳಿ ದುಡ್ಡು ಇರಲಿಲ್ಲ. ತಂದೆಯವರು ನೀಡಿದ ತಮ್ಮ ನಿವೃತ್ತಿ ಹಣವನ್ನ ಖರ್ಚು ಮಾಡಿ ಚುನಾವಣೆ ಮಾಡಿದ್ದೇನೆ. ಹಣ ಖರ್ಚು ಮಾಡದೆ ಆಗಲೇ ಗೆದ್ದಿದ್ದೇನೆ. ಆದ್ರೆ, 2023 ರಲ್ಲಿ ಅತೀ ಹೆಚ್ಚು ಹಣ ಖರ್ಚು ಮಾಡಿಯೂ ಸೋತಿದ್ದೇನೆ. ಆದರೆ ಜನ ದುಡ್ಡಿಗಾಗಿ ಓಟ್ ಹಾಕಲ್ಲ ಅಂತ ಈಗ ಗೊತ್ತಾಗಿದೆ ಎಂದು ರಾಜುಗೌಡ ತಮ್ಮ ಅನುಭವವನ್ನು ಹಂಚಿಕೊಂಡರು.

# ಅಭ್ಯರ್ಥಿಗಳ ಖರ್ಚು ವೆಚ್ಚಗಳ ಬಗ್ಗೆ ನಿಗಾ ವಹಿಸಿ: ಯೋಗೀಶ್ ಮಿಶ್ರ

**ಮೈಸೂರು:** ಮೈಸೂರು ಕೊಡಗು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಪ್ರಚಾರಕ್ಕಾಗಿ ವೆಚ್ಚ ಮಾಡುವ ಹಣದ ಬಗ್ಗೆ ಪ್ರತಿ ದಿನ ನಿಗಾ ವಹಿಸಿ ವರದಿ ಸಲ್ಲಿಸುವಂತೆ ಚಾಮುಂಡೇಶ್ವರಿ ನರಸಿಂಹರಾಜ, ಚಾಮರಾಜ ಹಾಗೂ ಕೃಷ್ಣರಾಜ ಕ್ಷೇತ್ರಗಳಿಗೆ ವೆಚ್ಚ ವೀಕ್ಷಕರಾಗಿರುವ ಯೋಗೀಶ್ ಮಿಶ್ರ ಅವರು ಅಧಿಕಾರಿಗಳಿಗೆ ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 4 ಕ್ಷೇತ್ರಗಳ ಸಹಾಯಕ ವೆಚ್ಚ ವೀಕ್ಷಕರ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಭೆ ನಡೆಸಿ ಮಾತನಾಡಿದರು.

ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ಎಫ್.ಎಸ್.ಟಿ, ಎಸ್.ಎಸ್.ಟಿ, ವಿ.ವಿ.ಟಿ ಹಾಗೂ ಇನ್ನಿತರೆ ತಂಡಗಳು ಜವಾಬ್ದಾರಿಯುತವಾಗಿ ಕೆಲಸ ನಡೆಸಿ ಅಭ್ಯರ್ಥಿಯು ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳನ್ನು ಪಾಲಿಸುತ್ತಿರುವ ಬಗ್ಗೆ ನಿಗಾ ವಹಿಸಬೇಕು. ಯಾವುದೇ ರೀತಿಯ ಗೊಂದಲಗಳಿದ್ದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಪರಿಹರಿಸಿಕೊಳ್ಳಬೇಕು ಎಂದರು.

ಹಣ ಬಲದ ಮೇಲೆ ಚುನಾವಣೆ ನಡೆಯಬಾರದು. ಮುಕ್ತ ಹಾಗೂ ನ್ಯಾಯಸಮ್ಮತವಾಗಿ ಚುನಾವಣೆ ನಡೆಯಬೇಕು. ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಿ ದಾಖಲೆ ರಹಿತ ಹಣ ಅಥವಾ ಇನ್ನಿತರೆ ವಸ್ತುಗಳು ಸಾಗಾಣಿಕೆಯಾಗದಂತೆ ನೋಡಿಕೊಳ್ಳಿ ಎಂದರು.



ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಅಭ್ಯರ್ಥಿಗಳ ಚುನಾವಣಾ ವೆಚ್ಚ ನಿರ್ವಹಿಸಲು ನೇಮಕವಾಗಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಬ್ಯಾಂಕ್ ವಹಿವಾಟಿನ ಮೇಲೆ ನಿಗಾ, ಬ್ಯಾಂಕ್ ಖಾತೆಗಳಲ್ಲಿ ನಡೆಯುವ ಸಂಶಯಾಸ್ಪದ ವಹಿವಾಟು, ಹತ್ತು ಲಕ್ಷಕ್ಕಿಂತ ಹೆಚ್ಚಿನ ಹಣ ವರ್ಗಾವಣೆ, ಒಂದು ಖಾತೆಯಿಂದ 10 ಕ್ಕಿಂತ ಹೆಚ್ಚಿನ ಖಾತೆಗೆ ಹಣ ವರ್ಗಾವಣೆ ಕುರಿತಂತೆ ಪ್ರತಿದಿನ ಪರಿಶೀಲನೆ ನಡೆಸಬೇಕು ಎಂದರು.

ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಅವರು ಮಾತನಾಡಿ ಜಿಲ್ಲೆಯಲ್ಲಿ ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ವಿವಿಧ ತಂಡಗಳು, ಅಧಿಕಾರಿಗಳು, ಸ್ಥಾಪನೆಯಾಗಿರುವ ಚೆಕ್‌ಪೋಸ್ಟ್‌ಗಳು ಹಾಗೂ ಇನ್ನಿತರೆ ಮಾಹಿತಿಗಳನ್ನು ವಿವರಿಸಿದರು.

ಸಭೆಯ ನಂತರ ಚುನಾವಣಾ ವೆಚ್ಚ ವೀಕ್ಷಕರು ಜಿಲ್ಲಾ ಚುನಾವಣಾ ವೆಚ್ಚ ಮೇಲ್ವಿಚಾರಕರ ಕೋಶಕ್ಕೆ, ಜಿಲ್ಲಾ ಮಾಧ್ಯಮ ದೃಢೀಕರಣ ಹಾಗೂ ಉಸ್ತುವಾರಿ ಸಮಿತಿ ಕೇಂದ್ರಕ್ಕೆ ಭೇಟಿ ನೀಡಿ ವ್ಯವಸ್ಥೆಗಳ ಬಗ್ಗೆ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯಿತ್ರಿ, ಡಿವೈಎಸ್ಪಿ ಮುತ್ತುರಾಜ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಈಶ್ವರೀಯ ವಿಶ್ವ ವಿದ್ಯಾಲಯದ ಭವನಕ್ಕಾಗಿ ಗುದ್ದಲಿ ಪೂಜೆ

ಬೆಂಗಳೂರಿನ ಆರ್ ಟಿ ನಗರದ ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ನೂತನ ಭವನಕ್ಕಾಗಿ ಕುಮಾರ ಪಾರ್ಕ ಉಪವಲಯದ ಮುಖ್ಯ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ಸರೋಜದೀದೀ ಗುದ್ದಲಿ ಪೂಜೆ ನಡೆಸಿದರು. ನಂತರ ಮಾತನಾಡಿದ ಅವರು ಈ ಬಡಾವಣೆಯಲ್ಲಿ ಸುಮಾರು 10 ವರ್ಷಗಳಿಂದ ರಾಜಯೋಗ ಶಿಕ್ಷಣವು ಉಚಿತವಾಗಿ ಬಾಡಿಗೆ ಕಟ್ಟದಲ್ಲಿ ನಡೆಯುತ್ತಿದ್ದು, ಇಲ್ಲಿನ ಅನೇಕ ರಾಜಯೋಗ ವಿದ್ಯಾರ್ಥಿಗಳ ಕೋರಿಕೆಯ ಮೇರೆಗೆ ಸುಸಜ್ಜಿತ ಭವನವನ್ನು ಅವರ ಸಹಯೋಗದೊಂದಿಗೆ ನಿರ್ಮಾಣ ಮಾಡಲಾಗುತ್ತಿದೆ. ಒಂದೇ ವರ್ಷದಲ್ಲಿ ಭವನವನ್ನು ನಿರ್ಮಾಣ ಮಾಡಿ ಸಾರ್ವಜನಿಕರ ಸೇವೆಗಾಗಿ ಲೋಕಾರ್ಪಣೆ ಮಾಡಲಾಗುವುದು ಎಂದು ತಿಳಿಸಿದರು. ಸಂಸ್ಥೆಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಭುವನೇಶ್ವರೀಜೀ ಮಾತನಾಡಿ ಈ ಒಂದು ಆಧ್ಯಾತ್ಮಿಕ ಕಾರ್ಯದಲ್ಲಿ ತಮಗೆ ತಾವೇ ಮುಂದೆ ಬಂದು ಸಹಯೋಗದೊಂದಿಗೆ ತನು ಮನ ಧನ ಅರ್ಪಿಸುತ್ತಿರುವುದು ಪ್ರಗತಿಯ ಬೆಳವಣಿಗೆ ಎಂದು ಧನ್ಯವಾದ ಅರ್ಪಿಸಿದರು. ಕಾರ್ಯಕ್ರಮದಲ್ಲಿ ಫ್ಯೂಚರ್ ಲೈಫ್ ಕನ್ ಸ್ಟ್ರಕ್ಷನ್ ನ ಇಂಜಿನಿಯರ್ ಗಳಾದ ವಿಜಯಕುಮಾರ್, ಗೋವಿಂದ ರಾಜು, ಸೋನಿ ಬೆಹನ್,ವಿಜಯಲಕ್ಷ್ಮಿ, ಸೂರ್ಯಕುಮಾರಿ, ಮನೋಹರ್, ಶಿವ ಪುತ್ರ, ಮೌಂಟ್ ಅಬು ಗ್ಲೋಬಲ್ ಹಾಸ್ಪಿಟಲ್ ನ ಬ್ರಹ್ಮಾಕುಮಾರ ಶಿವಾನಂದ, ಸುರೇಂದ್ರ, ಓಂ ಶಾಂತಿ ನ್ಯೂಸ್ ಸರ್ವಿಸ್ ನ ಬಿಕೆ ಆರಾಧ್ಯ ಹಾಜರಿದ್ದರು.



## ಮದ್ದೂರು, ಬಂಡೀಪುರ ಚೆಕ್ ಪೋಸ್ಟ್ ಬಳಿ ದಾಖಲೆ ಇಲ್ಲದ 4,98,500 ರೂ. ಹಣ ವಶ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣಾ ಸಂಬಂಧ ಕಾರ್ಯನಿರ್ವಹಿಸುತ್ತಿರುವ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮದ್ದೂರು ಹಾಗೂ ಬಂಡೀಪುರ ಚೆಕ್‌ಪೋಸ್ಟ್‌ಗಳಲ್ಲಿ ದಾಖಲೆಗಳಿಲ್ಲದೆ ಸಾಗಾಣಿಕೆ ಮಾಡುತ್ತಿದ್ದ ಒಟ್ಟು 4,98,500 ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಮದ್ದೂರು ಚೆಕ್‌ಪೋಸ್ಟ್‌ನಲ್ಲಿ ಬೆಳಿಗ್ಗೆ 8.45 ಗಂಟೆ ಸಮಯದಲ್ಲಿ ಕೇರಳದಿಂದ ಬರುತ್ತಿದ್ದ ಕೆಎಲ್-77 ಡಿ 1539 ಸಂಖ್ಯೆಯ ಅಶೋಕ ಲೈಲ್ಯಾಂಡ್ ಲಘು ಗೂಡ್ಸ್ ವಾಹನದಲ್ಲಿ ಮಹಮ್ಮದ್ ಸಾದಿಕ್ ಮತ್ತು ಲೀನಿಸ್ ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 94,0000 ರೂ. ಗಳನ್ನು ಮತ್ತು ಬೆಳಿಗ್ಗೆ 9.30 ಗಂಟೆ ಸಮಯದಲ್ಲಿ ಕೇರಳದಿಂದ ಬರುತ್ತಿದ್ದ ಕೆಎಲ್-33 ಕೆ 4656 ಸಂಖ್ಯೆಯ ಮಹೇಂದ್ರ, ಬೋಲ್ಯಾರೋ ವಾಹನದಲ್ಲಿ ಮೋಹನ್ ಪಿ.ಕೆ ಬಿನ್ ಕುಂನು ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 1,00,000 ಸಾವಿರ ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿ ಡಿ.ಎಂ. ಗುರುಮಲ್ಲೇಶ್ ತಂಡದವರು ಜಪ್ತಿ ಮಾಡಿದ್ದಾರೆ.

ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಬೆಳಿಗ್ಗೆ 8.30 ಗಂಟೆ ಸಮಯದಲ್ಲಿ ಕೇರಳದಿಂದ ಬರುತ್ತಿದ್ದ ಕೆಎಲ್-77 ಎ 0444 ಸಂಖ್ಯೆಯ ಅಶೋಕ ಲೈಲ್ಯಾಂಡ್ ಲಘು ಗೂಡ್ಸ್ ವಾಹನದಲ್ಲಿ ರಫೀಕ್ ಬಿನ್ ಕೋಯ ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 1,06,0000 ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿ ಎಂ.ಪಿ. ಶಿವಸ್ವಾಮಿ ತಂಡದವರು ಜಪ್ತಿ ಮಾಡಿದ್ದಾರೆ.

ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಬೆಳಿಗ್ಗೆ 10.30 ಗಂಟೆ ಸಮಯದಲ್ಲಿ ಕೇರಳದಿಂದ ಬರುತ್ತಿದ್ದ ಕೆಎಲ್-55 ಎಎ 9548 ಸಂಖ್ಯೆಯ ಟಾಟಾ ಗೂಡ್ಸ್ ವಾಹನದಲ್ಲಿ ದಿನೇಶ್ ಬಿನ್ ಚಂದ್ರನ್ ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 94,500 ಸಾವಿರ ರೂ. ಗಳನ್ನು ಮತ್ತು ಬೆಳಿಗ್ಗೆ 11 ಗಂಟೆ ಸಮಯದಲ್ಲಿ ಕೇರಳದಿಂದ ಬರುತ್ತಿದ್ದ ಕೆಎಲ್-36 ಕೆ 4073 ಸಂಖ್ಯೆಯ ಟಾಟಾ ಗೂಡ್ಸ್ ವಾಹನದಲ್ಲಿ ಕಿಶೋರ ಬಿನ್ ಶ್ರೀಧರನ್ ಎಂಬುವವರಿಂದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 1,04,0000 ರೂ. ಗಳನ್ನು ಎಸ್.ಎಫ್.ಟಿ ತಂಡದ ಅಧಿಕಾರಿ ಎಸ್. ಮಂಜುನಾಥ್ ತಂಡದವರು ಜಪ್ತಿ ಮಾಡಿದ್ದಾರೆ.

ಹಣ ಸಾಗಣೆ ಮಾಡುತ್ತಿದ್ದ ಬಗ್ಗೆ ವಿಚಾರಣೆ ಮಾಡಿದ ವೇಳೆ ಸ್ಪಷ್ಟ, ಸಮಂಜುಸ ಉತ್ತರ ದೊರೆಯದ ಹಿನ್ನಲೆಯಲ್ಲಿ ಹಣ ವಶಕ್ಕೆ ಪಡೆದು ಗುಂಡ್ಲುಪೇಟೆ ಉಪ ಖಜಾನೆಯಲ್ಲಿ ಇರಿಸಲಾಗಿದೆ. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪಾ ನಾಗ್ ತಿಳಿಸಿದ್ದಾರೆ.


ಸಂಗ್ರಹ ಚಿತ್ರ

### ಕಾದಂಬರಿಕಾರ ಎಸ್.ಎಲ್. ಭೈರಪ್ಪ ಭವಿಷ್ಯ

# ಬಿಜೆಪಿ ಹೆಚ್ಚಿನ ಸ್ಥಾನ ಗೆಲ್ಲುವುದಿಲ್ಲ

**ಮೈಸೂರು:** ಪ್ರಧಾನಿ ನರೇಂದ್ರ ಮೋದಿ ಮತ್ತೊಮ್ಮೆ ಪ್ರಧಾನಿಯಾಗುವುದು ಖಚಿತ. ಆದರೆ, ಕರ್ನಾಟಕದಲ್ಲಿ ಬಿಜೆಪಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವುದಿಲ್ಲ ಎಂದು ಕಾದಂಬರಿಕಾರ ಎಸ್.ಎಲ್. ಭೈರಪ್ಪ ಭವಿಷ್ಯ ನುಡಿದರು.

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಶುಕ್ರವಾರ ಭೈರಪ್ಪ ಅವರನ್ನು ಅವರ ನಿವಾಸದಲ್ಲಿ ಭೇಟಿಯಾದ ವೇಳೆ ಸುದ್ದಿಗಾರರ ಪ್ರಶ್ನೆಗಳಿಗೆ ಅವರು ಪ್ರತಿಕ್ರಿಯಿಸಿದರು.

ರಾಜ್ಯದಲ್ಲಿ ನನ್ನ ಪ್ರಕಾರ ಈ ಬಾರಿ ಮತ ವಿಭಜನೆಯಾಗುತ್ತದೆ. ಆದರೆ, ಬಿಜೆಪಿಯು ತೀರಾ ಸೋತು ಹೋಗುವುದಿಲ್ಲ. ಕೊನೆ ಪಕ್ಷ ಅರ್ಧಕ್ಕಿಂತಲೂ ಜಾಸ್ತಿ ಸ್ಥಾನಗಳನ್ನು ಪಡೆಯಲಿದೆ ಎಂದು ತಿಳಿದುಕೊಂಡಿದ್ದೇನೆ ಎಂದರು.

ಕರ್ನಾಟಕದಲ್ಲಿ ಬಿಜೆಪಿಗೆ ಏಕೆ ಈ ಸ್ಥಿತಿ ಬಂದಿದೆ ಎಂಬ ಪ್ರಶ್ನೆಗೆ, ರಾಜ್ಯದಲ್ಲಿ ಹಿಂದೆ ಇದ್ದ ಬಿಜೆಪಿ ಸರ್ಕಾರ ಪರಿಣಾಮಕಾರಿಯಾಗಿರಲಿಲ್ಲ. ಅಧಿಕಾರಿಗಳನ್ನು ನಿಯಂತ್ರಿಸುವುದು ಸಾಧ್ಯವಾಗಿರಲಿಲ್ಲ. ಅವರ ಕುರಿತು ಮೃದುವಾಗಿದ್ದರು. ಆದರೆ, ಈಗಿನ ಕಾಂಗ್ರೆಸ್‌ನವರು ಅಧಿಕಾರಿಗಳ ಮೇಲೆ ಬಹಳ ಜೋರಾಗಿದ್ದಾರೆ. ಆದರೆ, ಅವರು ಹೋಗುತ್ತಿರುವ ದಾರಿ ಸರಿ ಇಲ್ಲ. ಮಹಿಳೆಯರಿಗೆ ಉಚಿತ ಪ್ರಯಾಣದ ಅವಕಾಶ, ಎಲ್ಲವನ್ನೂ ಉಚಿತವಾಗಿ ಕೊಡುವುದು ಸರಿಯಲ್ಲ. ಅದು ಜನಪ್ರಿಯತೆ ತಂದು ಕೊಟ್ಟಿರಬಹುದೇ ಹೊರತು ಅರ್ಥ ವ್ಯವಸ್ಥೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ ಎಂದರು.

ಎಲ್ಲವನ್ನೂ ಉಚಿತವಾಗಿ ಕೊಡುತ್ತಿರುವುದರಿಂದ ರಾಜ್ಯ ಸರ್ಕಾರದಲ್ಲಿ ಹಣವೇ ಇಲ್ಲದಂತಾಗಿದೆ. ಹೀಗಾಗಿಯೇ ಕೇಂದ್ರದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಕೇಂದ್ರದಿಂದ ಕೊಟ್ಟಿದ್ದನ್ನೆಲ್ಲಾ ಖರ್ಚು ಮಾಡಿಕೊಂಡಿರುತ್ತಾರೆ. ಈಗ, ವಿತ್ತ ಸಚಿವರನ್ನು ಬೈಯ್ಯುತ್ತಿದ್ದಾರೆ. ಭಾಷೆಯನ್ನು ಗೌರವಯುತವಾಗಿ ಬಳಸುತ್ತಿಲ್ಲ. ಟೀಕಿಸುತ್ತಿರುವ ಸಂಸ್ಕೃತಿ ಸರಿ ಇಲ್ಲ ಎಂದರು.

ಉತ್ತರದ ರಾಜ್ಯಗಳಲ್ಲಿ ಬಿಜೆಪಿ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ ಎಂದು ಗ್ಯಾರಂಟಿಯಾಗಿ ಹೇಳಬಹುದು. ಆದರೆ, ಕರ್ನಾಟಕದಲ್ಲಿ ಬಿಜೆಪಿ ಹೆಚ್ಚು ಸ್ಥಾನಗಳನ್ನು ಗೆಲ್ಲುವುದು ಕಷ್ಟ. ರಾಜ್ಯದಲ್ಲಿ ಕಾಂಗ್ರೆಸ್ ಸ್ಟ್ರಾಂಗ್ ಆಗಿದೆ. ಉತ್ತರಪ್ರದೇಶದ ಮಾದರಿಯಲ್ಲಿ ನಮ್ಮ ರಾಜ್ಯದಲ್ಲೂ ಬಿಜೆಪಿ ಸರ್ಕಾರ ನಡೆದುಕೊಂಡಿದ್ದರೆ ಈ ಬಾರಿಯ ಚುನಾವಣೆಯಲ್ಲಿ ಹೆಚ್ಚಿನ ಸೀಟು ಗೆಲ್ಲಬಹುದಿತ್ತು. ಯೋಗಿ ಆದಿತ್ಯನಾಥ ಅವರಂತಹ ಮುಖ್ಯಮಂತ್ರಿಯನ್ನು ಕಂಡಿಲ್ಲ ಎಂದರು. ಕರ್ನಾಟಕದಲ್ಲಿ ಸ್ವಲ್ಪ ಆ ಕಡೆಗೂ, ಈ ಕಡೆಗೂ ಎನ್ನುವಂತಹ ಸ್ಥಿತಿ ಇದೆ? ಎಂದ ಅವರು, ಕರ್ನಾಟಕದಲ್ಲಿ ಮೋದಿ ಅಲೆ ಕಡಿಮೆ ಆಗಿದೆಯಾ ಎಂಬ ಪ್ರಶ್ನೆಗೆ ಗೊತ್ತಿಲ್ಲ ಎಂದು ಪ್ರತಿಕ್ರಿಯಿಸಿದರು.



## ಮೋದಿ ಕೈ ಬಲಪಡಿಸಲು ನನ್ನ ಬೆಂಬಲಿಸಿ: ಯದುವೀರ್

**ಮೈಸೂರು:** ಭಾರತದ ಅಭಿವೃದ್ಧಿಗಾಗಿ ನರೇಂದ್ರ ಮೋದಿ ಅವರ ಕೈ ಬಲಪಡಿಸಲು ನನ್ನನ್ನು ಬೆಂಬಲಿಸಬೇಕು ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕೋರಿದರು.



ಇಲ್ಲಿನ ಸರಸ್ವತಿಪುರಂನಲ್ಲಿರುವ ರಾಜ್ಯ ವಾಲ್ಮೀಕಿ ಗುರುಪೀಠದ ಧರ್ಮದರ್ಶಿ ಎಂ.ಅಪ್ಪಣ್ಣ ಅವರ ಕಚೇರಿಗೆ ಶುಕ್ರವಾರ ಬಿಜೆಪಿ ಮುಖಂಡರೊಂದಿಗೆ ಭೇಟಿ ನೀಡಿ ಬೆಂಬಲ ಕೋರಿದ ನಂತರ ಅವರು ಮಾತನಾಡಿದರು.

ನಾಯಕ ಸಮಾಜ ಮಹಾರಾಜರ ಕಾಲದಿಂದಲೂ ಬೆಂಬಲ ನೀಡುತ್ತಲೇ ಬಂದಿದೆ. ಬಾರಿ ನಾನು ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಚುನಾವಣಾ ಕಣದಲ್ಲಿದ್ದೇನೆ. ಎಲ್ಲರೂ ಸಹಕಾರ ಕೊಡಬೇಕು ಎಂದರು.

ಎಂ. ಅಪ್ಪಣ್ಣ ಮಾತನಾಡಿ, ಪಕ್ಷದ ಸೂಚನೆಯ ಮೇರೆಗೆ ನಮ್ಮ ಅಭ್ಯರ್ಥಿಗಳ ಪರವಾಗಿ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು. ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಎಂ.ರಾಜೇಂದ್ರ, ಚುನಾವಣಾ ಸಂಚಾಲಕ ಮೈ.ವಿ.ರವಿಶಂಕರ್, ಬಿಜೆಪಿ ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಮುಖಂಡರಾದ ಎಸ್. ಮಹದೇವಯ್ಯ, ಶಬರೀಶ್, ಮಹೇಶ್, ವಸಂತ್‌ಕುಮಾರ್, ಪ್ರಭಾಕರ್, ರಾಜು, ಸುರೇಶ್, ನಾಗೇಂದ್ರ ಹಾಗೂ ನಾಯಕ ಸಮಾಜದ ಮುಖಂಡರು ಹಾಜರಿದ್ದರು.

## ಪವಿತ್ರ ಶುಕ್ರವಾರದ ಆರಾಧನೆ

**ಕೋಲಾರ:** ಭಾರತೀಯ ಮೆಥೋಡಿಸ್ಟ್ ಕೇಂದ್ರ ಕೋಲಾರದಲ್ಲಿ ಪವಿತ್ರ ಶುಕ್ರವಾರದ ಆರಾಧನೆಗಳ ಕಾರ್ಯಕ್ರಮ ನಡೆಯಿತು. ಈ ಆರಾಧನೆಯಲ್ಲಿ ಪವಿತ್ರ ಬೈಬಲ್ಲಿನ ಬಹು ಮುಖ್ಯ ಸಾಲುಗಳು ಮತ್ತು ಪವಿತ್ರ ಅಂಶಗಳನ್ನು ಓದಿ ವಿವರಸಲಾಯಿತು. ಪವಿತ್ರ ಶುಕ್ರವಾರದ ವಿಶೇಷತೆಗಳನ್ನು ತಿಳಿಸಿದ ಪಿ.ಶಾಂತತಕುಮಾರ್ ಜಿಲ್ಲಾ ಮೇಲ್ವಿಚಾರಕರು ಕೋಲಾರ ಇವರು ವರುಷಕ್ಕೆ ಒಮ್ಮೆ ನಲವತ್ತು ದಿನಗಳ ಕಾಲ ಉಪವಾಸ ಆಚರಿಸಿ ಪವಿತ್ರ ಸಂದೇಶವನ್ನು ಸಾರುವ ಶುಭದಿನ ಈದಿನ ಬಹುತೇಕ ಭಕ್ತರ ಬೇಡಿಕೆಗಳು ಈಡೇರುವ ದಿನ ಸ್ವಾಮಿಯ ತ್ಯಾಗ ,ಬಲಿದಾನವನ್ನು ನೆನೆದು ಯಾರು ಶ್ರದ್ಧೆ ಮತ್ತುಭಕ್ತಿಯಿಂದಬೇಡಿಕೊಂಡಿರುತ್ತಾರೋ ಅವರ ಎಲ್ಲಾ ಬೇಡಿಕೆಗಳೂ ಈಡೇರುವದಿನ ಈ ಸಮಯದಲ್ಲಿ ಕ್ರೈಸ್ತ ಭಾಂದವರು ನಮ್ಮೊಡನೆ ಉಪವಾಸ ಸಮಯವನ್ನು ಕಳೆಯುತ್ತಾರೆ ಎರಡು ಸಾವಿರ ವರ್ಷಗಳಹಿಂದೆ ಯೇಸುಸ್ವಾಮಿ ನುಡಿದ ಏಳು ಸಪ್ತಾನುಡಿಗಳನ್ನುಆತನು ಬಂದಂತಹ ಉದ್ದೇಶವನ್ನು ದ್ಯಾನಿಸಿದ್ದೇವೆ ಏಸುವಿನ ಮೊದಲಮಾತು ತಂದೆಯ ಅವರನ್ನು ಕ್ಷಮಿಸು ಎನ್ನುವುದು ಪ್ರಭುವಿಗೆ ಎಷ್ಟೇ ತೊಂದರೆಗಳನ್ನು ನೀಡಿದರುಅವರನ್ನು ಕ್ಷಮಿಸು ಎಂಬುದಾಗಿ ನಾವು ಕ್ರೈಸ್ತಭಾಂದವರು ಲೋಕವನ್ನು ರಕ್ಷಣೆ ಮಾಡುವಾಗ ನಮ್ಮಲ್ಲೂ ಕ್ಷಮಿಸುವಗುಣಗಳಿರಬೇಕು ಎಂಬ ಸಂದೇಶವನ್ನು ನಮ್ಮ ಜನಾಂಗಕ್ಕೆ ಕೊಟ್ಟಿದ್ದೇವೆ . ನಮ್ಮ ಕೋಲಾರದ ಸಮಸ್ತ ಜನತೆಗೆ ಶುಭ ಕೋರುತ್ತೇವೆ ಮತ್ತು ವಿಶ್ವದೆಲ್ಲೆಡೆ ಶಾಂತಿ ಸಹಬಾಳ್ವೆ ಸೋದರತ್ವ ನೆಲೆಯೂರಲಿ ಎಂದು ಈ ಸಭೆಯಮೂಲಕ ಪ್ರಾರ್ಥಿಸಿದ್ದೇವೆ ಎಂದರು . ಈ ಕಾರ್ಯಕ್ರಮದಲ್ಲಿ ಪಾಸ್ಟರ್ ಜಯರಾಜ್ ಮತ್ತು ಕೋಲಾರದ ಕ್ರೈಸ್ತಭಾಂದವರು ಇದ್ದರು.



## ತಮಾಷೆ ತಂದ ಆಪತ್ತು; ಗುದದ್ವಾರಕ್ಕೆ ಏರ್ ಪ್ರೆಷರ್ ಗಾಳಿ ಹಾಕಿದ ಸ್ನೇಹಿತ, ಯುವಕ ಸಾವು

**ಬೆಂಗಳೂರು:** ತಮಾಷೆ ಮಾಡಲು ಹೋಗಿ ತನ್ನ ಸ್ನೇಹಿತನ ಪ್ರಾಣವನ್ನೇ ತೆಗೆದ ವ್ಯಕ್ತಿಯೊಬ್ಬ ಇದೀಗ ಪೊಲೀಸರ ಅತಿಥಿಯಾಗಿದ್ದಾನೆ. ಏರ್ ಪ್ರೆಷರ್ ಪೈಪ್‌ನಿಂದ ಗುದದ್ವಾರದೊಳಗೆ ಗಾಳಿ ಬಿಟ್ಟಿದ್ದರಿಂದ ಹೊಟ್ಟೆಯಲ್ಲಿಯ ಕರುಳು ತುಂಡರಿಸಿ ಆರ್. ಯೋಗೇಶ್ (24) ಎಂಬಾತ ಮೃತ ಪಟ್ಟಿರುವ ಘಟನೆ ಸಂಪಿಗೆಹಳ್ಳಿ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ದೇವನಹಳ್ಳಿ ತಾಲ್ಲೂಕಿನ ಯೋಗೇಶ್, ಬೆಂಗಳೂರಿನ ಥಣಿಸಂದ್ರದಲ್ಲಿ ತಂದೆ, ಅಕ್ಕನ ಜೊತೆ ವಾಸವಿದ್ದರು. ಈವೆಂಟ್ ಮ್ಯಾನೇಜ್ ಮೆಂಟ್ ಏಜೆನ್ಸಿಯೊಂದರಲ್ಲಿ ಕೆಲಸ ಮಾಡುತ್ತಿದ್ದರು. ಇವರ ಸಾವಿನ ಬಗ್ಗೆ ಐಪಿಸಿ 304 (ಕೊಲೆ ಉದ್ದೇಶವಿಲ್ಲದೆ ನಡೆದ ಹತ್ಯೆ) ಅಡಿ ಪ್ರಕರಣ ದಾಖಲಿಸಿಕೊಂಡು, ಆರೋಪಿ ಮುರುಳಿಯನ್ನು ಬಂಧಿಸಲಾಗಿದೆ ಎಂದು ಸಂಪಿಗೆಹಳ್ಳಿ ಪೊಲೀಸರು ಹೇಳಿದರು.

ಥಣಿಸಂದ್ರದಲ್ಲಿರುವ 'ಸಿಎನ್‌ಎಸ್ ಕಾರು ಸ್ಪಾ' ಸರ್ವೀಸ್ ಮಳಿಗೆಯಲ್ಲಿ ಆರೋಪಿ ಮುರುಳಿ ಕೆಲಸ ಮಾಡುತ್ತಿದ್ದ. ಯೋಗೇಶ್, ಆಗಾಗ ಮಳಿಗೆಗೆ ಹೋಗಿ ಸ್ನೇಹಿತ ಮುರುಳಿಯನ್ನು ಮಾತನಾಡಿಸಿಕೊಂಡು ಬರುತ್ತಿದ್ದರು ಎಂದು ಪೊಲೀಸರು ಹೇಳಿದರು.

## ಶ್ರೀನಿವಾಸ ಪ್ರಸಾದ್ ಬೆಂಬಲ ಕೋರಿದ ಮಹದೇವಪ್ಪ

**ಮೈಸೂರು:** ಬಿಜೆಪಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರನ್ನು ಕಾಂಗ್ರೆಸ್ ನಾಯಕರು ಇಲ್ಲಿನ ಜಯಲಕ್ಷ್ಮೀಪುರಂನ ನಿವಾಸದಲ್ಲಿ ಗುರುವಾರ ಭೇಟಿಯಾಗಿ ಬೆಂಬಲ ಕೋರಿದರು.

ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂ.ಲಕ್ಷ್ಮಣ ಮತ್ತು ಚಾಮರಾಜನಗರದಲ್ಲಿ ಪುತ್ರ ಸುನೀಲ್ ಬೋಸ್ ಅವರಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು. ಅವರಿಗೆ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಸಾಥ್ ನೀಡಿದರು. ಚುನಾವಣೆಯಲ್ಲಿ ಗೆಲ್ಲಲು ಕಾಂಗ್ರೆಸ್ ರಣತಂತ್ರ ರೂಪಿಸಿರುವ ಭಾಗವಾಗಿ ಈ ಭೇಟಿ ನಡೆದಿದೆ ಎನ್ನಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆ ಮೇರೆಗೆ ಸಚಿವದ್ವಯರು ಭೇಟಿ ಕೊಟ್ಟರು. ಗೆಲುವಿಗಾಗಿ, ಮುನಿಸು ಮರೆತು ಮನೆಗೆ ಬಂದಿದ್ದರು. ಅವರೊಂದಿಗೆ ಕೆಲಕಾಲ ಗೋಪ್ಯ ಮಾತುಕತೆ ನಡೆಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ, ವರುಣ ವಿಧಾನಸಭಾ ಕ್ಷೇತ್ರದ ಆಶ್ರಯ ಸಮಿತಿ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯ ಕೂಡ ಬಂದಿದ್ದರು.

ಗುಂಡ್ಲುಪೇಟೆ ಶಾಸಕ ಎಚ್.ಎಂ. ಗಣೇಶ್‌ಪ್ರಸಾದ್, ಮೈಸೂರು,ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ, ಕಾಂಗ್ರೆಸ್ ಗ್ರಾಮಾಂತರ ಜಿಲ್ಲಾ ಸಮಿತಿಯ ಅಧ್ಯಕ್ಷ ಬಿ.ಜೆ. ವಿಜಯ್‌ಕುಮಾರ್, ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್. ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ ಪಾಲ್ಗೊಂಡಿದ್ದರು.



ಬೆಳಿಗ್ಗೆ ಪ್ರಸಾದ್ ಅವರನ್ನು ಸುನೀಲ್ ಬೋಸ್ ಕೂಡ ಭೇಟಿಯಾಗಿ ಆಶೀರ್ವಾದ ಕೋರಿದ್ದರು.

ಪತ್ರಕರ್ತರೊಂದಿಗೆ ಮಾತನಾಡಿದ ಮಹದೇವಪ್ಪ, ಶ್ರೀನಿವಾಸ ಪ್ರಸಾದ್ ಅವರನ್ನು ದೇಶದ ಹಿರಿಯ ನಾಯಕರಲ್ಲಿ ಒಬ್ಬರಾಗಿದ್ದಾರೆ. 50 ವರ್ಷಗಳ ಸುದೀರ್ಘ ರಾಜಕಾರಣದ ಜೀವನಕ್ಕೆ ಈಚೆಗೆ ವಿದಾಯ ಹೇಳಿದ್ದಾರೆ. ಸಾರ್ವಜನಿಕ ರಾಜಕೀಯ ಜೀವನದಲ್ಲಿ ಏಳು ಬೀಳುಗಳನ್ನು ಕಂಡಿದ್ದಾರೆ. ಪಕ್ಷಾಂತರ ಮಾಡಿದರೂ ನಂಬಿದ ಸಿದ್ಧಾಂತದಲ್ಲಿ ರಾಜಿ ಮಾಡಿಕೊಂಡಿಲ್ಲ ಎಂದು ಶ್ಲಾಘಿಸಿದರು.

ಅವರು ರಾಜಕೀಯದಿಂದ ನಿವೃತ್ತಿ ಪಡೆದಿರುವುದು ಬೇಸರವಾಯಿತು. ಪ್ರಸ್ತುತ, ಸಾರ್ವಜನಿಕ ಸೇವೆಗಿಂತ ಬೇರೆ ಉದ್ದೇಶ ಇಟ್ಟುಕೊಂಡು ರಾಜಕಾರಣಕ್ಕೆ ಬರುತ್ತಿರುವವರೇ ಜಾಸ್ತಿಯಾಗಿದ್ದಾರೆ. ಗುಣಾತ್ಮಕ ನಾಯಕತ್ವ ಮರೆಯಾದರೆ ಪ್ರಜಾಪ್ರಭುತ್ವಕ್ಕೆ ನಷ್ಟವಾಗುತ್ತದೆ. ಅವರು ಇನ್ನಷ್ಟು ಕಾಲ ಸಕ್ರಿಯ ರಾಜಕಾರಣದಲ್ಲಿ ಇರಬೇಕಾಗಿತ್ತು ಎಂದರು.

ನಾವು ಹಿಂದೆ ಜೊತೆಯಲ್ಲೇ ಇದ್ದವರು. ಅವರು ನಮ್ಮನ್ನು ಸೋಲಿಸಿದ್ದರು; ನಾವು ಅವರನ್ನು ಸೋಲಿಸಿದ್ದೆವು. ಇದೆಲ್ಲವೂ ಪ್ರಜಾಪ್ರಭುತ್ವದ ಪ್ರಕ್ರಿಯೆಗಳು. ರಾಜಕೀಯದಲ್ಲಿ ಎದುರಾಳಿಗಳೇ ಹೊರತು ಶತ್ರುಗಳಲ್ಲ ಎಂದು ಹೇಳಿದರು.

ಅವರ ಆರೋಗ್ಯ ವಿಚಾರಿಸಲು ಮತ್ತು ಶುಭಾಶಯ ಕೋರಲು ಬಂದಿದ್ದೆವು. ರಾಜಕೀಯದ ಬಗ್ಗೆ ಚರ್ಚಿಸಿಲ್ಲ ಎಂದು ತಿಳಿಸಿದರು.

## ಜೆಡಿಎಸ್ ಜೊತೆಗಿನ ಮೈತ್ರಿಯೊಂದಿಗೆ ಬಿಜೆಪಿ ಬಲಿಷ್ಠವಾಗಿದೆ

**ಚಿಕ್ಕಮಗಳೂರು:** ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಉಡುಪಿ-ಚಿಕ್ಕಮಗಳೂರು ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸಲು ಒಗ್ಗಟ್ಟಿನಿಂದ ಕೆಲಸ ಮಾಡಲಾಗುತ್ತದೆ ಎಂದು ಮೈತ್ರಿ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಶುಕ್ರವಾರ ಹೇಳಿದೆ. ಎಂಎಲ್‌ಸಿ ಎಂ.ಕೆ.ಪ್ರಾಣೇಶ್ ಮಾತನಾಡಿ, ಎರಡು ಪಕ್ಷಗಳ ನಡುವಿನ ಅಸಮಾಧಾನಗಳ ಬಗೆಹರಿಸಲು ಹಲವು ಸುತ್ತಿನ ಮಾತುಕತೆ ಹಾಗೂ ಸಮನ್ವಯ ಸಭೆಗಳನ್ನು ನಡೆಸಲಾಗುತ್ತಿದ್ದು, ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಬೋಜೇಗೌಡ ಅವರು ಮಾತನಾಡಿ, ಬಿಜೆಪಿ ಬೆಂಬಲಿತ ಅಭ್ಯರ್ಥಿ ಕೋಟಾ ಶ್ರೀನಿವಾಸ್ ಪೂಜಾರಿ ಪರ ಜೆಡಿಎಸ್ ಕಾರ್ಯಕರ್ತರು, ಬಿಜೆಪಿ ಮುಖಂಡರೊಂದಿಗೆ ಒಗ್ಗಟ್ಟಿನಿಂದ ಭಾಗಿಯಾಗಿ ಗೆಲುವಿಗೆ ಶ್ರಮಿಸಬೇಕಿದೆ ಎಂದು ಕರೆ ನೀಡಿದ್ದಾರೆ. ಚಿಕ್ಕಮಗಳೂರಿನಲ್ಲಿ ಶುಕ್ರವಾರ ನಡೆದ ಸಮನ್ವಯ ಸಮಿತಿ ಸಭೆಯಲ್ಲಿ ಮಾಜಿ ಗೃಹ ಸಚಿವ ಆರಗ ಜ್ಞಾನೇಂದ್ರ ಅವರೊಂದಿಗೆ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಇರುವುದು. ಪ್ರಸ್ತುತ ಎದುರಾಗಿದ್ದ ಗೊಂದಲಗಳನ್ನು ನಿವಾರಿಸಲಾಗಿದ್ದು, ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಪೂಜಾರಿ ಅವರನ್ನು ಬೆಂಬಲಿಸುವಂತೆ ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು. ತಾ.ಪಂ ಮತ್ತು ಜಿಪಂ ಚುನಾವಣೆಯಲ್ಲೂ ಈ ಮೈತ್ರಿ ಮುಂದುವರಿಯುವ ಸಾಧ್ಯತೆ ಇರುವುದರಿಂದ ಈ ಮೈತ್ರಿಯ ಯಶಸ್ಸನ್ನು ಖಚಿತಪಡಿಸಿಕೊಳ್ಳಬೇಕಾದ ಅಗತ್ಯವನ್ನು ಅವರು ಒತ್ತಿ ಹೇಳಿದರು.

# ಯುವ ಮತದಾರರು ತಪ್ಪದೇ ಮತ ಚಲಾಯಿಸಿ

**ಮೈಸೂರು:** ಯುವ ಮತದಾರರ ಮುಕ್ತ ಹಾಗೂ ನ್ಯಾಯೋಚಿತವಾದ ಚುನಾವಣೆಯನ್ನು ಬೆಂಬಲಿಸಬೇಕು. ಏಪ್ರಿಲ್ 26 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತ ಚಲಾಯಿಸಬೇಕು ಎಂದು ಸಹಾಯಕ ಚುನಾವಣಾಧಿಕಾರಿಗಳಾದ ಕುಮುದಾ ಶರತ್ ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಹೆಚ್.ಡಿ.ಕೋಟೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ - 2024 ರ ಹಿನ್ನೆಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಯುವ ಮತದಾರರ ಮತದಾನ ಜಾಗೃತಿ ಹಾಗೂ ಹಸ್ತಾಕ್ಷರ ಸಂಗ್ರಹ ಅಭಿಯಾನವನ್ನು ಉದ್ಘಾಟಿಸಿದರು.

ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಧರಣೇಶ್ ಎಸ್.ಪಿ ಅವರು ಮಾತನಾಡಿ, ಯಾವುದೇ ಆಸೆ ಆಮಿಷಗಳಿಗೆ ಯುವ ಮತದಾರರ ಒಳಗಾಗದೆ ಪ್ರಜಾ ಪ್ರಜಾಪ್ರಭುತ್ವವನ್ನು ಬಲಪಡಿಸಲು ತಪ್ಪದೇ ಮತದಾನ ಮಾಡಬೇಕು. ಜೊತೆಗೆ ತಮ್ಮ ಕುಟುಂಬದವರು, ನೆರೆಹೊರೆಯವರು, ಸಂಬಂಧಿಕರು ಹಾಗೂ ಮತದಾನದ ಬಗ್ಗೆ ಅಸಡ್ಡೆ ತೋರುವವರನ್ನು ಪ್ರೇರೇಪಿಸಿ ಮತಗಟ್ಟೆಗೆ ಕರೆದುಕೊಂಡು ಹೋಗಿ ಮತದಾನ ಮಾಡಿಸಬೇಕು. ಮತದಾನ ಮಾಡುವ ಪ್ರತಿಯೊಬ್ಬ ಯುವಕರಿಗೆ ಮೊದಲು ಮತದಾನ ಮಾಡುವ ದಿನದ ಬಗ್ಗೆ ಅರಿವು ಇರಬೇಕು. ಜೊತೆಗೆ ಗಿಲೂಂ (ವೋಟರ್ ಹೆಲ್ಪ್‌ಲೈನ್ ಆಪ್) ನಲ್ಲಿ ನಿಮ್ಮ ಮತಗಟ್ಟೆಗಳ ಬಗ್ಗೆ ಮಾಹಿತಿ ತಿಳಿದುಕೊಳ್ಳಬಹುದು ಎಂದು ತಿಳಿಸಿದರು. ವಿದ್ಯಾರ್ಥಿಗಳೇ ಭಾರತದ ಮುಂದಿನ ಭವಿಷ್ಯದ ಪ್ರಜೆಗಳು ವಿದ್ಯಾರ್ಥಿಗಳ ನಡೆ ಮತಗಟ್ಟೆಯ ಕಡೆ? ಇರಬೇಕು. ಆದ್ದರಿಂದ ಎಲ್ಲಾರೂ ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಾಂವಿಧಾನಿಕ ಹಕ್ಕನ್ನು ನಿರ್ಭೀತಿಯಿಂದ ಚಲಾಯಿಸಬೇಕು ಎಂದು ಕಿವಿಮಾತು ಹೇಳಿದರು.




ಮೊದಲ ಬಾರಿಗೆ ಮತದಾನ ಮಾಡುವ ವಿದ್ಯಾರ್ಥಿನಿ ಶಿಲ್ಪಾ ಅವರು, ಮೊದಲ ಬಾರಿಗೆ ಮತದಾನ ಮಾಡಲು ತುಂಬಾ ಉತ್ಸುಕಳಾಗಿದ್ದೇನೆ ಹಾಗೂ ಸಂತೋಷವಾಗುತ್ತಿದೆ. ಹಿಂದೆ ಹೆಣ್ಣು ಮಕ್ಕಳಿಗೆ ಮತದಾನ ಮಾಡುವ ಹಕ್ಕು ಇರಲಿಲ್ಲ, ಕೇವಲ ಶ್ರೀಮಂತರು, ಪದವಿಧರರಿಗೆ ಮಾತ್ರ ಇತ್ತು, ಡಾ.ಬಿ.ಆರ್. ಅಂಬೇಡ್ಕರ್ ಹೆಣ್ಣು ಮಕ್ಕಳಿಗೂ ಮತದಾನದ ಹಕ್ಕನ್ನು ಕೊಡಿಸಿದ್ದಾರೆ ಇದರಿಂದ ನಮ್ಮ ನಾಯಕರನ್ನು ನಾವೇ ಆಯ್ಕೆ ಮಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ಅಭಿಪ್ರಾಯವನ್ನು ಹಂಚಿಕೊಂಡರು.

ಇದೇ ವೇಳೆ ಯುವ ಮತದಾರರಿಂದ ಹಸ್ತಾಕ್ಷರ ಸಂಗ್ರಹ ಹಾಗೂ ಮಾನವ ಸರಪಳಿ ನಿರ್ಮಿಸಿ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಲಾಯಿತು.

ಈ ವೇಳೆ ತಾಲ್ಲೂಕು ಯೋಜನಾಧಿಕಾರಿಗಳಾದ ಕೆ.ರಂಗಸ್ವಾಮಿ, ಕಾಲೇಜಿನ ಪ್ರಾಂಶುಪಾಲರಾದ ಅರುಣ್, ಕಾಲೇಜು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

## ಸಪ್ತ ಮಾತೃಕೆ ಪೂಜಾ ಕಾರ್ಯಕ್ರಮ

**ಚಾಮರಾಜನಗರ:** ಶ್ರೀ ಶೃಂಗೇರಿ ಶಾರದಾ ಪೀಠದ ಜಗದ್ಗುರು ಶ್ರೀ ಶ್ರೀ ವಿಧು ಶೇಖರ ಭಾರತಿ ಮಹಾ ಸ್ವಾಮಿಗಳವರು ಚಾಮರಾಜನಗರ ಜಿಲ್ಲೆಗೆ ಪ್ರವೇಶಿಸಿದಾಗ ಭವ್ಯ ಸ್ವಾಗತವನ್ನು ಕೋರಿ ಆಶೀರ್ವಾದ ಪಡೆಯಲಾಯಿತು. ಚಾಮರಾಜನಗರ ತಾಲೂಕಿನ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ. ಕಮರವಾಡಿ ಶ್ರೀ ಸಪ್ತಮಾತ್ರಕ ದೇವಸ್ಥಾನಕ್ಕೇ ಆಗಮಿಸಿ ಸಪ್ತ ಮಾತೃಕೆ ಪೂಜಾ ಕಾರ್ಯಕ್ರಮ ಹಾಗೂ ಭಕ್ತರಿಗೆ ಆಶೀರ್ವಚನ ನೀಡಿದರು. ಚಾಮರಾಜನಗರ ಜಿಲ್ಲಾ ಕೇಂದ್ರಕ್ಕೆ ಆಗಮಿಸಿದಾಗ ಗಡಿ ಭಾಗದಲ್ಲಿ ನೂರಾರು .ವಿಪ್ರ ಭಾಂದವರು ಜಿಲ್ಲಾ ಬ್ರಾಹ್ಮಣ ಸಂಘದ ನೇತೃತ್ವದಲ್ಲಿ ವೇದ ಮಂತ್ರಘೋಷ, ನಾದಸ್ವರ ದೊಂದಿಗೆ ಪೂರ್ಣ ಕುಂಭ ಸ್ವಾಗತ ದೊಂದಿಗೆ ಭಕ್ತಿ ಪೂರ್ವಕ ಪ್ರಾಣಾಮಗಳನ್ನು ಸಲ್ಲಿಸಲಾಯಿತು. ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಜಿಎಂ ಹೆಗಡೆ ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ್ ಎನ್ ಋಗ್ವೇದಿ, ಖಜಾಂಚಿ ಬಾಲಸುಬ್ರಹ್ಮಣ್ಯಂ.ಕೊಳ್ಳೇಗಾಲ ಬ್ರಾಹ್ಮಣ ಸಂಘದ ಅಧ್ಯಕ್ಷ ಶೇಖರ್ ಶಾಸ್ತ್ರಿ, ಯಳಂದೂರು ಬ್ರಾಹ್ಮಣ ಸಂಘದ ಅಧ್ಯಕ್ಷ ಮುರಳಿ,.ಬ್ರಾಹ್ಮಿ ಮಹಿಳಾ ಸಂಘದ ಅಧ್ಯಕ್ಷರು, ಶ್ರೀ ರಾಮಮಂದಿರ,ಸೇರಿದಂತೆ ಸಂಘಟನೆಗಳ ಸದಸ್ಯರು, ನಗರಸಭಾ ಸದಸ್ಯರು ಉಪಸ್ಥಿತರಿದ್ದರು. ಹೆಬ್ಬಸೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶಾರದಾಕೃಪ ಉದ್ಘಾಟನೆ.ಯನ್ನು ಶ್ರೀ ಶ್ರೀ ವಿಧು ಶೇಖರ ಭಾರತಿ ಸ್ವಾಮಿಗಳು ನೆರವೇರಿಸಿದರು. ಜಗದ್ಗುರುಗಳನ್ನು ಶೃಂಗೇರಿ ಶಂಕರ ಮಠದ ಶಾಖಾಮಠದ ಧರ್ಮಾಧಿಕಾರಿ ಶ್ರೀಧರ್ ಪ್ರಸಾದ್, ತಾ ಬ್ರಾಹ್ಮಣದ ಸಂಘದ ಅಧ್ಯಕ್ಷ ನಾಗರಾಜು ಸೇರಿದಂತೆ ನೂರಾರು ಭಕ್ತರು ಬರಮಾಡಿಕೊಂಡರು. ಅಗ್ರಹಾರದ ಸುತ್ತಲೂ ಭವ್ಯ ವೇದಿಕೆ, ಚಪ್ಪರಹಾಸು ,ವೇದಘೋಷ, ಸ್ತೋತ್ರ ಪಠಣಗಳ ಮೂಲಕ ಪ್ರತಿ ಮನೆ ಮನೆಯಲ್ಲೂ ಆರತಿ ಎತ್ತುವ ಮೂಲಕ ಭಕ್ತಿ ಪೂರ್ವಕವಾಗಿ ಪರಮಾಡಿಕೊಳ್ಳಲಾಯಿತು. ನಂತರ ಶ್ರೀ ಶ್ರೀಗಳವರು ಚಂದ್ರಮೌಳೇಶ್ವರ ಪೂಜೆಯನ್ನು ನೆರವೇರಿಸಿದರು. ಸಂಜೆ 5:30ಕ್ಕೆ ಶ್ರೀ ಶ್ರೀಗಳವರ ಅನುಗ್ರಹ ಭಾಷಣ ನಡೆಯಲಿದೆ.



# ಪುಟ್ಬಾತ್ ಹೋಟೆಲ್‌ಗಳ ಮೇಲೆ ಪುರಸಭಾ ಮುಖ್ಯಾಧಿಕಾರಿ ದಾಳಿ

**ವಿಜಯಪುರ:** ಪಟ್ಟಣದ ಪುಟ್ಬಾತ್ ಹೋಟೆಲುಗಳಲ್ಲಿ ಪ್ಲಾಸ್ಟಿಕ್ ಕವರ್ ಬಳಸುತ್ತಿದ್ದ ಅಂಗಡಿಗಳ ಮೇಲೆ ರಾತ್ರಿ ದಾಳಿ ನಡೆಸಿದ ಪುರಸಭಾ ಮುಖ್ಯಾಧಿಕಾರಿ ಸಂತೋಷ್ ಕುಮಾರ್ ಆ ಅಂಗಡಿಗಳಲ್ಲಿದ್ದ ಪ್ಲಾಸ್ಟಿಕ್ ವಶಪಡಿಸಿಕೊಂಡು ಮತ್ತೆ ಪ್ಲಾಸ್ಟಿಕ್ ಕವರನ್ನು ಬಳಸಬಾರದು ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಮಾತನಾಡಿದ ಮುಖ್ಯಾಧಿಕಾರಿ ಪಟ್ಟಣದಲ್ಲಿ ಈಗಾಗಲೇ ಪುರಸಭೆಯಿಂದ ದಿನಸಿ ಅಂಗಡಿಗಳು, ತರಕಾರಿ ಅಂಗಡಿಗಳು, ಹೋಟಲಗಳ ಮೇಲೆ ಪ್ಲಾಸ್ಟಿಕ್ ಕವರ್ ಗಳನ್ನು ಬಳಸದಂತೆ ಮನವರಿಕೆ ಮಾಡಿದ್ದೇವೆ. ಇಂದು ಫುಟ್ಬಾತ್ ಹೋಟೆಲ್ ಹಾಗೂ ಅಂಗಡಿಗಳು, ಕಲ್ಯಾಣ ಮಂಟಪಗಳ ಮೇಲೆ ದಾಳಿ ನಡೆಸಿ ಮತ್ತೆ ಪ್ಲಾಸ್ಟಿಕ್ ಕವರ್ ಗಳನ್ನು ಬಳಸದಂತೆ ತಿಳಿಸಿದ್ದೇವೆ ಮತ್ತೆ ಯಾರೇ ಪ್ಲಾಸ್ಟಿಕ್ ಮರುಬಳಕೆ ಮಾಡಿದರೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪುರಸಭೆಯ ಅಧಿಕಾರಿಗಳು ವಾರದ ಸಂತೆಯಲ್ಲಿ ತರಕಾರಿ ಮಾರಟದ ಅಂಗಡಿಗಳಿಗೆ ವಾರ್ನಿಂಗ್ ನೀಡಿದ್ದು, ದಂಡವಸುಲಿ ಮಾಡಿದ್ದಾರೆ. ಪಟ್ಟಣದ ಜನತೆ ಪ್ಲಾಸ್ಟಿಕ್ ಕವರ್ ಬಳಸದೇ ಪರಿಸರವನ್ನು ಉಳಿಸಿ ಬೆಳೆಸುವ ಕೆಲಸ ಪ್ರತಿಯೊಬ್ಬರು ಮಾಡಬೇಕು ಎಂದರು.



# ಮಾತೃ ಭಾಷಾ ಆಪ್ ಬಳಸಿ, ನಗದು ಬಹುಮಾನ, ಪ್ರಶಸ್ತಿ ಗೆಲ್ಲಿ

**ವಿಜಯಪುರ:** ನೇಟಿವ್ ಡ್ರೀಮ್ಸ್ ಟೆಕ್ನಾಲಜೀಸ್ ಸಂಸ್ಥೆಯಿಂದ ಮಾತೃಭಾಷಾ ಆಪ್ ನಲ್ಲಿ 5 ನೇ ತರಗತಿಯಿಂದ – 10 ನೇ ತರಗತಿ ಮಕ್ಕಳಿಗೆ ಕನೆಕ್ಟ್ ಕನ್ನಡ – ಅನ್ಲಾಕ್ ಕರ್ನಾಟಕ ಎಂಬ ಕಾರ್ಯಕ್ರಮವನ್ನು 2024, ಏಪ್ರಿಲ್ ಒಂದರಿಂದ ಸಾದರ ಪಡಿಸುತ್ತಿದ್ದೇವೆ. ಈ ಕಾರ್ಯಕ್ರಮದ ಮೂಲ ಉದ್ದೇಶ ಮಕ್ಕಳಿಗೆ ನಮ್ಮ ನಾಡು, ನುಡಿ, ಇತಿಹಾಸದ ಬಗ್ಗೆ ಅರಿವು ಮತ್ತು ಒಲವು ಮೂಡಿಸುವುದಾಗಿದ್ದು ಅದಕ್ಕಾಗಿ ಅವಶ್ಯವಿರುವ ಪರಿಕರ, ಪರಿಸರ ಮತ್ತು ಪ್ರೋತ್ಸಾಹ ನೀಡುವುದಾಗಿದೆ ಎಂದು ನೇಟಿವ್ ಡ್ರೀಮ್ಸ್ ಟೆಕ್ನಾಲಜೀಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ(ವಿಜಯಪುರ ಮೂಲದ) ಆರ್. ಚಂದನ್ ಪ್ರಕಟಣೆಯಲ್ಲಿ ತಿಳಿಸಿರುವರು.



ಇದು ಏಪ್ರಿಲ್ 2024 ನಿಂದ–ನವೆಂಬರ್ 2024 ವರೆಗೂ ನಡೆಯುವ ಉಚಿತ ಕಾರ್ಯಕ್ರಮವಾಗಿದ್ದು, ಪ್ರತಿ ತಿಂಗಳು ಗೆಲ್ಲುವ ಮೊದಲ ಮೂರು ಮಕ್ಕಳು ರೂ 5000, ರೂ 3000, ರೂ 2000 ಬಹುಮಾನವನ್ನು ಪಡೆಯುತ್ತಾರೆ ಮತ್ತು ನವೆಂಬರ್ ನ ರಾಜ್ಯ ಮಟ್ಟದ ಪ್ರಿ – ಫೈನಲ್ ಗೆ ಅರ್ಹರಾಗುತ್ತಾರೆ. ಕನೆಕ್ಟ್ ಕನ್ನಡ – ಅನ್ಲಾಕ್ ಕರ್ನಾಟಕ ಫೈನಲ್ ನವೆಂಬರ್ ನಲ್ಲಿ ನಡೆಯಲಿದ್ದು, ಅದರಲ್ಲಿ ಗೆಲ್ಲುವ ಮಗುವಿಗೆ ರೂ 51,000 ಮತ್ತು ವಿದ್ಯಾ ಶ್ರೇಷ್ಠ ಪ್ರಶಸ್ತಿ, ಶಾಲೆಗೆ ರೂ 3,10,000 ಬಹುಮಾನವನ್ನು ಮತ್ತು ವಿದ್ಯಾ ವಿಭೂಷಣ ಪ್ರಶಸ್ತಿ ನಿಗದಿ ಪಡಿಸಲಾಗಿದೆ. ಈ ಕಾರ್ಯಕ್ರಮಕ್ಕೆ ನೋಂದಾಯಿಸಲು ಇಚ್ಛಿಸುವ ಶಾಲೆಗಳು ನಮ್ಮ ವಾಟ್ಸಾಪ್ ನಂಬರ್ 6366 975 151 ಗೆ ಸಂದೇಶ ಕಳುಹಿಸಿ ಅರ್ಜಿ ಪಡೆಯಬಹುದು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವ ಮಕ್ಕಳು ಆಂಡ್ರಾಯ್ಡ್ ಪ್ಲೇ ಸ್ಟೋರ್ ನಲ್ಲಿ ನಮ್ಮ ಮಾತೃಭಾಷಾ ಆಪ್ ಡೌನೋಡ್ ಮಾಡಿ ನೋಂದಾಯಿಸಿಕೊಳ್ಳಬಹುದು.

# ಏಪ್ರಿಲ್ 12ರಂದು ಶ್ರೀರಾಮುಲು ನಾಮಪತ್ರ ಸಲ್ಲಿಕೆ

**ಬಳ್ಳಾರಿ:** ಲೋಕಸಭೆ ಚುನಾವಣೆಗೆ ದಿನಗಣನೆ ಶುರುವಾಗಿದ್ದು, ಏಪ್ರಿಲ್ 12 ರಂದು ನಾಮಪತ್ರ ಸಲ್ಲಿಸುವುದಾಗಿ ಬಳ್ಳಾರಿ ಬಿಜೆಪಿ ಅಭ್ಯರ್ಥಿ ಬಿ.ಶ್ರೀರಾಮುಲು ಅವರು ಗುರುವಾರ ಹೇಳಿದ್ದಾರೆ. ಕ್ಷೇತ್ರದಲ್ಲಿ ಮೇ 7 ರಂದು ಮತದಾನ ನಡೆಯಲಿದೆ. ಕಾಂಗ್ರೆಸ್ ಇನ್ನೂ ತನ್ನ ಅಭ್ಯರ್ಥಿಯನ್ನು ಘೋಷಿಸದಿದ್ದರೂ, ಸಂಡೂರು ಶಾಸಕ ಇ ತುಕಾರಾಂ ಪಕ್ಷದ ಕಾರ್ಯಕರ್ತರೊಂದಿಗೆ ನಿಯಮಿತವಾಗಿ ಸಭೆ ನಡೆಸುತ್ತಿದ್ದು, ಪಕ್ಷದ ಟಿಕೆಟ್ ಸಿಗುವ ಸಾಧ್ಯತೆ ಎಂದು ಮೂಲಗಳು ತಿಳಿಸಿವೆ. ಬಲ್ಲ ಮೂಲಗಳ ಪ್ರಕಾರ, ತುಕಾರಾಂ ಅವರು ತಮ್ಮ ಪುತ್ರಿಗೆ ಟಿಕೆಟ್ ಕೊಡಿಸಲು ಯತ್ನ ನಡೆಸಿದ್ದರು. ಆದರೆ, ಸಚಿವ ಸಂತೋಷ್ ಲಾಡ್ ಅವರು ತುಕಾರಾಂ ಅವರನ್ನೇ ಕಣಕ್ಕಿಳಿಯುವಂತೆ ಮನವೊಲಿಸಿದ್ದಾರೆ ಎಂದು ತಿಳಿಸಿವೆ. ಈ ನಡುವೆ ಹೇಳಿಕೆ ನೀಡಿರುವ ಶ್ರೀರಾಮುಲು ಅವರು, ಏಪ್ರಿಲ್ 12 ರಂದು ನಾಮಪತ್ರ ಸಲ್ಲಿಸುತ್ತೇನೆ. ಇದಕ್ಕೂ ಪೂರ್ವದಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಪ್ರತೀ ವಿಧಾನಸಭೆ ಕ್ಷೇತ್ರಕ್ಕೆ ಭೇಟಿ ನೀಡಿ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರ ಸಭೆ ನಡೆಸುವೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಗೆಲ್ಲುವ ವಿಶ್ವಾಸವಿಲ್ಲ. ಹೀಗಾಗಿಯೇ ಅಭ್ಯರ್ಥಿಯನ್ನು ಘೋಷಣೆ ಮಾಡುವಲ್ಲಿ ವಿಳಂಬ ಮಾಡುತ್ತಿದೆ. ಈ ಬಾರಿ ಗೆಲ್ಲುವ ವಿಶ್ವಾಸವಿದ. ಪ್ರಧಾನಿ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯಾಗಿ ನೋಡಬೇಕೆಂದು ಬಯಸಿರುವ ಕ್ಷೇತ್ರದ ಜನತೆ ನನ್ನನ್ನು ಸಂಸದನಾಗಿ ಮಾಡಲು ನಿರ್ಧರಿಸಿದ್ದೇನೆ. ಈ ಹಿಂದೆ ಸಚಿವನಾಗಿ ನಾನು ಮಾಡಿರುವ ಕೆಲಸಗಳೇ ನನ್ನ ಗೆಲುವಿಗೆ ನೆರವಾಗಲಿದೆ ಎಂದು ತಿಳಿಸಿದರು.

# ಕಾವೇರಿ ಜಲಾಶಯದ ಕೀಲಿ ಪ್ರಾಧಿಕಾರದ ಕೈಯಲ್ಲಿದೆ: ರಮೇಶ್‌ಗೌಡ

**ಚನ್ನಪಟ್ಟಣ:** ಕಾವೇರಿ ಜಲಾಶಯದ ನೀರು ಹಂಚಿಕೆ ವಿಚಾರದಲ್ಲಿ ನಮ್ಮ ಜನಪ್ರತಿನಿಧಿಗಳ ನಿರ್ಲಕ್ಷ್ಯ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಜಲಾಶಯದ ಕೀಲಿ ಕೈ ಪ್ರಾಧಿಕಾರದ ಕೈಗೆ ಸೇರಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಯಾವುದೇ ಕ್ರಮಕ್ಕೆ ಮುಂದಾಗುತ್ತಿಲ್ಲ ಎಂದು ಕಕಸಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್ ಗೌಡರು ಅಭಿಪ್ರಾಯಿಸಿದರು.




ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಶುಕ್ರವಾರ ನಡೆದ 177 ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿ, ರಾಜ ಮಹಾರಾಜರ ಕಾಲದಿಂದಲೂ ತಮಿಳುನಾಡು ನಮ್ಮ ಜಲಾಶಯದ ನೀರಿನ ಮೇಲೆ ಪ್ರಾಬಲ್ಯ ಸಾಧಿಸುತ್ತಾ ಬಂದಿದೆ. ಅಂದು ರಾತ್ರೋರಾತ್ರಿ ಜಲಾಶದ ನೀರನ್ನು ಕಳ್ಳತನದಿಂದ ಹರಿಸಿಕೊಳ್ಳುತ್ತಿದ್ದರು ಬಳಿಕ ಎಲ್‌ಟಿಟಿ ಸಂಘಟನೆ ಮೂಲ ನೀರಿನ ಮೇಲೆ ಪ್ರಾಬಲ್ಯ ಸಾಧಿಸಿದರು. ಆದರೆ ಬಿಟೀಷ್ ಸರ್ಕಾರದಲ್ಲಿ ಕೆಆರ್‌ಎಸ್ ಜಲಾಶಯದ ನೀರು ಹಂಚಿಕೆ ಒಪ್ಪಂದ ಮಾಡಿಕೊಂಡ ವೇಳೆ ರಾಜ್ಯದಲ್ಲಿ ಸಮವೃದ್ದವಾಗಿ ಮಳೆ ಇದ್ದ ಕಾರಣ ಸಮಸ್ಯೆ ಇರಲಿಲ್ಲ. ಆದರೆ ಕ್ರಮೇಣ ಮಳೆಯ ಕೊರತೆ ಉಂಟಾದಂತೆಲ್ಲಾ ರಾಜ್ಯಕ್ಕೆ ನೀರಿನ ಸಮಸ್ಯೆ ಉಂಟಾಯಿತು. ಆದರೆ ಕೇಂದ್ರ ಸರ್ಕಾರದಲ್ಲಿ ಆಡಳಿತ ಮಾಡಿದ ಎಲ್ಲಾ ಸರ್ಕಾರಗಳು ತಮಿಳುನಾಡಿನಲ್ಲಿ ಪ್ರಾದೇಶಿಕ ಪಕ್ಷದ ಸರ್ಕಾರಗಳ ಪ್ರಾಬಲ್ಯ ಕಡಿಮೆ ಮಾಡಲು ತಮಿಳುನಾಡಿನ ಪರವಾಗಿ ಹೆಚ್ಚು ಒಲವು ನೀಡುತ್ತಾ ಬಂದಿದ್ದಾರೆ ಎಂದರು.

ಕೇಂದ್ರ ಸರ್ಕಾರದ ಮುಂದೆ ತಮಿಳುನಾಡಿನ ಪ್ರಾದೇಶಕ ಪಕ್ಷ ಸರ್ಕಾರ ವಿರೋಧ ಪಕ್ಷವಾಗಿ ಪ್ರಶ್ನೆ ಮಾಡುತ್ತಿದೆ ಎಂದರೆ ಅದಕ್ಕೆ ತಮಿಳುನಾಡು ಸರ್ಕಾರದಲ್ಲಿನ ಜನಪ್ರತಿನಿಧಿಗಳಿಗೆ ಅವರ ಜನತೆಯ ಮೇಲಿನ ಕಾಳಜಿ ಮತ್ತು ಇಚ್ಛಾಶಕ್ತಿಯೇ ಕಾರಣವಾಗಿದೆ. ಆದರೆ ನಮ್ಮ ರಾಜ್ಯದ ಜನಪ್ರತಿನಿಧಿಗಳಿಗೆ ನಮ್ಮ ನೀರನ್ನು ಉಳಿಸಿಕೊಳ್ಳುವ ಇಚ್ಛಾಶಕ್ತಿಯೇ ಇಲ್ಲವಾಗಿದೆ. ನಮ್ಮ ರಾಜ್ಯದಲ್ಲಿ ಆಡಳಿತ ಮಾಡಿದ ಯಾವುದೇ ಪಕ್ಷದ ಸರ್ಕಾರಗಳು ಕೇಂದ್ರದ ಮುಂದೆ ಸಮರ್ಥವಾಗಿ ಪ್ರಶ್ನೆ ಮಾಡಲೇ ಇಲ್ಲ. ಬದಾಲಿ ಸುಪ್ರಿಂ ಕೋರ್ಟ್ ಮತ್ತು ಕೇಂದ್ರ ಸರ್ಕಾರದ ಆದೇಶಕ್ಕೆ ತಲೆ ಬಾಗುತ್ತಾ ಬಂದರು ಇದೀಗ ಅಂತಿಮವಾಗಿ ಕಾವೇರಿ ಜಲಾಶಯದ ಕೀಲಿ ಕೈ ಪ್ರಾಧಿಕಾರದ ಕೈ ಸೇರಿದ್ದು ಜಲಾಶಯದ ಪಕ್ಕದ ತಾಲೂಕಿಗೆ 1 ಟಿಎಂಸಿ ನೀರು ಬಿಡಲು ಸಹ ನಮ್ಮ ಸರ್ಕಾರದ ಮುಖ್ಯಮಂತ್ರಿಗಾಗಲಿ ಸಚಿವರಿಗಾಗಲಿ ಅಧಿಕಾರ ಇಲ್ಲ. ಕಾವೇರಿ ಪ್ರಾಧಿಕಾರದಿಂದ ನೀರು ಬಿಡಲು, ನೀರು ನಿಲ್ಲಿಸಲು ಪ್ರಾಧಿಕಾರದ 5 ಮಂದಿ ತೀರ್ಮಾನ ಮಾಡಬೇಕಿದೆ. ಇದು ನಮ್ಮ ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ನಮ್ಮ ನೀರನ್ನು ನಾವೇ ಬಳಕೆ ಮಾಡಲು ಆಗುತ್ತಿಲ್ಲ ಎಂದು ರಮೇಶ್‌ಗೌಡ ಬೇಸರ ವ್ಯಕ್ತಪಡಿಸಿದರು. ಮುಂದಿನ ಪೀಳಿಗೆ ನೀರಿಗಾಗಿ ಪರದಾಡದಂತೆ ಮುಂಜಾಗ್ರತೆ ನಮ್ಮ ಈ ಹೋರಾಟದ ಉದ್ದೇಶವಾಗಿದೆ. ನಮ್ಮ ರಾಜ್ಯದ ಸಂಸದ ಸದಸ್ಯರು ಕಳೆದ 10 ವರ್ಷಗಳಿಂದ ಕೇಂದ್ರದ ಮುಂದೆ ಕಾವೇರಿ ನೀರು ಹಂಚಿಕೆ ವಿಚಾರದಲ್ಲಾಗಲಿ, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ತರುವ ವಚಾರದಲ್ಲಾಗಲಿ ಒಂದು ಮನವಿಯನ್ನು ನೀಡಿಲ್ಲ. ಇಂತಹ ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆ ಮುಂದಿನ ಪೀಳಿಗೆ ಮೇಲೆ ಪರಿಣಾಮ ಬೀಡುತ್ತದೆ ಎಂದು ರಮೇಶ್‌ಗೌಡ ಅಭಿಪ್ರಾಯಿಸಿದರು.

ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡ(ಎನ್‌ಜಿ) ಮಾತನಾಡಿ, ಮೇಕೆದಾಟು ಯೋಜನೆ ತಮಿಳುನಾಡಿಗೆ ನೀರು ಬಿಡಬಾರದು ಎಂಬ ಉದ್ದೇಶದಿಂದ ನಿರ್ಮಾಣ ಮಾಡುತ್ತಿಲ್ಲ. ನಮಗೆ ಹೆಚ್ಚು ಮಳೆ ಬಂದಾಗ ತಮಿಳುನಾಡಿಗೆ ಹರಿಸುವ ನೀರಿನ ಜೊತೆಗೆ ಸಮುದ್ರದ ಪಾಲಾಗುವ ನೀರನ್ನು ಉಳಿಸಿಕೊಳ್ಳು ಕುಡಿಯುವ ನೀರಿಗೆ ಬಳಕೆ ಮಾಡಿಕೊಳ್ಳುವ ಉದ್ದೇಶದಿಂದ. ಇಂದು ಚುನಾವಣೆ ನಾಮಪತ್ರ ಸಲ್ಲಿಕೆ ವೇಳೆ ಸಿಎಂ ಸಿದ್ದರಾಮಯ್ಯ ಮತ್ತು ನೀರಾವರಿ ಮಂತ್ರಿ ಡಿಕೆ ಶಿವಕುಮಾರ್ ನಮಗೆ ಅನುಮತಿ ಕೊಟ್ಟರೆ ಜಲಾಶಯ ಕಟ್ಟಲು ಸಿದ್ದ ಎನ್ನುತ್ತಾರೆ. ಅತ್ತ ದೇವೇಗೌಡರು ಸಹ ಇದಕ್ಕೆ ಒಲವು ತೋರಿದ್ದಾರೆ. ಆದರೆ ಇವರಲ್ಲಿನ ರಾಜಕೀಯ ಪ್ರತಿಷ್ಠೆ ಬದಿಗಿಡದೆ ಈ ಯೋಜನೆ ಅನುಷ್ಠಾನಕ್ಕೆ ಬರುವುದಿಲ್ಲ. ಈ ನಿಟ್ಟಿನಲ್ಲಿ ಪಕ್ಷಾತೀತವಾಗಿ ಮೇಕೆದಾಟು ಅಣೆಕಟ್ಟೆ ಕಟ್ಟಲು ಜನಪ್ರತಿನಿಧಿಗಳು ಮುಂದಾಗಲಿ ಎಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಕಕಜ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೇಶ್‌ಗೌಡ, ರಾಜ್ಯ ಉಪಾಧ್ಯಕ್ಷರುಗಳಾದ ಬೆಳಕು ಶ್ರೀಧರ್, ರಂಜಿತ್‌ಗೌಡ, ಜಯರಾಮು, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ರಾಜು, ಚಿಕ್ಕಣ್ಣಪ್ಪ, ಚಾಲಕ ಪುರಿ ಸಿದ್ದು, ಚಿಕ್ಕೇನಹಳ್ಳಿ ಸಿದ್ದಪ್ಪಾಜಿ, ಸೇರಿದಂತೆ ಹಲವರು ಇದ್ದರು.

# ಕೋಲಾರದ ಇಬ್ಬರಿಗೆ ಪ್ರಶಸ್ತಿ

## ಅಭಿನಂದಿಸಿದ ಕೋಲಾರ ಕಾರ್ಯನಿರತ ಪತ್ರಕರ್ತರ ಸಂಘ



**ಕೋಲಾರ:** ಕೋಲಾರದವರು ಯಾವುದೇ ಸಂಘದಲ್ಲಿ ಇದ್ದರೂ ಅದು ಕ್ರಿಯಾಶೀಲವಾಗಿ ನಡೆಯುತ್ತದೆ. ಈಗ ಕೋಲಾರದ ಇಬ್ಬರಿಗೆ ಪ್ರಶಸ್ತಿ ಒಲಿದಿರುವುದು ಹೆಮ್ಮೆಯ ವಿಚಾರ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್ ತಿಳಿಸಿದರು.

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ಕೊಡ ಮಾಡುವ ಗಿರಿಜಮ್ಮ ರುದ್ರಪ್ಪ ತಾಳಿಕೋಟೆ ದತ್ತಿನಿಧಿ ಪ್ರಶಸ್ತಿಗೆ ಭಾಜನರಾಗಿರುವ ಕೋಲಾರಶಕ್ತಿ ದಿನಪತ್ರಿಕೆಯ ಸಂಪಾದಕಿ ಕೆ.ಗೋಪಿಕಾ ಮಲ್ಲೇಶ್ ಹಾಗೂ ಡಿ.ವಿ.ಜಿ ದತ್ತಿನಿಧಿ ಪ್ರಶಸ್ತಿಗೆ ಭಾಜನರಾಗಿರುವ ಕೆ.ಯು.ಡ.ಬ್ಲ್ಯೂ.ಜೆ ಮಾಜಿ ಅಧ್ಯಕ್ಷ ವಿ.ವೆಂಕಟೇಶ್ ಅವರನ್ನು ಶುಕ್ರವಾರ ಪತ್ರಕರ್ತರ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಸನ್ಮಾನಿಸಿ ಅವರು ಮಾತನಾಡಿದರು.

ರಾಜ್ಯ ಸಂಘದ ಅಧ್ಯಕ್ಷರಾಗಿದ್ದಾಗ ವೆಂಕಟೇಶ್ ಕೈಗೊಂಡ ಸುಧಾರಣೆ ಕ್ರಮ, ಹೋರಾಟ ಪರಿಣಾಮ ಸಂಘದ ಕಚೇರಿ ಉಳಿದಿದೆ. ರಾಜ್ಯದ ಬೇರೆ ಬೇರೆ ಕಡೆಗಳಲ್ಲಿ ಕಾರ್ಯಕಾರಿ ಸಮಿತಿ ಸಭೆ ನಡೆದಿದೆ. ಅವರಿಗೆ ಪ್ರಶಸ್ತಿ ಸಿಕ್ಕಿರುವುದು ಸಾರ್ಥಕ ಎನಿಸಿದೆ. ಸಮರ್ಥ ವ್ಯಕ್ತಿಗೆ ಪ್ರಶಸ್ತಿ ಒಲಿದಿದೆ ಎಂದರು.

ಕೋಲಾರ ಪತ್ರಿಕೋದ್ಯಮದಲ್ಲಿ ಮಲ್ಲೇಶ್ ಹೆಸರಿಲ್ಲದೆ ಕೊನೆಗೊಳ್ಳುವುದಿಲ್ಲ. ಜಾತಿ, ತಾರತಮ್ಯ ಇಲ್ಲ. ಕೋಲಾರ ಪತ್ರಿಕೋದ್ಯಮದಲ್ಲಿ ಮಹಿಳೆಯರ ಸಂಖ್ಯೆ ಕಡಿಮೆ. ಅಂಥದ್ದರಲ್ಲಿ ಈಗ ಗೋಪಿಕಾಮಲ್ಲೇಶ್ ಯಶಸ್ವಿಯಾಗಿ ಮುನ್ನಡೆಸುತ್ತಿದ್ದಾರೆ. ಅವರ ದಿಟ್ಟತನ ಮೆಚ್ಚುವಂಥದ್ದು. ಇದಕ್ಕೆ ಮಲ್ಲೇಶ್ ಪ್ರೇರಣೆ ಎಂದು ಹೇಳಿದರು.

ರಾಜ್ಯ ಕಾರ್ಯಕಾರಿಣಿ ಸದಸ್ಯ ಕೆ.ಎಸ್.ಗಣೇಶ್ ಮಾತನಾಡಿ, ವೆಂಕಟೇಶ್ ಹೋರಾಟಗಾರರು. ಪತ್ರಕರ್ತರ ಧ್ವನಿಯಾಗಿ ಕೆಲಸ ಮಾಡಿದ್ದಾರೆ. ಕೋಲಾರ ಪತ್ರಿಕೋದ್ಯಮದಲ್ಲಿ ಮಲ್ಲೇಶ್ ಮುಂಚೂಣಿಯಲ್ಲಿ ನಿಲ್ಲುವ ವ್ಯಕ್ತಿ. ಸಂಘಕ್ಕೆ ಕೆಲಸ ಮಾಡಿದ್ದಾರೆ. ಜಾತಿ ನೋಡದೆ ಪತ್ರಕರ್ತರಿಗೆ ಸಹಾಯ ಮಾಡಿದ್ದಾರೆ. ಅವರ ನಿಧನದ ನಂತರ ಗೋಪಿಕಾಮಲ್ಲೇಶ್ ಜವಾಬ್ದಾರಿಯಿಂದ ಪತ್ರಿಕೆ ನಡೆಸುತ್ತಿದ್ದಾರೆ. ಈ ಪ್ರಶಸ್ತಿ ಮಹಿಳೆಯರು ಪತ್ರಿಕೋದ್ಯಮಕ್ಕೆ ಪ್ರೇರಣೆ ಆಗಲಿ ಎಂದರು.

ರಾಜ್ಯ ಕಾರ್ಯಕಾರಿಣಿ ಸದಸ್ಯ ವಿ.ಮುನಿರಾಜು ಮಾತನಾಡಿ, ರಾಜ್ಯದಲ್ಲಿ ಏನೇ ಪ್ರಶಸ್ತಿಗಳು ಪ್ರಕಟವಾದರೂ ಜಿಲ್ಲೆಯ ಹೆಸರು ಇರುತ್ತದೆ ಇದು ಹೆಮ್ಮೆಯ ವಿಚಾರ ಎಂದರು. ಇವತ್ತಿನ ಪತ್ರಕರ್ತರು ಚಟುವಟಿಕೆಯಿಂದ ಇರುವುದರಿಂದ ಇಂತಹ ಪ್ರಶಸ್ತಿಗಳು ಹುಡುಕಿಕೊಂಡು ಬರುತ್ತಿವೆ. ಇದನ್ನು ಅನುಸರಿಸಿಕೊಂಡು ಯುವ ಪತ್ರಕರ್ತರು ಹೋಗಬೇಕೆಂದು ಕಿವಿ ಮಾತು ಹೇಳಿದರು.

ರಾಜ್ಯ ಸಂಘದ ಖಜಾಂಚಿ ವಾಸುದೇವಹೊಳ್ಳ ಮಾತನಾಡಿ, 31 ಜಿಲ್ಲೆಗಳಲ್ಲಿ 21 ಪ್ರಶಸ್ತಿ ಬಂದಿದೆ. ಕೋಲಾರ ಜಿಲ್ಲೆಗೆ ಎರಡು ಪ್ರಶಸ್ತಿ ಬಂದಿದೆ. ರಾಜ್ಯದಲ್ಲಿ ಕೋಲಾರ ಸಂಘ ಪ್ರಸಿದ್ಧಿ ಪಡೆದಿದೆ. ಪ್ರಶಸ್ತಿ ಬಂದ ಕೂಡಲೇ ಸನ್ಮಾನಿಸಿದೆ. ಈ ಕಾರ್ಯ ಶ್ಲಾಘನೀಯ ಎಂದರು.

ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಕೆ.ಚಂದ್ರಶೇಖರ್ ಮಾತನಾಡಿ, ಪತ್ರಿಕೆಯನ್ನು ಜೀವ ಎಂದು ಭಾವಿಸಿದವರು ಮಲ್ಲೇಶ್. ಅವರು ನಿಧನರಾದಾಗ ಪತ್ರಿಕೆ ನಿಲ್ಲುತ್ತದೆ ಎಂದು ಭಾವಿಸಿದ್ದರು. ಆದರೆ, ಅದನ್ನು ನಿಲ್ಲಲು ಬಿಡದೆ ಎಲ್ಲರೂ ಕೈಜೋಡಿಸಿ ಮುಂದುವರೆಸಲಾಗಿದೆ. ಗೋಪಿಕಾ ಜವಾಬ್ದಾರಿ ಹಾಗೂ ಬದ್ಧತೆಯಿಂದ ಕೆಲಸ ಮಾಡುತ್ತಿದ್ದಾರೆ ಎಂದರು.

ಪ್ರಜಾವಾಣಿ ದಿನಪತ್ರಿಕೆ ಮಾಜಿ ಉದ್ಯೋಗಿಯೂ ಹಾಗೂ ಕೆ.ಯು.ಡ.ಬ್ಲ್ಯೂ.ಜೆ ಮಾಜಿ ಅಧ್ಯಕ್ಷರೂ ಆದ ವಿ.ವೆಂಕಟೇಶ್ ಮಾತನಾಡಿ, ಗೋಪಿನಾಥ್ ಸಂಘಟನೆಯಲ್ಲಿ ನಿಸ್ಸೀಮರು. ರಾಜ್ಯದಲ್ಲಿ ಸಂಘ ಉತ್ತಮವಾಗಿ ನಡೆದುಕೊಂಡು ಬರುತ್ತಿದೆ ಎಂದರು.

ಡಿ.ವಿ.ಗುಂಡಪ್ಪ ಸಂಘದ ಸಂಸ್ಥಾಪಕರು. ಅವರು ದಾರ್ಶನಿಕರು, ಸಾಹಿತಿ, ಪತ್ರಕರ್ತ. ಅವರ ಮಂಕುತಿಮ್ಮನ ಕಗ್ಗ ಭಗವದ್ಗೀತೆ ಇದ್ದಂತೆ. ಜನ ಜೀವನಕ್ಕೆ ಹತ್ತಿರವಾಗಿದೆ. ಅವರು ಮುಳಬಾಗಿಲಿನವರು ಎಂಬುದು ನಮ್ಮೆಲ್ಲರ ಹೆಮ್ಮೆ. ಅಂಥವರ ಹೆಸರಿನಲ್ಲಿ ಪ್ರಶಸ್ತಿ ಬಂದಿರುವುದು ಹೆಮ್ಮೆ ಎನಿಸುತ್ತಿದೆ. ನಾನೂ ಅದೇ ತಾಲ್ಲೂಕಿನವನು ಎಂದು ತಿಳಿಸಿದರು.

ಗೋಪಿಕಾ ಮಲ್ಲೇಶ್ ಮಾತನಾಡಿ, ನನ್ನ ಕೆಲಸ ಗುರುತಿಸಿ ಪ್ರಶಸ್ತಿ ಕೊಟ್ಟಿದ್ದಾರೆ. ಮಲ್ಲೇಶ್ ತೀರಿಕೊಂಡು 20 ವರ್ಷಗಳಾದವು. ಅಲ್ಲಿಂದ ನಾನು ಜವಾಬ್ದಾರಿ ವಹಿಸಿಕೊಂಡು ಬರುತ್ತಿದ್ದೇನೆ. ಬೇರೆ ಕೆಲಸ ಮಾಡುವ ಎಂದಿದ್ದೆ. ಆದರೆ, ಎಲ್ಲರ ಒತ್ತಾಯದ ಮೇರೆಗೆ ಪತ್ರಿಕೆ ಮುಂದುವರಿಸಿಕೊಂಡು ಬರುತ್ತಿದ್ದೇನೆ ಇದಕ್ಕೆ ಎಲ್ಲಾ ರೀತಿಯಲ್ಲೂ ಪ್ರೋತ್ಸಾಹ ನೀಡಿರುವ ಪ್ರತಿಯೊಬ್ಬರಿಗೂ ಧನ್ಯವಾದಗಳನ್ನು ತಿಳಿಸಿದರು.

ಹಿರಿಯ ಪತ್ರಕರ್ತರಾದ ಬಿ.ಸುರೇಶ್, ಸಿ.ಜಿ.ಮುರಳಿ, ಚಂದು, ಲಕ್ಷ್ಮಣ ಮಾತನಾಡಿದರು.

ಸಂಘದ ಖಜಾಂಚಿ ಎ.ಜಿ.ಸುರೇಶ್ ಕುಮಾರ್ ಸ್ವಾಗತಿಸಿದ ಕಾರ್ಯಕ್ರಮದಲ್ಲಿ ಪತ್ರಕರ್ತರಾದ ಅಬ್ಬಣಿಶಂಕರ್, ಸಿ.ವಿ.ನಾಗರಾಜ್, ಓಂಕಾರಮೂರ್ತಿ, ಎಸ್.ರವಿಕುಮಾರ್, ಸ್ಕಂದಕುಮಾರ್, ಚಾಂದ್ ಪಾಷ, ವೆಂಕಟೇಶ್ ಬಾಬಾ, ಕೆ.ಎನ್.ಮಹೇಶ್, ವಿ.ಈಶ್ವರ್, ಕೆ.ಜಿ.ಮಂಜುನಾಥ್, ಮಾಮಿ ಪ್ರಕಾಶ್, ಕೆ.ಎಸ್.ಸುದರ್ಶನ್, ನವೀನ್ ಕುಮಾರ್, ಮದನ್, ಪುರುಷೋತ್ತಮ್, ಗೋಪಿ, ಗಂಗಾಧರ್, ಕುಮಾರ್, ಪವನ್, ಸಹನಾ, ಅಮರ್, ಸಿ.ಅಮರೇಶ್, ಲಕ್ಷ್ಮೀಪತಿ, ಶ್ರೀನಿವಾಸ್ ಇನ್ನಿತರರು ಇದ್ದರು.



ಚಿಕ್ಕನಾಯಕನಹಳ್ಳಿ ತಾಲೂಕು ಹುಳಿಯಾರು ಸಮೀಪದ ದೊಡ್ಡ ಎಣ್ಣೇಗೆರೆ ವಿಎಸ್‌ಎಸ್ಎನ್ ಅಧ್ಯಕ್ಷರಾಗಿ ರಮೇಶ್ ಹಾಗೂ ಉಪಾಧ್ಯಕ್ಷರಾಗಿ ಶಂಕರಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

# ಮತದಾನ ಜಾಗೃತಿ



**ಚಾಮರಾಜನಗರ:** ಛಲವಾದಿ ಮಹಾಸಭಾದ ರಾಜ್ಯಾಧ್ಯಕ್ಷರಾಗಿದ್ದ ದಿ. ಕೆ. ಶಿವರಾಂ ಅವರ ಸ್ಮರಣಾರ್ಥ ನಗರದಲ್ಲಿ ಛಲವಾದಿ ಮಹಾಸಭಾದ ಜಿಲ್ಲಾ ಘಟಕದಿಂದ ಮತದಾನ ಜಾಗೃತಿ ಕಾರ್ಯಕ್ರಮವ ನಡಯಿತು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದ ರಾಜ್ಯ ಉಪಾಧ್ಯಕ್ಷ ಅಣಗಳ್ಳಿ ಬಸವರಾಜು, ರಾಜ್ಯ ಸಂಚಾಲಕ ಹಂಸರಾಜ್ ನೇತೃತ್ವದಲ್ಲಿ ಸಮಾವೇಶಗೊಂಡ ಛಲವಾದಿ ಮಹಾಸಭಾದ ಪದಾಧಿಕಾರಿಗಳು ಅಲ್ಲಿಂದ ಮೆರವಣಿಗೆ ಹೊರಟರು. ಪ್ರತಿಯೊಬ್ಬರು ಮತದಾನ ಮಾಡಿ, ಸಂವಿಧಾನ ಉಳಿಸಿ, ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಕೆ. ಶಿವರಾಂ ಪರ ಘೋಷಣೆ ಕೂಗಿದರು. ಭುವನೇಶ್ವರಿ ವೃತ್ತದಲ್ಲಿ ಕೆಲ ಕಾಲ ಮಾನವ ಸರಪಳಿ ನಿರ್ಮಿಸಿ ಗಮನ ಸೆಳೆದರು.

ಕಾರ್ಯಕ್ರಮ ನೇತೃತ್ವದ ವಹಿಸಿದ್ದ ಅಣಗಳ್ಳಿ ಬಸವರಾಜು ಮಾತನಾಡಿ, ಛಲವಾದಿ ಮಹಾಸಭಾದ ರಾಜ್ಯಾಧ್ಯಕ್ಷರಾಗಿದ್ದ ಕೆ. ಶಿವರಾಂ ಅವರು ಕಳೆದ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಆಕಾಂಕ್ಷಿಯಾಗಿದ್ದರು. ಶ್ರೀನಿವಾಸಪ್ರಸಾದ್ ಅವರಿಗೆ ಟಿಕೆಟ್ ಘೋಷಣೆಯಾದ ಕಾರಣದಿಂದ ಅವರು ಸ್ಪರ್ಧಿಯಿಂದ ಹಿಂದೆ ಸಂಪೂರ್ಣ ಬೆಂಬಲ ನೀಡಿದ್ದರು. ಈ ಬಾರಿ ಅವರಿಗೆ ಬಿಜೆಪಿ ಟಿಕೆಟ್ ನೀಡುವ ನಿರೀಕ್ಷೆಯಲ್ಲಿದ್ದರು. ಈ ಹಿನ್ನೆಲೆಯಲ್ಲಿ ಕ್ಷೇತ್ರಾದ್ಯಂತ ಪ್ರವಾಸಕ್ಕೆಗೊಂಡು 1500 ಹಳ್ಳಿಗಳಲ್ಲಿಯು ಛಲವಾದಿ ಮಹಾಸಭಾವನ್ನು ಸಂಘಟನೆ ಮಾಡುವ ಜೊತೆಗೆ ಎಲ್ಲಾ ವರ್ಗಗಳ ಮತದಾರರ ವಿಶ್ವಾಸವನ್ನು ಗಳಿಸಿಕೊಂಡಿದ್ದರು. ಅಷ್ಟರಲ್ಲಿ ಅಕಾಲಿಕ ಮರಣ ಹೊಂದಿದ್ದಾರೆ. ಅವರ ಸ್ಥಾನವನ್ನು ತುಂಬುವ ಸಲುವಾಗಿ ಅವರ ಪತ್ನಿ ವಾಣಿ ಕೆ.ಶಿವರಾಂ ಅವರಿಗೆ ಬಿಜೆಪಿಯಿಂದ ಟಿಕೆಟ್ ಕೊಟ್ಟು ಕಣಕ್ಕಿಳಿಸುವಂತೆ ಒತ್ತಾಯ ಮಾಡಿದ್ದೇವು. ಆದರೆ, ಬಿಜೆಪಿ ಎಸ್. ಬಾಲರಾಜು ಅವರಿಗೆ ನೀಡಿದೆ.ಕಾಂಗ್ರೆಸ್ ಪಕ್ಷದಲ್ಲಾದರು ಅವಕಾಶ ಸಿಗುತ್ತದೆ ಎಂಬ ನಿರೀಕ್ಷೆ ಇತ್ತು. ಅಲ್ಲೂ ಕೈ ತಪ್ಪಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ರಾಷ್ಟ್ರಿಯ ಪಕ್ಷಗಳ ವಿರುದ್ಧ ಛಲವಾದಿ ಮಹಾಸಭಾ ನಿರ್ಣಯ ಮಾಡುತ್ತೇವೆ. ಇನ್ನು ಮೂರು ದಿನಗಳ ಒಳಗೆ ರಾಷ್ಟ್ರಿಯ ಪಕ್ಷಗಳು ಸೂಕ್ತ ಮಾನದವನ್ನು ಕಲ್ಪಿಸಿದ್ದರೆ ಛಲವಾದಿ ಮಹಾಸಭಾದಿಂದ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ರಾಜ್ಯ ಸಂಚಾಲಕ ಹಂಸರಾಜು ಮಾತನಾಡಿ, ರಾಜ್ಯಾದ್ಯಂತ ಛಲವಾಧಿ ತಾಕತ್ತು ಪ್ರದರ್ಶನ ಮಾಡಬೇಕಾಗಿದೆ. ರಾಷ್ಟ್ರೀಯ ಪಕ್ಷಗಳು ಕೆ. ಶಿವರಾಂಣ್ಣ ಅವರ ಸಂಘಟನೆಯನ್ನು ಗುರುತಿಸಲು ವಿಫಲವಾಗಿವೆ. ಈ ಎರಡು ಪಕ್ಷಗಳು ವಾಣಿ ಶಿವರಾಂ ಅವರಿಗೆ ಶಿವರಾಂ ಅವರ ಸಂಘಟನೆಯನ್ನು ನೋಡಿ ಸೂಕ್ತ ಸ್ಥಾನಮಾನವನ್ನು ಕಲ್ಪಿಸಿದರೆ ರಾಜ್ಯಾದ್ಯಂತ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಛಲವಾದಿ ಮಹಾಸಭಾ ಜಿಲ್ಲಾಧ್ಯಕ್ಷ ರಮೇಶ್, ಮಾಜಿ ಅಧ್ಯಕ್ಷ ನಾರಾಯಣ್, ನಂದೀಶ್, ರಮೇಶ್, ಮಂಟೇಸ್ವಾಮಿ, ರಂಗಸ್ವಾಮಿ, ನಾಗೇಶ್, ಗುರುಸ್ವಾಮಿ, ಅಭಿ, ಸತೀಶ್ ಇದ್ದರು.

# ಗೌಡಗೆರೆ ದುರ್ಗಮ್ಮನ ಕಳಸೋತ್ಸವ

**ಹುಳಿಯಾರು:** ಹುಳಿಯರು ಸಮೀಪದ ಗೌಡಗೆರೆ ಶ್ರೀ ದುರ್ಗಮ್ಮನವರ 35 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಕಳಸೋತ್ಸವ ಏರ್ಪಡಿಸಲಾಗಿತ್ತು. ಗೌಡಗೆರೆ ಶ್ರೀ ದುರ್ಗಮ್ಮ ಕೆಂಕೆರೆ ಕಾಳಮ್ಮ, ಹುಳಿಯಾರು ದುರ್ಗಮ್ಮ, ಕೆ.ಸಿ.ಪಾಳ್ಯ ಅಂತರಘಟ್ಟಮ್ಮ ದೇವರುಗಳ ಸಮ್ಮುಖದಲ್ಲಿ ಮಜ್ಜನ ಬಾವಿಯಿಂದ ಕಳಸೋತ್ಸವಕ್ಕೆ ಚಾಲನೆ ನೀಡಲಾಯಿತು. ಗೌಡಗೆರೆ, ಕೆಂಕೆರೆ, ಕುರಿಹಟ್ಟಿ, ಕುಪ್ಪೂರುಚಿಕ್ಕನಪಾಳ್ಯ, ಕೊಡಿಪಾಳ್ಯ, ಲಿಂಗಪ್ಪನಪಾಳ್ಯ, ದಸೂಡಿ, ಬೆನಕನಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ 30 ತಕ್ಕೂ ಹೆಚ್ಚು ಹೆಣ್ಣು ಮಕ್ಕಳು ಕಳಶ ಹೊತ್ತು ನಡೆಮುಡಿ ಉತ್ಸವದಲ್ಲಿ ಪಾಲ್ಗೊಂಡಿದ್ದರು.



ಚಿಕ್ಕನಾಯಕನಹಳ್ಳಿ ತಾಲೂಕು ಹುಳಿಯಾರು ಸಮೀಪದ ಗೌಡಗೆರೆ ಶ್ರೀ ದುರ್ಗಮ್ಮನವರ 35 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಕಶಸೋತ್ಸವ ಏರ್ಪಡಿಸಲಾಗಿತ್ತು.

## ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಅನುಷ್ಠಾನ | 'ಕಾಲು ಬಾಯಿ ಜ್ವರ' ರೋಗದಿಂದ ರಕ್ಷಿಸುವಂತೆ ಮನವಿ

# ಜಿಲ್ಲೆಯಾದ್ಯಂತ ಏಪ್ರಿಲ್ 01 ರಿಂದ 30 ರವರೆಗೆ 5ನೇ ಸುತ್ತಿನ ಲಸಿಕಾ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಜಾನುವಾರು ಮಾಲೀಕರು ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಏಪ್ರಿಲ್ 01 ರಿಂದ 30 ರವರೆಗೆ ಹಮ್ಮಿಕೊಂಡಿರುವ 5ನೇ ಸುತ್ತಿನ ಲಸಿಕಾ ಕಾರ್ಯಕ್ರಮದ ಸದಾವಕಾಶವನ್ನು ಬಳಸಿಕೊಂಡು ತಮ್ಮ ಜಾನುವಾರುಗಳನ್ನು 'ಕಾಲು ಬಾಯಿ ಜ್ವರ' ರೋಗದಿಂದ ರಕ್ಷಿಸುವಂತೆ ಹಾಗೂ ಲಸಿಕಾದಾರರು ತಮ್ಮ ಗ್ರಾಮಕ್ಕೆ ಭೇಟಿ ನೀಡಿದಾಗ ಅಗತ್ಯ ಸಹಕಾರ ನೀಡಿ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ ಅವರು ಕರಪತ್ರಗಳನ್ನು ಬಿಡುಗಡೆಗೊಳಿಸುವ ಮೂಲಕ ರೈತರಲ್ಲಿ ಮನವಿ ಮಾಡಿರುತ್ತಾರೆ.

ಪ್ರಸ್ತುತ ಸಾಲಿನಲ್ಲಿ ಕೈಗೊಂಡಿರುವ 5ನೇ ಸುತ್ತಿನ ಲಸಿಕಾ ಕಾರ್ಯಕ್ರಮವನ್ನು ಸಂಪೂರ್ಣವಾಗಿ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಲಸಿಕಾ ಪೂರ್ವದಲ್ಲಿ ಭೌತಿಕ ಜಾನುವಾರುಗಳ ಸರ್ವೆಯನ್ನು "Microplanning of Villages" 4ನೇ ಸುತ್ತಿನ ಲಸಿಕಾ ಕಾರ್ಯಕ್ರಮವನ್ನು ನವೆಂಬರ್–2023ನೇ ಮಾಹೆಯಲ್ಲಿ ಹಮ್ಮಿಕೊಂಡು, ಸದರಿ ಕಾರ್ಯಕ್ರಮದಂತೆ ವಾಸ್ತವಿಕವಾಗಿ 1,88,831 (ಹಸು, ಎಮ್ಮೆ) ಒಟ್ಟು ಜಾನುವಾರುಗಳು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಇದ್ದು, ಇದರಲ್ಲಿ 1,76,237 (94%) ಜಾನುವಾರುಗಳಿಗೆ ಲಸಿಕೆ ಹಾಕಿ ಪ್ರಗತಿ ಸಾಧಿಸಲಾಗಿದೆ. ಈ ರೋಗವನ್ನು ನಿಯಂತ್ರಿಸಲು ಪ್ರತಿ 6 ತಿಂಗಳಿಗೊಮ್ಮೆ ನಿರಂತರವಾಗಿ ಲಸಿಕೆಯನ್ನು ಹಾಕಿಸುವುದರಿಂದ ಮಾತ್ರ ಸಾಧ್ಯ ಎಂಬುದನ್ನು ವಿಜ್ಞಾನಿಗಳು ನಿರಂತರವಾಗಿ ಸಂಶೋಧನೆ ನಡೆಸಿ ಕಂಡುಕೊಂಡಿರುತ್ತಾರೆ. ಆದ್ದರಿಂದ 5ನೇ ಸುತ್ತಿನ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಏಪ್ರಿಲ್ 01 ರಿಂದ 30 ರವರೆಗೆ ಒಟ್ಟು 30 ದಿನಗಳು ಹಮ್ಮಿಕೊಳ್ಳಲಾಗಿದೆ.

ಲಸಿಕೆಗೆ ಒಳಪಡುವ ಜಾನುವಾರುಗಳಿಗೆ ಅಧಾರ್ ಸಂಖ್ಯೆಯಂತೆ 12 ಸಂಖ್ಯೆಯುಳ್ಳ ಕಿವಿಯೋಲೆಗಳನ್ನು ಅಳವಡಿಸಿ Bharath Pashudhan ತಂತ್ರಾಂಶದಲ್ಲಿ ಪೂರ್ಣ ಮಾಹಿತಿಯನ್ನು ದಾಖಲಿಸುವುದು ಕಡ್ಡಾಯವಾಗಿರುತ್ತದೆ. ಈ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಪಶುಪಾಲನಾ ಇಲಾಖೆ ಹಾಗೂ ಕೋಲಾರ–ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಸಹಯೋಗದೊಂದಿಗೆ ನಡೆಸಲಾಗುವುದು.



## ಜಿಲ್ಲೆಯಲ್ಲಿ 73 ತಾಂತ್ರಿಕ ಲಸಿಕಾ ತಂಡಗಳ ರಚನೆ

ಜಿಲ್ಲೆಯ 2008 ಬ್ಲಾಕ್‌ಗಳಲ್ಲಿ ಕಾರ್ಯನಿರ್ವಹಿಸಲು 73 ತಾಂತ್ರಿಕ ಲಸಿಕಾ ತಂಡಗಳನ್ನು ರಚಿಸಲಾಗಿದೆ. ಈ ಪೈಕಿ ಬಾಗೇಪಲ್ಲಿ ತಾಲ್ಲೂಕಿನಲ್ಲಿ 10 ತಂಡಗಳು, 329 ಬ್ಲಾಕ್‌ಗಳು, ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ 9 ತಂಡಗಳು, 302 ಬ್ಲಾಕ್‌ಗಳು, ಚಿಂತಾಮಣಿ ತಾಲ್ಲೂಕಿನಲ್ಲಿ 10 ತಂಡಗಳು, 477 ಬ್ಲಾಕ್‌ಗಳು, ಗೌರಿಬಿದನೂರು ತಾಲ್ಲೂಕಿನಲ್ಲಿ 17 ತಂಡಗಳು, 400 ಬ್ಲಾಕ್‌ಗಳು, ಗುಡಿಬಂಡೆ ತಾಲ್ಲೂಕಿನಲ್ಲಿ 9 ತಂಡಗಳು, 165 ಬ್ಲಾಕ್‌ಗಳು, ಶಿಡ್ಲಘಟ್ಟ ತಾಲ್ಲೂಕಿನಲ್ಲಿ 18 ತಂಡಗಳು, 335 ಬ್ಲಾಕ್‌ಗಳಾಗಿ ವಿಂಗಡಿಸಿ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಒಬ್ಬ ಪಶು ವೈದ್ಯಾಧಿಕಾರಿಯು ಪ್ರತಿ ತಂಡದ ಮುಖ್ಯಸ್ಥರಾಗಿರುತ್ತಾರೆ. ಕಾರ್ಯಕ್ರಮದಲ್ಲಿ ಬ್ಯಾನರ್ ಗಳು, ಪೋಸ್ಟರ್ ಗಳು, ಕರಪತ್ರಗಳು ಹಾಗೂ ಇತ್ಯಾದಿಗಳ ಪ್ರಚಾರ ಸಾಮಗ್ರಿಗಳ ಮುಖಾಂತರ ಪ್ರಚಾರ ಮಾಡಲಾಗುತ್ತದೆ ಹಾಗೂ ಲಸಿಕಾ ತಂಡ ಭೇಟಿ ನೀಡುವ ಹಿಂದಿನ ದಿನ ಆಯಾ ಹಾಲು ಉತ್ಪಾದಕರ ಸಹಕಾರ ಸಂಘದ ಸಹಕಾರದೊಂದಿಗೆ ಹಳ್ಳಿಯಲ್ಲಿ ಜನರಿಗೆ ತಿಳಿಸಲಾಗುತ್ತದೆ. ಪ್ರಸ್ತುತ ಜಿಲ್ಲೆಯಲ್ಲಿ ಲಸಿಕಾದಾರರು ಸೇರಿ ಒಟ್ಟು 210 ಅಧಿಕಾರಿಗಳು ಮತ್ತು ಸಿಬ್ಬಂದಿಯವರನ್ನು ತೊಡಗಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಒಟ್ಟು 1,86,330 ಡೋಸ್ ಲಸಿಕೆ ಸರಬರಾಜಾಗಿದ್ದು, ಲಸಿಕೆಗೆ ಅಗತ್ಯವಿರುವ ಸಿರಂಜ್, ನೀಡಲ್ ಹಾಗೂ ತುರ್ತು ಔಷಧಿಗಳು ಸರಬರಾಜಾಗಿದೆ. ಪ್ರತಿ ಲಸಿಕೆದಾರರು (ವಾಕ್ಸಿನೇಟರ್) ಪ್ರತಿ ದಿನ 50 ರಿಂದ 60 ಜಾನುವಾರುಗಳಿಗೆ ಲಸಿಕೆ ಹಾಕುತ್ತಾರೆ. ಕಳೆದ ಸುತ್ತಿನಂತೆ ಈ ಬಾರಿಯೂ ಆನ್ ಲೈನ್ ಮುಖಾಂತರ ಪ್ರತಿದಿನದ ಪ್ರಗತಿಯನ್ನು ತಾಲ್ಲೂಕು ಪಶು ಆಸ್ಪತ್ರೆಯಲ್ಲಿ ಎಂಟ್ರಿ ಮಾಡಲಾಗುವುದು. ಇದಕ್ಕೆ ಪೂರಕವಾಗಿ ಎಲ್ಲಾ 6 ತಾಲ್ಲೂಕುಗಳಲ್ಲಿ online village mapping ಅನ್ನು ಈಗಾಗಲೇ ಪೂರ್ಣಗೊಳಿಸಿದೆ. ಪ್ರತಿ ದಿನದಲ್ಲಿ ಆಗಿರುವ ಲಸಿಕಾ ಪ್ರಗತಿಯನ್ನು https://ahvs.kar.nic.in/ahvsmisnew/Account/Login.aspx ಈ ವೆಬ್ ಸೈಟ್‌ನಲ್ಲಿ ನೋಡಬಹುದಾಗಿದೆ. ಕಾಲು ಬಾಯಿ ರೋಗೋದ್ರೇಕ ತಡಗಟ್ಟಲು ಹಾಗೂ ಲಸಿಕೆ ಪರಿಣಾಮವನ್ನು ತಿಳಿಯಲು ರಕ್ತ ಮಾದರಿ ಸೀರಂ ಸ್ಯಾಂಪಲ್ ಗಳನ್ನು ಪ್ರತಿ ತಾಲ್ಲೂಕಿನ ನಿರ್ದಿಷ್ಟ ಗ್ರಾಮಗಳಲ್ಲಿ ರಾಸುಗಳಲ್ಲಿ ಲಸಿಕೆ ಕಾರ್ಯಕ್ರಮ ಪ್ರಾರಂಭವಾಗುವ ಮುನ್ನ ಅಂದರೆ 0 ದಿನ ಹಾಗೂ ಲಸಿಕೆ ಹಾಕಿದ 28 ದಿನಗಳ ತರುವಾಯ ಸೀರಂ ಮಾದರಿ ಸಂಗ್ರಹಿಸಿ ಪ್ರಯೋಗ ಶಾಲೆಯಲ್ಲಿ ಪರೀಕ್ಷೆಗೆ ಒಳಪಡಿಸಲಾಗುವುದು. ಇದರಿಂದ ಜಾನುವಾರುಗಳಲ್ಲಿ ಕಾಲು ಬಾಯಿ ರೋಗದ ವಿರುದ್ಧ ರೋಗ ನಿರೋಧಕ ಶಕ್ತಿ ಎಷ್ಟು ಪ್ರಮಾಣದಲ್ಲಿ ವೃದ್ಧಿಸಿದೆ ಎಂಬುದನ್ನು ತಿಳಿಯಬಹುದಾಗಿದೆ. ಈ ಲಸಿಕಾ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಂಡು ರೈತರು ತಮ್ಮ ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಿ ಅಮೂಲ್ಯವಾದ ಜಾನುವಾರು ಸಂಪತ್ತನ್ನು ರಕ್ಷಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೀವನ ಶ್ರೇಯಸ್ಸಿಗೆ ಧರ್ಮಾಚರಣೆ ಮೂಲ: ರಂಭಾಪುರಿ ಜಗದ್ಗುರುಗಳು



**ಸಕಲೇಶಪುರ:** ಜನ್ಮ ಜನ್ಮಗಳ ಪುಣ್ಯದ ಫಲದಿಂದ ಮಾನವ ಜನ್ಮ ಪ್ರಾಪ್ತವಾಗಿದೆ. ಜೀವನದ ಉನ್ನತಿಗೆ ಬದುಕಿನ ಶ್ರೇಯಸ್ಸಿಗೆ ಧರ್ಮಾಚರಣೆ ಮೂಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಶುಕ್ರವಾರ ತಾಲೂಕಿನ ಯಸಳೂರು ತೆಂಕಲಗೂಡು ಬೃಹನ್ಮಠದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖದಾಯಕ ಶಾಂತಿ ನೆಮ್ಮದಿಯ ಬದುಕಿಗೆ ಧರ್ಮ ಮತ್ತು ಧರ್ಮಾಚರಣೆ ಬಹಳಷ್ಟು ಮುಖ್ಯ. ಅರಿವು ಆಚರಣೆಗಳನ್ನು ಮೈಗೂಡಿಸಿಕೊಂಡು ಬಾಳಿದರೆ ಜೀವನ ಉಜ್ವಲಗೊಳ್ಳುವುದು. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಬಂಧುತ್ವದ ಸಾಮರಸ್ಯ ಸೌಹಾರ್ದತೆಯ ಅಮೂಲ್ಯ ಬೋಧಾಮೃತವನ್ನು ಬೋಧಿಸಿದ್ದಾರೆ. ಅಹಿಂಸಾದಿ ಧ್ಯಾನ ಪರ್ಯಂತರವಾದ ದಶ ಧರ್ಮ ಸೂತ್ರಗಳು ಸಕಲರ ಬಾಳಿನ ಉತ್ಕರ್ಷತೆಗೆ ಕಾರಣವಾಗಿವೆ. ಮಾನವೀಯ ಆದರ್ಶ ಮೌಲ್ಯಗಳನ್ನು ವೀರಶೈವ ಧರ್ಮ ಎತ್ತಿ ಹಿಡಿದಿದೆ. ಜಾತಿ ಜನಾಂಗಗಳ ಗಡಿ ಮೀರಿ ಸರ್ವರ ಒಳಿತಿಗಾಗಿ ಸದಾ ಶ್ರಮಿಸಿದೆ. ವೀರಶೈವ ಧರ್ಮ ವೃಕ್ಷದ ಮೂಲ ಪರಮಾಚಾರ್ಯರಾದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಮ್ಮಿಕೊಂಡಿರುವುದು ತಮಗೆ ಸಂತಸ ತಂದಿದೆ ಎಂದ ಅವರು ಲಿಂ. ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ತೆಂಕಲಗೂಡು ಬೃಹನ್ಮಠದ ಉನ್ನತಿಗಾಗಿ ಶ್ರಮಿಸಿದ್ದನ್ನು ನೆನಪಿಸಿದರು. ಇಂದಿನ ಚನ್ನಸಿದ್ದೇಶ್ವರ ಶ್ರೀಗಳು ಹಿಂದಿನ ಶ್ರೀಗಳ ಸತ್ಯ ಸಂಕಲ್ಪಗಳನ್ನು ಸಾಕಾರಗೊಳಿಸಿರುವುದು ಭಕ್ತ ಸಮೂಹಕ್ಕೆ ಸಂತೋಷ ತಂದಿದೆ ಎಂದರು. ನೇತೃತ್ವ ವಹಿಸಿದ ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೀರಶೈವ ಧರ್ಮ ಕಾಯಕ ಮತ್ತು ದಾಸೋಹಕ್ಕೆ ಪ್ರಾಮುಖ್ಯತೆ ಕೊಟ್ಟಿದೆ. ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಂಸ್ಕಾರ ಮುಖ್ಯ. ಜಗದ ಕತ್ತಲೆ ಕಳೆಯಲು ಸೂರ್ಯ ಬದುಕಿನ ಕತ್ತಲೆ ಕಳೆಯಲು ಗುರು ಬೇಕು. ಲಿಂ. ಚನ್ನಮಲ್ಲಿಕಾರ್ಜುನ ಶ್ರೀಗಳವರು ಹಾಕಿದ ದಾರಿಯಲ್ಲಿ ಮುನ್ನಡೆದು ಶ್ರೀ ಮಠದ ಉನ್ನತಿಯನ್ನು ಮಾಡುತ್ತೇವೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಶ್ರೀರಕ್ಷೆ ಸದಾ ನಮಗಿರಲೆಂದರು. ಸಮ್ಮುಖ ವಹಿಸಿದ ಎಡೆಯೂರು ರೇಣುಕ ಶಿವಾಚಾರ್ಯರು, ಶನಿವಾರ ಸಂತೆ ಮುದ್ದಿನಕಟ್ಟೆ ಮಠದ ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ಹೆಗ್ಗಡಹಳ್ಳಿಮಠದ ಷಡ್ಭಾವರಹಿತೇಶ್ವರ ಶಿವಾಚಾರ್ಯರು, ಪಾಲ್ಗೊಂಡು ಧರ್ಮ ಮತ್ತು ಗುರುವಿನ ಹಿರಿಮೆಯನ್ನು ಕೊಂಡಾಡಿದರು.

ಅ.ಭಾ.ವೀರಶೈವ ಮಹಾಸಭೆ ಹಾಸನ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಆರ್.ಗುರುದೇವ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಈ ಪವಿತ್ರ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಸಕಲೇಶಪುರ ಮಲೆನಾಡು ವೀರಶೈವ ಸಮಾಜದ ಅಧ್ಯಕ್ಷ ದಿವಾನ್ ದೇವರಾಜ ಪಾಲ್ಗೊಂಡಿದ್ದರು.

ಸಮಾರಂಭದ ಅಂಗವಾಗಿ ನೂತನ ಗುರು ನಿವಾಸ ಉದ್ಘಾಟನೆ, ಮೃತ್ಯುಂಜಯ ಹೋಮ, ಮಾಸ ಪತ್ರಿಕೆ ಬಿಡುಗಡೆ, ಪುಸ್ತಕ ಬಿಡುಗಡೆ ಹಾಗೂ ಜಂಗಮ ವಟುಗಳಿಗೆ ಶಿವದೀಕ್ಷಾ ಅಯ್ಯಾಚಾರ ಜರುಗಿದವು. ದಾನಿಗಳಿಗೆ ಮತ್ತು ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಯಸಳೂರು ವೀರಶೈವ ಸಮಾಜದ ಅಧ್ಯಕ್ಷ ಬಿ.ಎಂ.ಶಿವರಾಜ ಸ್ವಾಗತಿಸಿದರು. ಯಡೇಹಳ್ಳಿ ಆರ್. ಮಂಜುನಾಥ ಮತ್ತು ಶ್ರೀಮತಿ ಸುಜಾತಾ ಜಯರಾಜ್ ನಿರೂಪಣೆ ಮಾಡಿದರು. ಸಮಾರಂಭದ ನಂತರ ಅನ್ನ ದಾಸೋಹ ನೆರವೇರಿತು.

ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತ ಸಮೂಹಕ್ಕೆ ಆಶೀರ್ವದಿಸಿದರು.

# ಬಿಜೆಪಿಯಿಂದ ಸರ್ವಾಧಿಕಾರದ ಹುನ್ನಾರ

**ಚಾಮರಾಜನಗರ:** ಬಿಜೆಪಿಯು ಸಂವಿಧಾನ ಬದಲಾವಣೆ ಮಾಡುವ ಮೂಲಕ ದೇಶದಲ್ಲಿ ಸರ್ವಾಧಿಕಾರ ಆಡಳಿತ ನಡೆಸಲು ಹುನ್ನಾರ ನಡೆಸುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದರು.

ನಗರದ ಮಾಂಗಲ್ಯ ಕನ್ವೆನ್ಸನ್ ಹಾಲ್‌ನಲ್ಲಿ ಚಾಮರಾಜನಗರ ಬ್ಲಾಕ್ ಮತ್ತು ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದ ಚುನಾವಣೆ- 2024 ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರ ಸಭೆ ಉದ್ಘಾಟಿಸಿ ಮಾತನಾಡಿದರು.

ದೇಶದಲ್ಲಿ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬಂದರೆ ಪ್ರಜಾಪ್ರಭುತ್ವ ನಾಶವಾಗಲಿದೆ. ಸಂವಿಧಾನ ಬದಲಾಯಿಸಿ ಸರ್ವಾಧಿಕಾರಿ ಆಡಳಿತ ನಡೆಸಲು ಮುಂದಾಗಿದೆ. ಇದರಿಂದಾಗಿ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಸಂವಿಧಾನ ಜಾಗೃತಿ ಜಾಥಾ ನಡೆಸಿ ಜನರಲ್ಲಿ ಸಂವಿಧಾನದ ಕುರಿತು ಅರಿವು ಮೂಡಿಸುವ ಕಾರ್ಯ ಮಾಡಿದೆ ಎಂದರು.

ರಾಜ್ಯದ6ಸಾವಿರಗ್ರಾಮಪಂಚಾಯಿತಿಗಳಲ್ಲಿ ಸಂವಿಧಾನ ಜಾಗೃತಿ ಜಾಥಾ ನಡೆಸಲಾಗಿದೆ.

ಸಂವಿಧಾನ ಉಳಿದರೆ ನಾವೆಲ್ಲ ಉಳಿಯಲು ಸಾಧ್ಯ. ಸಂವಿಧಾನ ಆಶಯಗಳನ್ನು ಜಾರಿ ಮಾಡಲು ಕಾಂಗ್ರೆಸ್ ಬೆಂಬಲಿಸಬೇಕಿದೆ. ಕೇಂದ್ರ ಸರ್ಕಾರ ರೈತ ವಿರೋಧಿ ಹಾಗೂ ದಲಿತ ವಿರೋಧಿ ಕಾನೂನುಗಳನ್ನು ಜಾರಿಗೆ ತರಲು ಮುಂದಾಗಿದೆ. ಆದ್ದರಿಂದ ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ತರಬೇಕು ಎಂದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಕೃಷ್ಣಮೂರ್ತಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ಎಸ್ಸಿ, ಎಸ್ಟಿ, ಹಿಂದುಳಿದ ವರ್ಗಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸಿದೆ.ಸರ್ಕಾರ ಬಂದು 10 ತಿಂಗಳಾಗಿದ್ದು ಗ್ಯಾರಂಟಿಗಳ ಮೂಲಕ ಜನಪರವಾಗಿದೆ. ಚಾಮರಾಜನಗರ ಸಿಎಂ ಸಿದ್ದರಾಮಯ್ಯ ಅವರಿಗೆ ತವರು ಜಿಲ್ಲೆಯಾಗಿದೆ. ಜಿಲ್ಲೆಯ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಸಾಕಷ್ಟು ಅನುದಾನ ನೀಡಿ ಅಭಿವೃದ್ಧಿಪಡಿಸಿದೆ. ಪ್ರಸ್ತುತ ದೇಶದಲ್ಲಿ ನಿರುದ್ಯೋಗ ಸಮಸ್ಯೆ ಕಾಡುತ್ತಿದೆ. ರಾಜ್ಯದಲ್ಲಿ ಈ ಹಿಂದೆ ಅತೀವೃಷ್ಟಿ, ಅನಾವೃಷ್ಟಿ ಸಂದರ್ಭದಲ್ಲಿ ಮೋದಿ ಅವರು ಯಾವುದೇ ಅನುದಾನ ನೀಡದೆ ತಾರತಮ್ಯ ಮಾಡಿದ್ದರು. ಆದರೆ, ಕಾಂಗ್ರೆಸ್ ಸರ್ಕಾರ ಯುವಕರಿಗೆ ನಿರುದ್ಯೋಗ ಸಮಸ್ಯೆ ಹೋಗಲಾಡಿಸುವ ನಿಟ್ಟಿನಲ್ಲಿ ಯುವನಿಧಿ ಮೂಲಕ ಹಣ ನೀಡುವ ಕೆಲಸ ಮಾಡುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ವಿವಿಧ ಪಕ್ಷಗಳ ಮುಖಂಡರು ಕಾಂಗ್ರೆಸ್ ಸೇರ್ಪಡೆಯಾದರು.

ಕಾರ್ಯಕ್ರಮದಲ್ಲಿ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎಚ್.ಎಂ.ಗಣೇಶ್ ಪ್ರಸಾದ್, ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ, ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ಸುನೀಲ್ ಬೋಸ್, ಮಾಜಿ ಸಂಸದ ಎಂ.ಶಿವಣ್ಣ, ಶಾಸಕರಾದ ಎಸ್.ಜಯಣ್ಣ, ಜಿ.ಎನ್.ನಂಜುಂಡಸ್ವಾಮಿ, ಚುನಾವಣೆ ಉಸ್ತುವಾರಿ ಎಚ್.ಸಿ.ಬಸವರಾಜು, ಮುಖಂಡರಾದ ಜೆ.ಯೋಗೇಶ್, ಶ್ರೀನಿವಾಸನಾಯಕ, ಬಿ.ಕೆ.ರವಿಕುಮಾರ್, ಮಹಮ್ಮದ್ ಅಸ್ಗರ್ ಮುನ್ನಾ, ಗುರುಸ್ವಾಮಿ, ಸದಾಶಿವಮೂರ್ತಿ, ಎಚ್.ವಿ.ಚಂದ್ರು ಸೇರಿದಂತೆ ಇತರರು ಇದ್ದರು.



# ಗಾಯಿತ್ರಿ ಜಲಾಶಯಕ್ಕೆ ನೀರು ಬಿಡಲು ಅಚ್ಚುಕಟ್ಟುದಾರರ ಒಪ್ಪಿಗೆ



**ಹುಳಿಯಾರು:** ಹುಳಿಯಾರು ಹೋಬಳಿಯ ಬೋರನಕಣಿವೆ ಜಲಾಶಯದಿಂದ ಹಿರಿಯೂರು ತಾಲೂಕಿನ ಗಾಯಿತ್ರಿ ಜಲಾಶಯಕ್ಕೆ ನೀರು ಬಿಡುವುದನ್ನು ವಿರೋಧಿಸಿ ಜಲಾಶಯದ ಬಳಿ ಅಚ್ಚುಕಟ್ಟುದಾರರು ಪ್ರತಿಭಟನೆಗೆ ಮುಂದಾದರು. ಶಾಸಕ ಸಿ.ಬಿ.ಸುರೇಶ್‌ಬಾಬು ಅವರು ದೂರವಾಣಿ ಮೂಲಕ 15 ದಿನ ಹಳ್ಳಕ್ಕೆ, 15 ದಿನ ನಾಲೆಗೆ ಹರಿಸುವ ಸೂತ್ರದೊಂದಿಗೆ ರೈತರ ಮನವೊಲಿಸುವಲ್ಲಿ ಯಶ್ವಿಯಾದರು.

ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಜೆಜಿಹಳ್ಳಿ ಗ್ರಾಮಸ್ಥರಿಗೆ ಕುಡಿಯುವ ನೀರಿನ ಅಭಾವ ಎದುರಾಗಿದ್ದು ಬೋರನಕಣಿವೆ ಜಲಾಶಯದಿಂದ ಗಾಯಿತ್ರಿ ಜಲಾಶಯಕ್ಕೆ ಹಳ್ಳದ ಮುಖಾಂತರ 3 ಅಡಿ ನೀರು ಹರಿಸಲು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರು ಕೋರಿದ್ದರು. ಅದರಂತೆ ಪ್ರದೇಶಿಕ ಆಯುಕ್ತರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು 3 ದಿನಗಳ ಕಾಲ ನಿರಂತರವಾಗಿ ಗಾಯಿತ್ರಿ ಜಲಾಶಯಕ್ಕೆ ನೀರು ಬಿಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪತ್ರ ಬರೆದಿದ್ದರು.

**ಜಯಚಂದ್ರ ಪತ್ರ:** ಪ್ರದೇಶಿಕ ಆಯುಕ್ತರು 3 ದಿನಗಳ ಕಾಲ ನೀರು ಬಿಡಲು ಬರೆದ ಪತ್ರಕ್ಕೆ ಪ್ರತಿಯಾಗಿ ರಾಜ್ಯ ಸರ್ಕಾರದ ನವದೆಹಲಿ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರು ಪತ್ರ ಬರೆದು ಜಲಾಶಯದಲ್ಲಿ 24 ಅಡಿ ಲೈವ್ ಸ್ಟೋರೇಜ್ ಇದ್ದು ಗಾಯಿತ್ರಿ ಜಲಾಶಯಕ್ಕೆ ನೀರು ಹರಿಯಬೇಕಾದರೆ 27 ಕಿಮೀ ಹಳ್ಳದ ಮುಖೇನ ಕ್ರಮಿಸಬೇಕಿದೆ. ನಡುವೆ ಹಳ್ಳದಲ್ಲಿ ಇರುವ 10 ಚೆಕ್ ಡ್ಯಾಂಗಳು ತುಂಬಿ ಹರಿಯಬೇಕಾದರೆ 2 ರಿಂದ 3 ಅಡಿ ನೀರು ಹರಿಸಬೇಕಾಗುತ್ತದೆ ಎಂದು ಕೋರಿದ್ದರು.

## ಹಿರಿಯೂರು ರೈತರ ಪ್ರವೇಶ

ಬೋರನಕಣಿವೆ ಜಲಾಶಯದಿಂದ ಹಿರಿಯೂರು ತಾಲ್ಲೂಕಿನ ಗಾಯತ್ರಿ ಜಲಾಶಯಕ್ಕೆ ನೀರು ಹರಿಸಲು ಪ್ರಾದೇಶಿಕ ಆಯುಕ್ತರ ಆದೇಶದ ಮೇರೆಗೆ ಗಾಯತ್ರಿ ಜಲಾಶಯ ಭಾಗದ ಗ್ರಾಮಗಳ ರೈತರು ಗುರುವಾರ ಸಂಜೆ ಜಲಾಶಯದ ಬಳಿ ಬಂದು ನಾಲೆ ಒಡೆದು ಹಳ್ಳಕ್ಕೆ ನೀರು ಹರಿಸಲು ಸಜ್ಜುಗೊಳಿಸಿದರು.

ಇದರಿಂದ ಸಹಜವಾಗಿ ಬೋರನಕಣಿವೆ ಜಲಾಶಯದ ಅಚ್ಚುಕಟ್ಟು ಪ್ರದೇಶದ ರೈತರು ಆಕ್ರೋಶಗೊಂಡು ಹಿರಿಯೂರಿಗೆ ನೀರು ಬಿಡುವುದಿಲ್ಲವೆಂದು ಪಟ್ಟು ಹಿಡಿದು ಶುಕ್ರವಾರ ಜಲಾಶಯದ ಬಳಿ ಧರಣಿ ಕುಳಿತರು.

## ನಮ್ಮಲ್ಲೇ ನೀರಿಗೆ ಬರ

ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲೇ ನೀರಿಗೆ ಬರವಿದ್ದು ಸಾವಿರ ಅಡಿ ಕೊರೆದರೂ ನೀರು ಸಿಗದಂತಾಗಿದೆ. ದನಕರುಗಳಿಗೆ ನೀರು, ಮೇವಿಲ್ಲದೆ ಪರಿತಪಿಸುತ್ತಿದ್ದಾರೆ. ಹಾಗಾಗಿಯೇ ಅಂತರ್ಜಲ ವೃದ್ಧಿಯ ಜೊತೆಗೆ ಮೇವು ಬೆಳೆಯಲು ನೆರವಾಗಲೆಂದು ಬೋರನಕಣಿವೆ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಬಿಡಲಾಗಿತ್ತು. ಅಲ್ಲದೆ ಈಗ ಬೆಳೆಗಳಿಗೆ ಎರಡನೇ ಹಂತದ ನೀರು ಬಿಡುವ ಅಗತ್ಯವಿದೆ. ಇಂತಹ ಸಂದರ್ಭದಲ್ಲಿ ಗಾಯಿತ್ರಿ ಜಲಾಶಯಕ್ಕೆ ನೀರು ಬಿಡಲು ನಮ್ಮ ಸಹಮತಿ ಇಲ್ಲ ಎಂದು ಧರಣಿ ನಿರತ ರೈತರು ಪಟ್ಟು ಹಿಡಿದಿದ್ದರು.

## ಮನವೊಲಿಸಿದ ಶಾಸಕರು

ಧರಣಿ ನಿರತರ ಬಳಿ ಶಾಸಕ ಸಿ.ಬಿ.ಸುರೇಶ್‌ಬಾಬು ಅವರು ದೂರವಾಣಿ ಮೂಲಕ ಮಾತನಾಡಿದಾಗ ರೈತರು 10 ಚೆಕ್ ಡ್ಯಾಂ ತುಂಬಿ 27 ಕಿ.ಮೀ ಕ್ರಮಿಸಿ ಗಾಯಿತ್ರಿ ಜಲಾಶಯಕ್ಕೆ ನೀರು ಹರಿಯಬೇಕಾದರೆ ಕನಿಷ್ಟ ಎಂದರೂ ಮೂರ್ನಾಲ್ಕು ಟಿಎಂಸಿ ನೀರು ಬೇಕು. ಇಷ್ಟು ನೀರು ಜಲಾಶಯದಲ್ಲಿ ಖಾಲಿಯಾದರೆ ನಮ್ಮ ತಾಲೂಕಿನಲ್ಲೇ ನೀರಿನ ಹಾಹಾಕಾರ ಹೆಚ್ಚಾಗುತ್ತದೆ ಎಂದು ವಿವರಿಸಿದರು. ಇದಕ್ಕೆ ಶಾಸಕರು ಅಲ್ಲಿನ ಜನರಿಗೂ ನೀರಿನ ಸಮಸ್ಯೆಯಿದ್ದು ನಮ್ಮನಮ್ಮಲ್ಲಿ ಸಂಘರ್ಷ ಮಾಡಿಕೊಳ್ಳುವುದು ಬೇಡ. 15 ದಿನಗಳ ಕಾಲ ಹಳ್ಳದ ಮೂಲಕ ಅವರಿಗೆ, ನಂತರದ 15 ದಿನಗಳ ಕಾಲ ನಾಲೆ ಮೂಲಕ ನಮ್ಮ ರೈತರಿಗೆ ನೀರು ಬಿಡೋಣ. ಅಷ್ಟರಲ್ಲಿ ಆಯುಕ್ತರಿಗೆ ಚಿಕ್ಕನಾಯಕನಹಳ್ಳಿ ತಾಲೂಕಿನ ನೀರಿನ ಸಮಸ್ಯೆ ತಿಳಿಸಿ ಆದೇಶವನ್ನು ಹಿಂಪಡೆಯುವಂತೆ ಮಾಡೋಣ ಎಂಬ ಸೂತ್ರ ಎಣೆದು ಧರಣಿ ಹಿಂಪಡೆಯುವಂತೆ ಮಾಡಿದರು.

# ಕಾಂಗ್ರೆಸ್ಸಿನ ತೃಷ್ಟಿಕರಣ ರಾಜಕಾರಣದಿಂದಾಗಿ ದೇಶದಲ್ಲಿ ಶಾಂತಿ ಸುವ್ಯವಸ್ಥೆಗೆ ಧಕ್ಕೆ




**ಚಾಮರಾಜನಗರ:** ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರದಿಂದ ತೃಷ್ಟಿಕರಣ ನೀತಿ ಹಾಗೂ ಭಯೋತ್ಪಾದಕ ಕೃತ್ಯಗಳನ್ನು ಬೆಂಬಲಿಸುವ ಮೂಲಕ ದೇಶದ ಶಾಂತಿ ನೆಮ್ಮದಿಯ ಜೀವನಕ್ಕೆ ಧಕ್ಕೆ ಉಂಟು ಮಾಡುತ್ತಿದೆ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಪಿ.ವೃಷಬೇಂದ್ರಪ್ಪ ದೂರಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಅಧಿಕಾರಕ್ಕೆ ಬಂದ ಆರು ತಿಂಗಳಲ್ಲಿಯೂ ಬಾಂಬ್ ಸ್ಪೋಟ, ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಹಾಗು ಸಿಎಂ, ಡಿಸಿಎಂ ಹಾಗೂ ಸಚಿವರು ಭಯೋತ್ಪಾದನಾ ಕೃತ್ಯವನ್ನು ಬೆಂಬಲಿಸುವ ಹೇಳಿಕೆಗಳು, ರಾಷ್ಟ್ರದ ಭದ್ರತೆ ಮತ್ತು ದೇಶದ ಜನರ ನೆಮ್ಮದಿ ಜೀವನಕ್ಕೆ ತಿಲಾಂಜಲಿ ಇಟ್ಟಿದ್ದಾರೆ. ಇಂಥ ಸರ್ಕಾರ ವಿರುದ್ಧ ಬಿಜೆಪಿ ನಿರಂತರ ಹೋರಾಟ ಮಾಡಲಿದೆ ಎಂದರು.

ಬೆಂಗಳೂರಿನಲ್ಲಿ ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚಳವಾಗಿದೆ. ಎನ್‌ಸಿಆರ್‌ಬಿ ವರದಿಯಂತೆ ರಾಜ್ಯದಲ್ಲಿ ಆರ್ಥಿಕ ಆಪರಾಧಗಳ ಸಂಖ್ಯೆ 180742ಕ್ಕೇರಿದೆ. ಮಕ್ಕಳು ಮತ್ತು ಹಿರಿಯ ನಾಗರೀಕರ ಮೇಲಿನ ಅಪರಾದಗಳಲ್ಲಿ ಕೂಡ ಗಮನಾರ್ಹ ಏರಿಕೆಯಾಗಿದ್ದು, ಕಾಂಗ್ರೆಸ್ ಸರ್ಕಾರವು ಹಿರಿಯ ನಾಗರೀಕರನ್ನು ರಕ್ಷಣೆ ಮಾಡುವಲ್ಲಿ ವಿಫಲರಾಗಿದೆ. ಬೆಳಗಾವಿಯಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ ಹಲ್ಲೆಮಾಡಿದ ಪ್ರಕರಣ ರಾಜ್ಯದಲಲಿ ಮಹಿಳೆಯರ ಸುರಕ್ಷತೆಯ ಬಗ್ಗೆ ಬೀತಿ ಮೂಡಿಸಿತ್ತು. ಹಾವೇರಿ ಜಿಲ್ಲೆಯಲ್ಲಿ ಮಹಿಳೆಯ ಮೇಲೆ ನಡೆದ ಮತ್ತೊಂದು ಸಾಮೂಹಿಕ ಅತ್ಯಾಚಾರ ಪ್ರಕರಣ ಇಡೀ ರಾಜ್ಯವನ್ನೇ ಬೆಚ್ಚಿ ಬೆಳೆಸಿದೆ. ಸಂವಿಧಾನ ಕುರಿತಾದ ಸಂವಾದಕ್ಕೆ ಪ್ರತ್ಯೇಕತಾವಾದವನ್ನು ಬೆಂಬಲಿಸುವರನ್ನು ಆಹ್ವಾನಿಸಲಾಗಿದೆ ಎಂದು ದೂರಿದರು.

ವಿಧಾನಸೌಧದಲ್ಲಿಯೇ ರಾಜ್ಯಸಭಾ ಸದಸ್ಯರ ನಾಸಿರ್ ಹುಸೇನ್ ಬೆಂಬಲಿಗರು ಪಾಕಿಸ್ತಾನ ಪರ ಘೋಷಣೆ, ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದ ಬಾಂಬ್ ದಾಳಿ ಪ್ರಕರಣಗಳು ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ರಾಜ್ಯ ಉಗ್ರರ ಅಡಗುತಾಣವಾಗಿರುವುದುಕ್ಕೆ ಸಾಕ್ಷಿಯಾಗಿದೆ ಎಂದರು.

ಬಿಜೆಪಿ ಜಿಲ್ಲಾ ವಕ್ತಾರ ಕಾಡಹಳ್ಳಿ ಕುಮಾರ್ ಮಾತನಾಡಿ, ಶ್ಯಾಡೋ ಸಿಎಂ ಡಾ. ಯತೀಂದ್ರ ಸಿದ್ದರಾಮಯ್ಯ ಕೇಂದ್ರ ಗೃಹ ಸಚಿವರಾದ ಅಮಿತಾ ಶಾ ವಿರುದ್ಧ ನೀಡಿರುವ ಹೇಳಿಕೆಯನ್ನು ಬಿಜೆಪಿ ತೀವ್ರವಾಗಿ ಖಂಡಿಸಿದ್ದಾರೆ. ಯತೀಂದ್ರ ಸಿದ್ದರಾಮಯ್ಯ ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಅವರ ಮೇಲೆ ಇದ್ದ ಎಲ್ಲಾ ಪ್ರಕರಣಗಳು ಖುಲಾಸೆಯಾಗಿವೆ. ರಾಜಕೀಯ ದುರುದ್ದೇಶದಿಂದ ನೀಡಿರುವ ದೂರು ಎಂಬುವುದು ಸಾಬೀತಾಗಿದೆ. ಇಂಥ ಪದ ಬಳಕೆ ಮಾಡಿರುವ ಯತೀಂದ್ರ ಕೂಡಲೇ ದೇಶದ ಜನರ ಕ್ಷಮೆಯಾಚನೆ ಮಾಡಬೇಕು ಎಂದು ಒತ್ತಾಯಿಸಿದರು.

ಅಲ್ಲದೇ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಅವರು ಜಿಲ್ಲೆಯ ಬರಪರಿಸ್ಥಿತಿಯನ್ನು ನಿರ್ವಹಿಸುವಲ್ಲಿ ವಿಫಲರಾಗಿದ್ದು, ಉಸ್ತುವಾರಿ ಸಚಿವರಾಗಿ ಒಂದು ಕೆಡಿಪಿ ಮೀಟಿಂಗ್ ಮಾಡದೇ ನೆಪ ಮಾತ್ರಕ್ಕೆ ಸಚಿವರಾಗಿದ್ದು, ಅನ್ನ ಭಾಗ್ಯ ಯೋಜನೆಯ ಅಕ್ಕಿಯನ್ನೇ ಜನರಿಗೆ ನೀಡುತ್ತಿಲ್ಲ. ಅದರ ಬದಲು ಕಾಂಗ್ರೆಸ್ ಸರ್ಕಾರ ಹಣ ನೀಡುತ್ತಿದೆ ಎಂಬ ಪರಿಜ್ಞಾನವು ಇಲ್ಲದೇ ಅನ್ನ ಭಾಗ್ಯದ ಅಕ್ಕಿಗೆ ಹರಿಶಿನ ಬೆರೆಸಿ ಬಿಜೆಪಿಯವರು ಮಂತ್ರಾಕ್ಷತೆ ನೀಡಿದ್ದಾರೆ ಎಂದು ಹೇಳಿಕೆ ನೀಡಿರುವುದು ಕಾಂಗ್ರೆಸ್ ಪಕ್ಷದ ತೃಷ್ಟೀಕರಣ ರಾಜಕಾರಣ ಮಾಡುತ್ತಿದೆ ಎಂಬುವುದಕ್ಕೆ ಸಾಕ್ಷಿಯಾಗಿದೆ ಎಂದರು.

ಗೋಷ್ಠಿಯಲ್ಲಿ ಬಿಜೆಪಿ ನಿಕಟಪೂರ್ವ ಜಿಲ್ಲಾಧ್ಯಕ್ಷ ಜಿ. ನಾರಾಯಣ ಪ್ರಸಾದ್, ಜಿಲ್ಲಾ ಸಹ ವಕ್ತಾರ ಮಂಜುನಾಥ್, ಮಾಧ್ಯಮ ಪ್ರಮುಖ್ ವಿರೇಂದ್ರ ಇದ್ದರು.

# ಚಾಮರಾಜನಗರ ಲೋಕಸಭಾ ಕ್ಷೇತ್ರ: 249 ಮತಕೇಂದ್ರ, 25 ಸೆಕ್ಟರ್ ಅಧಿಕಾರಿ

**ಗುಂಡ್ಲುಪೇಟೆ:** ಈ ಬಾರಿಯ ಲೋಕಸಭಾ ಚುನಾವಣೆಗೆ ತಾಲ್ಲೂಕಿನಲ್ಲಿ ಅಗತ್ಯ ಸಿದ್ದತೆ ಕೈಗೊಳ್ಳಲಾಗಿದೆ. 249 ಮತಕೇಂದ್ರಗಳಿದ್ದು, 25 ಸೆಕ್ಟರ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ? ಎಂದು ಸಹಾಯಕ ಚುನಾವಣಾಧಿಕಾರಿ ಡಾ.ದಯಾನಂದ ಹೇಳಿದರು. ಪಟ್ಟಣದ ತಾಲ್ಲೂಕು ಕಚೇರಿಯ ಸಭಾಂಗಣದಲ್ಲಿ ಗುರುವಾರ ನಡೆದ ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣಾ ಪೂರ್ವಸಿದ್ಧತೆ ಕುರಿತು ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದರು. ಚಾಮರಾಜನಗರ ಲೋಕಸಭಾ ವ್ಯಾಪ್ತಿಯ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 249 ಮತದಾನ ಕೇಂದ್ರಗಳನ್ನು ತೆರೆಯಲಾಗಿದೆ, ಪುರುಷರು 1,05, 346, ಮತ್ತು ಮಹಿಳೆಯರು1,09,954 ಹಾಗೂ 16 ತೃತೀಯ ಲಿಂಗಿಗಳು ,3729 ಹಿರಿಯ ನಾಗರೀಕರು ಮತ್ತು 3629 ಅಂಗವಿಕಲರೂ ಸೇರಿ ಒಟ್ಟು 2,15,316 ಮಂದಿ ಮತದಾನದ ಹಕ್ಕು ಹೊಂದಿದ್ದಾರೆ ಎಂದು ತಿಳಿಸಿದರು. ಹಿರಿಯ ನಾಗರೀಕರಿಗೆ ಮನೆಯಿಂದಲೇ ಮತದಾನ ಮಾಡುವ ಅವಕಾಶ ಕಲ್ಪಿಸಲಾಗಿದೆ. ಇದರಲ್ಲಿ ಕೆಲವರು ಮತಗಟ್ಟೆಗೆ ಬಂದು ಮತದಾನ ಮಾಡುವುದಾಗಿ ತಿಳಿಸಿದ್ದಾರೆ, ಹಲವರಿಗೆ ಮನೆಯಲ್ಲಿ ಮತದಾನ ಮಾಡಲು ಕೋರಿದ್ದಾರೆ. ಇವರಿಗೆ ಮತದಾನಕ್ಕೆ ಸಕಲ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು. ಈಗಾಗಲೆ ಮೂರು ಚೆಕ್ ಪೋಸ್ಟ್ ನಿರ್ಮಾಣ ಮಾಡಲಾಗಿದೆ. ಹಿರಿಕಾಟಿ, ಕೇರಳ ಗಡಿ ಮದ್ದೂರು ಮತ್ತು ತಮಿಳುನಾಡಿನ ಕೆಕ್ಕನಹಳ್ಳ ಚೆಕ್ ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ತಪಾಸಣೆ ಆರಂಭಿಸಲಾಗಿದೆ. ಜೊತೆಗೆ ಮೂಲಭೂತ ಸೌಕರ್ಯ ಒದಗಿಸಲಾಗಿದೆ, ತಪಾಸಣೆಗೆ ಮೂರು ತಂಡ ನೇಮಿಸಲಾಗಿದ್ದು ಅಕ್ರಮ ಹಣ ಸಾಗಣೆ ಸೇರಿ ಚುನಾವಣಾ ಅಕ್ರಮ ಕಂಡು ಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದರು. ಯಾವುದೇ ರಾಜಕೀಯ ಪಕ್ಷಗಳು ಸಭೆ ಸಮಾರಂಭ ನಡೆಸಲು ಅನುಮತಿ ಕಡ್ಡಾಯವಾಗಿದ್ದು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ನಂತರ ಚುನಾವಣಾ ಅಧಿಕಾರಿಗಳು ಪರಿಶೀಲಿಸಿ ಅನುಮತಿ ನೀಡಲಿದ್ದಾರೆ, ರಾಜಕೀಯೇತರ ಚಟುವಟಿಕೆಗಳಾದ ಜಾತ್ರೆ, ದೇವಸ್ಥಾನ, ಉತ್ಸವ, ಮದುವೆ ಇನ್ನಿತರ ಕಾರ್ಯಕ್ರಮಗಳಿಗೆ ಅನುಮತಿ ಅವಶ್ಯಕತೆಯಿಲ್ಲ. ಅದಾಗಿಯೂ ಅವಶ್ಯಕತೆ ಇದ್ದರೆ ನೇರವಾಗಿ ಅರ್ಜಿ ಮೂಲಕ ಅನುಮತಿ ನೀಡಲಾಗುವುದು. ಇದರಲ್ಲಿ ರಾಜಕೀಯ ಚಟುವಟಿಕೆ ಮಾಡುವಂತಿಲ್ಲ ಹಾಗೂ ಸಾರ್ವಜನಿಕರು ಚುನಾವಣಾ ಸಂಬಂಧ ಯಾವುದೇ ದೂರುಗಳಿದ್ದರೂ ದೂರವಾಣಿ ಸಂಖ್ಯೆ 08229-222225ಗೆ ಸಂಪರ್ಕಿಸಬಹುದು. ಪೊಲೀಸರ 112ಗೆ ಕೂಡ ಸಂಪರ್ಕಿಸಬಹುದು ಎಂದು ಹೇಳಿದರು. ತಹಸೀಲ್ದಾರ್ ಮಂಜುನಾಥ್ ಮಾತನಾಡಿ,?ತಾಲ್ಲೂಕು ಆಡಳಿತದಿಂದ ಈಗಾಗಲೆ ಚುನಾವಣೆಗೆ ಸಕಲ ಸಿದ್ದತೆ ಕೈಗೊಳ್ಳಲಾಗಿದೆ 249 ಬೂತ್ ಗಳಿದ್ದು ಪ್ರತಿ 10 ಬೂತ್‌ಗೆ ಒಬ್ಬ ಸೆಕ್ಟರ್‌ನಂತೆ 25 ಸೆಕ್ಟರ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಈಗಾಗಲೇ ಎಲ್ಲಾ ಬೂತ್ ಗಳಿಗೆ ಭೇಟಿಕೊಟ್ಟು ಪರಿಶೀಲಿಸಲಾಗಿದೆ. ಏಪ್ರಿಲ್ 5ರಂದು ಪೋಲಿಂಗ್ ಆಫೀಸರ್‌ಗಳಿಗೆ ಮೊದಲ ಹಂತದ ತರಬೇತಿ ನೀಡಲಾಗುತ್ತದೆ, ಬೊಮ್ಮಲಾಪುರ ಮತಗಟ್ಟೆ 01 ಅತಿಸೂಕ್ಷ್ಮ ಬೂತ್ ಹಿನ್ನೆಲೆಯಲ್ಲಿ ಈಗಾಗಲೇ ಸಭೆ ನಡೆಸಿ ಶಾಂತಿಯುತ ಮತದಾನಕ್ಕೆ ಸೂಚಿಸಲಾಗಿದೆ. ಜೊತೆಗೆ ಚುನಾವಣೆ ಹಾಗೂ ಕಾನೂನು ಸುವ್ಯವಸ್ಥೆಗೆ ತೊಂದರೆಯಾಗದಂತೆ ಎಲ್ಲಾ ಇಲಾಖೆಗಳ ಜೊತೆಗೂಡಿ ವ್ಯವಸ್ಥಿತವಾಗಿ ಚುನಾವಣಾ ನಡೆಸಲು ಸಿದ್ದತೆ ನಡೆಸಲಾಗಿದೆ ಎಂದು ತಿಳಿಸಿದರು. ಈ ವೇಳೆ ಪೊಲೀಸ್ ಇನ್ಸ್‌ಪೆಕ್ಟರ್ ಪರಶಿವಮೂರ್ತಿ, ಬೇಗೂರು ವಲಯದ ವೃತ್ತ ನಿರೀಕ್ಷಕ ವನರಾಜು ಉಪಸ್ಥಿತರಿದ್ದರು.



# ತೀವ್ರ ಹೃದಯಾಘಾತದಿಂದ ತಮಿಳಿನ ಖ್ಯಾತ ಖಳನಟ ಡೇನಿಯಲ್ ಬಾಲಾಜಿ ನಿಧನ

**ಚೆನ್ನೈ:** ತಮಿಳು ನಟ ಡೇನಿಯಲ್ ಬಾಲಾಜಿ ತೀವ್ರ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ. ಅವರಿಗೆ 48 ವರ್ಷ ವಯಸ್ಸಾಗಿತ್ತು. ವೆಟ್ಟೈಯಾಡು ವಿಲಯಾಡುವಿನಲ್ಲಿ ಅಮುಧನ್, ವಡಾ ಚೆನ್ನೈನ ತಂಬಿ ಪಾತ್ರಗಳಿಂದ ಡೇನಿಯಲ್ ಬಾಲಾಜಿ ಹೆಸರುವಾಸಿಯಾಗಿದ್ದಾರೆ, ತಮ್ಮ ವೈವಿಧ್ಯಯ ಪ್ರತಿಭೆ, ಬೆಳ್ಳಿತೆರೆ ಮೇಲೆ ಮನಮೋಹಕ ವರ್ಚಸ್ಸಿಗೆ ಹೆಸರುವಾಸಿಯಾಗಿದ್ದ ನಟನಿಗೆ ಕಳೆದ ರಾತ್ರಿ ತೀವ್ರ ಎದೆನೋವು ಕಾಣಿಸಿಕೊಂಡಿತು. ಕೂಡಲೇ ಅವರನ್ನು ಚೆನ್ನೈನ ಕೊಟ್ಟಿವಾಕಂನಲ್ಲಿ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಹೃದಯ ಸ್ತಂಭನದಿಂದ ಮೃತಪಟ್ಟಿದ್ದಾರೆ. ರಾಕಿಂಗ್ ಸ್ಟಾರ್ ಯಶ್ ಅಭಿನಯದ ಕಿರಾತಕ ಚಿತ್ರದಲ್ಲಿ ವಿಲನ್ ಆಗಿ ನಟಿಸುವ ಮೂಲಕ ಕನ್ನಡಿಗರ ಮನೆಮಾತಾಗಿದ್ದ ನಟ ಡೇನಿಯಲ್ ಬಾಲಾಜಿ ಬಹು ಭಾಷಾನಟನಾಗಿಯೂ ಗುರುತಿಸಿಕೊಂಡಿದ್ದರು. ಇಂದು ಅಂತಿಮ ದರ್ಶನ, ಅಂತ್ಯಕ್ರಿಯೆ: ಡೇನಿಯಲ್ ಅವರ ಪಾರ್ಥಿವ ಶರೀರವನ್ನು ಇಂದು ಪುರಸೈವಾಲ್ಕಂನಲ್ಲಿರುವ ಅವರ ನಿವಾಸದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗುತ್ತಿದೆ. ಇಂದು ಸಂಜೆ ಅಂತ್ಯಕ್ರಿಯೆ ನೆರವೇರಲಿದೆ. ಅವರ ನಿಧನದ ಸುದ್ದಿ ತಮಿಳು ಚಿತ್ರರಂಗದಲ್ಲಿ ಮತ್ತು ಅವರ ಅಭಿಮಾನಿಗಳಿಗೆ ತೀವ್ರ ಆಘಾತ ಮತ್ತು ದುಃಖವನ್ನು ಉಂಟುಮಾಡಿದೆ. ಧಾರಾವಾಹಿ ಮೂಲಕ ತಮ್ಮ ಸಿನಿವೃತ್ತಿಯನ್ನು ಆರಂಭಿಸಿದ ಬಾಲಾಜಿ ಅವರು ಚಿತ್ತಿ ಧಾರಾವಾಹಿಯಲ್ಲಿ ಮಾಡಿದ ಡೇನಿಯಲ್ ಪಾತ್ರ ವ್ಯಾಪಕ ಮನ್ನಣೆ ಮತ್ತು ಜನಮೆಚ್ಚುಗೆ ಗಳಿಸಿ ಆ ಪಾತ್ರ ಮೂಲಕವೇ ಅವರು ನಂತರ ಡೇನಿಯಲ್ ಬಾಲಾಜಿ ಎಂದು ಜನಪ್ರಿಯರಾದರು. ನಟನೆ ಹೊರತುಪಡಿಸಿ ಬಾಲಾಜಿ ದೇವರ ಮೇಲೆ ಅಪಾರ ನಂಬಿಕೆ ಉಳ್ಳವರಾಗಿದ್ದರು. ಅವಡಿಯಲ್ಲಿ ದೇವಾಲಯವನ್ನು ನಿರ್ಮಿಸುತ್ತಿದ್ದರು ಎಂದು ಹೇಳಲಾಗುತ್ತಿದೆ.

# ಆಯುಷ್ ಆಯುರ್ವೇದದ ಯೋಗ ಬಹುಮುಖ್ಯ: ಡಾ.ಸುಮನಾ



**ತಿಪಟೂರು:** ಹೆಣ್ಣು ಸಂಸಾರದ ಕಣ್ಣು ಹಾಗೆಯೇ ಕಿವಿಯೂ ಕೂಡ ಮನೆಯ ಇನ್ನಿತರ ಸದಸ್ಯರ ಆರೋಗ್ಯವನ್ನು ಸಮತೋಲನದಿಂದ ಕಾಪಾಡುವಲ್ಲಿ ಹಾಗೂ ತನ್ನ ದೈಹಿಕ-ಮಾನಸಿಕ-ಸಾಮಾಜಿಕ ನೈತಿಕ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಆಯುಷ್ ಆಯುರ್ವೇದದ ಯೋಗ ಬಹುಮುಖ್ಯವಾದದ್ದು ಎಂದು ಕೊನೇಹಳ್ಳಿ ಆಯುಷ್ ಇಲಾಖೆ ವೈದ್ಯಾಧಿಕಾರಿ ಡಾ.ಸುಮನಾ ತಿಳಿಸಿದರು.

ತಾಲ್ಲೂಕಿನ ಅರಳಗುಪ್ಪೆಯ ಕೊಳ್ಳಿಹಟ್ಟಿ ಗ್ರಾಮದಲ್ಲಿ ಟ್ರೈಡ್ ಸಂಸ್ಥೆಯ ವತಿಯಿಂದ ಆಯೋಜನೆ ಮಾಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರು ತಮ್ಮ ದಿನಚರ್ಯ ಮತ್ತು ಋತುಚರ್ಯದೊಂದಿಗೆ ಹಿತಮಿತವಾದ ಆಹಾರವನ್ನು ಸೇವಿಸುತ್ತಾ ದಿನನಿತ್ಯ ಯೋಗ, ಧ್ಯಾನ ಪ್ರಾಣಾಯಾಮಗಳನ್ನು ಆಚರಿಸುತ್ತಾ ಬಂದಲ್ಲಿ ಮಹಿಳೆಯು ಸರ್ವಾಂಗೀಣ ಅಭಿವೃದ್ಧಿ ಹೊಂದಲು ಸಾಧ್ಯ, ಈ ಬಾರಿಯ ಮಹಿಳಾ ದಿನಾಚರಣೆಯ ಘೋಷಣೆಯಂತೆ ಎಲ್ಲಾ ಬಗೆಯ ಶಕ್ತಿಗಳನ್ನು ಅಭಿವೃದ್ಧಿಪಡಿಸುತ್ತಾ ಮಹಿಳೆಯನ್ನು ಅಭಿವೃದ್ಧಿಪಥದಲ್ಲಿ ಕೊಂಡೊಯ್ಯಲು ನಮ್ಮ ಭಾರತೀಯ ಆಯುಷ್ ಪದ್ಧತಿಯು ಬಹುಮುಖ್ಯ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ಬದುಕಿನಲ್ಲಿ ನಾವು ಬದುಕುತ್ತಾ ತಮ್ಮ ಸುತ್ತಲಿನವರನ್ನು ಬೆಳೆಸುತ್ತಾ, ತಾವು ಬೆಳೆಯುತ್ತಾ ಬದುಕಿನ ಜೀವನದ ಸಾರ್ಥಕತೆ ಕಂಡುಕೊಳ್ಳಬೇಕು, ಹಾಗೂ ಮಕ್ಕಳ ಪಾಲನೆ ಪೋಷಣೆಯಲ್ಲೂ ಆಯುರ್ವೇದ ಜ್ಞಾನ ಬಹು ಮುಖ್ಯ ಪಾತ್ರ ವಹಿಸುತ್ತದೆ, ಬೇಸಿಗೆಕಾಲದಲ್ಲಿ ಆಚರಿಸಬೇಕಾದಂತಹ ಆಹಾರ ವಿಹಾರದ ಬಗ್ಗೆ ಸುಲಭ ರೀತಿಯಲ್ಲಿ ಮನದಟ್ಟಾಗುವಂತೆ ಮಹಿಳೆಯರಿಗೆ ತಿಳಿಸಿಕೊಟ್ಟರು.

ದಿನನಿತ್ಯ ತಂಪಾದ ಪಾನೀಯಗಳಿಗಿಂತ ಸುಲಭವಾಗಿ ಜೀರ್ಣವಾಗುವ ಸ್ಥಳೀಯವಾಗಿ ದೊರಕುವ ದೇಶಿಯ ಮಜ್ಜಿಗೆ, ಎಳನೀರು ಸೌತೆಕಾಯಿ, ಕಲ್ಲಂಗಡಿ, ಬೇಲದಹಣ್ಣಿನ ಪಾನಕ, ಕೋಸಂಬರಿ, ನಿಂಬೆ ಶರಬತ್ತು, ದನಿಯಾ, ಜೀರಿಗೆ, ಸೊಗದೇ ಬೇರು, ಲಾವಂಚ ತಯಾರಿಸಿದ, ಮಣ್ಣಿನ ಮಡಿಕೆಯ ತಂಪಾದ ನೀರು ಬಳಸುವುದರಿಂದ ದೈಹಿಕ ಪರಿಶ್ರಮ ನಿವಾರಣೆಯಾಗುವುದಲ್ಲದೆ ಬೇಸಿಗೆ ಕಾಲದಲ್ಲಿ ಎದುರಿಸಬೇಕಾದಂತಹ ಅಜೀರ್ಣ, ಆಮ್ಲ ಪಿತ್ತ, ಚರ್ಮ ವ್ಯಾಧಿ, ಇತ್ಯಾದಿ ತೊಂದರೆಗಳನ್ನು ಸಹ ನಿವಾರಿಸಬಹುದು ಹಾಗೆಯೇ ಹಬ್ಬ ಹಾಗು ಅಭ್ಯಂಗದ ಆಚರಣೆಗಳ ಮಹತ್ವವನ್ನು ತಿಳಿಸುತ್ತಾ ಈ ಬಾರಿಯ ಯುಗಾದಿ ಹಬ್ಬದಲ್ಲಿ ಅಭ್ಯಂಜನ ಮಾಡಿಕೊಳ್ಳಬೇಕೆಂದು ಮತ್ತು ಪಿತ್ತಹರವಾದ ಬೇವು ಬೆಲ್ಲ ವನ್ನು ಸೇವಿಸಬೇಕೆಂದು ಕರೆ ನೀಡಿದರು.

> “ದಿನನಿತ್ಯ ತಂಪಾದ ಪಾನೀಯಗಳಿಗಿಂತ ಸುಲಭವಾಗಿ ಜೀರ್ಣವಾಗುವ ಸ್ಥಳೀಯವಾಗಿ ದೊರಕುವ ದೇಶಿಯ ಮಜ್ಜಿಗೆ, ಎಳನೀರು ಸೌತೆಕಾಯಿ, ಕಲ್ಲಂಗಡಿ, ಬೇಲದಹಣ್ಣಿನ ಪಾನಕ, ಕೋಸಂಬರಿ, ನಿಂಬೆ ಶರಬತ್ತು, ದನಿಯಾ, ಜೀರಿಗೆ, ಸೊಗದೇ ಬೇರು, ಲಾವಂಚ ತಯಾರಿಸಿದ, ಮಣ್ಣಿನ ಮಡಿಕೆಯ ತಂಪಾದ ನೀರು ಬಳಸುವುದರಿಂದ ದೈಹಿಕ ಪರಿಶ್ರಮ ನಿವಾರಣೆಯಾಗುವುದಲ್ಲದೆ ಬೇಸಿಗೆ ಕಾಲದಲ್ಲಿ ಎದುರಿಸಬೇಕಾದಂತಹ ಅಜೀರ್ಣ, ಆಮ್ಲ ಪಿತ್ತ, ಚರ್ಮ ವ್ಯಾಧಿ, ಇತ್ಯಾದಿ ತೊಂದರೆಗಳನ್ನು ಸಹ ನಿವಾರಿಸಬಹುದು.
>
> **ಡಾ.ಸುಮನಾ**
> ಆಯುಷ್ ವೈದ್ಯಾಧಿಕಾರಿಗಳು ಕೊನೇಹಳ್ಳಿ

ವಕೀಲರು ಹಾಗೂ ಸಾವಿತ್ರಿಬಾಯಿ ಪುಲೆ ಪ್ರಶಸ್ತಿ ಪುರಸ್ಕೃತೆ ಶ್ರೀಮತಿ ಶೋಭಾ ಜಯದೇವ ಮಾತನಾಡಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಇತಿಹಾಸ ಹಾಗೂ ಪ್ರಚಲಿತ ಮಹಿಳೆಯ ಸ್ಥಾನಮಾನಗಳ ಬಗ್ಗೆ ವಿಶ್ಲೇಷಿಸಿದರು ಮತ್ತು ಅರವಿಂದ್ ಗಾರ್ಮೆಂಟ್ಸ್ ಅರಸೀಕೆರೆ ಹಾಗೂ ಆರ್ ಕೆ ಗಾರ್ಮೆಂಟ್ಸ್ ತಿಪಟೂರಿನ ಮಹಿಳೆಯರಿಗೆ ಉದ್ಯೋಗದ ಮಾಹಿತಿಯನ್ನು ನೀಡಿದರು ಮತ್ತು ಉದ್ಯೋಗದ ಹಸ್ತವನ್ನು ಚಾಚಿದರು.

ತಿಪಟೂರಿನ ಎನ್.ಆರ್.ಎಲ್.ಎಂ ಅಧಿಕಾರಿ ಚಂದ್ರಕಲಾ ಮಾತನಾಡಿ ಮಹಿಳೆಯರ ಸಂಘದ ಸೌಲಭ್ಯಗಳು ಹಾಗೂ ಮಹಿಳಾ ಒಕ್ಕೂಟದ ವಿಷಯ ವಿಚಾರ ವಿನಿಮಯ ಮಾಡಿಕೊಂಡರು.

ತುಮಕೂರಿನ ನಬಾರ್ಡ್‌ನ ಡಿಡಿಎಂ ಶ್ರೀಮತಿ ಕೀರ್ತಿಪ್ರಭ ಸುಮಾರು ವರ್ಷಗಳಿಂದ ಟ್ರೈಟ್ ಸಂಸ್ಥೆಯ ಜೊತೆಗೂಡಿ ಸಮಾಜದ ಒಳಿತಿಗಾಗಿ ಮಹಿಳೆಯರ ಏಳಿಗೆಗಾಗಿ ಶ್ರಮಿಸುತ್ತಿದ್ದು, ಮಹಿಳೆಯರಿಗೆ ಸಂಘದ ಮೂಲಕ ಹೊಸ ಹೊಸ ಉದ್ಯೋಗಗಳನ್ನು ಸೃಷ್ಟಿಸುವಂತೆ ಮತ್ತು ರೈತಾಪಿ ವರ್ಗದವರಿಗೆ ನಬಾರ್ಡ್ ಸಂಸ್ಥೆಯ ನೆರವುಗಳ ಬಗ್ಗೆ ವಿಶ್ಲೇಷಣೆಯನ್ನು ನೀಡಿದರು.

ಕಾರ್ಯಕ್ರಮದ ಅದ್ಯಕ್ಷತೆಯನ್ನು ವಹಿಸಿ ಮಾತನಾಡಿದ ಟ್ರೈಡ್ ಸಂಸ್ಥೆಯ ಹಿರಿಯ ವ್ಯವಸ್ಥಾಪಕಿ ಸಮಿತಾ ಮುಂಬರುವ ದಿನಗಳಲ್ಲಿ ಸಂಸ್ಥೆಯು ಹೆಚ್ಚಿನ ರೀತಿಯಲ್ಲಿ ಸಮುದಾಯದಲ್ಲಿ ಕೆಲಸ ಮಾಡುತ್ತದೆ ಎಂದರು

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅದ್ಯಕ್ಷ ಬಿಎಸ್ ನಂದಕುಮಾರ್, ಟ್ರೈಡ್ ಸಂಸ್ಥೆಯ ವ್ಯವಸ್ಥಾಪಕ ಸುಮಾ ಎಚ್. ಎಮ್, ಚಿಕ್ಕನಾಯಕನಹಳ್ಳಿ ರವಿ, ಶೃತಿ ನಿಂಬರಗಿ ಮತ್ತು ಮಹಿಳಾ ತಂತ್ರಜ್ಞಾನ ಉದ್ಯಮ ವನದ ರಂಗಸ್ವಾಮಿ, ಪ್ರೇಮ್ ನಾಥ್, ಜ್ಯೋತಿ ಭಾಸ್ಕರ್ ಮತ್ತು ನಾಗರಾಜ್ ಉಪಸ್ಥಿತಿರಿದ್ದರು ಶ್ರೀಮತಿ ಶೈಲ ರವರು ಸ್ವಾಗತಿಸಿ, ವಂದಿಸಿದರು.

## ಸಂಜೆ ಟಿಪ್ಸ್



## ಪ್ಯಾನಸೋನಿಕ್ ಇಗ್ನಿಷನ್ ಪ್ರೋಗ್ರಾಮ್ ವಿಜೇತರಾಗಿ ಎನ್ಲೈಟ್ ಮತ್ತು ಕ್ಲೇರ್ಕೊ ಆಯ್ಕೆ

ಒಂದು ಮಂಚೂಣಿ ವೈವಿಧ್ಯಮಯ ತಂತ್ರಜ್ಞಾನ ಸಂಸ್ಥೆಯಾದ ಪ್ಯಾನಸೋನಿಕ್ ಲೈಫ್ ಸೊಲ್ಯೂಷನ್ಸ್ ಇಂಡಿಯಾ(ಕಐಖಐಓಆ), ಇಂದು ತನ್ನ ಪ್ಯಾನಸೋನಿಕ್ ಇಗ್ನಿಷನ್ ಯೋಜನೆಯ ವಿಜೇತರಾಗಿ ಎನ್ಲೈಟ್ ಮತ್ತು ಕ್ಲೇರ್ಕೊ ಆಯ್ಕೆ ಮಾಡಿತು. ಎಐ ಆಧರಿತ ವೈರ್ ಲೆಸ್ ಬಿಲ್ಡಿಂಗ್ ಮ್ಯಾನೇಜ್ಮೆಂಟ್ ಮೇಲೆ ಗಮನ ಹರಿಸುವ ಎನ್ಲೈಟ್ ಮತ್ತು ಐಓಟಿ ಆಧರಿತ ಸ್ಮಾರ್ಟ್ ಏರ್ ಪ್ಯುರಿಫಿಕೇಷನ್ ಕಡೆಗೆ ಗಮನ ಹರಿಸುವ ಕ್ಲೇರ್ಕೊ ಕಾರ್ಯತಾಂತ್ರಿಕ ಸೀರೀಸ್-ಂ ನಿಧಿಯನ್ನು ಸ್ವೀಕರಿಸುವ ಜೊತೆಗೆ ಅಭಿವೃದ್ಧಿ ಮತ್ತು ಅಳವಡಿಕೆಗಾಗಿ ಪ್ಯಾನಸೋನಿಕ್ ಬ್ಯುಸಿನೆಸ್ ತಂಡಗಳೊಂದಿಗೆ ಕಾರ್ಯನಿರ್ವಹಿಸುತ್ತಾರೆ. ವಾಣಿಜ್ಯ ಸ್ಥಳಗಳಿಗಾಗಿ ಎನರ್ಜಿ ಮ್ಯಾನೇಜ್ಮೆಂಟ್ ಸಿಸ್ಟಮ್ಸ್ ದೊಂದಿಗಿನ ನಿಜವಾದ ಸವಾಲುಗಳಿಗೆ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಕಳೆದ ವರ್ಷ ಪರಿಚಯವಾದ ಕೊರ್ಪೊರೇಟ್ ಇನೋವೇಷನ್ ಉಪಕ್ರಮವಾಗಿರುವ 100ಥ.ಗಿಅ ಇಗ್ನಿಷನ್ ಯೋಜನೆಯ ಜೊತೆಗಿನ ಪಾಲುದಾರಿಕೆಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಇಬ್ಬರು ಇಗ್ನೇಷನ್ ವಿಜೇತರು ಕೊರ್ಪೊರೇಟ್ ವೆಂಚರ್ ಕ್ಯಾಪಿಟಲ್ (ಅಗಿಅ) ನಿಧಿ ಮತ್ತು ಬ್ಯುಸಿನೆಸ್ ಸಹಯೋಗಗಳನ್ನು ಪಡೆದರೆ, ನಾಲ್ಕು ಆಕ್ಸಲರೇಟ್ ವಿಜೇತರಾದ ಸಸ್ಟ್ ಲ್ಯಾಬ್ಸ್, ಕ್ವಿಬೆಕ್ ವೆಂಚರ್ಸ್, ಸೆನ್ಸಿಬಲ್ ಮತ್ತು ಬ್ಲೇಜ್ ಬ್ಯುಸಿನೆಸ್ ಸಹಭಾಗಿತ್ವಕ್ಕಾಗಿ ಅವಕಾಶವನ್ನು ಪಡೆಯುವುದರೊಂದಿಗೆ ಪ್ಯಾನಸೋನಿಕ್ ಸಂಸ್ಥೆಗಳೊಂದಿಗೆ ಸಹಭಾಗಿತ್ವದಲ್ಲಿ ಪರಿಹಾರಗಳನ್ನು ಅಳವಡಿಸುವ ಅವಕಾಶ ಸಹ ಪಡೆಯುತ್ತಾರೆ. ಕಳೆದ ವರ್ಷ ಶಾರ್ಟ್-ಲಿಸ್ಟ್ ಮಾಡಿದ 12 ಸ್ಟಾರ್ಟ್ ಅಪ್ ಗಳೆಂದರೆ ಸಸ್ಟ್ ಲ್ಯಾಬ್ಸ್, ಮಿನಿಯನ್ ಲ್ಯಾಬ್ಸ್, ಕ್ಲೈರ್ಕೊ, ಎನ್ಲೈಟ್ ಜೋಧ್ಯಾ, ಲಿವಿಂಗ್ ಥಿಂಗ್ಸ್, ಸೆನ್ಸಿಬಲ್, ಕಾರ್ಬನ್ ಮೈನಸ್, ನೆಬೆಸ್ಕಿ, ಕ್ವಿಬೆಕ್ ವೆಂಚರ್, ಬ್ಲೇಜ್ ಮತ್ತು ಸಿಂಬಲೈನ್.

## ಅವಲಕ್ಕಿ ಪಾಯಸ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ದಪ್ಪ ಅವಲಕ್ಕಿ 200 ಗ್ರಾಂ, ಬೆಲ್ಲ 1/4 ಕೆಜಿ, ಹಾಲು 1/2 ಲೀಟರ್, ಏಲಕ್ಕಿ 4, ದ್ರಾಕ್ಷಿ ಗೋಡಂಬಿ 4 ರಿಂದ 5, ಕಾಯಿತುರಿ ಹಾಲು 1/2 ಲೋಟ

### ಮಾಡುವ ವಿಧಾನ

ಪಾತ್ರೆಯಲ್ಲಿ ಹಾಲನ್ನು ಹಾಕಿ ಕಾದ ನಂತರ ಅದಕ್ಕೆ ಬೆಲ್ಲವನ್ನು ಹಾಕಿ. ಹಾಲು ಕುದಿಯಲು ಪ್ರಾರಂಭಿಸಿದಾಗ ಮೊದಲೆ ಹುರಿದಿಟ್ಟುಕೊಂಡ ಅವಲಕ್ಕಿಯನ್ನು ಹಾಕಿ ತಳಹಿಡಿಯದಂತೆ ಕಲೆಸುತ್ತಾ ಇರಿ. ಅವಲಕ್ಕಿ ಬೆಂದ ನಂತರ ಕಾಯಿತುರಿಯನ್ನು ಮಿಕ್ಸಿಯಲ್ಲಿ ಹಾಕಿ ನುಣ್ಣಗೆ ರುಬ್ಬಿ ಸೊಸಿ ಹಾಲನ್ನು ತೆಗೆದು, ಅದನ್ನು ಕುದಿಯುತ್ತಿರುವ ಮಿಶ್ರಣಕ್ಕೆ ಹಾಕಿ ಐದು ನಿಮಿಷ ಕುದಿಸಿರಿ. ನಂತರ ಒಲೆಯಿಂದ ಇಳಿಸಿ ತುಪ್ಪದಲ್ಲಿ ಹುರಿದ ಗೋಡಂಬಿ, ದ್ರಾಕ್ಷಿ ಹಾಗೂ ಪುಡಿಮಾಡಿದ ಏಲಕ್ಕಿಯನ್ನು ಹಾಕಿದರೆ ಅವಲಕ್ಕಿ ಪಾಯಸ ಸವಿಯಲು ಸಿದ್ದ.

# ರಜನಿಕಾಂತ್ 171ನೇ ಸಿನಿಮಾ ಪೋಸ್ಟರ್ ಔಟ್









ದಕ್ಷಿಣ ಭಾರತದ ಸೂಪರ್ ಸ್ಟಾರ್ ರಜನಿಕಾಂತ್ ಅವರ ಹೊಸ ಚಿತ್ರದ ಪೋಸ್ಟರ್ ರಿಲೀಸ್ ಆಗಿದ್ದು, ಅಭಿಮಾನಿಗಳು ಫುಲ್ ಖುಷ್ ಆಗಿದ್ದಾರೆ. ಆ ಸಿನಿಮಾ ಯಾವುದು, ನಿರ್ದೇಶಕ, ಸಂಗೀತ ನಿರ್ದೇಶಕ ಯಾರು ಎಂಬ ಮಾಹಿತಿ ಇಲ್ಲಿದೆ.

ಖೈದಿ, ವಿಕ್ರಮ್ ನಂತಹ ಸೂಪರ್ ಹಿಟ್ ಚಿತ್ರಗಳನ್ನು ನೀಡಿದ ಲೋಕೇಶ್ ಕನಗರಾಜ್ ಈ ಚಿತ್ರಕ್ಕೆ ಆಯಕ್ಷನ್-ಕಟ್ ಹೇಳುತ್ತಿದ್ದಾರೆ.

ಇದು ರಜನಿಕಾಂತ್ ಅವರ 171ನೇ ಸಿನಿಮಾ ಆಗಿದ್ದು, ಈ ಚಿತ್ರಕ್ಕೆ ಇನ್ನೂ ಶೀರ್ಷಿಕೆ ಅಂತಿಮವಾಗಿಲ್ಲ. ಸದ್ಯಕ್ಕೆ 'ತಲೈವರ್ 171' ಎಂದು ಕರೆಯಲಾಗುತ್ತಿದೆ. ಇದೀಗ ಈ ಚಿತ್ರದ ಪೋಸ್ಟರ್ ಅನ್ನು ನಿರ್ದೇಶಕ ಲೋಕೇಶ್ ಕನಗರಾಜ್ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ.

ಲೋಕೇಶ್ ಕನಗರಾಜ್ ಸಿನಿಮಾಗಳು ವಿಭಿನ್ನ ಸ್ಕ್ರೀನ್ ಪ್ಲೇ, ಕಥೆ ಹಾಗೂ ಹಾಡುಗಳನ್ನು ಹೊಂದಿರುತ್ತವೆ. ಅವರ ಈ ಹಿಂದಿನ ಎರಡು ಚಿತ್ರಗಳಾದ ಖೈದಿ ಹಾಗೂ ವಿಕ್ರಮ್ ಸಿನಿಮಾಗಳು ಬಹಳ ಹೈಪ್ ಹುಟ್ಟಿಸಿದ್ದ ಸಿನಿಮಾಗಳು. ಈ ಎರಡೂ ಚಿತ್ರಗಳು ಹಲವು ಭಾಷೆಗಳಲ್ಲಿ ಡಬ್ ಆಗಿದ್ದವು. ಹೀಗಾಗಿ ಸಿನಿಮಾ ಪ್ರೇಮಿಗಳಲ್ಲಿ ಲೋಕೇಶ್ ಕನಗರಾಜ್ ಮತ್ತು ರಜನಿಕಾಂತ್ ಅವರ ಕಾಂಬಿನೇಷನ್ ನ ಈ 'ತಲೈವರ್ 171' ಸಿನಿಮಾದ ಮೇಲೆ ಅಭಿಮಾನಿಗಳಿಗೆ ಸಖತ್ ನಿರೀಕ್ಷೆ ಇದೆ.

ಈ ಸಿನಿಮಾದ ಪೋಸ್ಟರ್ ಕೂಡ ಅಭಿಮಾನಿಗಳಲ್ಲಿ ಭಾರೀ ನಿರೀಕ್ಷೆ ಹುಟ್ಟಿಸಿದೆ. ಪೋಸ್ಟರ್ ನಲ್ಲಿ ರಜನಿಕಾಂತ್ ಅವರ ಕೈಗೆ ಬೇಡಿ ಹಾಕಲಾಗಿದೆ. ಆದರೆ ಅದು ಚಿನ್ನದ ವಾಚ್ನಿಂದ ಮಾಡಿದ ಬೇಡಿ! ಅದನ್ನು ನೋಡಿದ ಅಭಿಮಾನಿಗಳಿಗೆ ಸಿನಿಮಾದ ಕಥೆಯ ಬಗ್ಗೆ ಕೌತುಕ ಮೂಡಿದೆ. ಅಲ್ಲದೆ, ಈ ಸಿನಿಮಾಕ್ಕೂ ಖೈದಿ ಹಾಗೂ ವಿಕ್ರಮ್ ಚಿತ್ರಗಳಿಗೆ ಸಂಗೀತ ನೀಡಿದ್ದ ಅನಿರುದ್ಧ್ ರವಿಚಂದ್ರರ್ ಸಂಗೀತ ಮಾಡುತ್ತಿದ್ದಾರೆ ಎಂದು ಹೇಳಲಾಗಿದೆ.

**ಏಪ್ರಿಲ್ 22ಕ್ಕೆ ಶೀರ್ಷಿಕೆ ಅನಾವರಣ:** ಈ ಪೋಸ್ಟರ್ನ ಜೊತೆಯಲ್ಲಿ ನಿರ್ದೇಶಕ ಲೋಕೇಶ್ ಕನಗರಾಜ್ ಅವರು ಒಂದು ಗುಡ್ ನ್ಯೂಸ್ ನೀಡಿದ್ದಾರೆ. ಅದೇನೆಂದರೆ, ಏಪ್ರಿಲ್ 22ರಂದು ಈ ಸಿನಿಮಾದ ಶೀರ್ಷಿಕೆ ಅನಾವರಣ ಆಗಲಿದೆ ಎಂದು ಅವರು ತಿಳಿಸಿದ್ದಾರೆ. ದೊಡ್ಡ ಬಜೆಟ್ನಲ್ಲಿ ಈ ಸಿನಿಮಾ ನಿರ್ಮಾಣ ಆಗುತ್ತಿದೆ. ಪ್ರತಿಷ್ಠಿತ 'ಸನ್ ಪಿಕ್ಚರ್ಸ್' ಸಂಸ್ಥೆಯು 'ತಲೈವರ್ 171' ಸಿನಿಮಾವನ್ನು ನಿರ್ಮಾಣ ಮಾಡುತ್ತಿದೆ.

# ಕೀವಿ ಹಣ್ಣಿನ ಲಾಭ ಎಷ್ಟಿದೆ ಗೊತ್ತಾ?

### ಹೆಲ್ತ್ ಟಿಪ್ಸ್



ಕೀವಿಯಲ್ಲಿ ವಿಟಮಿನ್ ಸಿ ಬೇರೆಲ್ಲಾ ಹಣ್ಣುಗಳಿಗಿಂತ ಅಧಿಕವಾಗಿದೆ, ಇದು ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ, ನಿಮಗೆ ಯಾವುದಾದರು ಗಾಯವಿದ್ದರೆ ಬಹುಬೇಗ ವಾಸಿಯಾಗಬೇಕಾದರೆ ಕೀವಿ ಹಣ್ಣನ್ನು ಸೇವಿಸಬೇಕು. ಜೀವಕೋಶಗಳಿಗೆ ಹಾನಿ ಮಾಡುವ ಮತ್ತು ದೀರ್ಘಕಾಲದ ಕಾಯಿಲೆಗಳಿಗೆ ಕಾರಣವಾಗುವ ಸ್ವತಂತ್ರ ರಾಡಿಕಲ್ಗಳ ಕಾರ್ಯಕ್ಕೆ ಕಡಿವಾಣ ಹಾಕಲಿದೆ. ಕೀವಿಯಲ್ಲಿ ಅತ್ಯಧಿಕವಾದ ನಾರಿನ ಅಂಶವಿದೆ. ಮಲಬದ್ಧತೆಯನ್ನು ತಡೆಗಟ್ಟುವ ಮೂಲಕ ಜೀರ್ಣಕಾರಿ ಆರೋಗ್ಯವನ್ನು ಉತ್ತೇಜಿಸುತ್ತದೆ, ಕರುಳಿನ ಕ್ರಮಬದ್ಧತೆಯನ್ನು ಸುಧಾರಿಸುತ್ತದೆ ಮತ್ತು ಆರೋಗ್ಯಕರ ಕರುಳಿನ ಸೂಕ್ಷ್ಮಜೀವಿಯನ್ನು ಬೆಂಬಲಿಸುತ್ತದೆ. ಫೈಬರ್ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಮತ್ತು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡುತ್ತದೆ. ಹೆಚ್ಚಿನ ಫೈಬರ್ ಅಂಶವು ಪೊಟ್ಯಾಸಿಯಮ್ ಮತ್ತು ವಿಟಮಿನ್ ಸಿ ಮತ್ತು ಪಾಲಿಫಿನಾಲ್ಗಳಂತಹ ಉತ್ಕರ್ಷಣ ನಿರೋಧಕಗಳ ಹೊಂದಿರುವ ಕೀವಿ ಹಣ್ಣು ರಕ್ತದೊತ್ತಡವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡುತ್ತದೆ ಮತ್ತು ಆರೋಗ್ಯಕರ ರಕ್ತನಾಳದ ಕಾರ್ಯವನ್ನು ಬೆಂಬಲಿಸುವ ಮೂಲಕ ಮತ್ತು ಉರಿಯೂತವನ್ನು ಕಡಿಮೆ ಮಾಡುವ ಮೂಲಕ ಹೃದ್ರೋಗದ ಅಪಾಯವನ್ನು ಕಡಿಮೆ ಮಾಡುತ್ತದೆ. ಕಿವಿಯಲ್ಲಿ ಕಂಡುಬರುವ ಫೈಬರ್, ಕಿಣ್ವಗಳು ಹೀರಿಕೊಳ್ಳುವಿಕೆಯಲ್ಲಿ ಸಹಾಯ ಮಾಡುವ ಮೂಲಕ ಜೀರ್ಣಕ್ರಿಯೆಯನ್ನು ಬೆಂಬಲಿಸುತ್ತದೆ, ಪ್ರಯೋಜನಕಾರಿ ಕರುಳಿನ ಬ್ಯಾಕ್ಟೀರಿಯಾದ ಬೆಳವಣಿಗೆಯನ್ನು ಉತ್ತೇಜಿಸುತ್ತದೆ ಮತ್ತು ಜಠರಕ್ಕೆ ಸಂಬಂಧಿಸಿದ ಸಮಸ್ಯೆಗಳ ನಿವಾರಿಸಲಿದೆ.

ಕೀವಿಯಲ್ಲಿ ಲುಟೀನ್ ಮತ್ತು ಜಿಯಾಕ್ಸಾಂಥಿನ್ ಸಮೃದ್ಧ ವಿಟಮಿನ್ ಕಾರಕಗಳಿವೆ, ಇದು ಹಾನಿಕಾರಕ ನೀಲಿ ಬೆಳಕನ್ನು ಫಿಲ್ಟರ್ ಮಾಡುವ ಮೂಲಕ ಕಣ್ಣಿನ ಆರೋಗ್ಯವನ್ನು ಬೆಂಬಲಿಸಲಿದೆ. ವಯಸ್ಸಿಗೆ ಸಂಬಂಧಿಸಿದ ಮ್ಯಾಕ್ಯುಲರ್ ಡಿಜೆನರೇಶನ್ ಮತ್ತು ಕಣ್ಣಿನ ಪೊರೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

ಕೀವಿಯಲ್ಲಿರುವ ವಿಟಮಿನ್ ಸಿ, ವಿಟಮಿನ್ ಇ ಮತ್ತು ಇತರ ಉತ್ಕರ್ಷಣ ನಿರೋಧಕಗಳ ಸಂಯೋಜನೆಯು ಕಾಲಜನ್ ಉತ್ಪಾದನೆಯನ್ನು ಉತ್ತೇಜಿಸುವ ಮೂಲಕ ಆರೋಗ್ಯಕರ ಚರ್ಮವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ, ಚರ್ಮದ ಸುಕ್ಕುಗಳು, ಬೇಸಿಗೆಯಲ್ಲಿ ಚರ್ಮಕ್ಕಾಗುವ ಹಾನಿಯಿಂದ ರಕ್ಷಣೆ ನೀಡಲಿದೆ.

# ಕು.ಸಹನಾ ಹೊಸಮನಿ ಭಾಸ್ಕರ್ ಭರತನಾಟ್ಯ ರಂಗಪ್ರವೇಶ



ನೃತ್ಯ ದಿಶಾ ಟ್ರಸ್ಟ್ ರೂವಾರಿ 'ಕಲಾಭೂಷಿಣಿ' ಗುರು ಶ್ರೀಮತಿ ದರ್ಶಿನಿ ಮಂಜುನಾಥ್ ಅವರ ಶಿಷ್ಯೆ ಕು|| ಸಹನಾ ಹೊಸಮನೆ ಭಾಸ್ಕರ್ ಭರತನಾಟ್ಯ ರಂಗ ಪ್ರವೇಶಕ್ಕೆ ಅಣಿಯಾಗಿದ್ದಾರೆ. ಈ ಕಾರ್ಯಕ್ರಮವನ್ನು ಇದೇ ಮಾರ್ಚ್ 31, ಭಾನುವಾರ ಸಂಜೆ 5-00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದೆ .

ಭರವಸೆಯ ಪ್ರತಿಭೆ : ಕು.ಸಹನಾ ಕಳೆದ 15 ವರ್ಷಗಳಿಂದ ನೃತ್ಯ ಅಭ್ಯಾಸಿಸುತ್ತಿದ್ದು, ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ ಜೂನಿಯರ್, ಸೀನಿಯರ್ ಹಾಗೂ ಗಂಧರ್ವ ಪರೀಕ್ಷೆ ಮಧ್ಯಮ ಪೂರ್ಣಗಳನ್ನು ಉತ್ತಮ ದರ್ಜೆಯಲ್ಲಿ ಮುಗಿಸಿದ್ದಾರೆ. ಪ್ರಸ್ತುತ ವಿದ್ವತ್ ಅಂತ್ಯ ತಯಾರಿಯಲ್ಲಿರುವ ಸಹನಾ ಭರವಸೆಯ ನೃತ್ಯ ಕಲಾವಿದೆ.

ನೃತ್ಯ ದಿಶಾ ಸಂಸ್ಥೆಯ ಅಡಿಯಲ್ಲಿ ಅನೇಕ ಕಾರ್ಯಕ್ರಮಗಳನ್ನು ನೀಡಿರುವ ಸಹನಾ ಸಂಸ್ಥೆಯ ನೃತ್ಯ ನೀರಾಜನ, ನೃತ್ಯ ಸಂಭ್ರಮ ಒಳಗೊಂಡು ಹಂಪಿ ಉತ್ಸವ, ದಸರಾ ಉತ್ಸವ, ದುಬೈನಲ್ಲಿ ನಡೆದ ರಾಜ್ಯೋತ್ಸವ ಕಾರ್ಯಕ್ರಮ, ಉ20 ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದಾರೆ.

ಎಂಬಿಎ ಪದವಿಧರೆ ಸಹನಾ ಪ್ರಸ್ತುತ ವೃತ್ತಿ ನಿರತರಾಗಿದ್ದಾರೆ.

ಇವರ ರಂಗಪ್ರವೇಶಕ್ಕೆ ಮುಖ್ಯ ಅತಿಥಿಗಳಾಗಿ ಡಾ.ಎಂ ಸೂರ್ಯ ಪ್ರಸಾದ್, ಶ್ರೀ ಎಸ್ ಕುಮಾರ್ ಬಂಗಾರಪ್ಪ , ಶ್ರೀ ಸೈಯದ್ ಸಲಾಉದ್ದೀನ್ ಪಾಶ, ಗುರು ಶ್ರೀ ಪ್ರಕಾಶ್ ಎಸ್ ಅಯ್ಯರ್, ಶ್ರೀ ಕೃಷ್ಣಮೂರ್ತಿ ಲಕ್ಷ್ಮಣ ಆಗಮಿಸಲಿದ್ದಾರೆ .



ಸಹನಾ ರಂಗ ಪ್ರವೇಶ ಪ್ರಸ್ತುತಿಗೆ ಗುರು ಶ್ರೀಮತಿ ದರ್ಶನಿ ಮಂಜುನಾಥ್ (ನಟ್ಟುವಾಂಗ), ವಿದುಷಿ ಶ್ರೀಮತಿ ಭಾರತಿ ವೇಣುಗೋಪಾಲ್ (ಗಾಯನ ), ವಿದ್ವಾನ್ ಎಸ್ ವಿ ಗಿರಿಧರ್ ( ಮೃದಂಗ ), ವಿದ್ವಾನ್ ಎಚ್.ಎಸ್. ವೇಣುಗೋಪಾಲ್ (ಕೊಳಲು), ವಿದ್ವಾನ್ ಕಾರ್ತಿಕ್ ವೈದಾತ್ರಿ (ರಿದಂ ಪ್ಯಾಡ್) ನಲ್ಲಿ ಸಹಕರಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಕಲಾ ಪ್ರೋತ್ಸಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯುವ ಕಲಾವಿದೆಯನ್ನು ಆಶೀರ್ವದಿಸಬೇಕೆಂದು ಸಂಸ್ಥೆಯ ಮುಖ್ಯಸ್ಥರಾದ ಶ್ರೀ ಮಂಜುನಾಥ್ ರವರು ವಿನಂತಿಸಿದ್ದಾರೆ .

# ಬಾರ್ಲಿ ಬಳಸಿ ಮುಖದ ಕಾಂತಿ ಹೆಚ್ಚಿಸಿ

### ಬ್ಯೂಟಿ ಟಿಪ್ಸ್



ಬಾರ್ಲಿ ಪೋಷಕಾಂಶಗಳು ಮತ್ತು ಖನಿಜಗಳನ್ನು ಒಳಗೊಂಡಿರುತ್ತದೆ. ಇದನ್ನು ಚರ್ಮಕ್ಕೆ ಬಳಸುವುದರಿಂದ ಚರ್ಮದಲ್ಲಿರುವ ಕೊಳೆಯನ್ನು ತೆಗೆದುಹಾಕಿ ಚರ್ಮದ ಕಾಂತಿ ಹೆಚ್ಚಿಸುತ್ತದೆ. ಹಾಗಾಗಿ ಬಾರ್ಲಿಯನ್ನು ಮುಖಕ್ಕೆ ಹೇಗೆ ಬಳಸಬೇಕು ಎಂಬುದನ್ನು ತಿಳಿದುಕೊಳ್ಳಿ. 1 ಕಪ್ ಬಾರ್ಲಿ ಹಿಟ್ಟಿಗೆ ಳಿ ಕಪ್ ಮೊಸರನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ 5 ನಿಮಿಷ ಬಿಟ್ಟು ಮುಖಕ್ಕೆ ಹಚ್ಚಿ 20 ನಿಮಿಷ ಹಾಗೆ ಬಿಟ್ಟು ವಾಶ್ ಮಾಡಿ. ಇದನ್ನು ವಾರದಲ್ಲಿ ಒಮ್ಮೆ ಬಳಸಿ. ಇದರಿಂದ ಮುಖದಲ್ಲಿರುವ ಟ್ಯಾನ್ ಕಡಿಮೆಯಾಗಿ ಮುಖ ಬೆಳ್ಳಗಾಗುತ್ತದೆ. 1 ಕಪ್ ಬಾರ್ಲಿ, 4 ಚಮಚ ಅಕ್ಕಿ ಹಿಟ್ಟು, 1 ಚಮಚ ರೋಸ್ ವಾಟರ್, ಸ್ವಲ್ಪ ನೀರು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ ಪೇಸ್ಟ್ ತಯಾರಿಸಿ. ಮುಖವನ್ನು ಹಸಿ ಹಾಲಿನಿಂದ ಸ್ವಚ್ಛಗೊಳಿಸಿ ಈ ಫೇಸ್ ಪ್ಯಾಕ್ ಹಚ್ಚಿ. 25 ನಿಮಿಷ ಬಿಟ್ಟು ನೀರು ಸಿಂಪಡಿಸಿ ಕೈಗಳಿಂದ ನಿಧಾನವಾಗಿ ಮಸಾಜ್ ಮಾಡಿ ಬಳಿಕ ವಾಶ್ ಮಾಡಿ. ಇದನ್ನು 15 ದಿನಕ್ಕೊಮ್ಮೆ ಬಳಸಿ. ಇದರಿಂದ ಸತ್ತ ಚರ್ಮಕೋಶಗಳು ನಿವಾರಣೆಯಾಗಿ ಮೈಕಾಂತಿ ಹೆಚ್ಚುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ವಾಹನದಿಂದ ತೊಂದರೆ, ತಾಯಿಯೊಂದಿಗೆ ಕಲಹ, ಉದ್ಯೋಗಕ್ಕಾಗಿ ಅಲೆದಾಟ, ವ್ಯಾಪಾರ ವ್ಯವಹಾರದಲ್ಲಿ ಅನುಕೂಲ.

**ವೃಷಭ:** ಉದ್ಯೋಗದಲ್ಲಿ ಬದಲಾವಣೆ ಮತ್ತು ನಷ್ಟ, ಸಂಗಾತಿಯೊಂದಿಗೆ ಕಲಹ, ಮಾನಸಿಕ ಒತ್ತಡ, ದೂರ ಪ್ರಯಾಣ.

**ಮಿಥುನ:** ಕೋರ್ಟ್‌ಗೆ ಅಲೆದಾಟ, ಅನಿರೀಕ್ಷಿತ ಲಾಭ, ಯಂತ್ರೋಪಕರಣಗಳಿಗೆ ಖರ್ಚು, ಪ್ರಯಾಣದಲ್ಲಿ ತೊಂದರೆ.

**ಕಟಕ:** ಉದ್ಯೋಗದಲ್ಲಿ ಲಾಭ, ಸಂಗಾತಿಯಿಂದ ಅನುಕೂಲ, ಮಕ್ಕಳಿಂದ ಲಾಭ, ಪ್ರೇಮ ವಿಷಯದಲ್ಲಿ ಜಯ.

**ಸಿಂಹ:** ಉದ್ಯೋಗದಲ್ಲಿ ಒತ್ತಡ, ಸೇವಕರಿಂದಲೇ ಸಮಸ್ಯೆ, ತಾಯಿಯಿಂದ ಸಹಕಾರ, ದೂರದ ವ್ಯಕ್ತಿಗಳಿಂದ ಅನುಕೂಲ.

**ಕನ್ಯಾ:** ಪ್ರೇಮದ ವಿಷಯಗಳಿಂದ ಸಮಸ್ಯೆ, ಪ್ರಯಾಣದಲ್ಲಿ ಹಿನ್ನಡೆ, ಉದ್ಯೋಗದಲ್ಲಿ ನಷ್ಟ, ಮಿತ್ರರೊಂದಿಗೆ ಕಲಹ.

**ತುಲಾ:** ಎಲೆಕ್ಟ್ರಾನಿಕ್ ವಸ್ತುಗಳಿಂದ ತೊಂದರೆ, ಮಾನಸಿಕ ಒತ್ತಡ, ದಾಂಪತ್ಯದಲ್ಲಿ ಕಲಹ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ.

**ವೃಶ್ಚಿಕ:** ಪ್ರಯಾಣದಲ್ಲಿ ಎಚ್ಚರಿಕೆ, ಶತ್ರುಭಾದೆ, ಆರೋಗ್ಯದಲ್ಲಿ ವ್ಯತ್ಯಾಸ, ವಿದ್ಯಾಭ್ಯಾಸದಲ್ಲಿ ಹಿನ್ನಡೆ.

**ಧನಸ್ಸು:** ಉದ್ಯೋಗ ಲಾಭ, ಸಂಗಾತಿಯಿಂದ ಅಂತರ, ಪ್ರೀತಿ-ಪ್ರೇಮ ಭಾವನೆಗಳಿಗೆ ಧಕ್ಕೆ, ಪ್ರಯಾಣದಲ್ಲಿ ತೊಂದರೆ.

**ಮಕರ:** ಮಾಟ ಮಂತ್ರ ತಂತ್ರದ ಭೀತಿ, ವ್ಯಾಪಾರ ವ್ಯವಹಾರದಲ್ಲಿ ಲಾಭ, ಮಕ್ಕಳಿಂದ ಅನುಕೂಲ.

**ಕುಂಭ:** ವಿದ್ಯಾಭ್ಯಾಸದಲ್ಲಿ ಹಿನ್ನಡೆ, ಆತ್ಮೀಯರಿಂದ ನಷ್ಟ, ದಾಯಾದಿ ಕಲಹ, ಮಾನಸಿಕ ಒತ್ತಡ.

**ಮೀನ:** ದೂರ ಪ್ರಯಾಣದಿಂದ ಅನುಕೂಲ, ಆರ್ಥಿಕ ಲಾಭ, ಕುಟುಂಬ ಸಹಕಾರ, ಮಾತಿನಿಂದ ಕಾರ್ಯ ಜಯ, ವಿದ್ಯಾಭ್ಯಾಸದಲ್ಲಿ ಹಿನ್ನಡೆ.

## ವಿಶ್ವ ಬೈಪೋಲಾರ್ ದಿನ





ವಿಶ್ವ ಬೈಪೋಲಾರ್ ದಿನವನ್ನು ಪ್ರತಿ ವರ್ಷ ಮಾರ್ಚ್ 30 ರಂದು ಡಚ್ ವರ್ಣಚಿತ್ರಕಾರ ವಿನ್ಸೆಂಟ್ ವ್ಯಾನ್ ಗಾಗ್ ಅವರ ಜನ್ಮದಿನದಂದು ಆಚರಿಸಲಾಗುತ್ತದೆ - ಪಾಶ್ಚಾತ್ಯ ಕಲೆಯ ಇತಿಹಾಸದಲ್ಲಿ ಅತ್ಯಂತ ಪ್ರಭಾವಶಾಲಿ ಕಲಾವಿದರಲ್ಲಿ ಒಬ್ಬರು. ಅವನ ಸೃಜನಶೀಲತೆಯು ಅವನ ಮಾನಸಿಕ ಅಸ್ವಸ್ಥತೆಯೊಂದಿಗೆ ಸಮಾನಾಂತರವಾಗಿತ್ತು ಮತ್ತು ಮರಣಾನಂತರ ಅವನಿಗೆ ಬೈಪೋಲಾರ್ ಡಿಸಾರ್ಡರ್ ಎಂದು ರೋಗನಿರ್ಣಯ ಮಾಡಲಾಯಿತು. ಬೈಪೋಲಾರ್ ಡಿಸಾರ್ಡರ್ ಮೂಡ್ ಅನ್ನು ನಾಟಕೀಯವಾಗಿ ಪರಿಣಾಮ ಬೀರುತ್ತದೆ ಮತ್ತು ಖಿನ್ನತೆ ಮತ್ತು ಉಲ್ಲಾಸದ ಕಂತುಗಳಿಗೆ ಕಾರಣವಾಗಬಹುದು, ಇದು ಒಬ್ಬರ ಆರೋಗ್ಯ, ಉತ್ಪಾದಕತೆ ಮತ್ತು ಸಂಬಂಧಗಳ ಮೇಲೆ ಪರಿಣಾಮ ಬೀರಬಹುದು. ವಿಶ್ವ ಬೈಪೋಲಾರ್ ದಿನವು ಅಂತರರಾಷ್ಟ್ರೀಯ ಸಹಯೋಗದ ಪ್ರಯತ್ನಗಳ ಮೂಲಕ ಬೈಪೋಲಾರ್ ಡಿಸಾರ್ಡರ್ ಕುರಿತು ಮಾಹಿತಿಯ ಹರಡುವಿಕೆಯನ್ನು ಶಿಕ್ಷಣ ನೀಡುತ್ತದೆ ಮತ್ತು ಉತ್ತೇಜಿಸುತ್ತದೆ. ವಿಶ್ವ ಬೈಪೋಲಾರ್ ದಿನವು ಇಂಟರ್ನ್ಯಾಷನಲ್ ಸೊಸೈಟಿ ಫಾರ್ ಬೈಪೋಲಾರ್ ಡಿಸಾರ್ಡರ್ಸ್ ಯ ಉಪಕ್ರಮವಾಗಿದೆ, ಅವರು ಇಂಟರ್ನ್ಯಾಷನಲ್ ಬೈಪೋಲಾರ್ ಫೌಂಡೇಶನ್ ಮತ್ತು ಏಷ್ಯನ್ ನೆಟ್ವರ್ಕ್ ಆಫ್ ಬೈಪೋಲಾರ್ ಡಿಸಾರ್ಡರ್ಸ್ (ಂಓಃಆ) ನೊಂದಿಗೆ ಪಾಲುದಾರಿಕೆ ಹೊಂದಿದ್ದಾರೆ.ಬೈಪೋಲಾರ್ ಡಿಸಾರ್ಡರ್ ಆಧುನಿಕ ಸಮಸ್ಯೆಯಲ್ಲ, ಮತ್ತು ಅದರ ರೋಗನಿರ್ಣಯವು ಪ್ರಾಚೀನ ಗ್ರೀಸ್ಗೆ ಹಿಂದಿನದು. ಮಾನಸಿಕ ಅಸ್ವಸ್ಥತೆಯ ಆರಂಭಿಕ ಉಲ್ಲೇಖವನ್ನು ವೈದ್ಯ ಹಿಪ್ಪೊಕ್ರೇಟ್ಸ್ ಅವರ ವೈದ್ಯಕೀಯ ಸಾಹಿತ್ಯದಲ್ಲಿ ಕಾಣಬಹುದು, ಅವರನ್ನು ಸಾಮಾನ್ಯವಾಗಿ ವೈದ್ಯಕೀಯ ಪಿತಾಮಹ ಎಂದು ಕರೆಯಲಾಗುತ್ತದೆ. ಅವರು ತಮ್ಮ ಸಂಶೋಧನೆಗಳನ್ನು ಎರಡು ಧ್ರುವೀಯ ವಿರುದ್ಧ ಮನಸ್ಥಿತಿಗಳ ಮೇಲೆ ದಾಖಲಿಸಿದ್ದಾರೆ - ಈಗ ಖಿನ್ನತೆ ಮತ್ತು ಉನ್ಮಾದ ಎಂದು ಕರೆಯಲಾಗುತ್ತದೆ.

ಬೈಪೋಲಾರ್ ಡಿಸಾರ್ಡರ್ನ ಆಧುನಿಕ ಪರಿಕಲ್ಪನಾ ತಿಳುವಳಿಕೆಯು 19 ನೇ ಶತಮಾನದಲ್ಲಿ ಸಂಭವಿಸಿದೆ. ಬೈಪೋಲಾರ್ ಡಿಸಾರ್ಡರ್ನ ಸ್ವತಂತ್ರ ವಿವರಣೆಯನ್ನು 1854 ರಲ್ಲಿ ಪ್ಯಾರಿಸ್ನಲ್ಲಿರುವ ಅಕಾಡೆಮಿ ಡಿ ಮೆಡೆಸಿನ್ಗೆ ಫ್ರೆಂಚ್ ನರವಿಜ್ಞಾನಿ ಜೂಲ್ಸ್ ಬೈಲಾರ್ಗರ್ ಮತ್ತು ಫ್ರೆಂಚ್ ಮನೋವೈದ್ಯ ಜೀನ್-ಪಿಯರ್ ಫಾಲ್ರೆಟ್ ಅವರು ಪ್ರಸ್ತುತಪಡಿಸಿದರು. 'ಬೈಪೋಲಾರ್ ಡಿಸಾರ್ಡರ್' ಎಂಬ ಪದವನ್ನು ಇನ್ನೂ ರಚಿಸಲಾಗಿಲ್ಲ, ಆದ್ದರಿಂದ ಬೈಲಾರ್ಗರ್ ಅನಾರೋಗ್ಯವನ್ನು 'ಫೋಲಿ ಎ ಡಬಲ್ ಫಾರ್ಮ್' ಎಂದು ಉಲ್ಲೇಖಿಸಿದ್ದಾರೆ.

ಸಂಜೆ ಮುಗಿಲು
ಶನಿವಾರ
30.3.2024


# ಪ್ರಚಾರ ಪ್ರಾರಂಭಿಸಿದ ಕಂಗನಾ



**ಹಿಮಾಚಲ ಪ್ರದೇಶ:** ಮಂಡಿಯಿಂದ ಲೋಕಸಭೆ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಿರುವ ಬಿಜೆಪಿ ಅಭ್ಯರ್ಥಿ ಹಾಗೂ ಬಾಲಿವುಡ್ ನಟಿ ಕಂಗನಾ ರಣಾವತ್ ಇಂದು ಚುನಾವಣಾ ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಿದರು.

ಮಂಡಿ ಕ್ಷೇತ್ರದಲ್ಲಿ ತಮ್ಮ ಮೊದಲ ರೋಡ್ ಶೋ ನಡೆಸಿದ ಕಂಗನಾ ಅವರಿಗೆ ಬೆಂಬಲಿಗರಿಂದ ಅದ್ದೂರಿ ಸ್ವಾಗತ ದೊರೆಯಿತು.

ರೋಡ್ ಶೋನಲ್ಲಿ ಕಂಗನಾ ರಣಾವತ್ ಮೇಲೆ ಪುಷ್ಪವೃಷ್ಟಿ ಮಾಡಲಾಯಿತು. ಜೈ ಶ್ರೀ ರಾಮ್, ಜೈ ಮೋದಿ ಎನ್ನುವ ಘೋಷಣೆಗಳು ಮೊಳಗಿದವು. ರೋಡ್ ಶೋನಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಕಂಗನಾ, ನಾನು ಇಲ್ಲಿ ಒಬ್ಬ ಚಲನಚಿತ್ರ ನಟಿಯಾಗಿ ಬಂದಿಲ್ಲ. ನಾನು ನಿಮ್ಮ ಮನೆ ಮಗಳು, ನಿಮ್ಮ ಸಹೋದರಿ. ನನ್ನನ್ನು ಚಿತ್ರನಟಿ ಎಂದು ನೋಡಬೇಡಿ. ಇಲ್ಲಿನ ಎಲ್ಲ ಜನರ ಸಂಬಂಧಿ ನಾನು ಎಂದು ಹೇಳಿದರು. ಭಾರತದಲ್ಲಿ ಮೋದಿಯವರ ನೇತೃತ್ವದಲ್ಲಿ ಅಭಿವೃದ್ಧಿ ಪರ್ವ ಶುರುವಾಗಿದೆ. ಈ ಚುನಾವಣೆಯಲ್ಲಿ ಅಭಿವೃದ್ಧಿಯೆ ಮುಖ್ಯ ವಿಷಯ. ದೇಶದ ಅಭಿವೃದ್ಧಿಗಾಗಿ ಬಿಜೆಪಿಗೆ ಮತ ನೀಡಿ ಎಂದು ಕೋರಿದರು.

# ಚುನಾವಣಾ ಆಯೋಗದಿಂದ ಕಾಫಿ, ಟೀ, ಇಡ್ಲಿಗೂ ದರ ನಿಗದಿ



**ನವದೆಹಲಿ:** ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಪ್ರಚಾರಕ್ಕೆ ಬಳಸುವ ಸರಕು–ಸೇವೆಗಳಿಗೆ ದರಗಳನ್ನು ಜಿಲ್ಲಾ ಚುನಾವಣಾ ಸಮಿತಿಗಳು ದರ ನಿಗದಿಪಡಿಸಿವೆ.

ಕಾಫಿ–ಟೀ ದರಗಳನ್ನು ದೇಶದ ಬಹುತೇಕ ಕಡೆ ಇಳಿಕೆ ಮಾಡಲ್ಪಟ್ಟಿದ್ದರೆ. ಚೆನ್ನೈನಲ್ಲಿ ಒಂದು ಕಪ್ ಕಾಫಿಗೆ 15 ರೂ. ಒಂದು ಸಮೋಸಾಗೆ 20 ರೂ. ನಿಗದಿ ಮಾಡಲಾಗಿದೆ.

ಅಭ್ಯರ್ಥಿಗಳು ತಮ್ಮ ವೆಚ್ಚವನ್ನು ನಿಗದಿತ ಮಿತಿಯೊಳಗೆ ನಿರ್ವಹಿಸಬೇಕಾಗುತ್ತದೆ. ಬೆಲೆಗಳು ಪ್ರಸ್ತುತ ಹಣದುಬ್ಬರ ಮಟ್ಟಕ್ಕೆ ಹೊಂದಿಕೆಯಾಗುತ್ತಿಲ್ಲ ಎಂಬ ಬಗ್ಗೆ ಈ ದರ ಕಾರ್ಡ್ಗಳು ಆಗಾಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಮೆಮ್–ಫೆಸ್ಟ್ ವಿಷಯವಾಗುತ್ತವೆ. ಆಂಧ್ರಪ್ರದೇಶ ಸೇರಿದಂತೆ ಹೆಚ್ಚಿನ ರಾಜ್ಯಗಳಲ್ಲಿ ಲೋಕಸಭಾ ಅಭ್ಯರ್ಥಿಯ ವೆಚ್ಚದ ಮಿತಿಯನ್ನು 95 ಲಕ್ಷ ರೂ.ಗೆ ನಿಗದಿಪಡಿಸಲಾಗಿದೆ. ಆದಾಗ್ಯೂ, ಅರುಣಾಚಲ ಪ್ರದೇಶ, ಗೋವಾ ಮತ್ತು ಸಿಕ್ಕಿಂನಲ್ಲಿ ಈ ಮಿತಿ ಸ್ವಲ್ಪ ಕಡಿಮೆ ಇದ್ದು, ಪ್ರತಿ ಅಭ್ಯರ್ಥಿಗೆ 75 ಲಕ್ಷ ರೂ. ಅಂತೆಯೇ, ಕೇಂದ್ರಾಡಳಿತ ಪ್ರದೇಶಗಳಿಗೆ, ಪ್ರದೇಶವನ್ನು ಅವಲಂಬಿಸಿ ಪ್ರತಿ ಅಭ್ಯರ್ಥಿಗೆ ವೆಚ್ಚದ ಮಿತಿ 75 ಲಕ್ಷ ರೂ.ಗಳಿಂದ 95 ಲಕ್ಷ ರೂ.ಗಳವರೆಗೆ ಇರುತ್ತದೆ. ಜಲಂಧರ್ನಲ್ಲಿ ಚೋಲೆ ಭತುರೆಗೆ 40 ರೂ., ಮಟನ್ ಮತ್ತು ಚಿಕನ್ ಕ್ರಮವಾಗಿ ಕೆ.ಜಿ.ಗೆ 250 ಮತ್ತು 500 ರೂ. ಧೋಧಾ (ಪ್ರತಿ ಕೆ.ಜಿ.ಗೆ 450 ರೂ.) ಮತ್ತು ತುಪ್ಪ ಪಿನ್ನಿ (ಪ್ರತಿ ಕೆ.ಜಿ.ಗೆ 300 ರೂ.) ನಂತಹ ಸಿಹಿತಿಂಡಿಗಳು ಮೆನುವಿನಲ್ಲಿವೆ, ಲಸ್ಸಿ ಮತ್ತು ನಿಂಬು ಪಾನಿ ಕ್ರಮವಾಗಿ ಪ್ರತಿ ಲೋಟಕ್ಕೆ 20 ಮತ್ತು 15 ರೂ. ನಿಗದಿಪಡಿಸಲಾಗಿದೆ.

## ತನಿಖಾ ಸಂಸ್ಥೆಗಳಿಗೆ 'ರಾಹುಲ್ ಗಾಂಧಿ' ಎಚ್ಚರಿಕೆ



**ನವದೆಹಲಿ:** ಸಿಬಿಐ ಮತ್ತು ಇಡಿಯಂತಹ ಸಂಸ್ಥೆಗಳು ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರದ ಆದೇಶದ ಮೇರೆಗೆ ಕಾರ್ಯನಿರ್ವಹಿಸುತ್ತಿವೆ ಎಂದು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಶುಕ್ರವಾರ ಆರೋಪಿಸಿದ್ದಾರೆ ಮತ್ತು ಸರ್ಕಾರ ಬದಲಾದಾಗ ಈ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಈ ಸಂಸ್ಥೆಗಳು ತಮ್ಮ ಕೆಲಸವನ್ನ ಸರಿಯಾಗಿ ಮಾಡಿದ್ದರೆ ಯಾವುದೇ ಸಮಸ್ಯೆ ಇರುತ್ತಿರಲಿಲ್ಲ. ಒಂದು ದಿನ ಬಿಜೆಪಿ ಸರ್ಕಾರ ಬದಲಾಗುತ್ತದೆ ಮತ್ತು ಅದರ ನಂತರ ಕ್ರಮ ಕೈಗೊಳ್ಳಲಾಗುವುದು ಎಂದು ಈ ಏಜೆನ್ಸಿಗಳು ಯೋಚಿಸಬೇಕು ಮತ್ತು ಕ್ರಮವು ತುಂಬಾ ಬಲವಾಗಿರುತ್ತದೆ ಎಂಬುದು ನನ್ನ ಖಾತರಿಯಾಗಿದೆ, ಯಾವುದೇ ಸಂಸ್ಥೆ ಮತ್ತೆ ಅಂತಹ ಕೆಲಸಗಳನ್ನ ಮಾಡಲು ಧೈರ್ಯ ಮಾಡುವುದಿಲ್ಲ ಎಂದು ರಾಹುಲ್ ಗಾಂಧಿ ಹೇಳಿದರು. 1,823.08 ಕೋಟಿ ರೂ.ಗಳನ್ನು ಪಾವತಿಸುವಂತೆ ಆದಾಯ ತೆರಿಗೆ ಇಲಾಖೆಯ ಹೊಸ ನೋಟಿಸ್ಗಳಿಗೆ ಕಾಂಗ್ರೆಸ್ ನಾಯಕ ಪ್ರತಿಕ್ರಿಯಿಸಿದರು. ಲೋಕಸಭಾ ಚುನಾವಣೆಗೆ ಮುಂಚಿತವಾಗಿ ವಿರೋಧ ಪಕ್ಷವನ್ನು ಆರ್ಥಿಕವಾಗಿ ದುರ್ಬಲಗೊಳಿಸಲು ಆಡಳಿತಾರೂಢ ಬಿಜೆಪಿ ತೆರಿಗೆ ಭಯೋತ್ಪಾದನೆ ಯಲ್ಲಿ ತೊಡಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

## ಪಾಕಿಸ್ತಾನದಲ್ಲಿ 2 ಯೋಜನೆಗಳ ಕಾಮಗಾರಿ ಸ್ಥಗಿತಗೊಳಿಸಿದ ಚೀನಾ



**ಇಸ್ಲಮಾಬಾದ್:** ಈ ವಾರದಲ್ಲಿ ಖೈಬರ್ ಪಖ್ತೂಂಕ್ವಾದಲ್ಲಿ ನಡೆದ ಭೀಕರ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ಚೀನಾದ 5 ಇಂಜಿನಿಯರ್ ಗಳು ಸಾವನ್ನಪ್ಪಿದ ಪ್ರಕರಣದ ಬಳಿಕ ಪಾಕಿಸ್ತಾನದಲ್ಲಿ ನಡೆಸುತ್ತಿರುವ 2 ಪ್ರಮುಖ ಅಣೆಕಟ್ಟು ಕಾಮಗಾರಿಗಳನ್ನು ಚೀನಾ ಸ್ಥಗಿತಗೊಳಿಸಿರುವುದಾಗಿ ಪ್ರಾಂತೀಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಪಾಕಿಸ್ತಾನದಲ್ಲಿ ಕೆಲಸ ನಿರ್ವಹಿಸುತ್ತಿರುವ ಸುಮಾರು 1,250 ಚೀನಾ ಪ್ರಜೆಗಳಿಗೆ ಭದ್ರತೆ ಒದಗಿಸುವ ಹೊಸ ಯೋಜನೆಯನ್ನು ಪಾಕಿಸ್ತಾನದ ಅಧಿಕಾರಿಗಳು ಒದಗಿಸಬೇಕೆಂದು ಚೀನಾದ ಸಂಸ್ಥೆಗಳು ಆಗ್ರಹಿಸಿವೆ. ಖೈಬರ್ ಪಖ್ತೂಂಕ್ವಾ ಪ್ರಾಂತದಲ್ಲಿರುವ ದಾಸು ಜಲವಿದ್ಯುತ್ ಯೋಜನೆಯ ಕಾಮಗಾರಿಯನ್ನು ಮಾರ್ಚ್ 27ರಿಂದ ಚೀನಾ ಗೆಝೋಬ ಗ್ರೂಪ್ ಸಂಸ್ಥೆ ಮತ್ತು ಡಯಾಮರ್ ಭಾಷಾ ಅಣೆಕಟ್ಟು ಕಾಮಗಾರಿಯನ್ನು ಪವರ್ ಚೀನಾ ಸಂಸ್ಥೆ ಸ್ಥಗಿತಗೊಳಿಸಿದೆ. ಸರಕಾರದಿಂದ ಹೊಸ ಭದ್ರತಾ ಯೋಜನೆಯನ್ನು ಅವರು ಆಗ್ರಹಿಸಿದ್ದಾರೆ. ದಾಸು ಜಲವಿದ್ಯುತ್ ಯೋಜನೆಯಲ್ಲಿ ಚೀನಾದ ಸುಮಾರು 750 ಇಂಜಿನಿಯರ್ಗಳು ಮತ್ತು ಡಯಾಮರ್ ಭಾಷಾ ಅಣೆಕಟ್ಟು ಯೋಜನೆಯಲ್ಲಿ ಸುಮಾರು 500 ಇಂಜಿನಿಯರ್ಗಳು ಕೆಲಸ ಮಾಡುತ್ತಿದ್ದಾರೆ. ಇದೀಗ ತಾವು ವಾಸಿಸುತ್ತಿರುವ ಸ್ಥಾನವನ್ನು ಬಿಟ್ಟು ಹೊರಗೆ ತೆರಳದಂತೆ ಚೀನಾದ ಇಂಜಿನಿಯರ್ಗಳಿಗೆ ಸೂಚಿಸಲಾಗಿದೆ ಎಂದು ಪಾಕ್ ಅಧಿಕಾರಿಗಳು ಹೇಳಿದ್ದಾರೆ.

## ಮಹಿಳೆಯರಿಗೆ ಮತ್ತೊಂದು ಗ್ಯಾರೆಂಟಿ ಘೋಷಿಸಿದ ಕಾಂಗ್ರೆಸ್

**ನವದೆಹಲಿ:** ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಸರ್ಕಾರಿ ಉದ್ಯೋಗಗಳಲ್ಲಿ ಶೇ.50 ಹುದ್ದೆಗಳನ್ನು ಮಹಿಳೆಯರಿಗೆ ಮೀಸಲಿಡಲಾಗುವುದು ಎಂದು ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಶುಕ್ರವಾರ ಹೊಸ ಭರವಸೆ ನೀಡಿದ್ದಾರೆ. ಭಾರತದ ಜನಸಂಖ್ಯೆಯಲ್ಲಿ ಅರ್ಧದಷ್ಟಿರುವ ಮಹಿಳೆಯರಿಗೆ ವ್ಯವಸ್ಥೆಯಲ್ಲಿ ಅಷ್ಟೇ ಪ್ರಮಾಣದಲ್ಲಿ ಭಾಗಿಯಾಗಲು ಅವಕಾಶ ನೀಡುತ್ತೇವೆ ಎಂದ ಅವರು, ಅರ್ಧ ಜನಸಂಖ್ಯೆಗೆ ಪೂರ್ತಿ ಹಕ್ಕನ್ನು ಕಾಂಗ್ರೆಸ್ ಬಯಸುತ್ತದೆ. ಹೀಗೆ ಮಾಡಿದಾಗ ಮಾತ್ರ, ಮಹಿಳೆಯರ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗುತ್ತದೆ ಎಂದು ಅಭಿಪ್ರಾಯಪಟ್ಟರು.ಇದಕ್ಕೂ ಮೊದಲು ಮಹಿಳೆಯರಿಗಾಗಿ ಕಾಂಗ್ರೆಸ್ ಮಹಾಲಕ್ಷ್ಮಿ, ಶಕ್ತಿ ಕಾ ಸಮ್ಮಾನ್, ಅಧಿಕಾರ್ ಮೈತ್ರಿ, ಸಾವಿತ್ರಿ ಬಾಯಿ ಫುಲೆ ಹಾಸ್ಟೆಲ್ಗಳಂತಹ ಐದು ಭರವಸೆಗಳನ್ನು ಘೋಷಿಸಿತ್ತು.



# ಸೋನಾಮಾರ್ಗ್‌ನ ಹಂಗ್ ಬಳಿ ಹಿಮಪಾತ; ಪ್ರವಾಸಿಗರ ರಕ್ಷಣೆ



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಸೋನಾಮಾರ್ಗ್ನ ಹಂಗ್ನ ಸಮೀಪದಲ್ಲಿ ಹಲವಾರು ಪ್ರವಾಸಿಗರು ಹಿಮಪಾತಕ್ಕೆ ಸಿಲುಕಿಕೊಂಡಿದ್ದು, ಅವರನ್ನು ರಕ್ಷಿಸುವ ಕಾರ್ಯಾಚರಣೆ ನಡೆಯುತ್ತಿದೆ. ಗಂದರ್ಬಾಲ್ ಜಿಲ್ಲೆಯ ಸೋನಾಮಾರ್ಗ್ ಪ್ರದೇಶದಲಿ ಶುಕ್ರವಾರ ಸಂಭವಿಸಿದ ಈ ಘಟನೆ ನಡೆದಿದ್ದು, ಶ್ರೀನಗರ–ಲೇಹ್ ಹೆದ್ದಾರಿಯಲ್ಲಿ ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಹಿಮಪಾತವು ಹಂಗ್ ಪ್ರದೇಶದ ಬಳಿ ಅಪ್ಪಳಿಸಿದ್ದರಿಂದ ಹಲವಾರು ವಾಹನಗಳು ಹಿಮದಿಂದ ಆವರಿಸಿದೆ. ಪೊಲೀಸ್, ರಾಜ್ಯ ವಿಪತ್ತು ನಿರ್ವಹಣಾ ಪಡೆ (ಖಆಖಈ), ಸ್ಥಳೀಯ ನಿವಾಸಿಗಳು. ಅಧಿಕಾರಿಗಳು ತ್ವರಿತವಾಗಿ ರಕ್ಷಣಾ ಕಾರ್ಯಾಚರಣೆ ಪ್ರಾರಂಭಿಸಿದರು ಎಂದು ತಿಳಿದು ಬಂದಿದೆ. ಘಟನೆಯಲ್ಲಿ ಪ್ರವಾಸಿಗರನ್ನು ಹೊತ್ತೊಯ್ಯುತ್ತಿದ್ದ ಎರಡು ವಾಹನಗಳ ಮೇಲೆ ಹಿಮಪಾತವು ನೇರವಾಗಿ ಅಪ್ಪಳಿಸಿದ್ದರಿಂದ ವಾಹನಗಳು ಹಿಮದಲ್ಲಿ ಸಿಲುಕಿವೆ ಎಂದು ಅಧಿಕೃತ ಮೂಲಗಳು ವರದಿ ಮಾಡಿದೆ. ರಕ್ಷಣಾ ತಂಡಗಳ ತ್ವರಿತ ಕಾರ್ಾರಣೆಯಿಂದ ಎಲ್ಲಾ ಪ್ರಯಾಣಿಕರನ್ನು ಯಶಸ್ವಿಯಾಗಿ ಸ್ಥಳಾಂತರಿಸಲಾಗಿದೆ ಎಂದು ತಿಳಿದು ಬಂದಿದೆ.

# ತಾಲಿಬಾನ್‌ನಲ್ಲಿ ವ್ಯಭಿಚಾರ ಮಾಡುವ ಮಹಿಳೆಯರಿಗೆ ಕಲ್ಲೇಟು ಶಿಕ್ಷೆ



**ಕಾಬೂಲ್:** ತಾಲಿಬಾನ್ ಅಫ್ಘಾನಿಸ್ತಾನವನ್ನು ಮತ್ತೆ ಕರಾಳ ಯುಗಕ್ಕೆ ಕೊಂಡೊಯ್ಯುತ್ತಿದೆ. ಇದೀಗ ತಾಲಿಬಾನ್ ಮುಖ್ಯಸ್ಥ ಮುಲ್ಲಾ ಹಿಬತುಲ್ಲಾ ಅಖುಂದ್ಜಾದಾ ಅವರು ಅಫ್ಘಾನಿಸ್ತಾನದಲ್ಲಿ ಮಹಿಳೆಯರಿಗೆ ವ್ಯಭಿಚಾರದ ತಪ್ಪಿಗೆ ಸಾರ್ವಜನಿಕವಾಗಿ ಕಲ್ಲು ಹೊಡೆದು ಕೊಲ್ಲುವ ನಿಯಮವನ್ನು ತರುವುದಾಗಿ ಘೋಷಿಸಿದ್ದಾರೆ.

ಇದರೊಂದಿಗೆ ಪಾಶ್ಚಿಮಾತ್ಯ ಪ್ರಜಾಪ್ರಭುತ್ವದ ವಿರುದ್ಧ ಹೋರಾಡುವುದನ್ನು ಮುಂದುವರಿಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ ಎಂದು ವರದಿಯಾಗಿದೆ. ಪಾಶ್ಚಿಮಾತ್ಯರು ತಂದ ಮಾತನಾಡುವ ಹಕ್ಕುಗಳು ಮಹಿಳೆಯರಿಗೆ ಬೇಕೇ? ಅವರು ಷರಿಯಾ ಮತ್ತು ಧರ್ಮಗುರುಗಳ ಅಭಿಪ್ರಾಯಗಳಿಗೆ ವಿರುದ್ಧವಾಗಿದ್ದಾರೆ ಎಂದು ಹೇಳಿದ್ದಾರೆ.

ನಾವು ಪಾಶ್ಚಿಮಾತ್ಯರೊಂದಿಗೆ 20 ವರ್ಷಗಳ ಕಾಲ ಹೋರಾಡಿದ್ದೇವೆ. ಮತ್ತು ಇನ್ನೂ 20 ವರ್ಷ ನಿಮ್ಮ ವಿರುದ್ಧ ಹೋರಾಡುತ್ತೇವೆ ಎಂದು ನಾವು ಮುಜಾಹದಿನ್ಗಳಿಗೆ ಹೇಳಿದ್ದೇವೆ. ಈ ನೆಲಕ್ಕೆ ಶರಿಯಾ ತರುತ್ತೇವೆ. ನಾವು ಕಾಬೂಲ್ ಅನ್ನು ವಶಪಡಿಸಿಕೊಂಡ ನಂತರ ಅದು ಸಾಧ್ಯವಾಗುತ್ತಿದೆ. ಈಗ ನಾವು ಷರಿಯಾವನ್ನು ಕಾರ್ಯರೂಪಕ್ಕೆ ತರುತ್ತೇವೆ ಎಂದು ಅಖುಂಡ್ಜಾಡಾ ಹೇಳಿಕೆ ನೀಡಿರುವುದಾಗಿ ವರದಿಯಾಗಿದೆ.

ನಾವು ಅವರನ್ನು ಕಲ್ಲೆಸೆದು ಕೊಲ್ಲುವುದು ಮಹಿಳೆಯರ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ನೀವು ಹೇಳುತ್ತೀರಿ. ಆದರೆ ನಾವು ವ್ಯಭಿಚಾರದ ಈ ಶಿಕ್ಷೆಯನ್ನು ಶೀಘ್ರದಲ್ಲೇ ಜಾರಿಗೆ ತರುತ್ತೇವೆ. ನಾವು ಮಹಿಳೆಯರನ್ನು ಸಾರ್ವಜನಿಕವಾಗಿ ಥಳಿಸಿ, ಕಲ್ಲೆಸೆದು ಕೊಲ್ಲುತ್ತೇವೆ ಎಂದು ಅಖುಂದ್ಜಾದಾ ಪಾಶ್ಚಿಮಾತ್ಯ ಅಧಿಕಾರಿಗಳೊಂದಿಗೆ ಹೇಳಿದ್ದಾರೆ.

# ಸಿರಿಯಾದ ಮೇಲೆ ಇಸ್ರೇಲ್ ವೈಮಾನಿಕ ದಾಳಿ



**ಡಮಾಸ್ಕಸ್:** ಶುಕ್ರವಾರ ಮುಂಜಾನೆ ಉತ್ತರ ಸಿರಿಯಾದ ಅಲೆಪ್ಪೊ ನಗರದ ಮೇಲೆ ಇಸ್ರೇಲ್ ನಡೆಸಿದ ದಾಳಿಗೆ ಲೆಬನಾನಿನ ಸಶಸ್ತ್ರ ಗುಂಪಿನ ಐವರು ಸದಸ್ಯರು ಸೇರಿದಂತೆ 38 ಮಂದಿ ಹತರಾಗಿರುವುದಾಗಿ ಮೂಲಗಳು ತಿಳಿಸಿವೆ.

ಸಿರಿಯಾದಲ್ಲಿ ಇರಾನ್ನ ಮಿತ್ರರಾಷ್ಟ್ರಗಳ ವಿರುದ್ಧ ಇಸ್ರೇಲ್ ನಡೆಸಿದ ದಾಳಿಯ ಪರಿಣಾಮ ಹಲವು ಮಂದಿ ಹತರಾಗಿದ್ದಾರೆ ಎಂದು ವರದಿಯಾಗಿವೆ. ಅಕ್ಟೋಬರ್ 7 ರಂದು ಇರಾನ್ ಬೆಂಬಲಿತ ಪ್ಯಾಲೇಸ್ಟಿನಿಯನ್ ಬಣ ಹಮಾಸ್ ಇಸ್ರೇಲ್ಗೆ ನುಗ್ಗಿದ ನಂತರ ಆರಂಭವಾದ ದಾಳಿಯಾ ನಂತರ ಸೇಡು ತೀರಿಸಿಕೊಳ್ಳಲು ಇಸ್ರೇಲ್ ಸಿರಿಯಾದಲ್ಲಿ ಹಿಜ್ಬುಲ್ಲಾ ಮತ್ತು ಇರಾನ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಎರಡರ ಮೇಲೆಯೂ ತನ್ನ ವೈಮಾನಿಕ ದಾಳಿಯನ್ನು ಹೆಚ್ಚಿಸಿದೆ.

ಇಸ್ರೇಲ್ ಈ ಪ್ರದೇಶದಲ್ಲಿ ಇರಾನ್ನ ಮಿತ್ರರಾಷ್ಟ್ರಗಳಿಗೆ ಶಸ್ತ್ರಾಸ್ತ್ರಗಳ ಪೂರೈಸಲು ಅಡ್ಡಿಪಡಿಸುವ ನಿಟ್ಟಿನಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳ ಮೇಲೆ ದಾಳಿ ನಡೆಸಿವೆ ಎಂದು ಹೇಳಲಾಗಿದೆ, ಆದರೆ ಅಕ್ಟೋಬರ್ 7 ರಿಂದ ದಾಳಿಗಳು ತುಂಬಾ ಭಯಾನಕವಾಗಿವೆ ಎಂದು ಹೇಳಲಾಗಿದೆ.

# PM ಕುರ್ಚಿಯಲ್ಲಿ ಕುಳಿತ ಪಾಕ್‌ನ ಅತ್ಯಂತ ಕಿರಿಯ ಬ್ಲಾಗರ್!



**ಇಸ್ಲಾಮಾಬಾದ್:** ಪಾಕಿಸ್ಥಾನದ ಅತ್ಯಂತ ಕಿರಿಯ ಬ್ಲಾಗರ್ ಮೊಹಮ್ಮದ್ ಶಿರಾಜ್ ಪಾಕ್ ಪ್ರಧಾನಿ ಶೆಹಬಾಜ್ ಶರೀಫ್ ಅವರನ್ನು ಭೇಟಿಯಾಗಿದ್ದು, ಪ್ರಧಾನಿ ಕುರ್ಚಿಯಲ್ಲೇ ಕುಳಿತ ಈತನ ವೀಡಿಯೋ ಇದೀಗ ಜಾಲತಾಣದಲ್ಲಿ ಭಾರೀ ವೈರಲ್ ಆಗಿದೆ. ಇಸ್ಲಾಮಾಬಾದ್ನಲ್ಲಿರುವ ಪ್ರಧಾನಿ ಶೆಹಬಾಜ್ ಅವರ ನಿವಾಸಕ್ಕೆ ಶಿರಾಜ್ ತನ್ನ ಸಹೋದರಿಯೊಂದಿಗೆ ಭೇಟಿ ನೀಡಿದ್ದಾನೆ.ಪಿಎಂ ಶೆಹಬಾಜ್ ಅವರ ಜತೆಗೆ ಮಾತುಕತೆ ನಡೆಸಿದ್ದಾನೆ. ಈ ವೀಡಿಯೋವನ್ನು ಶಿರಾಜ್ ತನ್ನ ಯೂಟ್ಯೂಬ್ ಚಾನೆಲ್, ಇನ್ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾನೆ.

# ನರೇಂದ್ರ ಮೋದಿ ಅಸಮರ್ಥತೆ ಬಯಲಿಗೆಳೆಯುತ್ತೇನೆ :ವಾಂಗ್ಚುಕ್



**ಲಡಾಕ್:** ಸಾಮಾಜಿಕ ಹೋರಾಟಗಾರ ಸೋನಮ್ ವಾಂಗ್ಚುಕ್ ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಅಸಮರ್ಥತೆಯನ್ನು ಬಯಲಿಗೆಳೆಯವುದಾಗಿ ಘೋಷಿಸಿದ್ದಾರೆ. ಈ ಘೋಷಣೆಗೆ ಚಿತ್ರನಟ ಪ್ರಕಾಶ್ ರಾಜ್ ಸಹ ದನಿಗೂಡಿಸಿದ್ದು, ಸತ್ಯಕ್ಕೆ ಮತ್ತಷ್ಟು ಬಲ ಬಂದಂತಾಗಿದೆ ಎಂದಿದ್ದಾರೆ.

ಸೋನಮ್ ವಾಂಗ್ಚುಕ್ ಲಡಾಕ್ ನಲ್ಲಿ ಹಲವು ವರ್ಷಗಳಿಂದ ಪ್ರಧಾನಿ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ. ಲಡಾಕ್ ನ ಸ್ಥಳೀಯರ ಜೀವನದ ಮಟ್ಟ, ಶಿಕ್ಷಣ ಹಾಗೂ ಮತ್ತಿತರ ಸೌಕರ್ಯಗಳನ್ನು ಪ್ರಧಾನಿ ಮೋದಿ ಆಡಳಿತ ನಾಶಮಾಡುತ್ತಿದೆ ಎಂದು ಸೋನಮ್ ಆರೋಪವಾಗಿದೆ.

ಶಿಕ್ಷಣ ಕ್ಷೇತ್ರದಲ್ಲಿ ಬದಲಾವಣೆ ಹಾಗೂ ಹವಾಮಾನ ಬದಲಾವಣೆಗೆ ಕುರಿತು ಹೋರಾಟ ನಡೆಸುತ್ತಿರುವ ಸೋನಮ್ ವಾಂಗ್ ಚುಕ್ 21 ದಿನಗಳ ಉಪವಾಸವನ್ನು ಎರಡು ದಿನಗಳ ಹಿಂದಷ್ಟೇ ಅಂತ್ಯಗೊಳಿಸಿದ್ದರು. ಈ ವೇಳೆ ಪ್ರಧಾನಿ ಮೋದಿ ವಿರುದ್ಧ ಕಿಡಿಕಾರಿದ್ದ ಅವರು, ನೀವು ನಿಮ್ಮ ಎಲ್ಲಾ ಜೈಲುಗಳನ್ನು ಸಿದ್ದವಾಗಿಟ್ಟುಕೊಳ್ಳಿ. ನಾವೆಲ್ಲರೂ ಬಂಧನಕ್ಕೆ ತಯಾರಾಗಿದ್ದೇವೆ ಎಂದು ಸವಾಲು ಹಾಕಿದ್ದರು.

ಸೋನಮ್ ವಾಂಗ್ ಚುಕ್ ಅವರ ಜೀವನವನ್ನಾಧರಿಸಿ ಬಾಲಿವುಡ್ ನಲ್ಲಿ ಬಂದಿದ್ದ 3 ಈಡಿಯಟ್ಸ್ ಸಿನಿಮಾ ಪ್ರಖ್ಯಾತವಾಗಿತ್ತು.

# ಸೇತುವೆ ಮೇಲಿಂದ ಬಸ್ ಬಿದ್ದು 45 ಪ್ರಯಾಣಿಕರು ಸಾವು!



**ಕೇಪ್ಟೌನ್:** ದಕ್ಷಿಣ ಆಫ್ರಿಕಾದ ಲಿಂಪೊಪೊ ಪ್ರಾಂತ್ಯದಲ್ಲಿ ಈಸ್ಟರ್ ಸಮ್ಮೇಳನಕ್ಕೆ ತೆರಳುತ್ತಿದ್ದ ಬಸ್ ಸೇತುವೆ ಮೇಲಿನಿಂದ ಬಿದ್ದ ಪರಿಣಾಮ ಕನಿಷ್ಠ 45 ಜನರು ಸಾವನ್ನಪ್ಪಿದ್ದಾರೆ. ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತರೆಲ್ಲರೂ ನೆರೆಯ ರಾಷ್ಟ್ರವಾದ ಬೋಟ್ಸ್ವಾನಾದ ರಾಜಧಾನಿ ಗ್ಯಾಬೊರೊನ್ನಿಂದ ಈಸ್ಟರ್ ಸಮ್ಮೇಳನಕ್ಕಾಗಿ ಚರ್ಚ್ಗೆ ಪ್ರಯಾಣಿಸುತ್ತಿದ್ದ ಯಾತ್ರಾರ್ಥಿಗಳು ಎಂದು ಎಸ್ಎಬಿಸಿ ತಿಳಿಸಿದೆ. ಎಂಟು ವರ್ಷದ ಬಾಲಕಿ ಮಾತ್ರ ಬದುಕುಳಿದಿದ್ದಾಳೆ ಎಂದು ಎಸ್ಎಬಿಸಿ ಹೇಳಿದೆ. ಆಕೆಯನ್ನು ಆಸ್ಪತ್ರೆಗೆ ಏರ್ಲಿಫ್ಟ್ ಮಾಡಲಾಗಿದೆ. ಮೊಕೊಪಾನೆ ಮತ್ತು ಮಾರ್ಕೆನ್ ನಡುವಿನ ಮಮತ್ಲಕಲಾ ಪರ್ವತದ ಹಾದಿಯಲ್ಲಿ ಅಪಘಾತ ಸಂಭವಿಸಿದೆ. ಬಸ್ ಬಿದ್ದ ನಂತರ ಬೆಂಕಿ ಹೊತ್ತಿಕೊಂಡಿದೆ ಎಂದು ವರದಿಯಾಗಿದೆ.

# ಗ್ಯಾಂಗ್ ಸ್ಟರ್ ಮುಖ್ತಾರ್ ಅನ್ಸಾರಿ ಸಾವು ಕುರಿತು ಪುತ್ರನಿಂದ ಸ್ಫೋಟಕ ಹೇಳಿಕೆ



**ಲಖನೌ:** ಉತ್ತರ ಪ್ರದೇಶದ ಜೈಲಿನಲ್ಲಿದ್ದ ಗ್ಯಾಂಗ್ಸ್ಟರ್ ಮುಖ್ತಾರ್ ಅನ್ಸಾರಿ ಸಾವು ಕುರಿತು ಪುತ್ರ ಉಮರ್ ಅನ್ಸಾರಿ ಸ್ಫೋಟಕ ಹೇಳಿಕೆ ನೀಡಿದ್ದು, ತಂದೆಯನ್ನು ವಿಷಪ್ರಾಶನ ಮಾಡಿಸಿ, ಸಾವನ್ನಪ್ಪುವಂತೆ ಮಾಡಲಾಗಿದೆ ಎಂದು ಆರೋಪ ಮಾಡಿದ್ದಾರೆ. ಅಲ್ಲದೆ, ನ್ಯಾಯಕ್ಕಾಗಿ ನ್ಯಾಯಾಲಯದ ಮೊರೆ ಹೋಗುವುದಾಗಿಯೂ ಹೇಳಿದ್ದಾರೆ. ಮುಖ್ತಾರ್ ಅನ್ಸಾರಿ ಅವರು ಹೃದಯಾಘಾತದಿಂದ ಆರೋಗ್ಯ ಹದಗೆಟ್ಟ ಕಾರಣ ಗುರುವಾರ ನಿಧನರಾಗಿದ್ದಾರೆ. ಜೈಲಿನಲ್ಲಿದ್ದ ದರೋಡೆಕೋರನನ್ನು ಗಾಜಿಪುರದ ಬಂದಾದಲ್ಲಿರುವ ಬಂದಾ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ಅವರು ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದರು. ಮಂಗಳವಾರ ಸಹ, ಅನ್ಸಾರಿ ಅವರು ಹೊಟ್ಟೆ ನೋವಿನ ಬಗ್ಗೆ ಹೇಳಿಕೊಂಡಾಗ ಆಸ್ಪತ್ರೆಗೆ ಕರೆದೊಯ್ದು ಸುಮಾರು 14 ಗಂಟೆಗಳ ಕಾಲ ದಾಖಲಿಸಲಾಗಿತ್ತು ಎಂದು ವರದಿಗಳು ತಿಳಿಸಿವೆ. ಈ ನಡುವೆ ತಂದೆ ಸಾವು ಕುರಿತು ಹೇಳಿಕೆ ನೀಡಿರುವ ಉಮರ್ ಅನ್ಸಾರಿ. ತಂದೆಯ ಸಾವಿನ ಬಗ್ಗೆ ನನಗೆ ಅಧಿಕಾರಿಗಳ ಕಡೆಯಿಂದ ಯಾವುದೇ ಮಾಹಿತಿ ಬಂದಿಲ್ಲ. ಮಾಧ್ಯಮಗಳ ಮೂಲಕ ನನಗೆ ವಿಷಯ ತಿಳಿದಿದೆ. ಎರಡು ದಿನಗಳ ಹಿಂದೆ ನಾನು ಅವರನ್ನು ಭೇಟಿಯಾಗಲು ಬಂದಿದ್ದೆ. ಆದರೆ. ನನಗೆ ಅವಕಾಶ ನೀಡಲಿಲ್ಲ. ನಾವು ಮೊದಲೇ ಹೇಳಿದಂತೆ ಸ್ಲೋ ಪಾಯ್ಸನ್ ನೀಡಿದ ಆರೋಪದ ಬಗ್ಗೆ ಮತ್ತೆ ಹೇಳುತ್ತೇವೆ. ಮಾರ್ಚ್ 19 ರಂದು ಅವರು ರಾತ್ರಿಯ ಊಟದಲ್ಲಿ ವಿಷ ಸೇವಿಸಿದ್ದಾರೆ. ನಾವು ನ್ಯಾಯಾಂಗದ ಮೊರೆ ಹೋಗುತ್ತೇವೆ, ನಮಗೆ ನ್ಯಾಯಾಂಗದ ಮೇಲೆ ಸಂಪೂರ್ಣ ನಂಬಿಕೆ ಇದೆ ಎಂದು ಹೇಳಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ರಾಜಕೀಯಕ್ಕೆ ಬರಲು ನನಗೂ ಇಷ್ಟ



ಪುಷ್ಪ ಸಿನಿಮಾದ ಮೂಲಕ ಸಾಕಷ್ಟು ಹೆಸರು ಮಾಡಿರುವ ತೆಲುಗು ಚಿತ್ರೋದ್ಯಮದ ನಟಿ, ನಿರೂಪಕಿ ಅನಸೂಯ ಭಾರದ್ವಾಜ್ ಅಚ್ಚರಿಯ ಹೇಳಿಕೆಯನ್ನು ನೀಡಿದ್ದಾರೆ. ಈ ಹಿಂದೆ ತಮಗೂ ರಾಜಕೀಯಕ್ಕೂ ಆಗಲ್ಲ ಅಂದಿದ್ದವರು. ದಿಢೀರ್ ಅಂತ ನನಗೆ ರಾಜಕೀಯಕ್ಕೆ ಬರಲು ಇಷ್ಟವಿದೆ ಎಂದಿದ್ದಾರೆ. ಅವರ ಈ ಮಾತು ನಾನಾ ಅನುಮಾನಗಳಿಗೆ ಎಡೆಮಾಡಿದೆ.

ಕೆಲವು ನಟಿಯರನ್ನು ನಟ ಪವನ್ ಕಲ್ಯಾಣ್ ಸಂಪರ್ಕಿಸಿದ್ದು, ಮುಂದಿನ ಆಂಧ್ರದ ವಿಧಾನಸಭೆ ಚುನಾವಣೆಯಲ್ಲಿ ಟಿಕೆಟ್ ನೀಡುವುದಾಗಿ ಹೇಳಿದ್ದಾರಂತೆ. ಅಲ್ಲದೇ, ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಿ ಎಂದು ಆಶ್ವಾಸನೆ ಕೂಡ ನೀಡಿದ್ದಾರಂತೆ. ಅನಸೂಯ ಅವರನ್ನೂ ಪವನ್ ಸಂಪರ್ಕಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಹಾಗಾಗಿ ಅನಸೂಯ ತಮ್ಮ ರಾಜಕೀಯ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ.

ನಾನಾ ಕಾರಣಗಳಿಂದ ಅನಸೂಯ ಸುದ್ದಿ ಆಗುತ್ತಲೇ ಇರುತ್ತಾರೆ. ಅತೀ ಹೆಚ್ಚು ಟ್ರೋಲ್ ಆಗುವ ವ್ಯಕ್ತಿಗಳ ಸಾಲಿನಲ್ಲಿ ಸದಾ ಕಾಣಿಸಿಕೊಳ್ಳುತ್ತಾರೆ. ಸಾಮಾಜಿಕ ಜಾಲತಾಣದಲ್ಲಿ ಒಂದಿಲ್ಲೊಂದು ಪೋಸ್ಟ್ ಹಾಕುತ್ತಾ, ತಮ್ಮ ಹಿಂಬಾಲಕರಿಗೆ ಮನರಂಜನೆ ನೀಡುವ ಅನಸೂಯ, ಕೆಲವು ವಿಷಯಗಳಿಗೆ ತುಂಬಾ ಕಟ್ಟುನಿಟ್ಟು. ಅದರಲ್ಲೂ ಅಪಮಾನ ಮಾಡುವಂತಹ ಪದ ಬಳಕೆ ಮಾಡಿದರೆ, ಅವರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಈ ನಟಿ.

ಸೋಷಿಯಲ್ ಮೀಡಿಯಾದಲ್ಲಿ ಅವರು ಪೋಸ್ಟ್ ಮಾಡುವ ಫೋಟೋಗಳಿಗೆ ಕೆಲ ದಿನಗಳಿಂದ ನೆಗೆಟಿವ್ ಕಾಮೆಂಟ್ ಬರುತ್ತಿವೆ. ಅದರಲ್ಲೂ ಕೆಲವರು ‘ಆಂಟಿ’ ಎಂದು ಕರೆಯುತ್ತಿದ್ದಾರೆ. ಈ ಆಂಟಿ ಪದಕ್ಕೆ ಅವರು ಗರಂ ಆಗಿದ್ದಾರೆ. ಈ ಪದವನ್ನು ಹೇಳುವುದರ ಹಿಂದಿನ ಉದ್ದೇಶದ ಬಗ್ಗೆ ಅವರು ಮಾತನಾಡಿದ್ದಾರೆ. ಈ ರೀತಿಯಲ್ಲಿ ಕರೆದರೆ ಕೇಸ್ ದಾಖಲಿಸುವುದಾಗಿಯೂ ತಿಳಿಸಿದ್ದಾರೆ.

ಕೆಲವರಂತೂ ಈ ರೀತಿ ಹೇಳಿದ ಮೇಲೆ ಇನ್ನೂ ಜಾಸ್ತಿ ಕೀಟಲೆ ಮಾಡುತ್ತಿದ್ದಾರೆ. ಬೇಕು ಅಂತಾನೇ ಅನಸೂಯ ಅವರ ಫೋಟೋಗಳನ್ನು ಹುಡುಕಿ, ಹುಡುಕಿ ಫೋಟೋಗಳು ಆಂಟಿ ಎಂದು ಬರೆದು ಪೋಸ್ಟ್ ಮಾಡುತ್ತಿದ್ದಾರೆ. ಈ ಎಲ್ಲ ನಡೆಯನ್ನೂ ತಾವು ಗಂಭೀರವಾಗಿ ತಗೆದುಕೊಳ್ಳುವುದಾಗಿ ಅನಸೂಯ ಬರೆದುಕೊಂಡಿದ್ದಾರೆ. ಇಂತಹ ಕಾರಣಗಳಿಂದಾಗಿ ಸಾಕಷ್ಟು ಜನಪ್ರಿಯತೆ ಪಡೆದುಕೊಂಡ ನಟಿಗೆ ಪವನ್ ಗಾಳ ಹಾಕಿದ್ದಾರೆ.



# ‘ಪುಷ್ಪ 2’ ಸಿನಿಮಾ ಟೀಸರ್ ಕೆಲವೇ ದಿನಗಳು ಮಾತ್ರ ಬಾಕಿ



ಭಾರಿ ಹೈಪ್ ಸೃಷ್ಟಿ ಮಾಡಿರುವ ‘ಪುಷ್ಪ 2’ ಸಿನಿಮಾದ ಶೂಟಿಂಗ್ ಭರದಿಂದ ಸಾಗುತ್ತಿದೆ. ಈ ಸಿನಿಮಾದಲ್ಲಿ ಅಲ್ಲು ಅರ್ಜುನ್ ಅವರು ಪ್ರಮುಖ ಪಾತ್ರ ಮಾಡುತ್ತಿದ್ದಾರೆ. ಶೂಟಿಂಗ್ ನಡುವೆ ಬಿಡುವು ಪಡೆದು ಅವರು ಇತ್ತೀಚೆಗೆ ದುಬೈಗೆ ತೆರಳಿದ್ದರು. ಅಲ್ಲಿನ ಮೇಡಂ ಟುಸ್ಸಾಡ್ಸ್ ಮ್ಯೂಸಿಯಂನಲ್ಲಿ ಅವರ ಮೇಣದ ಪ್ರತಿಮೆ ಅನಾವರಣ ಮಾಡಲಾಗಿದೆ. ಆ ಪ್ರತಿಮೆಯು ತಗ್ಗೆದಲೇ ಸ್ಟೈಲ್ ನಲ್ಲಿ ಇದೆ. ಇಂಥ ಬೆಳವಣಿಗೆಗಳಿಂದ ‘ಪುಷ್ಪ 2’ ಸಿನಿಮಾಗೆ ಭರ್ಜರಿ ಪ್ರಚಾರ ಸಿಗಲಿದೆ. ಈ ನಡುವೆ ಟೀಸರ್ ಯಾವಾಗ ಬರಲಿದೆ ಎಂಬ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಪ್ರಶ್ನೆ ಎದ್ದಿದೆ.

ಕೇಳಿಬರುತ್ತಿರುವ ಮಾಹಿತಿ ಪ್ರಕಾರ, ಶೀಘ್ರದಲ್ಲೇ ಟೀಸರ್ ಬಿಡುಗಡೆ ಮಾಡಲು ಚಿತ್ರತಂಡದವರು ಸಿದ್ಧತೆ ಮಾಡಿಕೊಂಡಿದ್ದಾರೆ. ಏಪ್ರಿಲ್ 8ರಂದು ‘ಪುಷ್ಪ 2’ ಟೀಸರ್ ಅನಾವರಣ ಆಗಲಿದೆ. ಅಂದು ಅಲ್ಲು ಅರ್ಜುನ್ ಅವರ ಜನ್ಮದಿನ. ಹಾಗಾಗಿ ಆ ವಿಶೇಷ ದಿನದಂದು ಟೀಸರ್ ರಿಲೀಸ್ ಮಾಡಿದರೆ ಖಂಡಿತವಾಗಿಯೂ ರೀಚ್ ಚೆನ್ನಾಗಿ ಇರುತ್ತದೆ ಎಂಬುದು ಚಿತ್ರತಂಡದವರ ಲೆಕ್ಕಾಚಾರ. ತಮ್ಮ ನೆಚ್ಚಿನ ನಟನ ಬರ್ತ್ ಡೇ ದಿನ ಸಿಗಲಿರುವ ಆ ವಿಶೇಷ ಗಿಫ್ಟ್ ಗಾಗಿ ಅಲ್ಲು ಅರ್ಜುನ್ ಅಭಿಮಾನಿಗಳು ಕಾದಿದ್ದಾರೆ.

ಅಲ್ಲು ಅರ್ಜುನ್ ಅವರು ಚಿತ್ರರಂಗಕ್ಕೆ ಕಾಲಿಟ್ಟು ಎರಡು ದಶಕ ಕಳೆದಿದೆ. ಅವರು ಹೀರೋ ಆಗಿ ನಟಿಸಿದ ಮೊದಲ ಸಿನಿಮಾ ‘ಗಂಗೋತ್ರಿ’ 2003ರ ಮಾರ್ಚ್ 28ರಂದು ಬಿಡುಗಡೆ ಆಗಿತ್ತು. ಆ ಸಿನಿಮಾ ತೆರೆಕಂಡು 21 ವರ್ಷ ಕಳೆದಿರುವ ಪ್ರಯುಕ್ತ ಅಲ್ಲು ಅರ್ಜುನ್ ಅವರು ತಮ್ಮ ಅಭಿಮಾನಿಗಳಿಗೆ ಧನ್ಯವಾದ ತಿಳಿಸಿದ್ದಾರೆ. ಮುಂಬರುವ ದಿನಗಳಲ್ಲಿ ಅಭಿಮಾನಿಗಳಿಗೆ ಇನ್ನೂ ಹೆಮ್ಮೆ ಆಗುವ ರೀತಿಯಲ್ಲಿ ಕೆಲಸ ಮಾಡಲಿರುವುದಾಗಿ ಅವರು ಹೇಳಿದ್ದಾರೆ. ಆ ಮೂಲಕ ‘ಪುಷ್ಪ 2’ ಸಿನಿಮಾ ಭರ್ಜರಿಯಾಗಿ ಇರಲಿದೆ ಎಂಬುದರ ಸುಳಿವನ್ನು ಅವರು ನೀಡಿದ್ದಾರೆ.

ಆಗಸ್ಟ್ 15ರಂದು ‘ಪುಷ್ಪ 2’ ಸಿನಿಮಾ ರಿಲೀಸ್ ಆಗಲಿದೆ. ಈ ಸಿನಿಮಾ ವಿಶ್ವಾದ್ಯಂತ ತೆರೆಕಾಣಲಿದೆ. ಇನ್ನು ಉಳಿದಿರುವುದು ನಾಲ್ಕೂವರೆ ತಿಂಗಳು ಮಾತ್ರ. ಸಿನಿಮಾದ ಕೆಲಸಗಳು ಇನ್ನೂ ಬಾಕಿ ಇದೆ. ಅದನ್ನೆಲ್ಲ ಆದಷ್ಟು ಬೇಗ ಪೂರ್ಣಗೊಳಿಸಿಕೊಳ್ಳಬೇಕಿದೆ. ಪ್ರಚಾರಕ್ಕಾಗಿ ಚಿತ್ರತಂಡ ಹೆಚ್ಚು ಒತ್ತು ನೀಡಬೇಕಿದೆ. ಟೀಸರ್ ಬಿಡುಗಡೆ ಮಾಡುವ ಮೂಲಕ ಪ್ರಚಾರ ಕಾರ್ಯಕ್ಕೆ ಅದ್ದೂರಿಯಾಗಿ ಚಾಲನೆ ನೀಡಲಾಗುವುದು. ವಿದೇಶದಲ್ಲಿಯೂ ‘ಪುಷ್ಪ 2’ ಶೂಟಿಂಗ್ ನಡೆಯಲಿದೆ. ಸುಕುಮಾರ್ ಅವರು ಈ ಚಿತ್ರಕ್ಕೆ ನಿರ್ದೇಶನ ಮಾಡುತ್ತಿದ್ದಾರೆ. ಅದ್ದೂರಿ ಬಜೆಟ್ ನಲ್ಲಿ ಸಿನಿಮಾ ನಿರ್ಮಾಣ ಆಗುತ್ತಿದೆ. ಶೀಘ್ರದಲ್ಲೇ ಬಿಡುಗಡೆ ಆಗಲಿರುವ ಟೀಸರ್ ನಲ್ಲಿ ಯಾವ ಅಂಶ ಹೈಲೈಟ್ ಆಗಲಿದೆ ಎಂಬುದನ್ನು ತಿಳಿಯುವ ಕೌತುಕ ಮೂಡಿದೆ.

## ‘ಸಿದ್ಲಿಂಗು 2’ನಲ್ಲಿ ಡಬಲ್ ಮೀನಿಂಗ್ ಇರಲ್ಲ



ಲೂಸ್ ಮಾದ ಖ್ಯಾತಿಯ ಯೋಗಿ ಮತ್ತೊಂದು ಬಾರಿ ಸಿಂದ್ಲಿಂಗು ಜೊತೆ ಅಭಿಮಾನಿಗಳ ಎದುರು ನಿಂತಿದ್ದಾರೆ. ಬರೋಬ್ಬರಿ ಹನ್ನೆರಡು ವರ್ಷಗಳ ಹಿಂದೆ ಸಿಂದ್ಲಿಂಗು ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದ ಯೋಗಿ, ಈಗ ಮತ್ತೆ ಸಿದ್ಲಿಂಗು 2 ಮೂಲಕ ರಂಜಿಸಲು ಸಜ್ಜಾಗುತ್ತಿದ್ದಾರೆ. ಆ ಸಿದ್ಲಿಂಗು ಚಿತ್ರದಲ್ಲಿ ಅಲ್ಲಲ್ಲಿ ಡಬಲ್ ಮೀನಿಂಗ್ ಇದ್ದರೂ, ಈ ಸಿದ್ಲಿಂಗು ಹಾಗೆ ಇರುವುದಿಲ್ಲ ಎಂದು ಅಭಿಮಾನಿಗಳಿಗೆ ಪ್ರಾಮಿಸ್ ಮಾಡಿದ್ದಾರೆ.

ಕನ್ನಡದ ಪ್ರತಿಭಾವಂತ ನಿರ್ದೇಶಕ ವಿಜಯ್ ಪ್ರಸಾದ್ ಮತ್ತೊಂದು ಸಿದ್ಲಿಂಗು ಕಥೆ ಹೇಳಲು ಮುಂದಾಗಿದ್ದಾರೆ. ಈ ಹಿಂದೆ ಲೂಸ್ ಮಾದ ಯೋಗಿ ಮತ್ತು ರಮ್ಯಾ ಅವರನ್ನು ಆಯ್ಕೆ ಮಾಡಿಕೊಂಡು ಸಿದ್ಲಿಂಗು ಕಥೆ ಹೇಳಿದ್ದರು ವಿಜಯ್ ಪ್ರಸಾದ್. ಇದೀಗ ರಮ್ಯಾ ಬದಲು ಸೋನು ಗೌಡ ಅವರನ್ನು ನಾಯಕಿಯನ್ನಾಗಿ ಆಯ್ಕೆ ಮಾಡಿ ಸಿದ್ಲಿಂಗು 2 ಚಿತ್ರದ ಕಥೆ ಹೇಳುತ್ತಿದ್ದಾರೆ. ಮೊನ್ನೆಯಷ್ಟೇ ಸಿನಿಮಾಗೆ ಮುಹೂರ್ತವಾಗಿದೆ. ಸಿಂಪಲ್ ಆಗಿ ಆದ ಮುಹೂರ್ತ ಸಮಾರಂಭದಲ್ಲಿ ಚಿತ್ರದ ನಾಯಕ ಯೋಗಿ, ನಾಯಕಿ ಸೋನು ಗೌಡ ಸೇರಿದಂತೆ ಹಲವರು ಭಾಗಿಯಾಗಿದ್ದರು. ಸಿದ್ಲಿಂಗು ಸಿನಿಮಾದ ಕೊನೆಯಲ್ಲಿ ನಾಯಕಿ ಸಾವನ್ನಪ್ಪುತ್ತಾಳೆ. ಹಾಗಾಗಿ ಸಿದ್ಲಿಂಗು 2 ಸಿನಿಮಾದ ಕಥೆಯು ಹೇಗೆ ಶುರುವಾಗಬಹುದು ಎನ್ನುವ ಕುತೂಹಲವಿದೆ.

2012ರಲ್ಲಿ ಸಿದ್ಲಿಂಗು ತೆರೆಗೆ ಬಂದಿತ್ತು. ಮೊದಲ ಬಾರಿಗೆ ರಮ್ಯಾ ಜೊತೆ ಯೋಗಿ ನಟಿಸಿದ್ದರಿಂದ ಸಾಕಷ್ಟು ನಿರೀಕ್ಷೆ ಮೂಡಿಸಿತ್ತು. ಸಿನಿಮಾ ಕೂಡ ಗೆದ್ದಿತ್ತು. ಮತ್ತೆ ಹನ್ನೆರಡು ವರ್ಷಗಳ ನಂತರ ವಿಜಯ್ ಪ್ರಸಾದ್ ದೇ ಹೆಸರಿನಲ್ಲಿ ಸಿನಿಮಾ ಮಾಡುತ್ತಿದ್ದಾರೆ. ಏನೆಲ್ಲ ವಿಷಯಗಳನ್ನು ಈ ಚಿತ್ರ ಹೊತ್ತು ತರಲಿದೆ ಎನ್ನುವುದನ್ನು ಕಾದು ನೋಡಬೇಕು.

## ಬಾಲಿವುಡ್ ಬಿಗ್ ಆಫರ್ ಬಾಚಿಕೊಂಡ ಮೃಣಾಲ್ ಠಾಕೂರ್

‘ಸೀತಾರಾಮಂ’ ಬೆಡಗಿ ಮೃಣಾಲ್ ಠಾಕೂರ್ ತೆಲುಗು- ಬಾಲಿವುಡ್ ಎರಡರಲ್ಲೂ ಉತ್ತಮ ಅವಕಾಶ ಬಾಚಿಕೊಳ್ತಿದ್ದಾರೆ. ಸದ್ಯ ಬಾಲಿವುಡ್‌ನ ಬಿಗ್ ಪ್ರಾಜೆಕ್ಟ್‌ವೊಂದರಲ್ಲಿ ಮೃಣಾಲ್ ಪಾಲಿಗೆ ದಕ್ಕಿದೆ. ಸ್ಟಾರ್ ನಟನ ಜೊತೆ ರೊಮ್ಯಾನ್ಸ್ ಮಾಡುವ ಅವಕಾಶ ಗಿಟ್ಟಿಸಿಕೊಂಡಿದ್ದಾರೆ.

ವಿಜಯ್ ದೇವರಕೊಂಡ ಜೊತೆಗಿನ ‘ಫ್ಯಾಮಿಲಿ ಸ್ಟಾರ್’ ಸಿನಿಮಾ ರಿಲೀಸ್‌ಗೆ ಸಿದ್ಧವಾಗಿದೆ. ಈ ಬೆನ್ನಲ್ಲೇ ಬಾಲಿವುಡ್‌ನ ಬಿಗ್ ಪ್ರಾಜೆಕ್ಟ್‌ವೊಂದರಲ್ಲಿ ನಟಿಸಲು ನಟಿ ರೆಡಿಯಾಗಿದ್ದಾರೆ. ಡೇವಿಡ್ ಧವನ್ ಮತ್ತು ವರುಣ್ ಧವನ್ ನಟನೆಯ ಪ್ರಾಜೆಕ್ಟ್‌ನಲ್ಲಿ ಮೃಣಾಲ್ ನಾಯಕಿಯಾಗಿ ಎಂಟ್ರಿ ಕೊಡುತ್ತಿದ್ದಾರೆ.

ರಿಯಲ್ ಲೈಫ್ ತಂದೆ ಮತ್ತು ಮಗ ಸಿನಿಮಾದಲ್ಲಿಯೂ ಮತ್ತೆ ಜೊತೆಯಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ವರುಣ್ ಧವನ್‌ಗೆ ‘ಸೀತಾರಾಮಂ’ ಸುಂದರಿ ನಾಯಕಿಯಾಗಿದ್ದು, ಅವರ ಪಾತ್ರಕ್ಕೂ ಭಾರೀ ಪ್ರಾಮುಖ್ಯತೆ ಇದೆ. 2ನೇ ನಾಯಕಿಯ ಹುಡುಕಾಟದಲ್ಲಿದೆ ಚಿತ್ರತಂಡ.

ವರುಣ್-ಮೃಣಾಲ್ ಮೊದಲ ಬಾರಿಗೆ ಸಿನಿಮಾಗೆ ಜೊತೆಯಾಗಿ ನಟಿಸುತ್ತಿದ್ದಾರೆ. ಇದೊಂದು ಕಾಮಿಡಿ ಕಮ್ ರೊಮ್ಯಾಂಟಿಕ್ ಚಿತ್ರವಾಗಿದೆ. ಮೇ ಅಥವಾ ಜೂನ್‌ನಿಂದ ಚಿತ್ರೀಕರಣ ಶುರುವಾಗಲಿದೆ. ಇಬ್ಬರ ಜೋಡಿ ತೆರೆಯ ಮೇಲೆ ನೋಡೋಕೆ ಫ್ಯಾನ್ಸ್ ಕಾಯುತ್ತಿದ್ದಾರೆ.

# ಆರ್‌ಸಿಬಿಗೆ ಹೀನಾಯ ಸೋಲು



ಬೌಲರ್‌ಗಳ ಕೆಟ್ಟ ಪ್ರದರ್ಶನದಿಂದಾಗಿ ತವರಿನಲ್ಲಿ ಆರ್‌ಸಿಬಿ ಪಂದ್ಯವನ್ನು ಸೋತಿದ್ದು ಕೋಲ್ಕತ್ತಾ ನೈಟ್ ರೈಡರ್ಸ್ 7 ವಿಕೆಟ್‌ಗಳ ಜಯ ಸಾಧಿಸಿದೆ. ಸತತ ಎರಡು ಜಯ ಸಾಧಿಸುವ ಮೂಲಕ ಕೋಲ್ಕತ್ತಾ ಐಪಿಎಲ್ ಅಂಕಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೆ ಏರಿದೆ.

ಗೆಲ್ಲಲು 183 ರನ್‌ಗಳ ಗುರಿಯನ್ನು ಪಡೆದ ಕೋಲ್ಕತ್ತಾ 16.5 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 186 ರನ್ ಹೊಡೆದು ಜಯ ಸಾಧಿಸಿತು. ಇಲ್ಲಿಯವರೆಗೆ ತವರಿನಲ್ಲಿ ನಡೆದ ಎಲ್ಲಾ 9 ಪಂದ್ಯಗಳನ್ನು ತವರಿನ ತಂಡಗಳೇ ಜಯಗಳಿಸಿದ್ದವು. ಆದರೆ ಆರ್‌ಸಿಬಿ ತವರಿನ ಎರಡನೇ ಪಂದ್ಯದಲ್ಲಿ ಎಡವಿದೆ.

**ಸ್ಫೋಟಕ ಆರಂಭ:** ಆರಂಭಿಕ ಆಟಗಾರರಾದ ಫಿಲ್ ಸಾಲ್ಟ್ ಮತ್ತು ಸುನೀಲ್ ನರೈನ್ ಕೇವಲ 39 ಎಸೆತಗಳಲ್ಲಿ 86 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಭದ್ರವಾದ ಅಡಿಪಾಯ ಹಾಕಿದರು. ನರೈನ್ 47 ರನ್ (22 ಎಸೆತ, 2 ಬೌಂಡರಿ, 5 ಸಿಕ್ಸ್) ಹೊಡೆದರೆ ಕೀಪರ್ ಫಿಲ್ ಸಾಲ್ಟ್ 30 ರನ್ (20 ಎಸೆತ, 2 ಬೌಂಡರಿ, 2 ಸಿಕ್ಸರ್) ಹೊಡೆದು ಔಟಾದರು.

ಆರಂಭಿಕ ಆಟಗಾರರು ಔಟಾದರೂ ವೆಂಕಟೇಶ್ ಅಯ್ಯರ್ ಬಿರುಸಿನ ಆಟವಾಡಿ 50 ರನ್ (30 ಎಸೆತ, 3 ಬೌಂಡರಿ, 4 ಸಿಕ್ಸರ್) ಹೊಡೆದು ಕ್ಯಾಚ್ ನೀಡಿ ಹೊರನಡೆದರು.

ನಾಯಕ ಶ್ರೇಯಸ್ ಅಯ್ಯರ್ ಔಟಾಗದೇ 39 ರನ್(24 ಎಸೆತ, 2 ಬೌಂಡರಿ, 2 ಸಿಕ್ಸ್), ರಿಂಕು ಸಿಂಗ್ ಔಟಾಗದೇ 5 ರನ್ ಹೊಡೆದು ತಂಡವನ್ನು ಗೆಲುವಿನ ದಡ ಸೇರಿಸಿದರು.

**ಮಧ್ಯಮ ಕ್ರಮಾಂಕದಲ್ಲಿ ಕುಸಿತ:** ಡುಪ್ಲೆಸಿಸ್ 8 ರನ್ ಗಳಿಸಿ ಔಟಾದರೂ ಕ್ಯಾಮರೂನ್ ಗ್ರೀನ್ 33 ರನ್ (21 ಎಸೆತ, 4 ಬೌಂಡರಿ, 2 ಸಿಕ್ಸರ್), ಮ್ಯಾಕ್ಸ್‌ವೆಲ್ 28 ರನ್(19 ಎಸೆತ, 3 ಬೌಂಡರಿ, 1 ಸಿಕ್ಸರ್) ಸಿಡಿಸಿ ಔಟಾದರು.

ರಜತ್ ಪಾಟೀದರ್ ಮತ್ತು ಅನುಜ್ ರಾವತ್ ತಲಾ 3 ರನ್ ಗಳಿಸಿ ಔಟಾದ್ದರಿಂದ ರನ್ ದಿಢೀರ್ ಕುಸಿತವಾಯಿತು. ಹೀಗಿದ್ದರೂ ಕೊಹ್ಲಿ ಮತ್ತು ದಿನೇಶ್ ಕಾರ್ತಿಕ್ ಕೊನೆಯಲ್ಲಿ ಸಿಕ್ಸ್, ಬೌಂಡರಿ ಸಿಡಿಸಿದ ಪರಿಣಾಮ ಆರ್‌ಸಿಬಿ 6 ವಿಕೆಟ್ ನಷ್ಟಕ್ಕೆ 182 ರನ್ ಗಳಿಸಿತು.

**ಆರ್‌ಸಿಬಿ ಸೋತಿದ್ದು ಹೇಗೆ?:** ಇನ್ನಿಂಗ್ಸ್ 15ನೇ ಓವರ್‌ನಲ್ಲಿ 10 ರನ್, 16ನೇ ಓವರ್‌ನಲ್ಲಿ 7 ರನ್, 17ನೇ ಓವರ್‌ನಲ್ಲಿ 7 ರನ್, 18ನೇ ಓವರ್‌ನಲ್ಲಿ 5 ರನ್ ಗಳಿಸಿತು. ಈ ಓವರ್‌ಗಳಲ್ಲಿ ಸಿಕ್ಸ್, ಬೌಂಡರಿಗಳು ಸಿಡಿಯಲ್ಪಟ್ಟಿದ್ದರೆ ಪಂದ್ಯ ಸ್ವಲ್ಪ ಫೈಟ್ ಬರುತ್ತಿತ್ತು. ಇನ್ನಿಂಗ್ಸ್‌ನ 19ನೇ ಓವರ್‌ನಲ್ಲಿ 13 ರನ್ ಬಂದರೆ 20ನೇ ಓವರ್‌ನಲ್ಲಿ 16 ರನ್ ಬಂದಿತ್ತು. ಇದರೊಂದಿಗೆ ಬೌಲರ್‌ಗಳು ವಿಕೆಟ್ ಕಿತ್ತು ಒತ್ತಡ ಹೇರಲಿಲ್ಲ. ಇತರೇ ರೂಪದಲ್ಲಿ 15 ರನ್ ( ಲೆಗ್ ಬೈ7, ವೈಡ್ 8 ) ಬಿಟ್ಟು ಕೊಟ್ಟ ಕಾರಣ ಆರ್‌ಸಿಬಿ ಪಂದ್ಯವನ್ನು ಸೋತಿದೆ.

## ಮುಂಬೈ ಇಂಡಿಯನ್ಸ್ ಇಬ್ಭಾಗ: ಆಟಗಾರರ ನಡುವೆ 2 ಗುಂಪು..!



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 17ರಲ್ಲಿ ಹೊಸ ನಾಯಕತ್ವದಲ್ಲಿ ಕಣಕ್ಕಿಳಿದಿರುವ ಮುಂಬೈ ಇಂಡಿಯನ್ಸ್ ತಂಡವು ಎರಡು ಬಣಗಳಾಗಿ ಮಾರ್ಪಟ್ಟಿದೆ. ತಂಡದ ಆಟಗಾರರು ಎರಡು ಗುಂಪುಗಳಾಗಿ ಗುರುತಿಸಿಕೊಳ್ಳುತ್ತಿದ್ದು, ಇಲ್ಲಿ ನಾಯಕ ಹಾರ್ದಿಕ್ ಪಾಂಡ್ಯ ಪರ ಒಂದು ಬಣವಿದ್ದರೆ, ಮತ್ತೊಂದಷ್ಟು ಆಟಗಾರರು ಮಾಜಿ ನಾಯಕ ರೋಹಿತ್ ಶರ್ಮಾ ಪರ ಇದ್ದಾರೆಂದು ವರದಿಯಾಗಿದೆ.

ಇಲ್ಲಿ ಹಾರ್ದಿಕ್ ಪಾಂಡ್ಯ ಜೊತೆ ಗುರುತಿಸಿಕೊಂಡಿರುವ ಆಟಗಾರರ ಪಟ್ಟಿಯಲ್ಲಿ ಇಶಾನ್ ಕಿಶನ್, ಕೋಚ್ ಕೀರನ್ ಪೊಲಾರ್ಡ್ ಹೆಸರು ಮುಂಚೂಣಿಯಲ್ಲಿ ಕೇಳಿ ಬಂದಿದೆ. ಹಾಗೆಯೇ ರೋಹಿತ್ ಶರ್ಮಾ ಜೊತೆ ಜಸ್‌ಪ್ರೀತ್ ಬುಮ್ರಾ, ತಿಲಕ್ ವರ್ಮಾ ಸೇರಿದಂತೆ ಒಂದಷ್ಟು ಆಟಗಾರರಿದ್ದಾರೆ ಎಂದು ಪ್ರಮುಖ ಹಿಂದಿ ಪತ್ರಿಕೆಯಲ್ಲಿ ಉಲ್ಲೇಖಿಸಲಾಗಿದೆ. ಇದರೊಂದಿಗೆ ಮುಂಬೈ ಇಂಡಿಯನ್ಸ್ ತಂಡದಲ್ಲಿ ಎಲ್ಲವೂ ಸರಿಯಿಲ್ಲ ಎಂಬುದು ಬಹಿರಂಗವಾಗಿದೆ.

ತಂಡದ ಆಟಗಾರರ ನಡುವಣ ಈ ವಿಭಜನೆಯ ಬಳಿಕವೂ ಮುಂಬೈ ಇಂಡಿಯನ್ಸ್ ಫ್ರಾಂಚೈಸಿಯು ಹಾರ್ದಿಕ್ ಪಾಂಡ್ಯ ಅವರಿಗೆ ಬೆಂಬಲ ಸೂಚಿಸಿದೆ ಎಂದು ಇದೇ ವರದಿಯಲ್ಲಿ ತಿಳಿಸಲಾಗಿದೆ. ಹೀಗಾಗಿ ತಂಡವು ಎರಡು ಗ್ರೂಪ್ ಗಳಾದರೂ ಪಾಂಡ್ಯ ಕ್ಯಾಪ್ಟನ್ ಆಗಿ ಮುಂದುವರೆಯುವುದು ಖಚಿತ ಎಂದೇ ಹೇಳಬಹುದು.

ನಾಯಕತ್ವದ ಬದಲಾಣೆಯಿಂದಾಗಿ ಮುಂಬೈ ಇಂಡಿಯನ್ಸ್ ತಂಡವು ಇಬ್ಭಾಗವಾಗಿದೆ ಎಂದು ತಿಳಿದು ಬಂದಿದೆ. ಅಂದರೆ ಈ ಬಾರಿಯ ಐಪಿಎಲ್‌ಗೂ ಮುನ್ನ ಮುಂಬೈ ಇಂಡಿಯನ್ಸ್ ಫ್ರಾಂಚೈಸಿಯು ರೋಹಿತ್ ಶರ್ಮಾ ಅವರನ್ನು ನಾಯಕತ್ವದಿಂದ ಕೆಳಗಿಳಿಸಿ ಹಾರ್ದಿಕ್ ಪಾಂಡ್ಯಗೆ ಕಪ್ತಾನನ ಪಟ್ಟ ನೀಡಿದ್ದರು. ಅದರಂತೆ ಇದೀಗ ಪಾಂಡ್ಯ ಮುಂಬೈ ಇಂಡಿಯನ್ಸ್ ತಂಡವನ್ನು ಮುನ್ನಡೆಸುತ್ತಿದ್ದಾರೆ.

ಆದರೆ ಹಾರ್ದಿಕ್ ಪಾಂಡ್ಯ ನಾಯಕತ್ವದ ಬಗ್ಗೆ ಕೆಲ ಆಟಗಾರರಿಗೆ ಅಸಮಾಧಾನವಿದ್ದು, ಇದೇ ಕಾರಣದಿಂದಾಗಿ ಇದೀಗ ತಂಡದಲ್ಲಿ ಒಡಕು ಮೂಡಿದೆ ಎಂದು ತಿಳಿದು ಬಂದಿದೆ. ಈ ಒಡಕಿನೊಂದಿಗೆ ಇದೀಗ ಆಟಗಾರರು ಎರಡು ಗುಂಪುಗಳಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಇದು ಮುಂಬೈ ಇಂಡಿಯನ್ಸ್ ತಂಡದ ಸಾಂಘಿಕ ಪ್ರದರ್ಶನದ ಮೇಲೆ ಪರಿಣಾಮ ಬೀರುತ್ತಿದೆ ಎಂಬುದಕ್ಕೆ ಮೊದಲೆರಡು ಪಂದ್ಯಗಳ ಫಲಿತಾಂಶವೇ ಸಾಕ್ಷಿ. ಒಟ್ಟಿನಲ್ಲಿ ಹೊಸ ನಾಯಕನೊಂದಿಗೆ ಆರನೇ ಬಾರಿ ಕಪ್ ಗೆಲ್ಲಲು ಹೊರಟಿರುವ ಮುಂಬೈ ಇಂಡಿಯನ್ಸ್ ತಂಡಕ್ಕೆ ಆರಂಭದಲ್ಲೇ ವಿಘ್ನಗಳು ಎದುರಾಗಿದ್ದು, ಈ ಸಮಸ್ಯೆಗಳನ್ನು ಸರಿದೂಗಿಸಿ ಮುಂಬೈ ಪಡೆ ಮುಂಬರುವ ಪಂದ್ಯಗಳಲ್ಲಿ ಹೇಗೆ ಪ್ರದರ್ಶನ ನೀಡಲಿದೆ ಎಂಬುದನ್ನು ಕಾದು ನೋಡಬೇಕಿದೆ.

# ಬಿಜೆಪಿ ಭದ್ರಕೋಟೆಯಲ್ಲಿ ತೆಲಗು ಸ್ಟಾರ್ ನಾಯಕನ ಪ್ರಚಾರ





**ಬೆಂಗಳೂರು:** ಚುನಾವಣೆಗಳಲ್ಲಿ ಅಭ್ಯರ್ಥಿಗಳ ಪರ ಚಲನಚಿತ್ರ ನಟರು ಪ್ರಚಾರ ಮಾಡುವುದು ರಾಜ್ಯಕ್ಕೆ ಹೊಸದೇನು ಅಲ್ಲ. ಈ ಹಿಂದಿನ ಅನೇಕ ಚುನಾವಣೆಗಳಲ್ಲಿ ಚಿತ್ರರಂಗದ ನಟ, ನಟಿಯರು ಅಭ್ಯರ್ಥಿಗಳ ಪರ ಪ್ರಚಾರ ಮಾಡಿದ್ದನು ನೋಡಬಹುದು. ನಟರನ್ನು ಪ್ರಚಾರದಲ್ಲಿ ತೊಡಗಿಸಿಕೊಳ್ಳಲು ಜಾತಿ, ಭಾಷೆ ಲೆಕ್ಕಾಚಾರವಿರುತ್ತದೆ. ಇದೀಗ ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಪ್ರಚಾರಕ್ಕೆ ತೆಲಗು ಚಿತ್ರರಂಗದ ನಟನನ್ನು ಕರೆತರು ಬಿಜೆಪಿ ತಂತ್ರ ರೂಪಿಸಿದೆ.

ಹೌದು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಬೊಮ್ಮನಹಳ್ಳಿ, ಬಿಟಿಎಂ ಲೇಔಟ್, ಹೆಚ್‌ಎಸ್‌ಆರ್ ಲೇಔಟ್, ಜಯನಗರ, ಜೆಪಿ ನಗರ, ಬಸವನಗುಡಿ ಸೇರಿದಂತೆ ಕೆಲ ಭಾಗದಲ್ಲಿ ತೆಲುಗು ಭಾಷಿಕರ ಸಂಖ್ಯೆ ಹೆಚ್ಚಾಗಿದೆ. ಹೀಗಾಗಿ ತೆಲಗು ಚಿತ್ರರಂಗದ ನಟ, ಜನಸೇನಾ ಪಕ್ಷದ ನಾಯಕ ಪವನ್ ಕಲ್ಯಾಣ ಅವರನ್ನು ಪ್ರಚಾರಕ್ಕೆ ಕರೆತರಲು ಬಿಜೆಪಿ ಯೋಚಿಸಿದೆ.

ಈ ವಿಚಾರವಾಗಿ ಮಾ.28ರಂದು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಉದಯ ಗರುಡಾಚಾರ್ಯ ನಿವಾಸದಲ್ಲಿ ನಡೆದ ಸಭೆಯಲ್ಲಿ ಚರ್ಚಿಸಲಾಗಿದೆ. ಈ ಸಭೆಯಲ್ಲಿ ವಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಮತ್ತು ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಲವು ನಾಯಕರು ಭಾಗಿಯಾಗಿದ್ದರು.

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ಪವನ್ ಕಲ್ಯಾಣ, ಪ್ರಧಾನಿ ಮೋದಿ ಮತ್ತು ಅಮಿತ್ ಶಾ ರ್ಯಾಲಿ ಮತ್ತು ರೋಡ್ ಶೋ ನಡೆಸಬೇಕು. ಪ್ರಧಾನಿ ಮೋದಿ, ಅಮಿತ್ ಶಾ, ಪವನ್ ಕಲ್ಯಾಣ್ ಮೂವರನ್ನು ಒಂದೆ ವೇದಿಕೆಯಲ್ಲಿ ಕರೆತರಬೇಕು. ಪವನ್ ಕಲ್ಯಾಣ ಒಂದು ದಿನ ಬಿಜೆಪಿ ಪರವಾಗಿ ಬೆಂಗಳೂರು ದಕ್ಷಿಣದಲ್ಲಿ ಪ್ರಚಾರ ಮಾಡಲು ಅನುಮತಿ ನೀಡಬೇಕೆಂದು ರಾಜ್ಯ ಘಟಕಕ್ಕೆ ಬೆಂಗಳುರು ದಕ್ಷಿಣ ಜಿಲ್ಲಾ ಬಿಜೆಪಿ ಘಟಕ ಮನವಿ ಸಲ್ಲಿಸಿದೆ. ಇನ್ನು ಪವನ್ ಕಲ್ಯಾಣ ಆಂದ್ರ ಪ್ರದೇಶ ರಾಜಕೀಯದಲ್ಲಿ ಸಾಕಷ್ಟು ಪ್ರಭಾವ ಹೊಂದಿದ್ದಾರೆ. ಪವನ್ ಕಲ್ಯಾಣ ತಮ್ಮ ಬಿರುಸಿನ ಮಾತುಗಳ ಮೂಲಕ ಜನರನ್ನು ಸೆಳೆಯಬಲ್ಲರು. ಅಲ್ಲದೆ ಈ ಹಿಂದೆ ಪ್ರಧಾನಿ ಮೋದಿಯ ಸಮಾವೇಶದಲ್ಲಿ ಪವನ ಕಲ್ಯಾಣ ಕಾಣಿಸಿಕೊಂಡಿದ್ದರು. ಪ್ರಧಾನಿ ಮೋದಿ ಅವರೊಂದಿಗೆ ವೇದಿಕೆ ಹಂಚಿಕೊಂಡಿದ್ದರು.

**ಬಿಜೆಪಿಯ ಭದ್ರಕೋಟೆ ಬೆಂಗಳೂರು ದಕ್ಷಿಣ:** ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ಬಿಜೆಪಿ ಭದ್ರಕೋಟೆಯಾಗಿದೆ. ಈ ಲೋಕಸಭಾ ಕ್ಷೇತ್ರವು ಎಂಟು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ಈ ಎಂಟರಲ್ಲಿ ಮೂರು ಕ್ಷೇತ್ರಗಳು ಕಾಂಗ್ರೆಸ್ ಪಾಲಾಗಿದ್ದರೇ, ಐದು ಬಿಜೆಪಿಯ ಪಾಲಾಗಿವೆ. ಇನ್ನು ಈ ಲೋಕಸಭಾ ಕ್ಷೇತ್ರದಲ್ಲಿ 1996 ರಿಂದ ಈಗವರೆಗು ಬಿಜೆಪಿ ನಾಯಕರೇ ಸಂಸದರಾಗಿ ಆಯ್ಕೆಯಾಗುತ್ತಿದ್ದಾರೆ. 1996 ರಿಂದ 2009ರ ವರೆಗು ದಿವಂಗತ ಅನಂತ ಕುಮಾರ್ ಸಂಸದರಾಗಿದ್ದರು. 2014 ರಿಂದ ಇಲ್ಲಿಯವರೆಗು ತೇಜಸ್ವಿ ಸೂರ್ಯ ಸಂಸದರಾಗಿದ್ದಾರೆ.

ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಬಿಟಿಎಮ್ ಲೇಔಟ್ ಶಾಸಕ, ಸಚಿವ ರಾಮಲಿಂಗಾ ರೆಡ್ಡಿ ಪುತ್ರಿ ಸೌಮ್ಯಾ ರೆಡ್ಡಿ ಸ್ಪರ್ಧಿಸುತ್ತಿದ್ದಾರೆ. ತಂದೆ ಸಚಿವರಾಗಿದ್ದರಿಂದ ಹೆಚ್ಚು ಪ್ರಭಾವ ಬೀರುವುದರಿಂದ ಬಿಜೆಪಿ ಈ ಪ್ಲಾನ್ ಮಾಡಲು ಮುಂದಾಗಿದೆ ಎಂದು ರಾಜಕೀಯ ಪಡಸಾಲೆಯಲ್ಲಿ ಚರ್ಚೆಯಾಗುತ್ತಿದೆ.

## ಸಂಸದೆ ಸುಮಲತಾರನ್ನ ಭೇಟಿ ಮಾಡಿದ ವಿಜಯೇಂದ್ರ



**ಮಂಡ್ಯ:** ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಮಂಡ್ಯದ ಸಂಸದೆ ಸುಮಲತಾರನ್ನು ಅವರ ಬೆಂಗಳೂರಿನ ನಿವಾಸದಲ್ಲಿ ಭೇಟಿಯಾಗಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಯನ್ನು ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಬೆಂಬಲಿಸುವಂತೆ ಅವರು ಮನವಿ ಮಾಡಿದ್ದಾರೆ.

ಈ ಬಾರಿ ಬಿಜೆಪಿಯಿಂದ ಸುಮಲತಾ ಅವರಿಗೆ ಮಂಡ್ಯ ಟಿಕೆಟ್ ಸಿಗಲಿದೆ ಎಂದು ಹೇಳಲಾಗಿತ್ತು. ಸುಮಲತಾ ಅವರು ಕೂಡ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರಧ್ಯಕ್ಷ ಜೆಪಿ ನಡ್ಡಾ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ನಾಯಕರನ್ನು ಭೇಟಿ ಮಾಡಿ ಟಿಕೆಟ್ ಬೇಡಿಕೆ ಇಟ್ಟಿದ್ದರು. ಆದರೆ, ಮೈತ್ರಿ ಕಾರಣದಿಂದಾಗಿ ಅವರಿಗೆ ಟಿಕೆಟ್ ಸಿಗಲಿಲ್ಲ.

ಮಂಡ್ಯದಲ್ಲಿ ಜೆಡಿಎಸ್ ಅಭ್ಯರ್ಥಿ ಎಂದು ಘೋಷಣೆ ಆಗುತ್ತಿದ್ದಂತೆಯೇ ತಟಸ್ಥ ನಿಲುವನ್ನು ಸುಮಲತಾ ತಾಳಿದರು. ಯಾವುದೇ ಸಭೆಯಲ್ಲೂ ಅವರು ಭಾಗಿಯಾಗಿರಲಿಲ್ಲ. ತಮ್ಮ ಬೆಂಬಲಿಗರ ಸಭೆ ಕರೆದು, ತೀರ್ಮಾನ ತಗೆದುಕೊಳ್ಳೋದಾಗಿ ತಿಳಿಸಿದ್ದರು. ಇಂದು ಅವರು ಬೆಂಬಲಿಗರ ಸಭೆ ಕರೆದಿದ್ದಾರೆ. ಅದಕ್ಕೂ ಮುನ್ನ ವಿಜಯೇಂದ್ರ ಭೇಟಿ ಮಾಡಿದ್ದು ಕುತೂಹಲಕ್ಕೆ ಕಾರಣವಾಗಿದೆ.

ಮಂಡ್ಯ ಟಿಕೆಟ್ ಜೆಡಿಎಸ್ ಪಾಲಾಗಿದ್ದರಿಂದ, ಸುಮಲತಾ ಅವರನ್ನು ಭೇಟಿ ಮಾಡುತ್ತೀರಾ ಎಂದು ವಿಜಯೇಂದ್ರ ಅವರಿಗೆ ಮತ್ತು ಮಾಜಿ ಸಿಎಂ ಕುಮಾರಸ್ವಾಮಿ ಅವರಿಗೆ ಮಾಧ್ಯಮಗಳು ಪದೇ ಪದೇ ಪ್ರಶ್ನೆ ಮಾಡುತ್ತಿದ್ದವು. ಮೊದಲ ಭಾಗಿವಾಗಿ ವಿಜಯೇಂದ್ರ ಭೇಟಿ ಮಾಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com